ಸಂಪುಟ: 05 ಸಂಚಿಕೆ: 115 ಪುಟಗಳು: 08 ಮಂಗಳವಾರ 08 ಜುಲೈ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

**ಮುಂಜಾನೆ ಮಾತು**

ಸರಳ ಜೀವನ ಮತ್ತು ಮೇಲ್ಮಟ್ಟದ ವಿಚಾರ ಮನುಷ್ಯನನ್ನು ಮಹಾನ್ ವ್ಯಕ್ತಿಯನ್ನಾಗಿ ಮಾಡುತ್ತದೆ.

ಉದಯ ವಾಹಿನಿ
UV ಸರ್ವ ಸಮಾನತೆಯ
ಕನ್ನಡ ದಿನಪತ್ರಿಕೆ

# ಗ್ರೇಟರ್ ಬೆಂಗಳೂರಿಗೆ ಶೀಘ್ರದಲ್ಲೇ ಚುನಾವಣೆ, ಸಂಪುಟ ಸಭೆಯಲ್ಲಿ ಚರ್ಚಿಸಿ ನಿರ್ಧಾರ

## ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಅಡಿಯಲ್ಲಿ ಪಾಲಿಕೆಗಳ ವಿಂಗಡಣೆಗೆ ಕಸರತ್ತು | ಡಿಸಿಎಂ ಡಿಕೆ ಶಿವಕುಮಾರ್ ಹೇಳಿಕೆ

• ಉದಯವಾಹಿನಿ, ಬೆಂಗಳೂರು



ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಅಡಿಯಲ್ಲಿ ಪಾಲಿಕೆಗಳನ್ನು ಹೇಗೆ ವಿಂಗಡಿಸಬೇಕು ಎಂಬುದರ ಬಗ್ಗೆ ಸಮಿತಿಯವರು ಅಂತಿಮ ವರದಿ ನೀಡಿದ್ದಾರೆ. ಈ ವಿಚಾರವಾಗಿ ವಿರೋಧ ಪಕ್ಷದ ನಾಯಕರ ಜೊತೆ ಚರ್ಚೆ ಮಾಡಿ ಅವರನ್ನು ವಿಶ್ವಾಸಕ್ಕೆ ಪಡೆಯಬೇಕು ಎಂದು ಸಮಿತಿ ಅಧ್ಯಕ್ಷರಿಗೆ ಸೂಚಿಸಿದ್ದೇನೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ತಿಳಿಸಿದರು.

ಇದಾದ ಬಳಿಕ ಸಚಿವ ಸಂಪುಟ ಸಭೆಯ ಮುಂದೆ ಗ್ರೇಟರ್ ಬೆಂಗಳೂರು ವರದಿ ಬಗ್ಗೆ ಪ್ರಸ್ತಾಪ ಮಾಡುತ್ತೇನೆ. ಈಗ ಹಾಲಿ ಇರುವ ಪಾಲಿಕೆ ವ್ಯಾಪ್ತಿಯಲ್ಲೇ ಇದನ್ನು ಜಾರಿಗೊಳಿಸುತ್ತೇವೆ. ಮುಂದಿನ ದಿನಗಳಲ್ಲಿ ಇದನ್ನು ವಿಸ್ತರಣೆ ಮಾಡಲಾಗುವುದು. ಸಚಿವ ಸಂಪುಟ ಸಭೆಯಲ್ಲಿ ಇದನ್ನು ಪ್ರಸ್ತಾಪಿಸಿ, ಆದಷ್ಟು ಬೇಗ ಚುನಾವಣೆ ನಡೆಸಬೇಕಿದೆ ಎಂದರು.

ಗ್ರೇಟರ್ ಬೆಂಗಳೂರು ಪ್ರಾಧಿಕಾರ ಕುರಿತು ವಿಧಾನಸೌಧದಲ್ಲಿ ಅಧಿಕಾರಿಗಳ ಜತೆ ಸೋಮವಾರ ಸಭೆ ನಡೆಸಿದ ಬಳಿಕ ಬೆಂಗಳೂರು ನಗರಾಭಿವೃದ್ಧಿ ಸಚಿವರೂ ಆದ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದರು. ವಿರೋಧ ಪಕ್ಷದ ನಾಯಕರನ್ನು ವಿಶ್ವಾಸಕ್ಕೆ ಪಡೆದ ನಂತರ ಗ್ರೇಟರ್ ಬೆಂಗಳೂರು ಪ್ರಾಧಿಕಾರ ವರದಿ ಬಗ್ಗೆ ಸಚಿವ ಸಂಪುಟ ಸಭೆಯಲ್ಲಿ ಪ್ರಸ್ತಾಪಿಸಲಾಗುವುದು ಎಂದು ಅವರು ತಿಳಿಸಿದರು.

ಎತ್ತಿನಹೊಳೆ ಯೋಜನೆ ಸಂಬಂಧ ಸಚಿವ ಪರಮೇಶ್ವರ್ ಅವರ ಭೇಟಿ ವಿಚಾರವಾಗಿ ಕೇಳಿದಾಗ, ಎತ್ತಿನಹೊಳೆ ವಿಚಾರವಾಗಿ ಕೆಲವು ಸಮಸ್ಯೆ ಇತ್ತು. ಅವರ ತಾಲ್ಲೂಕನ್ನು ಕೈಬಿಡಬೇಕು ಎಂಬ ಪ್ರಸ್ತಾವನೆ ಇತ್ತು. ಈ ಭಾಗಗಳಲ್ಲಿ ನೀರು ನಿಲ್ಲಿಸಬೇಕಾಗಿದ್ದು, ಯಾವುದೇ ಹಳ್ಳಿ ಮುಳುಗದಂತೆ ಈ ಯೋಜನೆ ಜಾರಿಗೆ ಮುಂದಾಗಿದ್ದೇವೆ. ಸ್ಥಳೀಯರೇ ಒಂದೆರಡು ಕೆರೆಗಳ ಬಗ್ಗೆ ಸಲಹೆ ನೀಡಿದ್ದು, ಎಲ್ಲರನ್ನು ವಿಶ್ವಾಸಕ್ಕೆ ಪಡೆದು, ಈ ಬಗ್ಗೆ ಸಚಿವ ಸಂಪುಟ ಸಭೆಯಲ್ಲಿ ಪ್ರಸ್ತಾಪ ಮಾಡಲಾಗುವುದು ಎಂದು ತಿಳಿಸಿದರು.

ನಾಳೆ ದೆಹಲಿ ಪ್ರವಾಸದ ಬಗ್ಗೆ ಕೇಳಿದಾಗ, ಎತ್ತಿನಹೊಳೆ ಯೋಜನೆಗೆ ಸಂಬಂಧಿಸಿದಂತೆ ತುಮಕೂರು ಹಾಗೂ ಹಾಸನ ಭಾಗದಲ್ಲಿ ಅರಣ್ಯ ಭೂಮಿಗೆ ಸಂಬಂಧಿಸಿದಂತೆ ಕೇಂದ್ರ ಸಚಿವರ ಅನುಮತಿ ಬಗ್ಗೆ ಚರ್ಚಿಸಲು ಸಮಯಾವಕಾಶ ನಿಗದಿಯಾಗಿದೆ. ಕೇಂದ್ರ ಜಲಶಕ್ತಿ ಸಚಿವರನ್ನೂ ಭೇಟಿ ಮಾಡಲಾಗುವುದು ಎಂದು ತಿಳಿಸಿದರು.

ಹೈಕಮಾಂಡ್ ನಾಯಕರನ್ನು ಭೇಟಿ ಮಾಡುತ್ತೀರಾ ಎಂದು ಕೇಳಿದಾಗ, ಪಕ್ಷದ ಕಚೇರಿ ನಮಗೆ ದೇವಾಲಯವಿದ್ದಂತೆ ದೆಹಲಿಗೆ ಭೇಟಿ ನೀಡಿದಾಗ ಅಲ್ಲಿಗೆ ಹೋಗಿ ಕೈಮುಗಿದು ಬರುತ್ತೇವೆ ಡಿಸಿಎಂ ಡಿ.ಕೆ.ಶಿವಕುಮಾರ್ ಹೇಳಿದರು.

## ಫೋನ್ ಮಾಡಿದ್ರೂ ಸ್ಪಂದಿಸುತ್ತಾರೆ, ನನಗೇನು ದೂರಿಲ್ಲ!: ಲಕ್ಷ್ಮಣ ಸವದಿ

• ಉದಯವಾಹಿನಿ, ಬೆಂಗಳೂರು

ನಾನು ಫೋನ್ ಮಾಡಿದರೂ ಸಾಕು ಸಚಿವರು ಸ್ಪಂದಿಸುತ್ತಾರೆ. ನನಗೇನು ಅವರ ಬಗ್ಗೆ ದೂರಿಲ್ಲ ಎಂದು ಶಾಸಕ ಲಕ್ಷ್ಮಣ ಸವದಿ ಹೇಳಿದರು. ಎಐಸಿಸಿ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಅವರ ಜೊತೆಗೆ ಒನ್ ಟು ಒನ್ ಮಾತುಕತೆ ಬಳಿಕ ಮಾತನಾಡಿದ ಅವರು, ಇವತ್ತು ನಮ್ಮ ಪಕ್ಷದ ವರಿಷ್ಠರು ಸಭೆಗೆ ಕರೆದಿದ್ರು. ಜಿಲ್ಲೆ ಅಭಿವೃದ್ಧಿ ಹಾಗೂ ಪಕ್ಷ ಸಂಘಟನೆ ಬಗ್ಗೆ ಚರ್ಚೆ ಆಯ್ತು ಎಂದರು. ಮುಂದಿನ ದಿನಗಳಲ್ಲಿ ಹೇಗೆ ಸಂಘಟನೆ ಮಾಡಬೇಕು ಅದರ ಬಗ್ಗೆ ಸುರ್ಜೇವಾಲಾ ಅವರು ಹೇಳಿದ್ದಾರೆ. ಅದರ ಪ್ರಕಾರ ಪಕ್ಷ ಸಂಘಟನೆಯಾಗಬೇಕು. ಸ್ಥಳೀಯ ಚುನಾವಣೆ ಎಲ್ಲವೂ ಗೆಲ್ಲಬೇಕು. ಅಷ್ಟೇ ಅಲ್ಲದೆ, ಮುಂದಿನ ವಿಧಾನಸಭೆ ಚುನಾವಣೆ ಗೆಲ್ಲಬೇಕು. ಅದಕ್ಕೆ ಏನೆಲ್ಲಾ ಕಾರ್ಯತಂತ್ರ ಮಾಡಬೇಕು ಎಂಬುದರ ಬಗ್ಗೆ ಸಭೆಯಲ್ಲಿ ಚರ್ಚೆ ಮಾಡಲಾಯಿತು ಎಂದು ತಿಳಿಸಿದರು.

ಕ್ಷೇತ್ರದ ಅನುದಾನ ವಿಚಾರವಾಗಿ ಇದೇ ಸಂದರ್ಭದಲ್ಲಿ ಮಾತನಾಡಿ, ಅನುದಾನ ಸಮಸ್ಯೆ ಬಗ್ಗೆ ಅಭಿಪ್ರಾಯ ಕೇಳಿದ್ರು. ಸಣ್ಣಪುಟ್ಟ ಲೋಪದೋಷದ ಬಗ್ಗೆ ಸಲಹೆ ನೀಡಿದ್ದೇವೆ. ಇದ್ದರಿಂದ ಪಕ್ಷಕ್ಕೂ ಒಳ್ಳೆದು ಆಗುತ್ತದೆ. ಯಾರು ಏನು ಹೇಳಿದ್ದಾರೆ ಅಂತ ಗೊತ್ತಿಲ್ಲ ಎಂದರು.

## ನವದೆಹಲಿಗೆ ಸಿದ್ದರಾಮಯ್ಯ ಎಐಸಿಸಿ ತಂತ್ರ: ಜೋಶಿ

• ಉದಯವಾಹಿನಿ, ಬೆಂಗಳೂರು

'ಸಿದ್ದರಾಮಯ್ಯ ಅವರಿಗೆ ಇಲ್ಲಿಯೇ ಸಂಭಾಳಿಸಲು ಸಾಧ್ಯವಾಗುತ್ತಿಲ್ಲ. ಅವರಿಗೆ ದಿಢೀರ್‌ನೇ ಎಐಸಿಸಿ ಹಿಂದುಳಿದ ವರ್ಗಗಳ ರಾಷ್ಟ್ರೀಯ ಸಲಹಾ ಮಂಡಳಿಯ ನೇತೃತ್ವ ವಹಿಸಲಾಗಿದೆ. ಅವರನ್ನು ನವದೆಹಲಿಗೆ ಕರೆಸಿಕೊಳ್ಳುವ ತಂತ್ರ ಅವರ ಪಕ್ಷದ ಹೈಕಮಾಂಡ್ ನಡೆಸಿದೆ ಎಂದು ಕೇಂದ್ರ ಸಚಿವ ಪ್ರಹ್ಲಾದ ಜೋಶಿ ತಿಳಿಸಿದರು.

ಸಲಹಾ ಮಂಡಳಿ ನೇತೃತ್ವ ವಹಿಸಿರುವ ಬಗ್ಗೆ ಭಾನುವಾರ ಸುದ್ದಿಗಾರರಿಗೆ ಪ್ರತಿಕ್ರಿಯಿಸಿದ ಅವರು, ಸಿದ್ದರಾಮಯ್ಯ ಅವರನ್ನು ದೆಹಲಿಗೆ ಕರೆಸಿಕೊಳ್ಳುವ ನೆಪದಲ್ಲಿ ಇಲ್ಲಿ ಜಾಗ ಖಾಲಿ ಮಾಡಿ ಎಂಬ ಸಂದೇಶವನ್ನು ಆ ಪಕ್ಷದ ಹೈಕಮಾಂಡ್ ರವಾನಿಸಿದೆ ಎಂದರು. ಮುಂದಿನ ಮುಖ್ಯಮಂತ್ರಿ ತಾವೇ ಎಂದು ಕೈ ಪಕ್ಷದ ಆಂತರಿಕ ವಲಯದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದರೆ, ಐದು ವರ್ಷ ನಾನೇ ಮುಖ್ಯಮಂತ್ರಿ ಎಂದು ಸಿಎಂ ಸಿದ್ದರಾಮಯ್ಯ ಹೇಳುತ್ತಾರೆ.ಕಾಂಗ್ರೆಸ್ ಅಧಿಕಾರದಲ್ಲಿರುವ ಯಾವ ರಾಜ್ಯಗಳಲ್ಲೂ ಅಲ್ಲಿನ ಮುಖ್ಯಮಂತ್ರಿಗಳು ಈ ರೀತಿ ಹೇಳುತ್ತಿಲ್ಲ' ಎಂದರು.

## ಬೆಂಗಳೂರು ವಿಶ್ವವಿದ್ಯಾಲಯ ಕುಲಪತಿಗೆ 67 ಅಧ್ಯಾಪಕರ ಪತ್ರ

• ಉದಯವಾಹಿನಿ, ಬೆಂಗಳೂರು

'ಬೆಂಗಳೂರು ವಿಶ್ವವಿದ್ಯಾಲಯದಲ್ಲಿ ಪರಿಶಿಷ್ಟ ಜಾತಿಗಳ ಪ್ರಾತಿನಿಧ್ಯವನ್ನು ಕುಗ್ಗಿಸುವ ಹುನ್ನಾರ ನಡೆಯುತ್ತಿದೆ. ಇದನ್ನು ಖಂಡಿಸುತ್ತೇವೆ' ಎಂದು ಬೆಂಗಳೂರು ವಿಶ್ವವಿದ್ಯಾಲಯದ 67 ಅಧ್ಯಾಪಕರು ಕುಲಪತಿಗೆ ಪತ್ರ ಬರೆದಿದ್ದಾರೆ. ವಿಶ್ವವಿದ್ಯಾಲಯದ ವಿವಿಧ ವಿಭಾಗಗಳಲ್ಲಿ ಬ್ಯಾಕ್‌ಲಾಗ್ ಹುದ್ದೆಗಳು ಇವೆ. ಅವುಗಳನ್ನು ಭರ್ತಿ ಮಾಡಲು ವಿಶ್ವವಿದ್ಯಾಲಯವು ಯಾವುದೇ ಕ್ರಮ ತೆಗೆದುಕೊಂಡಿಲ್ಲ. ಬದಲಿಗೆ ಬೇರೆ ವಿಶ್ವವಿದ್ಯಾಯಗಳಿಂದ ಅಧ್ಯಾಪಕರನ್ನು ವರ್ಗಾವಣೆ ಮಾಡಲಾಗಿದೆ. ಈ ಮೂಲಕ ಪರಿಶಿಷ್ಟ ಜಾತಿಗಳ ಪ್ರಾತಿನಿಧ್ಯ ಕುಗ್ಗಿಸುವ ಯತ್ನ ನಡೆಯುತ್ತಿದೆ ಎಂದು ಪತ್ರದಲ್ಲಿ ಆರೋಪಿಸಿದ್ದಾರೆ. ವರ್ಗಾವಣೆ ಮತ್ತು ನೇಮಕಾತಿಯಲ್ಲಿ ಸರ್ಕಾರದ ರೋಸ್ಟರ್ ನಿಯಮಗಳನ್ನು ಉಲ್ಲಂಘಿಸಲಾಗಿದೆ. ಈ ಬಗ್ಗೆ ತಕ್ಷಣವೇ ಕ್ರಮ ತೆಗೆದುಕೊಳ್ಳಬೇಕು. ಇಲ್ಲದೇ ಇದ್ದರೆ, ಹೋರಾಟ ನಡೆಸುತ್ತೇವೆ' ಎಂದು ಅಧ್ಯಾಪಕರು ಒತ್ತಾಯಿಸಿದ್ದಾರೆ. ಬೆಂಗಳೂರು ವಿಶ್ವವಿದ್ಯಾಲಯದ ಪರಿಶಿಷ್ಟ ಜಾತಿಗಳ ಮತ್ತು ಪರಿಶಿಷ್ಟ ಪಂಗಡಗಳ ಶಿಕ್ಷಕರ ಸಂಘವೂ ಕುಲಪತಿಗೆ ಪತ್ರ ಬರೆದಿದ್ದು, 15 ದಿನಗಳಲ್ಲಿ ಕ್ರಮ ತೆಗೆದುಕೊಳ್ಳಬೇಕು ಎಂದು ಕೋರಿದೆ.




**ಟರ್ಕಿಗೆ ಭಾರತ ಶಾಕ್...!**

# ಪಾಕ್, ಚೀನಾಗೆ ನಮೋ ಛೀಮಾರಿ!

## ಬ್ರಿಕ್ಸ್ ಶೃಂಗಸಭೆಯಲ್ಲಿ ಉಗ್ರ ಪೋಷಕ ಪಾಕ್ ವಿರುದ್ಧ ಗುಡುಗು...!




• ಉದಯವಾಹಿನಿ, ನವದೆಹಲಿ

ವೈಯಕ್ತಿಕ ಅಥವಾ ರಾಜಕೀಯ ಲಾಭಕ್ಕಾಗಿ ಭಯೋತ್ಪಾದನೆ ಮೌನವಾಗಿ ಬೆಂಬಲಿಸುವುದು ತಪ್ಪು ಎಂದು ಪ್ರಧಾನಿ ಮೋದಿ ಅವರು ಪಾಕ್, ಚೀನಾ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಬ್ರೆಜಿಲ್‌ನ ರಿಯೊ ಡಿ ಜನೈರೊದಲ್ಲಿ ನಡೆದ 17ನೇ ಬ್ರಿಕ್ಸ್ ಶೃಂಗಸಭೆಯಲ್ಲಿ ಮೋದಿ ಪಾಕಿಸ್ತಾನ, ಚೀನಾ ಎರಡೂ ದೇಶಗಳನ್ನು ಟೀಕಿಸಿದರು. ಪ್ರಧಾನಮಂತ್ರಿ ಮೋದಿ ಬ್ರೆಜಿಲ್‌ನ ಬ್ರಿಕ್ಸ್ ಶೃಂಗಸಭೆಯಲ್ಲಿ ಪಾಕಿಸ್ತಾನವು ಭಯೋತ್ಪಾದನೆಗೆ ಬೆಂಬಲ ನೀಡುತ್ತಿರುವುದನ್ನು ತೀವ್ರವಾಗಿ ಖಂಡಿಸಿದ್ದಾರೆ. ಜಮ್ಮು ಮತ್ತು ಕಾಶ್ಮೀರದ ಪೆಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿ ಖಂಡಿಸಿ ಪಾಕಿಸ್ತಾನಕ್ಕೆ ಛೀಮಾರಿ ಹಾಕಿದ ರಾಷ್ಟ್ರಗಳಿಗೆ ಮೋದಿ ಧನ್ಯವಾದ ಸಲ್ಲಿಸಿದ್ದು, ಪಾಕಿಸ್ತಾನ ನಡೆಸಿದ ಹೀನ ಕೃತ್ಯವನ್ನು ವಿರೋಧಿಸಿ ಆಕ್ರೋಶ ವ್ಯಕ್ತಪಡಿಸಿದ್ದರು. ಏ.22, 2025ರಂದು ಪಾಕ್ ಬೆಂಬಲಿತ ಉಗ್ರರು ನಡೆಸಿದ ಈ ದಾಳಿಯಲ್ಲಿ 26 ಪ್ರವಾಸಿಗರು ಸಾವನ್ನಪ್ಪಿದ್ದರು. ಇದಕ್ಕೆ ಪ್ರತಿಕ್ರಿಯೆಯಾಗಿ ಭಾರತವು 'ಆಪರೇಷನ್ ಸಿಂದೂರ್' ಆರಂಭಿಸಿ, ಪಾಕಿಸ್ತಾನದ ಭಯೋತ್ಪಾದಕ ಮೂಲಸೌಕರ್ಯ, ವಾಯುನೆಲೆಗಳ ಮೇಲೆ ದಾಳಿ ನಡೆಸಿತು. ಬ್ರಿಕ್ಸ್ ಶೃಂಗಸಭೆಯಲ್ಲಿ ಮಾತನಾಡಿ,ಭಾರತವು ಭಯೋತ್ಪಾದನೆಯ ಬಲಿಪಶುವಾದರೆ, ಪಾಕಿಸ್ತಾನವು ಅದರ ಬೆಂಬಲಿಗ. ಇವೆರಡನ್ನೂ ಒಂದೇ ತಕ್ಕಡಿಯಲ್ಲಿ ತೂಗಲಾಗದು ಎಂದರು. ವೈಯಕ್ತಿಕ ಅಥವಾ ರಾಜಕೀಯ ಲಾಭಕ್ಕಾಗಿ ಭಯೋತ್ಪಾದನೆಯ ವಿರುದ್ಧ ಮೌನವಾಗಿರುವವರನ್ನು ಟೀಕಿಸಿದ ಅವರು, ಉಗ್ರರಿಗೆ ಸಹಕಾರ,ಸಮ್ಮತಿ ನೀಡುವುದು ಸ್ವೀಕಾರಾರ್ಹವಲ್ಲ ಎಂದು ಒತ್ತಿ ಹೇಳಿದರು. ಪಾಕಿಸ್ತಾನವು ತನ್ನ ನೆಲದಲ್ಲಿ ಉಗ್ರರಿಗೆ ಆಶ್ರಯ ನೀಡುವ ಮೂಲಕ ಭಯೋತ್ಪಾದನೆಯನ್ನು ರಾಜ್ಯ ನೀತಿಯಾಗಿ ಬಳಸುತ್ತಿರುವುದನ್ನು ಭಾರತವು ಪದೇ ಪದೇ ಸಾಕ್ಷ್ಯಗಳೊಂದಿಗೆ ಸಾಬೀತುಪಡಿಸಿದೆ ಎಂದರು.

2026ರಲ್ಲಿ ಭಾರತವು ಬಿಆರ್‌ಐಸಿಎಸ್ ಶೃಂಗಸಭೆ ಆಯೋಜಿಸಲಿದೆ.'ರಿಯೊ ಡಿ ಜನೈರೊ ಘೋಷಣೆ' ಎಂಬ ಜಂಟಿ ಘೋಷಣೆಯಲ್ಲಿ, ಉಗ್ರ ಕೃತ್ಯ ಅಪರಾಧ ಮತ್ತು ಸಮರ್ಥನೀಯವಲ್ಲ ಎಂದು ಬ್ರಿಕ್ಸ್ ನಾಯಕರು ಖಂಡಿಸಿದ್ದಾರೆ. ಪೆಹಲ್ಗಾಮ್‌ನ ದಾಳಿ ತೀವ್ರವಾಗಿ ಖಂಡಿಸುತ್ತೇವೆ. ಗಡಿಯಾಚೆಗಿನ ಉಗ್ರರ ಚಲನೆ, ಭಯೋತ್ಪಾದನೆಗೆ ಹಣಕಾಸು ಮತ್ತು ಆಶ್ರಯದ ವ್ಯವಸ್ಥೆ ಮಾಡುತ್ತಿರುವವರ ವಿರುದ್ಧ ನಾವು ಕ್ರಮ ತೆಗೆದುಕೊಳ್ಳಲು ಬದ್ಧರಾಗಿದ್ದೇವೆ. ಎಲ್ಲೂ ಪಾಕಿಸ್ತಾನದ ಹೆಸರನ್ನು ನೇರವಾಗಿ ಉಲ್ಲೇಖಿಸಿಲ್ಲ. 2017ರ ಚೀನಾದ ಕ್ಸಿಯಾಮೆನ್‌ನ ಬ್ರಿಕ್ಸ್ ಶೃಂಗಸಭೆ ಲಷ್ಕರ್-ಎ-ತೊಯ್ಬಾ, ಜೈಶ್-ಎ-ಮೊಹಮ್ಮದ್, ತೆಹ್ರೀಕ್-ಇ-ತಾಲಿಬಾನ್ ಪಾಕಿಸ್ತಾನ ಮತ್ತು ಹಿಜ್ಬ್-ಉತ್-ತಹ್ರೀರ್ ನಂತಹ ಪಾಕ್ ಮೂಲದ ಉಗ್ರ ಸಂಘಟನೆಗಳನ್ನು ಘೋಷಣೆಯಲ್ಲಿ ಸ್ಪಷ್ಟವಾಗಿ ಉಲ್ಲೇಖಿಸಲಾಗಿತ್ತು. ಭಯೋತ್ಪಾದನೆ ನಿಯಂತ್ರಿಸಲು ಸಂಪೂರ್ಣ ಸಹಕಾರ ನಾವು ನೀಡಲಿದ್ದು, ವಿಶ್ವಸಂಸ್ಥೆ ಚೌಕಟ್ಟಿನಲ್ಲಿ ಅಗತ್ಯ ಇರುವ ಬೆಂಬಲ ಒದಗಿಸುವ ಮೂಲಕ ಶೀಘ್ರವಾಗಿ ಭಯೋತ್ಪಾದನೆ ಚಟುವಟಿಕೆಗಳನ್ನು ಅಂತಿಮಗೊಳಿಸಲು ಕರೆ ನೀಡುತ್ತೇವೆ ಎಂದು ರಿಯೊ ಘೋಷಣೆ ಒತ್ತಿಹೇಳಿದೆ.

1. ಭಯೋತ್ಪಾದನೆ ಸಹಿಸಲ್ಲ ಬೆಂಬಲ ಕೊಟ್ಟರೆ ಸುಮ್ಮನಿರಲ್ಲ
2. ಪಾಕ್, ಚೀನಾಗೆ ನಮೋ 'ಪಂಚ್'
3. ಭಯೋತ್ಪಾದನೆಗೆ ಯಾರೇ ಬೆಂಬಲ ನೀಡಿದರೂ ಉಗ್ರವಾಗಿ ಖಂಡನೆ

**ಮೋದಿಯಿಂದ ಶತ್ರುವಿನ ಶತ್ರು ಮಿತ್ರ ನೀತಿ**

### ಟರ್ಕಿ,ಗ್ರೀಸ್ ವಿವಾದ

ಭಾರತದ ಜೊತೆಗಿನ ಗ್ರೀಸ್ ಒಪ್ಪಂದದ ಮಹತ್ವ ತಿಳಿಯಲು ನಾವು ಟರ್ಕಿ ಮತ್ತು ಗ್ರೀಸ್ ನಡುವಿನ ಶತಮಾನಗಳಷ್ಟು ಹಳೆಯ ವೈಷಮ್ಯ ನೋಡಬೇಕು. ಈಜಿಯನ್ ಸಮುದ್ರದ ಕಡಲ ಗಡಿಗಳ ಬಗ್ಗೆ ಎರಡೂ ದೇಶಗಳ ನಡುವೆ ದೀರ್ಘಕಾಲದ ವಿವಾದವಿದೆ. ಗ್ರೀಸ್, ವಿಶ್ವಸಂಸ್ಥೆಯ ಕಡಲ ಕಾನೂನು ಒಪ್ಪಂದ ಪ್ರಕಾರ ತನ್ನ ಕಡಲ ಗಡಿ 12 ನಾಟಿಕಲ್ ಮೈಲಿಗಳವರೆಗೆ ವಿಸ್ತರಿಸಲು ಬಯಸುತ್ತದೆ. ಟರ್ಕಿ ಈ ಒಪ್ಪಂದಕ್ಕೆ ಸಹಿ ಹಾಕಿಲ್ಲ. ಗ್ರೀಸ್ ಹೀಗೆ ಮಾಡಿದರೆ, ಈಜಿಯನ್ ಸಮುದ್ರದ 71.5% ಭಾಗ ಗ್ರೀಸ್‌ಗೆ ಸಿಗುತ್ತದೆ ಮತ್ತು ತನಗೆ ಕೇವಲ 8.8% ಉಳಿಯುತ್ತದೆ. ತನ್ನನ್ನು ಅಂತಾರಾಷ್ಟ್ರೀಯ ಜಲಪ್ರದೇಶದಿಂದ ವಂಚಿತಗೊಳಿಸುತ್ತದೆ ಎಂಬುದು ಟರ್ಕಿಯ ವಾದ.

### ಚೀನಾ ಆಕ್ರೋಶ

ಟಿಬೆಟ್‌ನ ಬೌದ್ಧ ಧರ್ಮಗುರು ದಲೈಲಾಮಾ ಅವರ ಜನ್ಮ ದಿನಕ್ಕೆ ಶುಭಾಶಯ ಕೋರಿದ ಮೋದಿ ಅವರ ನಡೆ ಚೀನಾ ವಿರೋಧಿಸಿದೆ. ಟಿಬೆಟ್ ಸಂಬಂಧಿತ ವ್ಯವಹಾರಗಳ ಬಗ್ಗೆ ಚೀನಾದ ನಿಲುವು ಸ್ಥಿರ ಮತ್ತು ಸ್ಪಷ್ಟವಾಗಿರುವುದು ಎಲ್ಲರಿಗೂ ತಿಳಿದಿದೆ ಎಂದು ಚೀನಾದ ವಿದೇಶಾಂಗ ಸಚಿವಾಲಯದ ವಕ್ತಾರ ಮಾವೋನಿಂಗ್ ಸೋಮವಾರ ಸುದ್ದಿಗೋಷ್ಠಿಯಲ್ಲಿ ತಿಳಿಸಿದ್ದಾರೆ. ದಲೈಲಾಮಾ ಅವರ 90ನೇ ಹುಟ್ಟುಹಬ್ಬದಂದು ಪ್ರಧಾನಿ ಮೋದಿ ಅವರು ಶುಭಾಶಯ ಕೋರಿದ್ದಕ್ಕೆ ಮತ್ತು ಆಚರಣೆಗಳಲ್ಲಿ ಭಾರತೀಯ ಅಧಿಕಾರಿಗಳ ಹಾಜರಾತಿಗೆ ಭಾರತಕ್ಕೆ ವಿರೋಧ ವ್ಯಕ್ತಪಡಿಸಿರುವುದಾಗಿ ಚೀನಾ ಸೋಮವಾರ ತಿಳಿಸಿದೆ. ಟಿಬೆಟ್ ಸಂಬಂಧಿತ ವಿಷಯಗಳ ಬಗ್ಗೆ ಬೀಜಿಂಗ್‌ನ ಸೂಕ್ಷ್ಮತೆ ಭಾರತ ಸಂಪೂರ್ಣವಾಗಿ ಪ್ರಶಂಸಿಸಬೇಕು ಎಂದು ಚೀನಾ ಒತ್ತಿ ಹೇಳಿದೆ.

### ಜವಾಬ್ದಾರಿಯುತ ಎಐ ಬಳಕೆ

ಮೋದಿ ಅವರು ಬ್ರಿಕ್ಸ್ ರಾಷ್ಟ್ರಗಳು ಸಾಮೂಹಿಕವಾಗಿ ಕೃತಕ ಬುದ್ಧಿಮತ್ತೆಯ ಜವಾಬ್ದಾರಿಯುತ ಬಳಕೆ ಮುಂದುವರಿಸಬೇಕೆಂದು ಕರೆ ನೀಡಿದ್ದಾರೆ, ಆಡಳಿತದೊಂದಿಗೆ ನಾವೀನ್ಯತೆ ಸಮತೋಲನಗೊಳಿಸುವ ಮಹತ್ವ ಎತ್ತಿ ತೋರಿಸಿದ್ದಾರೆ. 17ನೇ ಬ್ರಿಕ್ಸ್ ಶೃಂಗಸಭೆಯಲ್ಲಿ ಬಹುಪಕ್ಷೀಯತೆ, ಆರ್ಥಿಕ-ಹಣಕಾಸು ವ್ಯವಹಾರಗಳು ಮತ್ತು ಕೃತಕ ಬುದ್ಧಿಮತ್ತೆ ಬಲಪಡಿಸುವ ಕುರಿತು ಔಟ್ರೀಚ್ ಅಧಿವೇಶನದಲ್ಲಿ ಮಾತನಾಡಿದ ಪ್ರಧಾನಿಯವರು, ಎಐ ಕಾಲಘಟ್ಟದಲ್ಲಿ ಜಗತ್ತು ಪ್ರತಿ ವಾರಕ್ಕೂ ವಿಸ್ತರಣೆಯಾಗುತ್ತಿದೆ. ಈಗ ಎಐ ಆಡಳಿತದ ಸುತ್ತಲಿನ ಕಳವಳಗಳನ್ನು ಎತ್ತಿ ತೋರಿಸುತ್ತಿದೆ. ಈ ಕ್ಷೇತ್ರದಲ್ಲಿ ಹೊಸತನದ ಪ್ರೋತ್ಸಾಹಕ್ಕೆ ಕೂಡ ಸಮಾನ ಪ್ರಾಮುಖ್ಯತೆ ನೀಡಬೇಕು ಎಂದು ಪ್ರತಿಪಾದಿಸಿದರು.

# ಪ್ರಯಾಣಿಕರು ಬಿಟ್ಟ ಚಿಲ್ಲರೆಯಿಂದ ಕೆಎಸ್‌ಆರ್‌ಟಿಸಿಗೆ ಭರ್ಜರಿ ಆದಾಯ

**1.5 ಕೋಟಿ ರೂ. ಸಂಗ್ರಹ!**

ಬೆಂಗಳೂರು: ಬಸ್ ಟಿಕೆಟ್ ದರ ರೌಂಡ್ ಆಫ್ ಮಾಡುವ ನಿಯಮವನ್ನು ಕೆಎಸ್‌ಆರ್‌ಟಿಸಿ ಸ್ಥಗಿತಗೊಳಿಸಿದೆ. ಆದರೆ, ಕಳೆದ ಕೆಲ ವರ್ಷಗಳಿಂದ ಜಾರಿಯಲ್ಲಿದ್ದ ಈ ನಿಯಮದಿಂದ ಕೆಎಸ್‌ಆರ್‌ಟಿಸಿ ಬರೋಬ್ಬರಿ 1.57 ಕೋಟಿ ರೂಪಾಯಿ ಸಂಗ್ರಹ ಮಾಡಿದೆ ಎಂದು ಅಂಶ ಬಯಲಾಗಿದೆ.

ಕೆಎಸ್‌ಆರ್‌ಟಿಸಿ ಬಸ್‌ಗಳಲ್ಲಿ ಚಿಲ್ಲರೆ ಸಮಸ್ಯೆ ತಪ್ಪಿಸಲು ಟಿಕೆಟ್ ರೌಂಡ್‌ಆಫ್ ವಿಧಾನವನ್ನು 8 ವರ್ಷಗಳ ಹಿಂದೆ ಜಾರಿಗೆ ತರಲಾಯಿತು. ಪ್ರಮುಖವಾಗಿ ಐರಾವತ, ರಾಜಹಂಸ, ಇವಿ ಸೇರಿದಂತೆ ಪ್ರೀಮಿಯಂ ಬಸ್‌ಗಳ ಪ್ರಯಾಣಿಕರಿಂದ ಸಂಗ್ರಹ ಮಾಡಲಾಗುತ್ತಿತ್ತು. ಉದಾಹರಣೆಗೆ 36 ರೂಪಾಯಿ ಟಿಕೆಟ್ ದರವಾದರೆ 40 ರೂಪಾಯಿ, 117 ರೂಪಾಯಿ ಅದರೆ 120 ರೂಪಾಯಿ ರೌಂಡ್‌ಆಫ್ ಮಾಡಿ ಸಂಗ್ರಹಿಸಲಾಗುತ್ತಿತ್ತು. ಈ ಹೆಚ್ಚುವರಿ ಹಣ ಪಡೆಯುತ್ತಿರುವುದಕ್ಕೆ ಪ್ರಯಾಣಿಕರಿಂದ ಸಾಕಷ್ಟು ವಿರೋಧ ವ್ಯಕ್ತವಾಗಿತ್ತು.




ಈ ಕೆಎಸ್‌ಆರ್‌ಟಿಸಿ ರೌಂಡ್‌ಆಫ್ ನಿಯಮದಿಂದ ಈವರೆಗೂ ಎಷ್ಟು ಹಣ ಸಂಗ್ರಹವಾಗಿದೆ ಎಂಬ ಬಗ್ಗೆ ಪ್ರಯಾಣಿಕರು ಆರ್‌ಟಿಐ ಮೂಲಕ ಮಾಹಿತಿಯನ್ನು ಪಡೆದಿದ್ದಾರೆ. 1,57,52,210 ರೂಪಾಯಿಗಳನ್ನು ಸಂಗ್ರಹಿಸಲಾಗಿದೆ ಎಂಬ ಮಾಹಿತಿ ಸಿಕ್ಕಿದೆ. ಪ್ರಯಾಣಿಕರಿಗೆ ಚಿಲ್ಲರೆ ಕೊಡುವ ಸಮಸ್ಯೆಯನ್ನು ಪರಿಹರಿಸಲು 2016ರಲ್ಲಿ ಪ್ರೀಮಿಯಂ ಬಸ್ಸುಗಳ ಟಿಕೆಟ್ ದರವನ್ನು ರೌಂಡ್‌ಆಫ್ ಮಾಡುವ ವ್ಯವಸ್ಥೆಯನ್ನು ಜಾರಿಗೆ ತಂದಿತು. ಟಿಕೆಟ್ ಬೆಲೆ 91 ರೂಪಾಯಿಯಿಂದ 94 ರೂಪಾಯಿವರೆಗೆ ಇದ್ದರೆ, ಅದನ್ನು 90 ರೂಪಾಯಿಗೆ ಇಳಿಸಲಾಗುತ್ತಿತ್ತು. ಅದೇ ರೀತಿ, 95 ರೂಪಾಯಿಯಿಂದ 99 ರೂಪಾಯಿವರೆಗೆ ಇದ್ದರೆ, ಅದನ್ನು 100 ರೂಪಾಯಿಗೆ ಹೆಚ್ಚಿಸಲಾಗುತ್ತಿತ್ತು. ಈ ವ್ಯವಸ್ಥೆಯನ್ನು ಯುಪಿಐ ಆಧಾರಿತ ಟಿಕೆಟ್ ದರ ಪಾವತಿಗೂ ಅನ್ವಯಿಸಲಾಯಿತು. ಪರಿವರ್ತಿಸುವುದರಿಂದ ಬರುವ ಹೆಚ್ಚುವರಿ/ಕೊರತೆ ಹಣವನ್ನು ಲೆಕ್ಕ ಇಡಲು ಪ್ರತ್ಯೇಕ ಖಾತೆ ತೆರೆಯಬೇಕು ಎಂದು ಆದೇಶದಲ್ಲಿ ತಿಳಿಸಲಾಗಿತ್ತು.

### ಯಾವ ವಿಭಾಗದಿಂದ ಹಣ ಸಂಗ್ರಹ

- ಮೈಸೂರು ಗ್ರಾಮಾಂತರ ವಿಭಾಗ 55.5 ಲಕ್ಷ ರೂ.
- ಬೆಂಗಳೂರು ಕೇಂದ್ರ ವಿಭಾಗ 52.7 ಲಕ್ಷ ರೂ.
- ಮಂಗಳೂರು ವಿಭಾಗ 18.2 ಲಕ್ಷ ರೂ.
- ಸಾಮಾಜಿಕ ಜಾಲತಾಣದಲ್ಲಿ ಸಾಕಷ್ಟು ಚರ್ಚೆ

ಕೆಎಸ್‌ಆರ್‌ಟಿಸಿ ಕ್ರಮಕ್ಕೆ ಸಾಮಾಜಿಕ ಜಾಲತಾಣದಲ್ಲಿ ಭಾರೀ ವಿರೋಧ ವ್ಯಕ್ತವಾಗಿತ್ತು.

ಈ ಹಣ ಏನು ಮಾಡುತ್ತಾರೆ ಯಾವುದಕ್ಕೆ ಬಳಸುತ್ತಾರೆ ಎಂಬ ಪ್ರಶ್ನೆ ಕೇಳಿಬಂದಿತ್ತು. ಈ ನಿಯಮ ತಿದ್ದುಪಡಿ ಮಾಡಬೇಕು ಎಂಬ ಒತ್ತಾಯವು ಇತ್ತು. ಸದ್ಯ ಕೆಎಸ್‌ಆರ್‌ಟಿಸಿ ಈ ನಿಯಮವನ್ನು ತೆಗೆದಿದೆ.

# ಹೃದಯಾಘಾತ ಹೆಚ್ಚಳ: ಶಾಲಾ ಮಕ್ಕಳ ಹೃದಯ ತಪಾಸಣೆ ಸೇರಿ 8 ಮಹತ್ವದ ನಿರ್ಧಾರ

## ಹೃದಯಾಘಾತಗಳಿಗೆ ಕೋವಿಡ್ ಲಸಿಕೆ ನೇರ ಕಾರಣವಲ್ಲ ಎಂದ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್

• ಉದಯವಾಹಿನಿ, ಬೆಂಗಳೂರು

ಕೋವಿಡ್ ಅಡ್ಡ ಪರಿಣಾಮಗಳ ಕುರಿತು ತಜ್ಞರ ಸಮಿತಿಯ ವರದಿ ಸ್ವೀಕರಿಸಿದ ಸರ್ಕಾರವು 15 ವರ್ಷದ ಎಲ್ಲಾ ಶಾಲಾ ಮಕ್ಕಳನ್ನು ಹೃದಯ ತಪಾಸಣೆಗೆ ಒಳಪಡಿಸಲು ನಿರ್ಧಾರ ಮಾಡಿದೆ. ಈ ಬಗ್ಗೆ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಮಾಹಿತಿ ನೀಡಿದ್ದಾರೆ.


ಬೆಂಗಳೂರಿನಲ್ಲಿ ಸೋಮವಾರ ಕೋವಿಡ್ ಅಡ್ಡ ಪರಿಣಾಮಗಳ ಕುರಿತು ತಜ್ಞರ ಸಮಿತಿಯ ವರದಿ ಸ್ವೀಕರಿಸಿದ ಬಳಿಕ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದ ಸಚಿವರು, ಕೋವಿಡ್ ಬಳಿಕ ಶೇ 4 ರಿಂದ 5 ರಷ್ಟು ಹೃದಯಾಘಾತಗಳ ಸಂಖ್ಯೆ ಹೆಚ್ಚಾಗಿವೆ ಎಂದರು. ಆದರೆ ಇದಕ್ಕೆ ಕೋವಿಡ್ ಲಸಿಕೆ ನೇರ ಕಾರಣವಲ್ಲ ಎಂಬುದು ತಜ್ಞರ ವರದಿಯಲ್ಲಿ ಹೇಳಲಾಗಿದೆ ಎಂದು ಸ್ಪಷ್ಟಪಡಿಸಿದರು.



**ತಂಬಾಕು ಸೇವನೆ ಸೇರಿ ಇತರೆ ಕಾರಣ:** ಹೃದಯಾಘಾತಗಳು ಹೆಚ್ಚಾಗಲು ಶೇ 50 ರಷ್ಟು ಪ್ರಕರಣಗಳಲ್ಲಿ ತಂಬಾಕು ಸೇವನೆಯೇ ಪ್ರಮುಖ ಕಾರಣ ಎಂಬುದು ತಜ್ಞರ ವರದಿಯಲ್ಲಿ ಹೇಳಲಾಗಿದೆ. ಇದರ ಹೊರತಾಗಿ ಮಧುಮೇಹ, ರಕ್ತದೊತ್ತಡ, ಒಬೆಸಿಟಿ ಹೆಚ್ಚಾಗಿದೆ. ಸ್ಟೀರಾಯ್ಡ್ ಹೆಚ್ಚಿನ ಬಳಕೆಯೂ ಕೂಡ ಕಾರಣವಾಗಿದೆ.

ಕೋವಿಡ್ ಪೂರ್ವದಲ್ಲಿ ಜಯದೇವ ಆಸ್ಪತ್ರೆ ಮೆಡಿಕಲ್ ರೆಕಾರ್ಡ್ಸ್‌ಗೆ ಹೋಲಿಕೆ ಮಾಡಿ ಕೂಡಾ ವರದಿ ಸಿದ್ಧಪಡಿಸಲಾಗಿದೆ. ಜಯದೇವ ಆಸ್ಪತ್ರೆಯಲ್ಲಿ 251 ಹೃದ್ರೋಗ ರೋಗಿಗಳ ಮೇಲೆ ಅಧ್ಯಯನ ಮಾಡಲಾಗಿದೆ. ಹೃದಯಾಘಾತಗಳಿಗೆ ಕೋವಿಡ್ ಲಸಿಕೆ ನೇರ ಕಾರಣವಲ್ಲ ಎಂದು ತಿಳಿದುಬಂದಿದೆ. ಎಂಆರ್ ಎನ್ ಎ ಲಸಿಕೆಯಿಂದ ಕೊಂಚ ಸಮಸ್ಯೆ ಎದುರಾಗಿದೆ. ಆದರೆ ಈ ಲಸಿಕೆಯನ್ನು ನಮ್ಮ ದೇಶದಲ್ಲಿ ಯಾರು ಪಡೆದಿಲ್ಲ ಎಂದು ಸಚಿವ ದಿನೇಶ್ ಗುಂಡೂರಾವ್ ಹೇಳಿದರು.

ಮೊಬೈಲ್, ಸಿಸ್ಟಮ್‌ಗಳ ಸ್ಕ್ರೀನ್ ಮುಂದೆ ಮಿತಿಮೀರಿದ ಸಮಯ ಕಳೆದಿರುವುದು ಪರಿಣಾಮ ಬೀರಿದೆ. ಕೋವಿಡ್ ಸಮಯದಲ್ಲಿ ಹೃದಯಾಘಾತಗಳಾಗಿವೆ. ಆದರೆ 3 ವರ್ಷಗಳ ನಂತರ ಕೋವಿಡ್‌ನಿಂದ ದುಷ್ಪರಿಣಾಮ ಬೀರಿರುವುದು ಕಡಿಮೆ ಎಂದು ತಜ್ಞರು ವರದಿಯಲ್ಲಿ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. 251 ಪ್ರಕರಣಗಳಲ್ಲಿ 19 ಪ್ರಕರಣಗಳಲ್ಲಿ ಕೋವಿಡ್ ಪಾಸಿಟಿವ್ ಪ್ರಕರಣಗಳಿದ್ದವು. ಆದರೆ ಶೇ 98 ರಷ್ಟು ಪ್ರಕರಣಗಳಲ್ಲಿ ಕೋವಿಡ್ ಲಸಿಕೆ ಪಡೆದವರಾಗಿದ್ದರು. ಕೊವಿಡ್ ಬಂದ ಒಂದು ವರ್ಷದಲ್ಲಿ ರಕ್ತನಾಳ ಬ್ಲಾಕೇಜ್ ಆಗೋ ಸಾಧ್ಯತೆ ಇದೆ. ಆದ್ರೆ, ಮೂರು ವರ್ಷದ ನಂತರ ಅದರ ಪರಿಣಾಮ ಅಷ್ಟರ ಮಟ್ಟಿಗೆ ಇಲ್ಲ ಎಂಬುದು ತಜ್ಞರ ವರದಿಯಲ್ಲಿ ಹೇಳಲಾಗಿದೆ ಎಂದು ಸಚಿವ ದಿನೇಶ್ ಗುಂಡೂರಾವ್ ಹೇಳಿದರು.



### ಹಲವು ಮಹತ್ವದ ನಿರ್ಧಾರ

- ಸರ್ಕಾರಿ ಆಸ್ಪತ್ರೆಯ ಹೊರಗೆ ನಡೆಯುವ ಎಲ್ಲಾ ಹಠಾತ್ ಸಾವುಗಳನ್ನು ಅಧಿಸೂಚಿತ ಖಾಯಿಲೆ ಎಂದು ಪರಿಗಣಿಸಲು ನಿರ್ಧಾರ.
- ಆಸ್ಪತ್ರೆಯ ಹೊರಗೆ ನಡೆಯುವ ಎಲ್ಲಾ ಹಠಾತ್ ಸಾವುಗಳ ಡೆತ್ ಸರ್ಟಿಫಿಕೇಟ್ ಪಡೆಯಲು ಮರಣೋತ್ತರ ಪರೀಕ್ಷೆ ಕಡ್ಡಾಯ.
- 15 ವರ್ಷದ ಎಲ್ಲಾ ಶಾಲಾ ಮಕ್ಕಳನ್ನು ಹೃದಯ ತಪಾಸಣೆಗೆ ಒಳಪಡಿಸಲು ನಿರ್ಧಾರ.
- ಪಠ್ಯ ಪುಸ್ತಕದಲ್ಲಿ ಶಾಲಾ ಮಕ್ಕಳಿಗೆ ಅಸಾಂಕ್ರಾಮಿಕ ರೋಗ, ಹೃದಯ ಅಳವಡಿಸಲು ಶಿಕ್ಷಣ ಇಲಾಖೆಗೆ ಮಾಹಿತಿ ಕಳುಹಿಸಲಾಗಿದೆ.
- ಹಠಾತ್ ಹೃದಯಘಾತಗಳ ಸಂದರ್ಭದಲ್ಲಿ ಸಂಜೀವಿನಿಯಂತೆ ಕಾರ್ಯನಿರ್ವಹಿಸುತ್ತಿರುವ ಪುನೀತ್ ರಾಜಕುಮಾರ್ ಹೃದಯ ಜ್ಯೋತಿ ಯೋಜನೆ ಎಲ್ಲಾ ತಾಲ್ಲೂಕು ಆಸ್ಪತ್ರೆಗಳಿಗೆ ವಿಸ್ತರಣೆ.
- ಬಸ್ ಸ್ಟ್ಯಾಂಡ್, ರೈಲ್ವೇ ನಿಲ್ದಾಣಗಳಲ್ಲಿ ಸ್ವಯಂ ಚಾಲಿತ AED ಯಂತ್ರಗಳನ್ನ ಇಡಲು ನಿರ್ಧಾರ. ಸಾರ್ವಜನಿಕರಿಗೆ ಸಿಪಿಆರ್ ತರಬೇತಿ ನೀಡಲು ಯೋಜನೆ.
- ಸರ್ಕಾರ ಮಟ್ಟದಲ್ಲಿ ಸರ್ಕಾರಿ ನೌಕರರಿಗೆ, ಗುತ್ತಿಗೆ ನೌಕರರಿಗೆ ಹೃದಯ ತಪಾಸಣೆ, ಸ್ಕ್ರೀನಿಂಗ್ ಮಾಡಲು ನಿರ್ಧರಿಸಿದ್ದೇವೆ
- ಖಾಸಗಿ ಕಂಪನಿಗಳು, ಉದ್ದಿಮೆದಾರರು ತಮ್ಮ ಕಂಪನಿಗಳಲ್ಲಿ ಕಾರ್ಮಿಕರಿಗೆ ವಾರ್ಷಿಕ ಆರೋಗ್ಯ ತಪಾಸಣೆ ನಡೆಸಲು ಸಲಹೆ.

**ಈ ದಿನದ ದರ** ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹9,829/Gram24ct ₹9,010/Gram22ct | ಬೆಳ್ಳಿ: ₹110.00/Gram

## ಹಠಾತ್ ಸಾವನ್ನು ಅಧಿಸೂಚಿತ ಕಾಯಿಲೆ ಎಂದು ಘೋಷಣೆ: ದಿನೇಶ್ ಗುಂಡೂರಾವ್

• ಉದಯವಾಹಿನಿ, ಬೆಂಗಳೂರು

ಹಠಾತ್ ಸಾವನ್ನು ಇನ್ನು ಮುಂದೆ ಅಧಿಸೂಚಿತ ಕಾಯಿಲೆಯಾಗಿ ಪರಿಗಣಿಸಲಾಗುವುದು ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಸೋಮವಾರ ಮಾತನಾಡಿದ ಅವರು, ಹೃದಯಾಘಾತದಿಂದ ಮೃತಪಟ್ಟವರ ಮರಣೋತ್ತರ ಪರೀಕ್ಷೆಯನ್ನು ಕಡ್ಡಾಯಗೊಳಿಸಲಾಗುವುದು. ಪಠ್ಯಪುಸ್ತಕದಲ್ಲಿ ಹೃದಯಾಘಾತದ ಕುರಿತು ಪ್ರತ್ಯೇಕ ಪಠ್ಯ ಅಳವಡಿಸಲು ಶಿಕ್ಷಣ ಇಲಾಖೆಗೆ ಸೂಚಿಸಲಾಗುವುದು ಎಂದರು. ಎಲ್ಲಾ ತಾಲ್ಲೂಕು ಆಸ್ಪತ್ರೆಗಳಿಗೆ ಹೃದಯ ಜ್ಯೋತಿ ಯೋಜನೆ ವಿಸ್ತರಿಸಲಾಗುವುದು ಎಂದರು. ಕೋವಿಡ್ ಪಾಸಿಟಿವ್ ಬಂದವರಲ್ಲಿ ಕೆಲವರಿಗೆ ಹೃದಯಾಘಾತ ಆಗಿದೆ. ಆದರೆ, ಅದು ಕೋವಿಡ್ ಲಸಿಕೆ ಯಿಂದ ಅಲ್ಲ. ಕೋವಿಡ್ ಲಸಿಕೆಯಿಂದ ಜನರಿಗೆ ಅನುಕೂಲ ಆಗಿದೆ. ಕೋವಿಡ್ ಬಂದಾಗ ಸೇವಿಸಿದ ಬೇರೆ ಔಷಧಗಳಿಂದ ಪರಿಣಾಮ ಆಗಿದೆ. ಬೊಜ್ಜು, ಮಧುಮೇಹ ಮತ್ತಿತರ ಸಮಸ್ಯೆಗಳೂ ಹೃದಯಾಘಾತಕ್ಕೆ ಕಾರಣವಾಗಿದೆ ಎಂದರು. ಹಠಾತ್ ಹೃದಯಾಘಾತದ ಕುರಿತು ತನಿಖೆ ನಡೆಸುವಂತೆ ಮುಖ್ಯಮಂತ್ರಿ ಆದೇಶಿಸಿದ್ದರು. ಹೀಗಾಗಿ, ಡಾ. ರವೀಂದ್ರಾಥ್ ಅವರ ನೇತೃತ್ವದಲ್ಲಿ ಸಮಿತಿ ರಚಿಸಲಾಗಿತ್ತು. ಈ ಸಮಿತಿ ವರದಿ ನೀಡಿದೆ' ಎಂದರು.

## ವಾಹನ ಅರ್ಧಕ್ಕೆ ಪೀಸ್ ಪೀಸ್... ಸೇತುವೆ ಮೇಲಿಂದ ಬಿದ್ದ ಕ್ಯಾಬಿನ್!

• ಉದಯವಾಹಿನಿ, ಬೆಂಗಳೂರು

ಸಿಲಿಕಾನ್ ಸಿಟಿ ಬೆಂಗಳೂರಿನ ನೈಸ್ ರಸ್ತೆಯಲ್ಲಿ ಮತ್ತೊಂದು ಭೀಕರ ಅಪಘಾತ ಸಂಭವಿಸಿದ್ದು, ಟೆಂಪೊವೊಂದು ತಡೆಗೋಡೆಗೆ ಢಿಕ್ಕಿಯಾಗಿ ಅರ್ಧಕ್ಕೇ ಪೀಸ್ ಪೀಸ್ ಆದ ಘಟನೆ ನಡೆದಿದೆ. ಜ್ಞಾನಭಾರತಿ ಸಂಚಾರ ಪೊಲೀಸ್ ಠಾಣೆ ವ್ಯಾಪ್ತಿಗೆ ಬರುವ ನೈಸ್ ರಸ್ತೆಯಲ್ಲಿ ಈ ಘಟನೆ ನಡೆದಿದ್ದು ಅಪಘಾತದ ವಿಡಿಯೋ ಸಿಸಿಟಿವಿಯಲ್ಲಿ ಸೆರೆಯಾಗಿದೆ. ಅತಿವೇಗವಾಗಿ ಬಂದ ಟೆಂಪೋ ಚಾಲಕನ ನಿಯಂತ್ರಣ ತಪ್ಪಿ ರಸ್ತೆ ವಿಭಜಕಕ್ಕೆ ಡಿಕ್ಕಿ ಹೊಡೆದ ಪರಿಣಾಮ ಚಾಲಕನ ಕ್ಯಾಬಿನ್ ತುಂಡಾಗಿ ಮೇಲು ಸೇತುವೆಯಿಂದ ಕೆಳಗೆ ಬಿದ್ದು ಚಾಲಕ ಸೇರಿ ಮೂವರು ಗಾಯಗೊಂಡಿದ್ದಾರೆ. ಜ್ಞಾನಭಾರತಿ ಬಳಿಯ ನೈಸ್ ರಸ್ತೆಯ ರಾಮಸಂದ್ರ, ಸೇತುವೆ ಬಳಿ ಶನಿವಾರ ಮಧ್ಯಾಹ್ನ ಸುಮಾರು 1 ಗಂಟೆಗೆ ಘಟನೆ ನಡೆದಿದೆ ಎನ್ನಲಾಗಿದೆ. ಟೆಂಪೋ ಚಾಲಕ ರಾಘವೇಂದ್ರ, ಸಹಾಯಕ ಸಲೀಂ ಮತ್ತು ಫಯಾಜ್ ಗಂಭೀರವಾಗಿ ಗಾಯಗೊಂಡಿದ್ದು, ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಸದ್ಯ ಮೂವರೂ ಪ್ರಾಣಾಪಾಯದಿಂದ ಪಾರಾಗಿದ್ದಾರೆ ಎಂದು ಸಂಚಾರ ಪೊಲೀಸರು ಮಾಹಿತಿ ನೀಡಿದ್ದಾರೆ.

## ಗುಣಮಟ್ಟದ ಆರೋಗ್ಯ ಸಿಗುವಂತಾಗಲಿ

• ಉದಯವಾಹಿನಿ, ಬೆಂಗಳೂರು

ಸಮಾಜದಲ್ಲಿರುವ ಎಲ್ಲಾ ವರ್ಗದವರಿಗೂ ಕಡಿಮೆ ದರದಲ್ಲಿ ಗುಣಮಟ್ಟದ ಆರೋಗ್ಯ ಸೌಲಭ್ಯ ಸಿಗುವಂತಾಗಬೇಕು ಎಂದು ವಿಧಾನಸಭಾಧ್ಯಕ್ಷ ಯು.ಟಿ.ಖಾದರ್ ಅಭಿಪ್ರಾಯಪಟ್ಟರು. ನಗರದ ಕುಶಾಲನಗರ ವಾರ್ಡ್‌ನ ಬಿಡಿಎ ಲೇಔಟ್‌ನಲ್ಲಿ ನಿರ್ಮಿಸಿರುವ ಅಂಗನವಾಡಿ ಕೇಂದ್ರ ಮತ್ತು ಮೆಡಿ ಹೆಲ್ತ್ ಕ್ಲಿನಿಕ್ ಅನ್ನು ಸ್ಥಳೀಯ ಶಾಸಕ ಎ.ಸಿ.ಶ್ರೀನಿವಾಸ್ ಅವರೊಂದಿಗೆ ಉದ್ಘಾಟಿಸಿ ಮಾತನಾಡಿದ ಅವರು, ಬಡವ, ಶ್ರೀಮಂತ, ಜಾತಿ, ಧರ್ಮ ಮೀರಿ ಎಲ್ಲರಿಗೂ ಆರೋಗ್ಯ, ಶಿಕ್ಷಣದ ಸೌಲಭ್ಯ ದೊರೆಯಬೇಕು ಎಂದರು. ಶಾಸಕ ಎ.ಸಿ.ಶ್ರೀನಿವಾಸ್ ಮಾತನಾಡಿ, ಸರ್ಕಾರಿ ಶಾಲೆ, ಕಾಲೇಜುಗಳಲ್ಲಿ ಶಿಕ್ಷಣ ಪಡೆದ ಅನೇಕರು, ವಿಜ್ಞಾನಿ, ವೈದ್ಯ, ಎಂಜಿನಿಯರ್, ಸಾಹಿತಿ ಸೇರಿದಂತೆ ಹಲವಾರು ಕ್ಷೇತ್ರಗಳಲ್ಲಿ ಸಾಧನೆ ಮಾಡಿ, ದೇಶಕ್ಕೆ ಕೊಡುಗೆ ನೀಡಿದ್ದಾರೆ. ರಾಷ್ಟ್ರ ನಿರ್ಮಾಣದಲ್ಲಿ ಪಾಲ್ಗೊಂಡ ಅನೇಕ ಮಹನೀಯರು ಓದಿದ್ದು ಸರ್ಕಾರಿ ಶಿಕ್ಷಣ ಸಂಸ್ಥೆಗಳಲ್ಲಿ ಎಂದು ತಿಳಿಸಿದರು. ಯಾವ ರಾಷ್ಟ್ರ ಶಿಕ್ಷಣ, ಆರೋಗ್ಯಕ್ಕೆ ಆದ್ಯತೆ ನೀಡುತ್ತದಯೋ ಅಲ್ಲಿ ಸುಸ್ಥಿರ ಅಭಿವೃದ್ಧಿ ಇರುತ್ತದೆ. ಆಸ್ತಿ, ಹಣ ಗಳಿಕೆ ಮುಖ್ಯವಲ್ಲ, ಸಮಾಜಮುಖಿ ಹಾಗೂ ನಾಯಕತ್ವ ಗುಣವುಳ್ಳ ಮಕ್ಕಳನ್ನು ಸಮಾಜಕ್ಕೆ ಕೊಡುಗೆಯಾಗಿ ನೀಡಿ' ಎಂದು ಸಲಹೆ ನೀಡಿದರು.

## ಜನಾನುರಾಗಿ ಹವ್ಯಾಸಿ ಯಕ್ಷಗಾನ ಕಲಾವಿದ ಗಿರೀಶ್ ಪರಂಗೋಡು ಅವರ ಸಂಸ್ಮರಣೆ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಕಿರಿ ವಯಸ್ಸಿನಲ್ಲೇ ಅಗಲಿದ, ಜನಾನುರಾಗಿ ಹವ್ಯಾಸಿ ಯಕ್ಷಗಾನ ಕಲಾವಿದ ಗಿರೀಶ್ ಪರಂಗೋಡು ಅವರ ಸಂಸ್ಮರಣೆ ಹಾಗೂ ಅವರ ನೆನಪಿನ ಗಿರಿಯೆತ್ತರ' ಕೃತಿ ಬಿಡುಗಡೆ ಕಾರ್ಯಕ್ರಮ ಭಾನುವಾರ ಬೆಂಗಳೂರು ಕೋಣನಕುಂಟೆ ಸಮೀಪದ ಚುಂಚಘಟ್ಟ ಶ್ರೀನಿಧಿ ಶ್ರೀನಿವಾಸ ದೇವಸ್ಥಾನದ ಆವರಣದಲ್ಲಿ ನಡೆಯಿತು. ಶ್ರೀ ರಾಮ ಕಲಾ ಸಂಘದ ವತಿಯಿಂದ ನಡೆದ ಕಾರ್ಯಕ್ರಮ ದಲ್ಲಿ ಗಿರೀಶ್ ಪರಂಗೋಡು ಅವರ ನೆನಪಿನಲ್ಲಿ ನೀಡುವ ಪರಂಗೋಡು ಪ್ರಶಸ್ತಿಯನ್ನು ಹವ್ಯಾಸಿ ಭಾಗವತ ಉದಯ ಪ್ರಕಾಶ್ ಪಟ್ಟಾಜೆ ಅವರಿಗೆ ನೀಡಿ ಗೌರವಿಸಲಾಯಿತು. ಶ್ರೀ ರಾಮ ಕಲಾಸಂಘದ ಅಧ್ಯಕ್ಷ ಎಂ.ಎಸ್. ಕೆ.ವಾಸಿಷ್ಠ ಅವರು ಅಧ್ಯಕ್ಷತೆ ವಹಿಸಿದ್ದರು. ಶ್ರೀನಿಧಿ ಶ್ರೀನಿವಾಸ ದೇವಸ್ಥಾನದ ಧರ್ಮದರ್ಶಿ ಕೆ.ಎಸ್.ಸಮೀರ ಸಿಂಹ ಹಾಗೂ ಉದ್ಯಮಿ, ರಾಮಮೋಹನ್ ಅವರು ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದರು. ಕಾರ್ಯಕ್ರಮದ ಬಳಿಕ ಶ್ರೀರಾಮ ಕಲಾಸಂಘದ ಕಲಾವಿದರಿಂದ 'ಕರ್ಣ ಭೇದನ' ಯಕ್ಷಗಾನ ತಾಳಮದ್ದಳೆ ಕಾರ್ಯಕ್ರಮ ನಡೆಯಿತು.

# ಅಗೆದ ಪಾದಚಾರಿ ಮಾರ್ಗ, ಕಿರಿದಾದ ರಸ್ತೆ!

### ವಾಹನ ಸಂಚಾರ, ಸಾರ್ವಜನಿಕರ ಓಡಾಟಕ್ಕೆ ತೀವ್ರ ತೊಡಕಾಗಿದೆ ಈ ರಸ್ತೆಯಲ್ಲಿ ವೈಟ್‌ಟಾಪಿಂಗ್ ಕಾಮಗಾರಿ ಆರಂಭ

• ಉದಯವಾಹಿನಿ, ಬೆಂಗಳೂರು

ಮೆಜೆಸ್ಟಿಕ್‌ನ ಕೆಂಪೇಗೌಡ ಬಸ್ ನಿಲ್ದಾಣಕ್ಕೆ ಸಂಪರ್ಕ ಕಲ್ಪಿಸುವ ಶೇಷಾದ್ರಿಪುರದ ಪ್ಲಾಟ್ ಫಾರಂ ಮುಖ್ಯರಸ್ತೆಯ ಎರಡೂ ಬದಿಯನ್ನು ಒಳ ಚರಂಡಿ (ಯುಜಿಡಿ) ಕಾಮಗಾರಿಗಾಗಿ ಅಗೆಯಲಾಗಿದೆ. ಇಲ್ಲಿ ಕೆಲಸ ಕುಂಟುತ್ತಾ ಸಾಗಿದ್ದು, ವಾಹನ ಸಂಚಾರ ಹಾಗೂ ಸಾರ್ವಜನಿಕರ ಓಡಾಟಕ್ಕೆ ತೀವ್ರ ತೊಡಕಾಗಿದೆ. ಈ ರಸ್ತೆಯಲ್ಲಿ ವೈಟ್ ಟಾಪಿಂಗ್ ಕಾಮಗಾರಿ ಆರಂಭವಾಗಲಿದೆ. ಹೀಗಾಗಿ ಬೆಂಗಳೂರು ಜಲಮಂಡಳಿ ಎರಡು ತಿಂಗಳ ಹಿಂದೆಯೇ ರಸ್ತೆಯ 2 ಬದಿಯ ಪಾದಚಾರಿ ಮಾರ್ಗಗಳನ್ನು ಅಗೆದು ಯುಜಿಡಿ ಕಾಮಗಾರಿ ಪ್ರಾರಂಭಿಸಿದೆ. ಕೆಲವು ಕಡೆ ಗುಂಡಿಗಳನ್ನು ತೆಗೆಯಲಾಗಿದೆ. ಒಳ ಚರಂಡಿಗೆ ಜೋಡಿಸುವ ಕೊಳವೆಗಳನ್ನು ಬೇಕಾಬಿಟ್ಟಿಯಾಗಿ ಇಡಲಾಗಿದೆ. ತೆರೆದ ಗುಂಡಿಗಳ ಸುತ್ತ-ಮುತ್ತ ಯಾವುದೇ ರೀತಿಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡಿಲ್ಲ. ರಾತ್ರಿ ವೇಳೆ ಈ ರಸ್ತೆಯಲ್ಲಿ ಓಡಾಡುವುದೇ ಕಷ್ಟವಾಗಿದೆ. ಈ ಮಾರ್ಗದಲ್ಲಿ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ ಜೀವವಿಮೆ ಕಚೇರಿ, ಅಪೊಲೊ ಆಸ್ಪತ್ರೆ ಹಾಗೂ ಜೆಡಿಎಸ್ ಕಚೇರಿ ಇದೆ. ಇಲ್ಲಿಗೆ ನಿತ್ಯ ನೂರಾರು ಜನ ಭೇಟಿ ನೀಡುತ್ತಾರೆ. ಪಾದಚಾರಿ ಮಾರ್ಗ ಅಧ್ವಾನಗೊಂಡಿರುವುದರಿಂದ ಸಾರ್ವಜನಿಕರು ರಸ್ತೆಯ ಮೂಲಕವೇ ಸಂಚರಿಸುತ್ತಿದ್ದು, ಅಪಘಾತಗಳು ಸಂಭವಿಸುವ ಅಪಾಯ ಎದುರಾಗಿದೆ.

ಯಶವಂತಪುರ, ಯಲಹಂಕ, ಮಲ್ಲೇಶ್ವರ, ಶೇಷಾದ್ರಿಪುರ, ಕುರುಬರಹಳ್ಳಿ, ರಾಜಾಜಿನಗರದಿಂದ ಬರುವ ಎಲ್ಲಾ ಬಿಎಂಟಿಸಿ ಬಸ್‌ಗಳು ಪ್ಲಾಟ್‌ಫಾರಂ ರಸ್ತೆಯ ಮೂಲಕ ಮೆಜೆಸ್ಟಿಕ್‌ನ ಕೆಂಪೇಗೌಡ ಬಸ್ ನಿಲ್ದಾಣಕ್ಕೆ ತೆರಳುತ್ತವೆ.



ಉದಯವಾಹಿನಿ ಚಿತ್ರ

**ಕಾಮಗಾರಿಯ ಜಾಗದಲ್ಲಿ ಮುಂಜಾಗ್ರತಾ ಕ್ರಮ**

> **ಈ ರಸ್ತೆಯಲ್ಲಿ ಬೆಳಿಗ್ಗೆ 8 ರಿಂದ 10 ಗಂಟೆವರೆಗೆ ಹಾಗೂ ಸಂಜೆ 4ರಿಂದ 8 ಗಂಟೆಯ ಅವಧಿಯಲ್ಲಿ ವಾಹನಗಳು ಸಾಲುಗಟ್ಟಿ ನಿಂತಿರುತ್ತವೆ. ಮೆಜೆಸ್ಟಿಕ್‌ಗೆ ನಡೆದುಕೊಂಡು ಹೋದರೆ ಬೇಗ ತಲುಪಬಹುದು. ಆದರೆ ವಾಹನದಲ್ಲಿ ಸಂಚರಿಸಲು ಆಗುವುದಿಲ್ಲ. ಕಾಮಗಾರಿಯ ಜಾಗದಲ್ಲಿ ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡಿಲ್ಲ. ಯಾರಾದರೂ ಗುಂಡಿಗಳಲ್ಲಿ ಬಿದ್ದು ಅನಾಹುತ ಆಗುವ ಸಾಧ್ಯತೆ ಇದೆ.**
> **ನಾಗರಾಜ್ ನಾಗರಬಾವಿ**

> **ಅಂಗಡಿ ಮುಂಭಾಗದಲ್ಲಿ ಮಣ್ಣಿನ ರಾಶಿ ಹಾಕಲಾಗಿದೆ. ಇದರಿಂದ ಸಾರ್ವಜನಿಕರ ಓಡಾಟಕ್ಕೆ ಅನನಕೂಲವಾಗಿದೆ. ಮಳೆ ಬಂದರೆ ರಸ್ತೆಯು ಕೆಸರು ಗದ್ದೆಯಾಗುತ್ತದೆ. ಅಭಿವೃದ್ಧಿ ಕಾಮಗಾರಿಗೆ ನಮ್ಮ ವಿರೋಧವಿಲ್ಲ. ಆದರೆ ವಿಳಂಬ ನೀತಿ ಅನುಸರಿಸುವುದು ಸರಿಯಲ್ಲ. ಸಂಬಂಧಪಟ್ಟ ಅಧಿಕಾರಿಗಳು ಕಾಮಗಾರಿ ಪೂರ್ಣಗೊಳಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು**
> **ಪರಮೇಶ್ವರ್ ಅಡಿಗ ಪಾನ್‌ಶಾಪ್ ಅಂಗಡಿ ವ್ಯಾಪಾರಿ**

ಯುಜಿಡಿ ಕಾಮಗಾರಿಯ ಹೆಸರಿನಲ್ಲಿ ಕಿರಿದಾದ ರಸ್ತೆಯನ್ನು ಅಗೆದ ಪರಿಣಾಮ ನಿತ್ಯ ದಟ್ಟಣೆಯ ಅವಧಿಯಲ್ಲಿ ಓಕಳಿಪುರಂ ಮಿಲ್ ಜಂಕ್ಷನ್‌ನಿಂದ ಮಂತ್ರಿ ಸ್ಟೇರ್‌ನಲ್ಲಿರುವ ರಾಜೀವ್ ಗಾಂಧಿ ಪ್ರತಿಮೆವರೆಗೂ ವಾಹನಗಳು ಸಾಲುಗಟ್ಟಿ ನಿಂತಿರುತ್ತವೆ. 'ಈ ರಸ್ತೆಯಲ್ಲಿ ಬೆಳಿಗ್ಗೆ ವೇಳೆ ಸಂಚರಿಸುವುದು ಒಂದು ರೀತಿಯ ದುಸ್ತರವಾದರೆ, ರಾತ್ರಿ ವೇಳೆ ಪಾದಚಾರಿಗಳು ನಡೆದಾಡುವುದೇ ಕಷ್ಟ. ಮಳೆ ಬಂದಾಗ, ಅಗೆದಿರುವ ಜಾಗ ಕೆಸರು ಗದ್ದೆಯಾಗಿ ಮಾರ್ಪಡುತ್ತದೆ.

ನಿತ್ಯ ದೂಳಿನ ಮಜ್ಜನವಾಗುತ್ತಿದ್ದು, ಆರೋಗ್ಯ ಹದಗೆಡುತ್ತಿದೆ.

> **ಮೃಪಾರ್ಸೆಲ್ ಅಂಗಡಿಗೆ ಬರುವ ಔಷಧಿಗಳನ್ನು ಪಡೆದುಕೊಳ್ಳಲು ಬರುವ ಗ್ರಾಹಕರಿಗೆ ತೊಂದರೆ ಆಗುತ್ತಿದೆ. ಪಾರ್ಸೆಲ್‌ಗಳನ್ನು ವಾಹನದಿಂದ ಅನ್ ಲೋಡ್ ಮಾಡಿಕೊಳ್ಳಲು ಸಾಧ್ಯವಾಗದಂತಹ ಪರಿಸ್ಥಿತಿ ನಿರ್ಮಾಣವಾಗಿದೆ.**
> **ಪ್ರದೀಪ್ ಪಾರ್ಸೆಲ್ ಅಂಗಡಿ ಸಿಬ್ಬಂದಿ**

ಸಂಬಂಧಪಟ್ಟವರಿಗೆ ಕಾಮಗಾರಿ ಪೂರ್ಣಗೊಳಿಸುವಂತೆ ಮನವಿ ಮಾಡಿದರೂ, ಪ್ರಯೋಜನವಾಗುತ್ತಿಲ್ಲ. ಅಂಗಡಿಗಳ ಮುಂದೆ ದೊಡ್ಡ ಗುಂಡಿ ತೋಡಲಾಗಿದೆ. ಇದರಲ್ಲಿ ಗ್ರಾಹಕರು ಹಾಗೂ ವ್ಯಾಪಾರಿಗಳು ಬಿದ್ದು ಕಾಲು ಮುರಿದು ಕೊಂಡಿದ್ದಾರೆ ಎಂದು ಪಾರ್ಸೆಲ್ ಅಂಗಡಿಯ ಸಿಬ್ಬಂದಿ ಅಳಲು ತೋಡಿಕೊಂಡರು. ಬೆಂಗಳೂರು ಜಲಮಂಡಳಿ ಸಿಬ್ಬಂದಿ ನಾನಾ ಕಾರಣಗಳಿಂದ ಕಾಮಗಾರಿ ವಿಳಂಬ ಮಾಡುತ್ತಿದ್ದಾರೆ. ಪಾದಚಾರಿ ಮಾರ್ಗವನ್ನು ಅಗೆದು, ಮಣ್ಣಿನ ರಾಶಿಯನ್ನು ಅಂಗಡಿ ಮುಂಭಾಗದಲ್ಲಿ ಹಾಕಿದ್ದಾರೆ. ಇದರಿಂದ ಗ್ರಾಹಕರು ಅಂಗಡಿಗೆ ಬರುತ್ತಿಲ್ಲ. ವ್ಯಾಪಾರ-ವಹಿವಾಟು ಕಡಿಮೆ ಆಗಿದೆ. ಬಸ್‌ಗೆ ಹಾಕುವ ಪಾರ್ಸೆಲ್‌ಗಳನ್ನು ಮಂತ್ರಿ ಸ್ಟೇರ್‌ಗೆ ತೆರಳಿ ಹಾಕಬೇಕಾದಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಸರಿಯಾಗಿ ಕೆಲಸ ಮಾಡದೇ ಕಾಲಹರಣ ಮಾಡುತ್ತಿದ್ದಾರೆ. ಸಾರ್ವಜನಿಕರಿಗೆ ತೊಂದರೆ ಕೊಡಬೇಕು ಎಂಬ ಉದ್ದೇಶದಿಂದ ವಿಳಂಬ ನೀತಿ ಅನುಸರಿಸುತ್ತಿದ್ದಾರೆ' ಎಂದು ಪಾನ್‌ಶಾಪ್ ಅಂಗಡಿ ವ್ಯಾಪಾರಿ ಪರಮೇಶ್ವರ ಅಸಮಾಧಾನ ವ್ಯಕ್ತಪಡಿಸಿದರು.

## ಮರಣೋತ್ತರ ವರದಿಗಳು ಪೋರ್ಟಲ್ ಅನ್ನು ಕಾರ್ಯಗತಗೊಳಿಸಲು ಕಡ್ಡಾಯ

• ಉದಯವಾಹಿನಿ, ಬೆಂಗಳೂರು

ಆರೋಗ್ಯ ಇಲಾಖೆಯು ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಎಲ್ಲಾ ವೈದ್ಯಕೀಯ-ಕಾನೂನು ಪ್ರಮಾಣಪತ್ರಗಳು ಮರಣೋತ್ತರ ವರದಿಗಳನ್ನು ನೀಡಲು ರಾಷ್ಟ್ರೀಯ ಮಾಹಿತಿ ಕೇಂದ್ರ ಅಭಿವೃದ್ಧಿಪಡಿಸಿದ ಡಿಜಿಟಲ್ ವೇದಿಕೆಯಾದ MedLEaPR (ವೈದ್ಯಕೀಯ ಕಾನೂನು ಪರೀಕ್ಷೆ ಮತ್ತು ಮರಣೋತ್ತರ ವರದಿಗಳು) ಪೋರ್ಟಲ್ ಅನ್ನು ಕಾರ್ಯಗತಗೊಳಿಸಲು ಕಡ್ಡಾಯಗೊಳಿಸಿದೆ.

ಜುಲೈ 5 ರಂದು ಹೊರಡಿಸಿದ ಆದೇಶದಲ್ಲಿ, ಒಜMedLEaPR ಈಗ ಕಾರ್ಯನಿರ್ವಹಿಸುತ್ತಿದ್ದು ಎಲ್ಲಾ MLC ಗಳು ಮತ್ತು PMRಗಳನ್ನು ತಯಾರಿಸಲು ಹಾಗೂ ಸಲ್ಲಿಸಲು ಪ್ರತ್ಯೇಕವಾಗಿ ಬಳಸಬೇಕು ಎಂದು ಇಲಾಖೆ ಹೇಳಿದೆ. ಕೈಬರಹದ ವರದಿಗಳನ್ನು ಇನ್ನು ಮುಂದೆ ಸ್ವೀಕರಿಸಲಾಗುವುದಿಲ್ಲ ಎಂದು ತಿಳಿಸಿದೆ.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಅಡಿಯಲ್ಲಿ MLC ಗಳು ಮತ್ತು PMR ಗಳನ್ನು ನೀಡುವಲ್ಲಿ ತೊಡಗಿರುವ ಎಲ್ಲಾ ವೈದ್ಯರು ಮತ್ತು ವೈದ್ಯಕೀಯ ಅಧಿಕಾರಿಗಳು ಪೋರ್ಟಲ್‌ನಲ್ಲಿ ನೋಂದಾಯಿಸಿಕೊಳ್ಳಬೇಕಾಗುತ್ತದೆ.

ಅವರ ನೋಂದಣಿಗಳನ್ನು ಸಲ್ಲಿಸಿದ ಎರಡು ದಿನಗಳಲ್ಲಿ ಗೊತ್ತುಪಡಿಸಿದ ನೋಡಲ್ ಅಧಿಕಾರಿಯು ಅವರ ಅಧಿಕೃತ ಆಸ್ಪತ್ರೆ ID ಯ ಆಧಾರದ ಮೇಲೆ ಪರಿಶೀಲಿಸಬೇಕು ಮತ್ತು ಅನುಮೋದಿಸಬೇಕು.



ಉದಯವಾಹಿನಿ ಚಿತ್ರ

> **ಪೋರ್ಟಲ್ ತಾತ್ಕಾಲಿಕವಾಗಿ ಕಾರ್ಯನಿರ್ವಹಿಸದಿದ್ದರೆ, ವೈದ್ಯರು ತಕ್ಷಣವೇ ನಿಗದಿತ ಸ್ವರೂಪದಲ್ಲಿ ಕಂಪ್ಯೂಟರ್-ಟೈಪ್ ಮಾಡಿದ ವರದಿಯನ್ನು ನೀಡಬೇಕು. ಅದನ್ನು 24 ಗಂಟೆಗಳ ಒಳಗೆ ಪೋರ್ಟಲ್‌ಗೆ ಅಪ್‌ಲೋಡ್ ಮಾಡಬೇಕು. ವರದಿಗಳನ್ನು ಸಿದ್ಧಪಡಿಸಿದ ಏಳು ದಿನಗಳಲ್ಲಿ ಅಂತಿಮಗೊಳಿಸಬೇಕು . ಈ ಸಮಯ ಮಿತಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ನಿರ್ದೇಶಿಸಲಾಗಿದೆ ಮತ್ತು ಯಾವುದೇ ಉಲ್ಲಂಘನೆಗಳನ್ನು ಗಂಭೀರವಾಗಿ ಪರಿಗಣಿಸಲಾಗುವುದು ಎಂದು ಇಲಾಖೆ ತಿಳಿಸಿದೆ.**

## ನಡುರಸ್ತೆಯಲ್ಲಿ ಲಾಂಗ್ ತೆಗೆದು ಗೂಂಡಾವರ್ತನೆ

• ಉದಯವಾಹಿನಿ, ಬೆಂಗಳೂರು

ಕಾರು ಟಚ್ ಮಾಡಿದ್ದನ್ನು ಪ್ರಶ್ನಿಸಿದ್ದಕ್ಕೆ ಟ್ಯಾಕ್ಸಿ ಚಾಲಕನ ಮೇಲೆ ಇನ್ನೋವಾ ಕಾರು ಚಾಲಕ ಲಾಂಗ್‌ನಿಂದ ಹಲ್ಲೆಗೆ ಯತ್ನಿಸಿದ ಹಿನ್ನೆಲೆ ಸಾರ್ವಜನಿಕರು ಇನ್ನೋವಾ ಕಾರು ಪುಡಿಗಟ್ಟಿದ ಘಟನೆ ಬೆಂಗಳೂರಿನ ಓಕಳಿಪುರಂ ಜಂಕ್ಷನ್‌ನಲ್ಲಿ ನಡೆದಿದೆ.

ಮೆಜೆಸ್ಟಿಕ್ ಸಮೀಪದಲ್ಲಿರುವ ರೈಲ್ವೇ ಗೇಟ್ ಹಿಂಭಾಗದ ರಸ್ತೆಯಲ್ಲಿ ಕ್ಯಾಬ್ ಚಾಲಕ ಕುಮಾರ್ ಪ್ಯಾಸೆಂಜರ್ ಕರೆದುಕೊಂಡು ವಿಜಯನಗರದಿಂದ ಬರುತ್ತಿದ್ದ. ಇದೇ ವೇಳೆ ಹಿಂಬದಿಯಿಂದ ಬಂದ ಇನ್ನೋವಾ ಕಾರು ಇಟಿಯೋಸ್ ಕ್ಯಾಬ್‌ಗೆ ಟಚ್ ಆಗಿದೆ. ಈ ವೇಳೆ ಇಬ್ಬರು ಚಾಲಕರ ಮಧ್ಯೆ ಮಾತಿನ ಚಕಮಕಿ ನಡೆದಿದ್ದು, ಕಾರಿಂದ ಇಳಿದು ಬಂದ ಇನ್ನೋವಾ ಕಾರು ಚಾಲಕ ಕ್ಯಾಬ್ ಚಾಲಕನಿಗೆ ಥಳಿಸಿದ್ದಾನೆ. ಕಾರಲ್ಲಿ ಪ್ಯಾಸೆಂಜರ್ ಇದ್ದಿದ್ದರಿಂದ ಇಟಿಯೋಸ್ ಕಾರು ಚಾಲಕ ಸುಮ್ಮನಿದ್ದ. ಇಷ್ಟಾದರೂ ಸುಮ್ಮನಾಗದ ಇನ್ನೋವ ಕಾರು ಚಾಲಕ ಕಾರಿನಿಂದ ಮಚ್ಚು ತಂದು ಇಟಿಯೋಸ್ ಕಾರು ಚಾಲಕನ ಕುತ್ತಿಗೆಗೆ ಇಟ್ಟು ಬೆದರಿಕೆ ಹಾಕಿದ್ದಾನೆ. ಇದರಿಂದ ಆತ ಭಯಗೊಂಡರೇ, ಅಲ್ಲೇ ಇದ್ದ ಜನರು ರೊಚ್ಚಿಗೆದ್ದರು. ಇನ್ನೋವಾ ಕಾರು ಚಾಲಕನ ಅಟ್ಟಹಾಸ ಕಂಡ ಜನರು ಆತನನ್ನ ತರಾಟೆಗೆ ತೆಗೆದುಕೊಂಡಿದ್ದಾರೆ. ಅಷ್ಟೇ ಅಲ್ಲದೇ ಕಲ್ಲಿನಿಂದ ಕಾರಿನ ಗಾಜುಗಳನ್ನ ಪುಡಿಪುಡಿ ಮಾಡಿದ್ದಾರೆ. ಜನರ ಆಕ್ರೋಶಕ್ಕೆ ಹೆದರಿದ ಆಸಾಮಿ ಕಾರನ್ನು ಅಲ್ಲಿಯೇ ಬಿಟ್ಟು ಪರಾರಿ ಆಗಿದ್ದಾನೆ.



ಉದಯವಾಹಿನಿ ಚಿತ್ರ

## ಜುಲೈ 8ರಂದು ಪ್ರತಿಭಟನೆಯಲ್ಲಿ ಕಂದಾಯ, ಆರೋಗ್ಯ, ಇಂಜನಿಯರ್ ವಿಭಾಗ ಪೌರ ಕಾರ್ಮಿಕರು, ರುದ್ರಭೂಮಿ ನೌಕರರು, ಚಾಲಕರು, ಐ.ಟಿ. ಆಡಳಿತ ವಿಭಾಗ ಪ್ರತಿಭಟನೆಯಲ್ಲಿ ಭಾಗಿ

• ಉದಯವಾಹಿನಿ, ಬೆಂಗಳೂರು

ಬಿಎಂಪಿ ಕೇಂದ್ರ ಕಛೇರಿ ನೌಕರರ ಸಂಘದ ಆವರಣದಲ್ಲಿ ಜುಲೈ 8ರಂದು ಬಿಬಿಎಂಪಿ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ 10ಮಹಾನಗರ ಪಾಲಿಕೆಗಳು ವಿವಿಧ ಬೇಡಿಕೆಗಳು ಅಗ್ರಹಿಸಿ ನಡೆಸುವ ಪ್ರತಿಭಟನೆಯಲ್ಲಿ ಪ್ರಬುದ್ಧ ಡಾ||ಬಿ.ಆರ್.ಅಂಬೇಡ್ಕರ್ ರುದ್ರಭೂಮಿ ಮತ್ತು ವಿದ್ಯುತ್ ಚಿತಾಗಾರ ನೌಕರರ ಸಂಘವು ಬೆಂಬಲ ನೀಡಿ ಅಧ್ಯಕ್ಷರಾದ ಎ.ಅಮೃತ್ ರಾಜ್ ರವರಿಗೆ ಬೆಂಬಲ ಪತ್ರ ನೀಡಿದರು. ಇದೇ ಸಂದರ್ಭದಲ್ಲಿ ಅಧ್ಯಕ್ಷರಾದ ಎ.ಅಮೃತ್ ರಾಜ್ ರವರು ಮಾತನಾಡಿ ಬಿಬಿಎಂಪಿ ಮತ್ತು 10ಮಹಾನಗರ ಪಾಲಿಕೆಯು ಅಧಿಕಾರಿ ಮತ್ತು ನೌಕರರು ಸಾಮೂಹಿಕ ರಜೆ ಹಾಕಿ ಪ್ರತಿಭಟನೆಯಲ್ಲಿ ಭಾಗವಹಿಸಲಿದ್ದಾರೆ, ಬಿಬಿಎಂಪಿ ಕಂದಾಯ, ಆರೋಗ್ಯ, ಇಂಜನಿಯರ್, ಶಿಕ್ಷಣ ಇಲಾಖೆ ಜೊತೆಯಲ್ಲಿ ಪಾಲಿಕೆ ಪೌರ ಕಾರ್ಮಿಕರು, ರುದ್ರಭೂಮಿ ನೌಕರರು, ಮಾಹಿತಿ ತಂತ್ರಜ್ಞಾನ ಸಿಬ್ಬಂದಿಗಳು, ಚಾಲಕರು, ತೋಟಗಾರಿಕೆ ಮಾಲಿಗಳು ಗ್ಯಾಂಗ್ ಮ್ಯಾನ್‌ಗಳು, ಹೊರಗುತ್ತಿಗೆ ನೌಕರರು, ಬಿಬಿಎಂಪಿ ಆಡಳಿತ ಶಾಖೆಯ ಅಧಿಕಾರಿ, ಸಿಬ್ಬಂದಿಗಳು ನಾಳೆ ಕಾರ್ಯನಿರ್ವಹಿಸದೇ ಸಾಮೂಹಿಕ ರಜೆ ಹಾಕಿ ಪ್ರತಿಭಟನೆಯಲ್ಲಿ ಭಾಗಿಯಾಗಲಿದ್ದಾರೆ ಜೊತೆಯಲ್ಲಿ 10ಮಹಾನಗರ ಪಾಲಿಕೆಯ ಅಧಿಕಾರಿ, ನೌಕರರ ಸಾವಿರಾರು ಸಂಖ್ಯೆಯಲ್ಲಿ ಸೇರಲಿದ್ದಾರೆ ನಮ್ಮ ಹೋರಾಟ ನ್ಯಾಯ ಸಿಗುವವರಗೆ ಎಂದು ಹೇಳಿದರು. ಉಪಾಧ್ಯಕ್ಷರಾದ ಕೆ.ಜಿ.ರವಿ ಮತ್ತು ಸಾಯಿಶಂಕರ್, ರಾಮಚಂದ್ರಎಸ್ .ಜಿ.ಸುರೇಶ್, ಎ.ಜೆ.ಬಾಬು, ಂ.ಎಲ್.ಎ.ಮಂಜುನಾಥ್, ರುದ್ರೇಶ್, ಸಂತೋಷ್ ಕುಮಾರ್ ನಾಯಕ್ ಸೋಮಶೇಖರ್,, ಕೆ.ನರಸಿಂಹ, ಶ್ರೀಧರ್, ಹೆಚ್.ಬಿ.ಹರೀಶ್, ಮಾರ್ಕೆಟ್ ಮಂಜುನಾಥ್ ರವರು ಸದಸ್ಯರುಗಳು ಉಪಸ್ಥಿತರಿದ್ದರು




ಉದಯವಾಹಿನಿ ಚಿತ್ರ

## ಬಿಎಂಆರ್‌ಸಿಎಲ್‌ಗೆ ಹೈಕೋರ್ಟ್ ನೋಟಿಸ್

• ಉದಯವಾಹಿನಿ, ಬೆಂಗಳೂರು

ನಮ್ಮ ಮೆಟ್ರೋ ದರ ನಿಗದಿ ಸಂಬಂಧ ಬೆಂಗಳೂರು ಮೆಟ್ರೋ ರೈಲು ಕಾರ್ಪೊರೇಷನ್ ಲಿಮಿಟೆಡ್‌ಗೆ ಹೈಕೋರ್ಟ್ ನೋಟಿಸ್ ಜಾರಿ ಮಾಡಿ 2 ವಾರದಲ್ಲಿ ಉತ್ತರಿಸುವಂತೆ ಸೂಚಿಸಿದೆ.

ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದ ಸಂಸದ ತೇಜಸ್ವಿಸೂರ್ಯ ಅವರು ಶುಲ್ಕ ನಿಗದಿ ಸಮಿತಿ ವರದಿಯನ್ನು ಬಹಿರಂಗ ಪಡಿಸುವಂತೆ ಕೋರಿ ಸಲ್ಲಿಸಿದ್ದ ರಿಟ್ ಅರ್ಜಿಯ ವಿಚಾರಣೆ ನ್ಯಾ.ಸುನಿಲ್ ದತ್ ಯಾದವ್ ಅವರ ಏಕಸದಸ್ಯ ಪೀಠದಲ್ಲಿ ನಡೆಯಿತು. ವಿಚಾರಣೆ ವೇಳೆ, ನೀವಿಷ್ಟು ಪ್ರಬಲರಾಗಿದ್ದೂ ನಿಮಗೆ ವರದಿ ಸಿಗುತ್ತಿಲ್ಲವೇ ಎಂದು ನ್ಯಾಯಮೂರ್ತಿಗಳು ತೇಜಸ್ವಿ ಸೂರ್ಯ ಪರ ವಕೀಲರಿಗೆ ಪ್ರಶ್ನಿಸಿದರು. ಡಿ ತಿಂಗಳಲ್ಲೇ ದರ ನಿಗದಿ ಸಮಿತಿ ವರದಿ ನೀಡಿದ್ದರೂ ಬಿಎಂಆರ್ ಸಿಎಲ್ ವರದಿ ನೀಡುತ್ತಿಲ್ಲ. ಮಾಹಿತಿ ಹಕ್ಕಿನಡಿ ಅರ್ಜಿ ಸಲ್ಲಿಸಿದ್ದರೂ ಸಮಿತಿ ವರದಿ ಬಹಿರಂಗಪಡಿಸಿಲ್ಲ ಎಂದು ವಕೀಲರು ಉತ್ತರಿಸಿದರು. ಕೊನೆಗೆ ಬಿಎಂಆರ್‌ಸಿಎಲ್‌ಗೆ ನೋಟಿಸ್ ಜಾರಿ ಮಾಡಿದ ಕೋರ್ಟ್ ಅರ್ಜಿ ವಿಚಾರಣೆಯನ್ನು 2 ವಾರ ಮುಂದೂಡಿಕೆ ಮಾಡಿತು.



ಉದಯವಾಹಿನಿ ಚಿತ್ರ

**ಅರ್ಜಿಯಲ್ಲಿ ಏನಿತ್ತು?**

**ದರ ನಿಗದಿ ಸಮಿತಿಯ ತಜ್ಞರು ವಿದೇಶಿ ಪ್ರವಾಸವನ್ನು ಕೈಗೊಂಡು ಅಲ್ಲಿನ ಮೆಟ್ರೋ ದರವನ್ನು ಪರಿಶೀಲಿಸಿದ ಬಳಿಕ ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿದ್ದರು. ಈ ವರದಿಯ ನಂತರ ಬಿಎಂಆರ್‌ಸಿಎಲ್ 130% ರವರೆಗೆ ಮೆಟ್ರೋ ರೈಲು ಟಿಕೆಟ್ ದರವನ್ನು ಏರಿಕೆ ಮಾಡಿದೆ.**

## ಕಂಪನಿ, ಕಾರ್ಖಾನೆಗಳಲ್ಲಿ ನವ ಜಾತಿವಾದ: ಕ್ಲಿಫ್ಟನ್ ಡಿ ರೊಜರಿಯೊ

• ಉದಯವಾಹಿನಿ, ಬೆಂಗಳೂರು

ಖಾಸಗಿ ಕಂಪನಿಗಳಲ್ಲಿ ಕಾರ್ಖಾನೆಗಳಲ್ಲಿ ಮಾತ್ರವಲ್ಲ ಸರ್ಕಾರಿ ಸ್ವಾಯತ್ತ ಸಂಸ್ಥೆಗಳಲ್ಲಿಯೂ ನವಜಾತಿವಾದ ಅಸ್ತಿತ್ವದಲ್ಲಿದೆ. ಹೋರಾಟದ ಮೂಲಕ ಈ ವ್ಯವಸ್ಥೆಯನ್ನು ಹಿಮ್ಮೆಟ್ಟಿಸಬೇಕು ಎಂದು ಎಐಸಿಸಿಟಿಯು ರಾಷ್ಟ್ರೀಯ ಉಪಾಧ್ಯಕ್ಷ ಕ್ಲಿಫ್ಟನ್ ಡಿ ರೊಜರಿಯೊ ಆಗ್ರಹಿಸಿದರು. ನಾಲ್ಕು ಕಾರ್ಮಿಕ ಕೋಡ್‌ಗಳ ವಿರುದ್ಧ ಮತ್ತು ಗುತ್ತಿಗೆ ಕಾರ್ಮಿಕ ವ್ಯವಸ್ಥೆ ರದ್ದತಿಗಾಗಿ ಸರ್ಕಾರಿ ಮತ್ತು ಸಾರ್ವಜನಿಕ ವಲಯದ ಉದ್ಯಮಗಳ ಕಾಯಮೇತರ ಕಾರ್ಮಿಕರ ಸಂಯುಕ್ತ ವೇದಿಕೆಯು ಭಾನುವಾರ ನಗರದಲ್ಲಿ ಹಮ್ಮಿಕೊಂಡಿದ್ದ ಸಮಾವೇಶದಲ್ಲಿ ಅವರು ಮಾತನಾಡಿದರು.

ಆಯಾ ಸಂಸ್ಥೆಗಳ ಬಸ್‌ಗಳಲ್ಲಿ ಕಾರ್ಮಿಕರನ್ನು ಒಯ್ಯುವಾಗ ಗುತ್ತಿಗೆ ಆಧಾರದಲ್ಲಿ ಕೆಲಸ ಮಾಡುವವರು ನಿಂತುಕೊಳ್ಳಬೇಕು. ಕುಳಿತಿದ್ದರೂ ಕಾಯಂ ನೌಕರರು ಬಂದಾಗ ಬಿಟ್ಟುಕೊಡಬೇಕು. ಕ್ಯಾಂಟೀನ್‌ಗಳಲ್ಲಿಯೂ ಕಾಯಂ ನೌಕರರಿಗೆ ಮೊದಲು ತಿಂಡಿ. ಎಚ್‌ಎಎಲ್ ಸಹಿತ ಕೆಲವು ಸಂಸ್ಥೆಗಳಲ್ಲಿ ಕಾರ್ಮಿಕರು ಇದಕ್ಕೆಲ್ಲ ಬಗ್ಗದೇ ಪ್ರತಿಭಟನೆ ನಡೆಸಿ ಬಸ್‌ಗಳಲ್ಲಿ, ಕ್ಯಾಂಟೀನ್‌ನಲ್ಲಿ ಇಂಥ ಭೇದ ಮಾಡದಂತೆ ನೋಡಿಕೊಂಡಿದ್ದಾರೆ. ಇನ್ನು ಹಲವು ಕಂಪನಿಗಳಲ್ಲಿ ಈ ಪರಿಸ್ಥಿತಿ ಇದೆ. ಜಾತಿ ಪದ್ಧತಿಗಳಲ್ಲಿ ಗೌರವ, ಅವಕಾಶಗಳಲ್ಲಿ ಯಾವ ರೀತಿಯ ತಾರತಮ್ಯ ಇದೆಯೋ ಅದರ ಇನ್ನೊಂದು ರೂಪ ಇದಾಗಿದೆ ಎಂದು ವಿವರಿಸಿದರು. ಖಾಸಗಿ ಸಂಸ್ಥೆಗಳಲ್ಲಿ ಮೊದಲು ಗುತ್ತಿಗೆ ಪದ್ಧತಿ ಜಾರಿಗೆ ಬಂತು. ಅದನ್ನೇ ಕ್ರಮೇಣ ಸರ್ಕಾರಿ ಸಂಸ್ಥೆಗಳಲ್ಲಿಯೂ ಅಳವಡಿಸಿಕೊಳ್ಳಲಾಯಿತು.

ಕಾಯಂ ಕೆಲಸಗಳಲ್ಲಿ ಗುತ್ತಿಗೆ ಪದ್ಧತಿ ಇರಬಾರದು ಎಂಬ ನಿಯಮ ಇದೆ. ಇದರ ಆಧಾರದಲ್ಲಿ ಕಾಯಂ ಮಾಡಿ ಎಂದು ಕಾರ್ಮಿಕರು ಹಕ್ಕು ಕೇಳುತ್ತಿದ್ದಾರೆ. ಕೇಂದ್ರ ಸರ್ಕಾರ ರೂಪಿಸಿರುವ ಕಾರ್ಮಿಕರ ನಾಲ್ಕು ಕೋಡ್‌ಗಳು ಜಾರಿಗೆ ಬಂದರೆ ಕಾಯಂ ಮಾಡಿ ಎಂದು ಕೇಳುವ ಹಕ್ಕು ಕೂಡ ಇಲ್ಲದಂತಾಗುತ್ತದೆ ಎಂದು ಎಚ್ಚರಿಸಿದರು. ವಿಜಯಕುಮಾರ್, ಮಣಿಯಮ್ಮ, ಗುರುವಮ್ಮ, ಮೈತ್ರೇಯಿ, ವಿರೂಪಾಕ್ಷ, ಕೃಷ್ಣನ್, ಹೇಮಂತ್ ಸೇರಿದಂತೆ ವಿವಿಧ ಕಾರ್ಮಿಕ ಸಂಘಟನೆಗಳ ಮುಖಂಡರು ಉಪಸ್ಥಿತರಿದ್ದರು.



ಉದಯವಾಹಿನಿ ಚಿತ್ರ

**ಹಾಲಿ ಕಾರ್ಮಿಕ ಕಾಯ್ದೆಗಳನ್ನು ತೆಗೆದು ಜಾರಿ ಮಾಡಲು ಹೊರಟಿರುವ ನಾಲ್ಕು ಕೋಡ್‌ಗಳನ್ನು ಹಿಂಪಡೆಯಬೇಕು. ಗುತ್ತಿಗೆ, ಹೊರಗುತ್ತಿಗೆ, ಅಲ್ಪ ಅವಧಿಯ ಕೆಲಸ ಪದ್ಧತಿಗಳನ್ನು ರದ್ದುಗೊಳಿಸಬೇಕು. ಇಎಸ್‌ಐ ಪರಿಮಿತಿಯನ್ನು ರದ್ದು ಮಾಡಬೇಕು. ಕನಿಷ್ಠ ವೇತನ ರೂ.42,000 ನೀಡಬೇಕು. ಸಂಘಟನೆ ಮಾಡುವ ಹಕ್ಕು, ಹೋರಾಟದ ಹಕ್ಕು, ಮುಷ್ಕರದ ಹಕ್ಕುಗಳನ್ನು ಎತ್ತಿ ಹಿಡಿಯಬೇಕು ಎಂಬುದೂ ಸೇರಿದಂತೆ ಹಲವು ಬೇಡಿಕೆಗಳನ್ನು ಇಟ್ಟುಕೊಂಡು ದೇಶದಾದ್ಯಂತ ಜುಲೈ 9 ರಂದು ಕಾರ್ಮಿಕ ಸಂಘಟನೆಗಳು ಪ್ರತಿಭಟನೆ ನಡೆಸಲಿವೆ ಎಂದರು.**

# ಪ್ರೆಸ್ಟೀಜ್ ಗ್ರೂಪ್ ನಿರ್ಮಿಸಲಿದೆ ಒಂದುವರೇ ಕಿ.ಮೀ ಉದ್ದದ ಮೇಲ್ಸೇತುವೆ

### ಸುಗಮ ಸಂಪರ್ಕ ಕಲ್ಪಿಸುವ ಜೊತೆಗೆ, ಆ ಭಾಗದಲ್ಲಿನ ಸಂಚಾರ ದಟ್ಟಣೆ ಗಣನೀಯವಾಗಿ ಕಡಿಮೆ ಮಾಡುವುದು ಯೋಜನೆ

• ಉದಯವಾಹಿನಿ, ಬೆಂಗಳೂರು

ಅತಿ ಹೆಚ್ಚು ಸಂಚಾರ ದಟ್ಟಣೆಯಿಂದ ಕೂಡಿರುವ ಪ್ರದೇಶಗಳಲ್ಲಿ ಒಂದಾದ ಸರ್ಜಾಪುರ ರಸ್ತೆ ಮತ್ತು ಹೊರ ವರ್ತುಲ ರಸ್ತೆಯಲ್ಲಿ ವಾಹನ ಸವಾರರಿಗೆ ಅನುಕೂಲ ಕಲ್ಪಿಸಲು, ರಿಯಲ್ ಎಸ್ಟೇಟ್ ಸಂಸ್ಥೆ 'ಪ್ರೆಸ್ಟೀಜ್ ಗ್ರೂಪ್' ಮಹತ್ವದ ಯೋಜನೆಗೆ ಮುಂದಾಗಿದೆ. ತನ್ನ ಸ್ವಂತ ಖರ್ಚಿನಲ್ಲಿ 1.5 ಕಿಲೋಮೀಟರ್ ಉದ್ದದ ಮೇಲ್ಸೇತುವೆ ನಿರ್ಮಿಸಲು ಸಂಸ್ಥೆ ಮುಂದಾಗಿದೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಕೂಡಾ ಗ್ರೀನ್ ಸಿಗ್ನಲ್ ನೀಡಿದೆ.

ಪ್ರೆಸ್ಟೀಜ್ ಗ್ರೂಪ್ ಬೆಳ್ಳಂದೂರಿನಲ್ಲಿ ಟೆಕ್ ಪಾರ್ಕ್ ನಿರ್ಮಾಣ ಮಾಡಲಿದೆ. ಇದಕ್ಕೆ ಸುಗಮ ಸಂಪರ್ಕ ಕಲ್ಪಿಸುವ ಜೊತೆಗೆ ಆ ಭಾಗದಲ್ಲಿನ ಸಂಚಾರ ದಟ್ಟಣೆಯನ್ನು ಗಣನೀಯವಾಗಿ ಕಡಿಮೆ ಮಾಡುವುದು ಈ ಯೋಜನೆಯ ಪ್ರಮುಖ ಉದ್ದೇಶವಾಗಿದೆ.

ತಮ್ಮ ಕ್ಯಾಂಪಸ್‌ಗಳಿಗೆ ಪ್ರವೇಶವನ್ನು ಒದಗಿಸಲು ಈ ಯೋಜನೆಯನ್ನು ರೂಪಿಸಲಾಗಿದೆ. ಈ ಮೇಲ್ಸೇತುವೆ ಸಾರ್ವಜನಿಕ ರಸ್ತೆಯುದ್ದಕ್ಕೂ ಮತ್ತು ರಾಜಕಾಲುವೆ ಪಕ್ಕದಲ್ಲಿ ಬರಲಿದೆ. ಹೀಗಾಗಿ ಇದಕ್ಕೆ ಬದಲಾಗಿ, ಬಿಬಿಎಂಪಿ ವ್ಯಾಪ್ತಿಗೆ ಸೇರಿದ ಕರಿಯಮ್ಮನ ಅಗ್ರಹಾರ ರಸ್ತೆಯನ್ನು ವಿಸ್ತರಿಸಲು ಮತ್ತು ಮೇಲ್ಸೇತುವೆಯ ಸಂಪೂರ್ಣ ವೆಚ್ಚವನ್ನು ಭರಿಸಲು ಮುಂದಾಗಿದ್ದಾರೆ.



ಉದಯವಾಹಿನಿ ಚಿತ್ರ

**ಪ್ರೆಸ್ಟೀಜ್ ಗ್ರೂಪ್' ಮಹತ್ವ**

ಈ ಹಿಂದೆ, ಮಾನ್ಯತಾ ಎಂಬಸಿ ಬಿಸಿನೆಸ್ ಪಾರ್ಕ್ ರಿಂಗ್ ರಸ್ತೆಯ ಮೇಲೆ, ಎಲಿವೇಟೆಡ್ ರಸ್ತೆಗೆ ನೇರ ಪ್ರವೇಶವನ್ನು ಒದಗಿಸಲು ಮೇಲ್ಸೇತುವೆಯನ್ನು ನಿರ್ಮಿಸಿತ್ತು. ಹಾಗೆಯೇ, ಲುಲು ಮಾಲ್ ಸಾರ್ವಜನಿಕ ರಸ್ತೆಯ ಒಂದು ಭಾಗವನ್ನು ಬಳಸಿ ಅಂಡರ್‌ಪಾಸ್ ನಿರ್ಮಿಸಿತ್ತು. ಅಂತೆಯೇ, ಬಾಗಮನೆ ಗ್ರೂಪ್ ದೊಡ್ಡನೆಕ್ಕುಂದಿಯಲ್ಲಿರುವ ತನ್ನ ಕ್ಯಾಂಪಸ್‌ಗೆ 600 ಮೀಟರ್ ಉದ್ದದ ಮೇಲ್ಸೇತುವೆಯನ್ನು ನಿರ್ಮಿಸಲು ಪ್ರಸ್ತಾಪಿಸಿದೆ ಎಂದು ತಿಳಿದುಬಂದಿದೆ. ಪ್ರೆಸ್ಟೀಜ್ ಗ್ರೂಪ್ ತನ್ನ ಖಾಸಗಿ ಕ್ಯಾಂಪಸ್‌ಗೆ ಮೀಸಲಾದ ಮೇಲ್ಸೇತುವೆಯನ್ನು ನಿರ್ಮಿಸಲು ಆಗಸ್ಟ್ 2022ರಲ್ಲಿ ಮೊದಲ ಬಾರಿಗೆ ಬಿಬಿಎಂಪಿಯನ್ನು ಅನುಮತಿಗಾಗಿ ಮನವಿ ಸಲ್ಲಿಕೆ ಮಾಡಿತ್ತು. ನಂತರ ನವೆಂಬರ್ 2023ರಲ್ಲಿ ಮತ್ತೆ ಪ್ರಸ್ತಾಪ ಸಲ್ಲಿಸಿತ್ತು. ಪ್ರಸ್ತಾವನೆಯಲ್ಲಿ, ಎರಡು ಮುಖ್ಯ ರಸ್ತೆಗಳಲ್ಲಿ (ಓಲ್ಡ್ ಏರ್‌ಪೋರ್ಟ್ ರಸ್ತೆ ಮತ್ತು ಕರಿಯಮ್ಮನ ಅಗ್ರಹಾರ ರಸ್ತೆ) ಟ್ರಾಫಿಕ್ ಜಾಮ್ ಬಗ್ಗೆ ಕಂಪೆನಿ ಕಳವಳ ವ್ಯಕ್ತಪಡಿಸಿತ್ತು. ಈ ರಸ್ತೆಗಳು ಪ್ರೆಸ್ಟೀಜ್ ಬೀಟಾ ಟೆಕ್ ಪಾರ್ಕ್‌ಗೆ ಪ್ರಸ್ತುತ ಪ್ರವೇಶವನ್ನು ಒದಗಿಸುತ್ತವೆ. ಇಲ್ಲಿ 5,000 ಕ್ಕೂ ಹೆಚ್ಚು ಉದ್ಯೋಗಿಗಳು ಕೆಲಸ ಮಾಡುವ ನಿರೀಕ್ಷೆಯಿದೆ. ಬಿಬಿಎಂಪಿ ಕಡೆಗೂ ಏಪ್ರಿಲ್‌ನಲ್ಲಿ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಅನುಮೋದನೆ ಪಡೆದು ಸಮ್ಮತಿ ನೀಡಿದೆ ಎಂದು ತಿಳಿದುಬಂದಿದೆ.

ರಸ್ತೆ ಅಗಲೀಕರಣಕ್ಕೆ ಬಿಟ್ಟುಕೊಟ್ಟ ಭೂಮಿಗೆ ಪರಿಹಾರವಾಗಿ ಡೆವಲಪರ್ ಟ್ರಾನ್ಸ್‌ಫರೇಬಲ್ ಡೆವಲಪ್‌ಮೆಂಟ್ ರೈಟ್ಸ್ ಪ್ರಮಾಣ ಪತ್ರಗಳನ್ನು ಪಡೆಯಲು ಬಿಬಿಎಂಪಿ ಅನುಮತಿ ನೀಡಿದೆ. ಆದರೆ ಇದು ಕಾನೂನಿನ ಚೌಕಟ್ಟಿನೊಳಗೆ ಇರಬೇಕು ಎಂದು ಹೇಳಿದೆ.

ಬೆಳ್ಳಂದೂರಿನಲ್ಲಿ 70 ಎಕರೆ ಜಾಗದಲ್ಲಿ ತಲೆ ಎತ್ತಲಿರುವ ಟೆಕ್ ಪಾರ್ಕ್‌ಗೆ ಕಟ್ಟಡ ನಿರ್ಮಾಣ ಯೋಜನೆಗೆ ಬಿಬಿಎಂಪಿ ಅನುಮತಿ ನೀಡಿದ ಒಂದು ವರ್ಷದ ನಂತರ ಮೇಲ್ಸೇತುವೆ ನಿರ್ಮಾಣಕ್ಕೆ ಅನುಮತಿ ಸಿಕ್ಕಿರುವುದು ಗಮನಾರ್ಹ. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಸೆಪ್ಟೆಂಬರ್ 2023 ರಲ್ಲಿಯೇ ಅಭಿವೃದ್ಧಿ ಯೋಜನೆಗೆ ಅನುಮೋದನೆ ನೀಡಿತ್ತು.

> **ಹೊಸ ರಸ್ತೆಯು ಸಕ್ರಾ ಆಸ್ಪತ್ರೆ ರಸ್ತೆಗೆ 2.5 ಕಿ.ಮೀ ಪ್ರಯಾಣದ ದೂರವನ್ನು ಕಡಿಮೆ ಮಾಡುತ್ತದೆ , ನಗರದ ಮೂಲಸೌಕರ್ಯವನ್ನು ಹೆಚ್ಚಿಸಲು ಇಂತಹ ಸಾರ್ವಜನಿಕ-ಖಾಸಗಿ ಸಹಭಾಗಿತ್ವವನ್ನು ಬಿಬಿಎಂಪಿ ಪ್ರೋತ್ಸಾಹಿಸುತ್ತದೆ ಎಂದು ಅವರು ತಿಳಿಸಿದರು.**

> **ಸಾಮಾನ್ಯವಾಗಿ, ದೊಡ್ಡ ಟೆಕ್ ಪಾರ್ಕ್‌ಗಳಿಗೆ ಅನುಮೋದನೆ ನೀಡುವ ಮೊದಲು ಡೆವಲಪರ್‌ಗಳು ಸೈಟ್‌ಗೆ ಸಾಕಷ್ಟು ಪ್ರವೇಶ ಮಾರ್ಗವನ್ನು ತೋರಿಸಬೇಕು. ಬೆಂಗಳೂರು ಸ್ಮಾರ್ಟ್ ಇನ್‌ಫ್ರಾಸ್ಟ್ರಕ್ಚರ್ ಲಿಮಿಟೆಡ್‌ನ ತಾಂತ್ರಿಕ ನಿರ್ದೇಶಕ ಬಿ.ಎಸ್. ಪ್ರಹ್ಲಾದ್ ರಸ್ತೆಗೆ ನೀಡಿರುವ ಅನುಮೋದನೆಯನ್ನು ಖಚಿತಪಡಿಸಿದ್ದಾರೆ. ಆದರೆ, ಡೆವಲಪರ್ 40 ಅಡಿ ಅಗಲದ ರಸ್ತೆಯ ನಿರ್ಮಾಣಕ್ಕೆ ಹಣ ನೀಡಬೇಕು ಎಂದು ಬಿಬಿಎಂಪಿ ಷರತ್ತು ವಿಧಿಸಿದೆ ಎಂದು ಅವರು ಹೇಳಿದರು.**

# ಮೈಸೂರು ಜಿಲ್ಲೆಯ ಸ್ಥಳೀಯ ಸಂಸ್ಥೆಗಳಲ್ಲಿ 1500 ಹುದ್ದೆ ಖಾಲಿ

## ಕೆಲಸ ಕಾರ್ಯಕ್ಕೆ ಸಾರ್ವಜನಿಕರ ಪರದಾಟ, ಆಡಳಿತ ನಿರ್ವಹಣೆಗೆ ತೊಡಕು

• **ಉದಯವಾಹಿನಿ, ಮೈಸೂರು**

ಮುಖ್ಯಮಂತ್ರಿ ತವರು ಜಿಲ್ಲೆಯ ಸ್ಥಳೀಯ ಸಂಸ್ಥೆಗಳಲ್ಲಿ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಪ್ರಭಾರದ ಭಾರ ಹೆಚ್ಚಾಗಿದೆ. ಒಬ್ಬರೇ ಹಲವು ಹುದ್ದೆಯನ್ನು ನಿಭಾಯಿಸುತ್ತಿದ್ದು, ಸಕಾಲದಲ್ಲಿ ಸಾರ್ವಜನಿಕ ಕೆಲಸ ಕಾರ್ಯಗಳು ನಡೆಯದೇ ತೊಡಕಾಗಿದೆ. ಅಧಿಕಾರಿಗಳು ಮತ್ತು ಸಿಬ್ಬಂದಿ ಕೊರತೆಯಿಂದ ಮೈಸೂರು ಮಹಾನಗರ ಪಾಲಿಕೆ ಸೇರಿದಂತೆ ಸ್ಥಳೀಯ ಸಂಸ್ಥೆಗಳ ಆಡಳಿತ ವ್ಯವಸ್ಥೆ ಕುಸಿದಿದೆ. ತಮ್ಮ ಕೆಲಸ, ಕಾರ್ಯಕ್ಕಾಗಿ ಬರುವ ಸಾರ್ವಜನಿಕರು ದಿನಗಟ್ಟಲೇ ಅಲೆಯಬೇಕಿದೆ. ಸಾಹೇಬರು ಇಲ್ಲ, ನಾಳೆ ಬನ್ನಿ, ಬೇರೆ ಕೆಲಸದಲ್ಲಿದ್ದಾರೆ ಮತ್ತೆ ಬನ್ನಿ ಎನ್ನುವ ಮಾತುಗಳನ್ನು ಸ್ಥಳೀಯ ಸಂಸ್ಥೆಗಳ ಕಚೇರಿಗಳಲ್ಲಿಸಾರ್ವಜನಿಕರು ನಿತ್ಯ ಕೇಳುವಂತಾಗಿದೆ.

**1512 ಹುದ್ದೆಗಳು ಖಾಲಿ:** ಪಾಲಿಕೆ ಸೇರಿದಂತೆ ಜಿಲ್ಲೆಯ ಸ್ಥಳೀಯ ಸಂಸ್ಥೆಗಳಲ್ಲಿ 4,802 ಹುದ್ದೆಗಳಿದ್ದು, ಪ್ರಸ್ತುತ 3,294 ನೌಕರರು ಕಾರ್ಯ ನಿರ್ವಹಿಸುತ್ತಿದ್ದರೆ, ಬರೋಬ್ಬರಿ 1512 ಹುದ್ದೆಗಳು ಖಾಲಿ ಇವೆ. ಮೈಸೂರು ನಗರ ಪಾಲಿಕೆಯಲ್ಲಿಯೇ 700 ಕ್ಕೂ ಹೆಚ್ಚು ಹುದ್ದೆಗಳು ಖಾಲಿ ಇವೆ. ಇನ್ನೂ ಸ್ಥಳೀಯ ಸಂಸ್ಥೆಗಳ ಪರಿಸ್ಥಿತಿಯಂತೂ ಕೇಳುವಂತೆಯೇ ಇಲ್ಲ.

ನಗರ ಮತ್ತು ಪಟ್ಟಣ ಪ್ರದೇಶದ ಜನರಿಗೆ ಮೂಲ ಸೌಕರ್ಯ ಕಲ್ಪಿಸುವಲ್ಲಿ ನಾನಾ ಸೇವೆಗಳನ್ನು ಒದಗಿಸುವಲ್ಲಿ ಹಾಗೂ ಸ್ವಚ್ಛತೆ ಮೊದಲಾದವುಗಳ ನಿರ್ವಹಣೆಯಲ್ಲಿ ಸ್ಥಳೀಯ ಸಂಸ್ಥೆಗಳ ಪಾತ್ರ ಮಹತ್ವದ್ದಾಗಿದೆ.

ಈ ಮಧ್ಯೆ ಆಡಳಿತಾತ್ಮಕ ಕಾರಣಕ್ಕೆ ಗ್ರಾಮ ಪಂಚಾಯಿತಿಗಳನ್ನು ಪಟ್ಟಣ ಪಂಚಾಯಿತಿ, ಪಟ್ಟಣ ಪಂಚಾಯಿತಿಗಳನ್ನು ಪುರಸಭೆ, ಪುರಸಭೆಯನ್ನು ನಗರಸಭೆಯನ್ನಾಗಿ ಮತ್ತು ನಗರಸಭೆಯನ್ನು ಮಹಾನಗರ ಪಾಲಿಕೆಯನ್ನಾಗಿ ಮೇಲ್ದರ್ಜೆಗೇರಿಸಲಾಗುತ್ತಿದೆ. ಅದಕ್ಕೆ ತಕ್ಕಂತೆ ಅಕಾರಿಗಳು ಮತ್ತು ಸಿಬ್ಬಂದಿಯನ್ನು ನೇಮಕ ಮಾಡದೇ ಇರುವುದರಿಂದ ಜನಸ್ನೇಹಿ ಆಡಳಿತಕ್ಕೆ ತೊಡಕಾಗಿದೆ. ಸ್ಥಳೀಯ ಸಂಸ್ಥೆಗಳಲ್ಲಿ ಸಾಕಷ್ಟು ಹುದ್ದೆಗಳು ಖಾಲಿ ಇರುವ ಕಾರಣ ಸಾರ್ವಜನಿಕರ ಕೆಲಸ ಕಾರ್ಯಗಳು ತ್ವರಿತವಾಗಿ ನಡೆಯದೆ ಜನರು ದಿನಗಟ್ಟಲೇ ಕಾಯಬೇಕಿದೆ. ಈ ಬಗ್ಗೆ ಪ್ರಶ್ನಿಸಿದರೆ ಅಧಿಕಾರಿಗಳಿಂದ ಬರುವುದು 'ಸಿಬ್ಬಂದಿ ಕೊರತೆ' ಎಂಬ ಒಂದೇ ಮಾತು. ಇದನ್ನು ಕೇಳಿ ಸಾಕಾಗಿದೆ ಎನ್ನುತ್ತಾರೆ ಮೈಸೂರಿನ ವಿಜಯ ನಗರ ನಿವಾಸಿ ಬಸವರಾಜು.



ಉದಯವಾಹಿನಿ ಚಿತ್ರ

**ಪಾಲಿಕೆ ಸೇರಿದಂತೆ ಸ್ಥಳೀಯ ಸಂಸ್ಥೆಗಳಿಗೆ ಯಾವುದೇ ಕೆಲಸಕ್ಕೆ ತೆರಳಿದರೆ ಸ್ಟಾಫ್ ಇಲ್ಲ, ನಾಳೆ ಬನ್ನಿ ಎನ್ನುತ್ತಾರೆ. ನಮ್ಮ ತೆರಿಗೆ ಹಣ ಪಡೆದು ನಮಗೆ ಸರಿಯಾಗಿ ಸರಕಾರಿ ಸೇವೆಯನ್ನು ಕೊಡಬೇಕಾಗಿರುವುದು ಸರಕಾರದ ಆದ್ಯ ಕರ್ತವ್ಯ. ಈ ನಿಟ್ಟಿನಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಮೂಲಕ ಆಡಳಿತ ವ್ಯವಸ್ಥೆ ಸುಗಮವಾಗಿ ಸಾಗಲು ವ್ಯವಸ್ಥೆ ಮಾಡಬೇಕಿದೆ.**

**-ಬಿ.ಬಿ.ರಾಜಶೇಖರ್, ಅಧ್ಯಕ್ಷರು, ಕನ್ನಡಾಂಬೆ ರಕ್ಷಣಾ ವೇದಿಕೆ.**

**ಮೈಸೂರು ನಗರ ಪಾಲಿಕೆ ಸೇರಿದಂತೆ ಸ್ಥಳೀಯ ಸಂಸ್ಥೆಗಳಲ್ಲಿ ಅಗತ್ಯಕ್ಕೆ ತಕ್ಕಂತೆ ಸಿಬ್ಬಂದಿ ನೇಮಕವಾಗದೇ ಇರುವುದರಿಂದ ಸಾರ್ವಜನಿಕರಿಗೆ ಸಮಸ್ಯೆಯಾಗಿದೆ. ಸಕಾಲದಲ್ಲಿ ಸಾರ್ವಜನಿಕ ಸೇವೆಗಳು ಸಿಗದೆ ಜನರು ತೊಂದರೆ ಅನುಭವಿಸುವಂತಾಗಿದೆ. ಸರಕಾರ ಕೂಡಲೇ ಈ ಬಗ್ಗೆ ಗಮನ ಹರಿಸಬೇಕಿದೆ.**

**-ಆರ್.ಸೋಮಸುಂದರ್, ಪಾಲಿಕೆ ಮಾಜಿ ಸದಸ್ಯರು.**

### ಸ್ಥಳೀಯ ಸಂಸ್ಥೆ ಹೆಸರು: ಹುದ್ದೆಗಳ ಸಂಖ್ಯೆ ಖಾಲಿ


- ಮೈಸೂರು ನಗರ ಪಾಲಿಕೆ 3394 742
- ಹೂಟಗಳ್ಳಿ ನಗರ ಸಭೆ 236 165
- ಬೋಗಾದಿ ಪಂ.ಪಂಚಾಯಿತಿ 60, 17
- ಶ್ರೀರಾಂಪುರ ಪಂ.ಪಂಚಾಯಿತಿ 71 19
- ರಮ್ಮನಹಳ್ಳಿ 60 15
- ಕಡಕೊಳ 51 14
- ನಂಜನಗೂಡು 236 163
- ಹುಣಸೂರು 236 170
- ಕೆ.ಆರ್.ನಗರ 114 49

# ಮಾತಾಡಿ ಸಮಯ ವ್ಯರ್ಥ ಮಾಡಲ್ಲ: ಎಚ್.ಸಿ.ಬಾಲಕೃಷ್ಣ

• **ಉದಯವಾಹಿನಿ, ಮಾಗಡಿ**

ವಸೂಲಿ ಗಿರಾಕಿಗಳ ಬಗ್ಗೆ ಮಾತನಾಡಿ ಸಮಯ ವ್ಯರ್ಥ ಮಾಡಿಕೊಳ್ಳುವುದಿಲ್ಲ ಎಂದು ಕೆಂಪೇಗೌಡ ಅಭಿವೃದ್ಧಿ ಸಮಿತಿ ರಾಜ್ಯಾಧ್ಯಕ್ಷ ಎಚ್.ಎಂ. ಕೃಷ್ಣಮೂರ್ತಿ ವಿರುದ್ಧ ಶಾಸಕ ಎಚ್.ಸಿ.ಬಾಲಕೃಷ್ಣ ವಾಗ್ದಾಳಿ ನಡೆಸಿದರು.ಮಾಗಡಿ ಕೋಟೆ ಅಭಿವೃದ್ಧಿಗೆ ಸರ್ಕಾರ ಬಿಡುಗಡೆ ಮಾಡಿದ ರೂ.103 ಕೋಟಿ ಅನುದಾನದಲ್ಲಿ ಶಾಸಕ ಎಚ್.ಸಿ. ಬಾಲಕೃಷ್ಣ ಪಾತ್ರವೇನೂ ಇಲ್ಲ ಎಂಬ ಕೆಂಪೇಗೌಡ ಅಭಿವೃದ್ಧಿ ಸಮಿತಿ ರಾಜ್ಯ ಘಟಕದ ಅಧ್ಯಕ್ಷ ಎಚ್.ಎಂ.ಕೃಷ್ಣಮೂರ್ತಿ ಟೀಕೆಗೆ ಅವರು ಈ ರೀತಿ ಪ್ರತಿಕ್ರಿಯಿಸಿದರು.

ಎಚ್.ಎಂ.ಕೃಷ್ಣಮೂರ್ತಿ ವಸೂಲಿ ಗಿರಾಕಿ ಎಂಬುದು ಗೊತ್ತಾಗಿದೆ. ಕಳೆದ ಬಾರಿ ಕೆಂಪೇಗೌಡ ಜಯಂತಿಗೆ ಹಣ ನೀಡುವಂತೆ ಕೇಳಿಕೊಂಡಿದ್ದರು. ರೂ.5 ಲಕ್ಷ ಖರ್ಚು ಮಾಡಿ ರೂ.25 ಲಕ್ಷವನ್ನು ಬಿಬಿಎಂಪಿಯಲ್ಲಿ ವಸೂಲಿ ಮಾಡಿರುವುದು ಗೊತ್ತಾಗಿದೆ' ಎಂದರು.



ಉದಯವಾಹಿನಿ ಚಿತ್ರ

ಕೆಂಪೇಗೌಡ ಪ್ರತಿಮೆ ಸ್ಥಳಾಂತರದ ಬಗ್ಗೆ ವಿರೋಧ ವ್ಯಕ್ತಪಡಿಸಿದರೆ ಕಾನೂನು ರೀತಿ ಕ್ರಮ ಕೈಗೊಳ್ಳುತ್ತೇವೆ. ಎಕ್ಸ್‌ಪ್ರೆಸ್ ಕೆನಾಲ್ ಕಾಮಗಾರಿ ಸ್ವಲ್ಪ ವಿಳಂಬವಾಗಬಹುದೇ ಹೊರತು, ಯಾವುದೇ ಕಾರಣಕ್ಕೂ ನಿಲ್ಲುವುದಿಲ್ಲ ಎಂದರು.

ಪೂಜಾರಿ ಪಾಳ್ಯ ಕೃಷ್ಣಮೂರ್ತಿ, ನರಸಿಂಹಮೂರ್ತಿ, ಬ್ಯಾಲಕೆರೆ ಚಿಕ್ಕರಾಜು, ಗಂಗಹನುಮಯ್ಯ, ಚಿಲಿಪಿಲಿ ರಾಜು ಹಾಜರಿದ್ದರು.

**'ನಾನು ಚುನಾವಣಾ ಪ್ರಚಾರಕ್ಕೆ ಬನ್ನಿ ಎಂದು ಕರೆದಿರಲಿಲ್ಲ. ಅವರೇ ಬಂದಿದ್ದರು. ನನ್ನ ಬಳಿ ಬರುವ ಹಿಂದಿನ ರಾತ್ರಿ ಮಾಜಿ ಶಾಸಕ ಎ.ಮಂಜುನಾಥ್ ಅವರಿಂದ ಹಣ ಪಡೆದು ಬಂದಿದ್ದರು' ಎಂದು ಆರೋಪ ಮಾಡಿದರು. ಎಚ್.ಎಂ. ಕೃಷ್ಣಮೂರ್ತಿ ಅವರು ಹೇಳಿದಂತೆ ಮಾಗಡಿ ಕೋಟೆ ಅಭಿವೃದ್ಧಿ ಮಾಡಲು ಸಾಧ್ಯವೇ? ಕಂದಕದ ನಾಲ್ಕು ಭಾಗದಲ್ಲಿ ತೆರವು ಮಾಡಲು ಸಾಧ್ಯವಾಗುತ್ತಾ? ರಸ್ತೆ ನಿರ್ಮಾಣ ಮಾಡಲಾಗಿದೆ ಎಂದರು.**

# ಬಸ್ ತಂಗುದಾಣ ಭಾರೀ ಅಧ್ವಾನ

• **ಉದಯವಾಹಿನಿ, ಗೌರಿಬಿದನೂರು**

ನಗರದಿಂದ ಬೆಂಗಳೂರಿಗೆ ಹಾದು ಹೋಗುವ ರಾಜ್ಯ ಹೆದ್ದಾರಿಯಲ್ಲಿ ಪ್ರಯಾಣಿಕರಿಗಾಗಿ ನಿರ್ಮಿಸಿರುವ ತಂಗುದಾಣಗಳು ನಿರ್ಲಕ್ಷ್ಯದಿಂದ ಅವಸಾನದತ್ತ ಸಾಗಿವೆ. ಸಾರಿಗೆ ಬಸ್‌ಗಳಲ್ಲಿ ಗ್ರಾಮಗಳಿಂದ ಪ್ರಯಾಣಿಸುವ ಪ್ರಯಾಣಿಕರಿಗೆ ಬಿಸಿಲು, ಮಳೆಗಾಲದಲ್ಲಿ ರಕ್ಷಣೆ, ವಿಶ್ರಾಂತಿ ಪಡೆಯಲು ಆಶ್ರಯವಾಗಬೇಕಿದ್ದ ತಂಗುದಾಣಗಳು ನಿರ್ವಹಣೆ ಕೊರತೆಯಿಂದ ಪ್ರಯಾಣಿಕರ ಪ್ರಯೋಜನಕ್ಕೆ ಬಾರದೆ ಪಾಳು ಬಿದ್ದಿವೆ.

ತಂಗುದಾಣಗಳಲ್ಲಿ ಗಿಡಗಂಟಿಗಳು ಬೆಳೆದಿವೆ. ತ್ಯಾಜ್ಯ ತುಂಬಿ ವರ್ಷಗಳೇ ಕಳೆದಿದೆ. ಕುಳಿತುಕೊಳ್ಳುವ ಆಸನಗಳು ತುಕ್ಕು ಹಿಡಿಯುತ್ತಿವೆ. ಕೆಲವೆಡೆ ಇದ್ದೂ ಇಲ್ಲದಂತಾಗಿವೆ. ಆದರೂ ಸಂಬಂಧಪಟ್ಟವರು ಸೂಕ್ತ ನಿರ್ವಹಣೆ ಮಾಡಿಲ್ಲ. ಇದರಿಂದ ತಂಗುದಾಣಗಳು ಸಂಪೂರ್ಣ ಶಿಥಿಲವಾಗಿ, ಪ್ರಯಾಣಿಕರು ಕೂರಲು ಆಸನಗಳಿಲ್ಲದ ಹಾಗೂ ದುರ್ನಾತಕ್ಕೆ ನಿಲ್ಲಲು ಸಹ ಆಗದ ಸ್ಥಿತಿ ಇದೆ.

ತಾಲ್ಲೂಕಿನ ಗಡಿಭಾಗವಾದ ತಿಪ್ಪಗಾನಹಳ್ಳಿಯಿಂದ ಆಂಧ್ರದಗಡಿ ಪ್ರದೇಶ ಕುಡುಮಲಕುಂಟೆಯವರೆಗೆ ರಾಜ್ಯ ಹೆದ್ದಾರಿ ಪ್ರಾಧಿಕಾರದಿಂದ ಸುಸಜ್ಜಿತ ರಸ್ತೆ ನಿರ್ಮಿಸಲಾಗಿದೆ. ಈ ರಸ್ತೆ ಮಾರ್ಗದಲ್ಲಿ ಬರುವ ಗ್ರಾಮಗಳ ಬಳಿ ಪ್ರಾಧಿಕಾರದಿಂದ ನಿರ್ಮಾಣವಾಗಿರುವ ತಂಗುದಾಣಗಳು ತೀರಾ ಅಧ್ವಾನ ಎನಿಸಿವೆ. ಕೆಲವು ಕಡೆಗಳಲ್ಲಿ ಬಳಕೆಗೆ ಬಾರದೆ ಅನೈತಿಕ ಚಟುವಟಿಕೆ ತಾಣವಾಗಿವೆ. ತಾಲ್ಲೂಕಿನ ಗಡಿಭಾಗದಿಂದ ಆರಂಭವಾಗಿರುವ ರಸ್ತೆಯು ಗೌರಿಬಿದನೂರು ನಗರದ ಮೂಲಕ ಹಾದು ಹೋಗಿ ನೆರೆಯ ಆಂಧ್ರಪ್ರದೇಶಕ್ಕೆ ಸಂಪರ್ಕ ಕಲ್ಪಿಸುತ್ತವೆ. ಈ ರಸ್ತೆ ಸುಮಾರು 32 ಕಿ.ಮೀ ಇದೆ. ರಸ್ತೆಯಲ್ಲಿ ತಿಪ್ಪಗಾನಹಳ್ಳಿ, ಬಂದಾರ್ಲಹಳ್ಳಿ, ಕಲ್ಲಿನಾಯಕನಹಳ್ಳಿ, ಬಸವಾಪುರ, ಅಲೀಪುರ ಕ್ರಾಸ್, ತೊಂಡೇಬಾವಿ ರೈಲ್ವೆ ನಿಲ್ದಾಣ, ಕಾಮಲಾಪುರ, ಪೋತೇನಹಳ್ಳಿ, ಹುಸೇನ್ ಪುರ ಗೇಟ್, ಅಲಕಾಪುರ ಗೇಟ್, ಮಿನಿವಿಧಾನಸೌಧ, ಸಕ್ಕರೆ ಕಾರ್ಖಾನೆ, ಎಪಿಎಂಸಿ ಮಾರುಕಟ್ಟೆ, ಗೌರಿಬಿದನೂರು ನಗರ, ಕಲ್ಲೂಡಿ, ಹಳೆ ಆರ್‌ಟಿಒ ಕಚೇರಿ, ಚಿಕ್ಕಕುರುಗೋಡು, ವಿದುರಾಶ್ವತ್ಥ, ದೊಡ್ಡಕುರುಗೋಡು ಮತ್ತು ಕುಡುಮಲಕುಂಟೆ ಸೇರಿದಂತೆ ಸುಮಾರು 20 ಹೆಚ್ಚು ಗ್ರಾಮಗಳಿಗೆ ಸಂಪರ್ಕ ಕಲ್ಪಿಸುವ ರಸ್ತೆ ಮಾರ್ಗಗಳಿವೆ.ಈ ಪ್ರದೇಶಗಳಲ್ಲಿ ಸ್ಥಳೀಯ ಪ್ರಯಾಣಿಕರ ಅನುಕೂಲಕ್ಕಾಗಿ ತಂಗುದಾಣಗಳನ್ನು ನಿರ್ಮಿಸಲಾಗಿದೆ. ಆದರೆ ಇವು ಇದ್ದೂ ಇಲ್ಲದಂತಿವೆ. ಪ್ರಯಾಣಿಕರ ಬಳಕೆಗೆ ಬಾರದಂತೆ ಇವೆ.

ಇದಿಷ್ಟೇ ಅಲ್ಲ ತಾಲ್ಲೂಕಿನ ಗ್ರಾಮೀಣ ಭಾಗಗಳಲ್ಲಿ ನಿರ್ಮಿಸಿರುವ ತಂಗುದಾಣಗಳು ಸಹ ಇದೇ ಸ್ಥಿತಿಯಲ್ಲಿದೆ. ಈ ತಂಗುದಾಣಗಳಲ್ಲಿ ಪೋಸ್ಟರ್ ಅಂಟಿಸುವುದು, ಮದ್ಯಪಾನ, ದೂಮಪಾನಕ್ಕೆ ಬಳಕೆ ಆಗುತ್ತಿವೆ.



ಉದಯವಾಹಿನಿ ಚಿತ್ರ

### ಪಾಳು ಬೀಳುತ್ತಿವೆ

**ಅಧಿಕಾರಿಗಳು ಬಹುತೇಕ ಕಡೆಗಳಲ್ಲಿ ಸರಿಯಾದ ಜಾಗದಲ್ಲಿ ತಂಗುದಾಣ ನಿರ್ಮಾಣ ಮಾಡಿಲ್ಲ. ಪ್ರಯಾಣಿಕರು ತಂಗುದಾಣದ ಕಡೆ ತಲೆ ಕೂಡ ಹಾಕುತ್ತಿಲ್ಲ. ಜನ ಓಡಾಡದ ಮತ್ತು ದೂರದಲ್ಲಿ ನಿರ್ಮಾಣ ಮಾಡಿರುವುದರಿಂದ ತಂಗುದಾಣಗಳು ಪಾಳು ಬೀಳುತ್ತಿವೆ**

**-ಚಿಕ್ಕಣ್ಣ, ತೊಂಡೇಬಾವಿ**

**ತೊಂಡೇಬಾವಿ ಬಳಿ ನಿರ್ಮಿಸಿರುವ ತಂಗುದಾಣ ಕೇಂದ್ರ, ಸ್ಥಾನದಿಂದ ದೂರದಲ್ಲಿದೆ. ಅಲ್ಲಿ ಯಾವುದೇ ಬಸ್ ನಿಲ್ಲಿಸುವುದಿಲ್ಲ. ಅಲ್ಲಿಗೆ ಯಾವುದೇ ಪ್ರಯಾಣಿಕರು ಹೋಗುವುದಿಲ್ಲ. ಈಗ ತ್ಯಾಜ್ಯ ಎಸೆಯುವ ಸ್ಥಳವಾಗಿದೆ.**

**-ಸಂದೀಪ್ ತೊಂಡೇಬಾವಿ**

# ಮಕ್ಕಳ ಮೊದಲ ಆಯ್ಕೆ ಈ ಸರ್ಕಾರಿ ಶಾಲೆ

• **ಉದಯವಾಹಿನಿ, ತಿಪಟೂರು**

ತಾಲ್ಲೂಕಿನ ನೊಣವಿನಕೆರೆ (ಮಕ್ಷಿಕಾಪುರಿ) ಪಿಎಂಶ್ರೀ- ಕೆಪಿಎಸ್ ಶಾಲೆಗೆ ಸುತ್ತಲಿನ 47 ಗ್ರಾಮಗಳಿಂದ ಸ್ವತಃ ಪೋಷಕರೇ 18 ವಾಹನಗಳ ವ್ಯವಸ್ಥೆ ಮಾಡಿಕೊಂಡು ಮಕ್ಕಳನ್ನು ಕಳುಹಿಸುತ್ತಿದ್ದಾರೆ. ವರ್ಷದಿಂದ ವರ್ಷಕ್ಕೆ ದಾಖಲಾತಿ ಹೆಚ್ಚಿಸಿಕೊಂಡು ಮಾದರಿ ಶಾಲೆ ಎನಿಸಿಕೊಂಡಿದೆ. ಈ ಶಾಲೆ 1895ರಲ್ಲಿ ಪ್ರಾಥಮಿಕ ಶಾಲೆಯಾಗಿ ಪ್ರಾರಂಭವಾಯಿತು. 1963ರಲ್ಲಿ ಸರ್ಕಾರಿ ಮಾದರಿ ಬಾಲಕರ ಪ್ರಾಥಮಿಕ ಶಾಲೆಯಾಗಿ, 1994ರಲ್ಲಿ ಸರ್ಕಾರಿ ಕನ್ನಡ ಮಾದರಿ ಪ್ರಾಥಮಿಕ ಶಾಲೆಯಾಯಿತು. 2018-19ರಲ್ಲಿ ಕೆಪಿಎಸ್ ಶಾಲೆಯಾಗಿ, ಈಗ 2022-23ರಲ್ಲಿ ಪಿಎಂಶ್ರೀ ಶಾಲೆಯಾಗಿ ಪರಿವರ್ತನೆಗೊಂಡಿದೆ. ಸದ್ಯ ಶಾಲೆಯಲ್ಲಿ 750 ವಿದ್ಯಾರ್ಥಿಗಳು ಕಲಿಯುತ್ತಿದ್ದಾರೆ.

ಗುಣಮಟ್ಟದ ಶಿಕ್ಷಣ, ಆಹಾರದೊಂದಿಗೆ ಮಕ್ಕಳು ಇಂಗ್ಲಿಷ್‌ನಲ್ಲಿಯೇ ಮಾತನಾಡುವ ಛಾತಿ ಹೊಂದಿದ್ದಾರೆ. ಕಲೆ, ಪ್ರತಿಭೆ ಪ್ರದರ್ಶನ, ಜನಪದ ಕಲೆ, ಪಾರಂಪರಿಕ ವಸ್ತು, ಸಾಂಪ್ರದಾಯಿಕ ಕೃಷಿ ಉಪಕರಣ, ರಂಗೋಲಿ, ಗ್ರಾಮೀಣ ಆಟ, ವಿಜ್ಞಾನ ಹಾಗೂ ತಂತ್ರಜ್ಞಾನ ಬಳಕೆಯ ಮಾದರಿ ಒಳಗೊಂಡಿರುವುದು ಶಾಲೆಗೆ ಮಕ್ಕಳ ದಾಖಲಿಸಲು ಪ್ರೇರಣೆಯಾಗಿದೆ.

ಮಕ್ಕಳಿಗೆ ಪ್ರತಿದಿನ ಪ್ರಾರ್ಥನೆ ಅವಧಿಯಲ್ಲಿ ತರಗತಿಗೆ ಒಂದರಂತೆ



ಉದಯವಾಹಿನಿ ಚಿತ್ರ

ಕಲಿಕಾ ಚಟುವಟಿಕೆಗಳನ್ನು ನೀಡಲಾಗುತ್ತಿದೆ. ಒಗಟು ಬಿಡಿಸೋಣ ಬನ್ನಿ, ಮಕ್ಕಳ ಕವನ ವಾಚನ, ಕಗ್ಗ ಹೇಳೋಣ, ವಾರದ ವ್ಯಕ್ತಿ, ಪಟ್ ಅಂತ ಹೇಳಿ ಪೆನ್ನು ಗೆಲ್ಲಿ, ಕುತೂಹಲಕ್ಕೊಂದು ನನ್ನ ಪ್ರಶ್ನೆ, ಜ್ಞಾನ ಪ್ರಯೋಗ ಕಿರಣ, ಮನೆ ಮದ್ದು ಆರೋಗ್ಯ, ಮುದ್ದುರಾಮನ ಪದ್ಯ ವಾಚನ, ವಿನೋದ ಪ್ರಶ್ನೆಗಳು, ಕನ್ನಡ ಮತ್ತು ಇಂಗ್ಲೀಷ್ ದಿನಪತ್ರಿಕೆ ಓದು, ಪುಸ್ತಕ ಪರಿಚಯ, ಇಂಗ್ಲಿಷ್ ಕಲಿಯೋಣ ಬನ್ನಿ, ಮುಂತಾದ ಸಭಾ ಕಂಪನ ಹೋಗಲಾಡಿಸಲು ಹತ್ತು ಹಲವು ಚಟುವಟಿಕೆಗಳನ್ನು ನಿರಂತರವಾಗಿ ನಡೆಸಲಾಗುತ್ತಿದೆ. ಇವುಗಳಿಗೆ ಸೂಕ್ತ ಬಹುಮಾನಗಳನ್ನು ನೀಡಿ ಪ್ರೇರೇಪಿಸಲಾಗುತ್ತಿದೆ.

ಶಾಲಾ ಸಂಸತ್ತು, ಭಾಷಾ ಸಂಘಗಳು, ಇಕೋ ಹಾಗೂ ವಿಜ್ಞಾನ ಕ್ಲಬ್, ಕಲಾ, ಸಾಂಸ್ಕೃತಿಕ ಸಂಘ, ಮೀನಾ ಸಂಘ, (ಆಪ್ತ ಸಮಾಲೋಚನಾ ಸಂಘ), ಮಕ್ಕಳ ಹಕ್ಕುಗಳ ಸಂಘ, ಶಾಲಾ ಪೊಲೀಸ್ ಪಡೆಯ ಗುಂಪುಗಳನ್ನು ರಚಿಸಿ ವಿದ್ಯಾರ್ಥಿಗಳು ಚಟುವಟಿಕೆಯಿಂದ ಇರಲು ಅವಕಾಶ ಕಲ್ಪಿಸಿದ್ದಾರೆ.

# ಒಪಿಎಸ್ ವರದಿ ಸಲ್ಲಿಕೆ ಶೀಘ್ರ: ಸಚಿವ ಜಿ.ಪರಮೇಶ್ವರ

• **ಉದಯವಾಹಿನಿ, ತುಮಕೂರು**

ಹಳೇ ಪಿಂಚಣಿ ಯೋಜನೆ (ಒಪಿಎಸ್) ಜಾರಿಗೆ ಸರ್ಕಾರ ಬದ್ಧವಾಗಿದೆ. ಇದಕ್ಕಾಗಿ ರಚಿಸಿದ ಸಮಿತಿಯು ಆದಷ್ಟು ಶೀಘ್ರದಲ್ಲಿಯೇ ಸರ್ಕಾರಕ್ಕೆ ವರದಿ ಸಲ್ಲಿಸಲಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಜಿ.ಪರಮೇಶ್ವರ ಹೇಳಿದರು. ನಗರದಲ್ಲಿ ರಾಜ್ಯ ಸರ್ಕಾರಿ ನೌಕರರ ಸಂಘದಿಂದ ಹಮ್ಮಿಕೊಂಡಿದ್ದ ಪ್ರತಿಭಾ ಪುರಸ್ಕಾರ ವಿತರಣಾ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಗ್ರಾಮೀಣ ಪ್ರದೇಶದ ಮಕ್ಕಳು ಉನ್ನತ ಶಿಕ್ಷಣ ಪಡೆಯುತ್ತಿದ್ದಾರೆ. ಸ್ಪರ್ಧಾತ್ಮಕ ಯುಗ ನಿಮ್ಮ ಮುಂದಿದೆ. ಭಾರತ ನಿಮಗಾಗಿ ಕಾಯುತ್ತಿದೆ. ದೇಶ ಕಟ್ಟಲು ನಿಮ್ಮ ಸೇವೆ ಬೇಕಾಗಿದೆ. ಪುರಸ್ಕಾರ ಒಂದು ರೀತಿಯ ಎಚ್ಚರಿಕೆ ಎಂದರು.

ಭಾರತ ಅತ್ಯಂತ ವೇಗವಾಗಿ ಬೆಳೆಯುತ್ತಿದ್ದು, ಇಡೀ ಪ್ರಪಂಚ ದೇಶದ ಕಡೆಗೆ ನೋಡುತ್ತಿದೆ. ಇದು ಶಿಕ್ಷಣದಿಂದ ಸಾಧ್ಯವಾಗಿದೆ.

ಹಳ್ಳಿಯಲ್ಲಿ ಕುಳಿತುಕೊಂಡು ಯಾವುದೇ ಶಾಲಾ-ಕಾಲೇಜಿಗೆ ಅರ್ಜಿ ಸಲ್ಲಿಸಬಹುದು. ದೇಶದ 140 ಕೋಟಿಯಲ್ಲಿ 96 ಕೋಟಿ ಜನ ಇಂಟರ್‌ನೆಟ್ ಬಳಸುತ್ತಿದ್ದಾರೆ. ಇಷ್ಟು ದೊಡ್ಡ ಸಂಖ್ಯೆಯ ಬಳಕೆದಾರರು ಇರುವ ಮತ್ತೊಂದು ರಾಷ್ಟ್ರವಿಲ್ಲ ಎಂದು ತಿಳಿಸಿದರು.



ಉದಯವಾಹಿನಿ ಚಿತ್ರ

ಕೇಂದ್ರ ಜಲ ಶಕ್ತಿ, ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ, 'ಸ್ಪರ್ಧಾತ್ಮಕ ತರಬೇತಿ ಕೇಂದ್ರಗಳು ನಾಯಿ ಕೊಡೆಯಂತಾಗಿವೆ. ಮಕ್ಕಳಿಂದ ಲಕ್ಷಾಂತರ ರೂಪಾಯಿ ದುಡ್ಡು ಪಡೆಯುತ್ತಿವೆ. ನೌಕರರ ಸಂಘದಿಂದ ಸ್ಪರ್ಧಾತ್ಮಕ ಪರೀಕ್ಷೆ ತರಬೇತಿ ಕೇಂದ್ರ ಆರಂಭಿಸಬೇಕು. ಮಕ್ಕಳ ಭವಿಷ್ಯ ರೂಪಿಸುವ ನಿಟ್ಟಿನಲ್ಲಿ ಕೇಂದ್ರ ನೆರವಾಗಲಿದೆ' ಎಂದು ಸಲಹೆ ಮಾಡಿದರು. ಶಾಸಕ ಜಿ.ಬಿ.ಜ್ಯೋತಿಗಣೇಶ್, ಮಾಜಿ ಸಂಸದ ಜಿ.ಎಸ್.ಬಸವರಾಜು, ಜಿಲ್ಲಾಧಿಕಾರಿ ಶುಭ ಕಲ್ಯಾಣ್, ಜಿ.ಪಂ ಸಿಇಒ ಜಿ.ಪ್ರಭು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ವಿ.ಅಶೋಕ್, ಹೆಚ್ಚುವರಿ ಜಿಲ್ಲಾಧಿಕಾರಿ ಎ.ತಿಪ್ಪೇಸ್ವಾಮಿ, ಉಪವಿಭಾಗಾಧಿಕಾರಿ ನಾಹಿದಾ ಜಮ್ ಜಮ್, ತಹಶೀಲ್ದಾರ್ ರಾಜೇಶ್ವರಿ, ಸರ್ಕಾರಿ ನೌಕರರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷರಾದ ಎನ್.ನರಸಿಂಹರಾಜು, ರಂಗಪ್ಪ, ಪದಾಧಿಕಾರಿಗಳಾದ ಎಚ್.ಗಿರಿಗೌಡ, ಮಲ್ಲಿಕಾರ್ಜುನ ಬಿ.ಬಳ್ಳಾರಿ, ಜಿ.ಎನ್.ರಾಧಾಕೃಷ್ಣ, ಸಿದ್ದರಾಜು, ವಿ.ವಿ.ಶಿವರುದ್ರಯ್ಯ ಮೊದಲಾದವರು ಭಾಗವಹಿಸಿದ್ದರು.

### ಎಚ್‌ಎಎಲ್ ಘಟಕ ವಿಸ್ತಾರ

**ಗುಬ್ಬಿ ಬಳಿಯ ನಿಟ್ಟೂರಿನ ಎಚ್‌ಎಎಲ್ ಘಟಕ ವಿಸ್ತಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಹೊಸದಾಗಿ ಇನ್ನೂ 650 ಎಕರೆ ಗುರುತಿಸಲಾಗಿದೆ ಎಂದು ಸಚಿವ ಜಿ.ಪರಮೇಶ್ವರ ಹೇಳಿದರು. ಏಷ್ಯಾದಲ್ಲಿಯೇ ಅತಿದೊಡ್ಡ ಕೈಗಾರಿಕಾ ಹಬ್ ಜಿಲ್ಲೆಯಲ್ಲಿ ಆಗುತ್ತಿದೆ. ಅಂತರಸನಹಳ್ಳಿ ವಸಂತನರಸಾಪುರ ಕೈಗಾರಿಕಾ ಪ್ರದೇಶದಲ್ಲಿ ಮತ್ತಷ್ಟು ಕೈಗಾರಿಕೆಗಳು ಶುರುವಾಗಲಿವೆ. ಎಂದರು.**

# ಮಿನಿ ನ್ಯೂಸ್

## ರಾಷ್ಟ್ರ ಪ್ರಶಸ್ತಿಗೆ ಅರ್ಜಿ ಆಹ್ವಾನ

• **ಉದಯವಾಹಿನಿ, ರಾಮನಗರ**

2025ನೇ ಸಾಲಿಗೆ ಕೇಂದ್ರ ಸರ್ಕಾರವು ವಿಕಲಚೇತನರ ಸಬಲೀಕರಣಕ್ಕಾಗಿ ವಿವಿಧ ಕ್ಷೇತ್ರಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿದ ವ್ಯಕ್ತಿ ಹಾಗೂ ಸಂಸ್ಥೆಗಳಿಗೆ ರಾಷ್ಟ್ರ ಪ್ರಶಸ್ತಿ ನೀಡುತ್ತಿದ್ದು, ಜಿಲ್ಲೆಯ ಸಾಧಕರಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯನ್ನು ಜುಲೈ 15ರೊಳಗೆ ಅಗತ್ಯ ದಾಖಲಾತಿಗಳೊಂದಿಗೆ ಭಾರತ ಸರ್ಕಾರ ಜಾಲತಾಣ: www.awards.gov.inನಲ್ಲಿ ಸಲ್ಲಿಸಬೇಕು. ಮಾಹಿತಿಗೆ ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿ ಕಚೇರಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಕೊಠಡಿ ಸಂಖ್ಯೆ 107, ನೆಲ ಮಹಡಿ ಜಿಲ್ಲಾಧಿಕಾರಿ ಕಚೇರಿ ಸಂಕೀರ್ಣ, ಬಿ.ಎಂ. ರಸ್ತೆ, ರಾಮನಗರ, ಬೆಂಗಳೂರು ದಕ್ಷಿಣ ಜಿಲ್ಲೆ-562159, ದೂ: 080-29500205 ಸಂಪರ್ಕಬೇಕು ಎಂದು ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕುಣಿಗಲ್: ಶಾಲೆ ಉಳಿವಿಗೆ ನೆರವಾದ ಹಳೆ ವಿದ್ಯಾರ್ಥಿಗಳು

• **ಉದಯವಾಹಿನಿ, ಕುಣಿಗಲ್**

ತಾಲ್ಲೂಕಿನ ಮೂರು ಗ್ರಾಮೀಣ ಪ್ರದೇಶದ ಶಾಲೆಗಳ ಉಳಿವಿಗಾಗಿ ಮತ್ತು ದಾಖಲಾತಿ ಹೆಚ್ಚಳಕ್ಕಾಗಿ ಹಳೆ ವಿದ್ಯಾರ್ಥಿಗಳು ಸಂಘಟಿತರಾಗಿ ರಚಿಸಿಕೊಂಡ ಸಂಘಗಳು ಮತ್ತು ಕಾಡಶೆಟ್ಟಿಹಳ್ಳಿಯ ದೈತ್ಯಮಾರಮ್ಮ ದೇವಾಲಯದ ಟ್ರಸ್ಟ್ ವತಿಯಿಂದ ವಿದ್ಯಾರ್ಥಿಗಳಿಗೆ ಬಸ್ ವ್ಯವಸ್ಥೆ ಮಾಡಿ ಗಮನ ಸೆಳೆದಿದ್ದಾರೆ. ತಾವು ಕಲಿತ ಶಾಲೆ ತಮ್ಮ ಕಣ್ಣ ಮುಂದೆಯೇ ದಾಖಲಾತಿ ಕ್ಷೀಣಿಸಿ ಮುಚ್ಚುವ ಹಂತಕ್ಕೆ ತಲುಪುತ್ತಿರುವುದನ್ನು ಕಂಡ ಹಳೆ ವಿದ್ಯಾರ್ಥಿಗಳು ಶಾಲೆಯ ಉಳಿವಿಗಾಗಿ ಸುತ್ತಮುತ್ತಲಿನ ಗ್ರಾಮಸ್ಥರ ಅಭಿಪ್ರಾಯಗಳನ್ನು ಸಂಗ್ರಹಿಸಿದಾಗ ಪೋಷಕರ ಆಂಗ್ಲ ಭಾಷಾ ವ್ಯಾಮೋಹದ ಜತೆಗೆ ಪೂರ್ವ ಪ್ರಾಥಮಿಕ ತರಗತಿಗಳ ಬಗ್ಗೆ ಒಲವು ತೋರಿದ ಕಾರಣ ಪೂರ್ವ ಪ್ರಾಥಮಿಕ ತರಗತಿಗಳನ್ನು ಮತ್ತು ಆಂಗ್ಲ ಭಾಷಾ ಬೋಧನೆ ಪ್ರಾರಂಭಿಸುವುದರ ಜತೆಗೆ ಪಟ್ಟಣಕ್ಕೆ ಬಸ್ ನಲ್ಲಿ ಶಾಲೆಗೆ ಹೋಗುವ ಮಕ್ಕಳನ್ನು ಸೆಳೆಯಲು ತಾವುಗಳೇ ಸೇರಿ ಟ್ರಸ್ಟ ಮೂಲಕ ಬಸ್ ಸಂಚಾರ ವ್ಯವಸ್ಥೆ ಮಾಡಿದ್ದಾರೆ.

ತಾಲ್ಲೂಕಿನ ಅಮೃತೂರು ಹೋಬಳಿಯ ಕಾಡಶೆಟ್ಟುಹಳ್ಳಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ದೈತ್ಯಮಾರಮ್ಮ ದೇವಾಲಯ ಟ್ರಸ್ಟ್ ವತಿಯಿಂದ ಬಸ್ ವ್ಯವಸ್ಥೆ ಮಾಡಲಾಗಿದೆ. 2019ರಲ್ಲಿ ಶಾಲೆಯ ದಾಖಲಾತಿ 4ಕ್ಕೆ ಇಳಿದಿದ್ದು. ಟ್ರಸ್ಟ್ ವತಿಯಿಂದ ಗ್ರಾಮೀಣ ಪ್ರದೇಶದ ಜನತೆಯೊಂದಿಗೆ ಚರ್ಚೆ ನಡೆಸಿ ಶಾಲೆಯನ್ನು ದತ್ತು ತೆಗೆದುಕೊಂಡು ಶಾಲೆಯ ಸಮಗ್ರ ಅಭಿವೃದ್ಧಿಗೆ ಕ್ರಮತೆಗೆದುಕೊಂಡ ಕಾರಣ ಪ್ರಸ್ತುತ ಸಾಲಿನಲ್ಲಿ ಶಾಲೆಗೆ ಮಕ್ಕಳ ದಾಖಲಾತಿ ಹೆಚ್ಚಳವಾಗಿದೆ. ಶಾಲೆಗೆ ನಾಗಮಂಗಲ ತಾಲ್ಲೂಕಿನ ಹತ್ತಾರು ಹಳ್ಳಿಯ ಮಕ್ಕಳು ದಾಖಲಾಗಿರುವುದು ಒಂದು ವಿಶೇಷ. ನಾಗಮಂಗಲ ಕಡೆಯಿಂದ 43 ಮಕ್ಕಳು ಶಾಲೆಗೆ ಬರುತ್ತಿದ್ದಾರೆ. ಬಸ್ ವ್ಯವಸ್ಥೆ ನಿರ್ವಹಣೆಯ ಸಂಪೂರ್ಣ ಜವಾಬ್ದಾರಿ ದೇವಾಲಯದ ಟ್ರಸ್ಟ್ ನವರೆ ವಹಿಸಿಕೊಂಡಿರುವುದರ ಜತೆಗೆ ಅತಿಥಿ ಶಿಕ್ಷಕರನ್ನು ನೇಮಕ ಮಾಡಿ ಕಂಪ್ಯೂಟರ್ ಶಿಕ್ಷಣ ಮತ್ತು ಆಂಗ್ಲಭಾಷಾ ಭೋಧನೆಗೆ ಕ್ರಮತೆಗೆದುಕೊಂಡಿದ್ದಾರೆ.

## ಮಠದ ವಿದ್ಯಾಧೀಶ ತೀರ್ಥರಿಂದ ತಪ್ತ ಮುದ್ರಾಧಾರಣೆ

• **ಉದಯವಾಹಿನಿ, ಮೈಸೂರು**

ಇಲ್ಲಿನ ಸರಸ್ವತಿಪುರಂನ ಶ್ರೀಕೃಷ್ಣಧಾಮದಲ್ಲಿ ಶ್ರೀಕೃಷ್ಣ ಮಿತ್ರ ಮಂಡಳಿ ಮತ್ತು ಶ್ರೀಕೃಷ್ಣ ಟ್ರಸ್ಟ್ ವತಿಯಿಂದ ಪ್ರಥಮ ಏಕಾದಶಿ ಅಂಗವಾಗಿ ಭಕ್ತರಿಗೆ ತಪ್ತ ಮುದ್ರಾಧಾರಣೆ ಮಾಡಲಾಯಿತು. ಉಡುಪಿ ಪಲಿಮಾರು ಮಠದ ವಿದ್ಯಾಧೀಶ ತೀರ್ಥ ಸ್ವಾಮೀಜಿ ಹಾಗೂ ವಿದ್ಯಾರಾಜೇಶ್ವರ ತೀರ್ಥ ಸ್ವಾಮೀಜಿ 2ಸಾವಿರಕ್ಕೂ ಹೆಚ್ಚು ಭಕ್ತರಿಗೆ ತಪ್ತ ಮುದ್ರಾಧಾರಣೆ ಮಾಡಿದರು. ಆಶಾಢ ಶುದ್ಧ ಏಕಾದಶಿಯಂದು ಸುದರ್ಶನ ಹೋಮ ಮಾಡಿ ಅದರಲ್ಲಿ ಶಂಕ, ಚಕ್ರವನ್ನು ಬಿಸಿ ಮಾಡಿ ನಮ್ಮ ಮೈಮೇಲೆ ಹಾಕಿಕೊಂಡರೆ ದೇವರ ಕೃಪೆ ಸಿಗುತ್ತದೆ ಎಂಬ ನಂಬಿಕೆ ಇದೆ. ಶ್ರೀನಿವಾಸನ ಕೈನಲ್ಲಿರುವ ಶಂಕ, ಚಕ್ರಗಳನ್ನು ನಾವು ಮುದ್ರೆ ರೂಪದಲ್ಲಿ ಧಾರಣೆ ಮಾಡಿದರೆ ನಮ್ಮ ಮೈಮೇಲೆ ಶ್ರೀನಿವಾಸ ನೆಲಸಿರುತ್ತಾನೆ' ಎಂದು ವಿದ್ಯಾಧೀಶ ತೀರ್ಥ ಸ್ವಾಮೀಜಿ ಹೇಳಿದರು. ಶ್ರೀಕೃಷ್ಣ ಮಿತ್ರ ಮಂಡಳಿ ಅಧ್ಯಕ್ಷ ಎನ್. ಗೋಪಾಲಕೃಷ್ಣನ್, ಗೌರವ ಕಾರ್ಯದರ್ಶಿ ಗುರುಪ್ರಸಾದ್, ಶ್ರೀಕೃಷ್ಣ ಟ್ರಸ್ಟ್ ಉಪಾಧ್ಯಕ್ಷರಾದ ರವಿಶಾಸ್ತ್ರಿ, ಪಿ.ಎಸ್. ಚಂದ್ರಶೇಖರ್, ಕಾರ್ಯದರ್ಶಿ ಕೆ.ವಿ. ಶ್ರೀಧರ್, ಖಜಾಂಚಿ ಎಂ.ರಾಘವೇಂದ್ರ ರಾವ್, ಶ್ರೀವತ್ಸ, ಮಂಗಳಾ ಇದ್ದರು.

# ಮುನಗನಹಳ್ಳಿ ಕೆರೆಯ ಒಡಲಿಗೆ ಹಗಲಲ್ಲೇ ಕನ್ನ!

## ಮಣ್ಣನ್ನು ಯಂತ್ರದಿಂದ ಟಿಪ್ಪರ್‌ಗಳಿಗೆ ತುಂಬಿಕೊಂಡು ಇಟ್ಟಿಗೆ ಫ್ಯಾಕ್ಟರಿಗಳಿಗೆ ಮಾರಾಟ ಮಾಡುವ ದಂದೆ ವ್ಯಾಪಕವಾಗಿ ನಡೆಯುತ್ತಿದೆ

• **ಉದಯವಾಹಿನಿ, ಚಿಂತಾಮಣಿ**

ತಾಲ್ಲೂಕಿನ ಕಸಬಾ ಹೋಬಳಿಯ ಮುನಗನಹಳ್ಳಿಯ ಕೆರೆಯಲ್ಲಿ ಅಕ್ರಮವಾಗಿ ಮಣ್ಣನ್ನು ತೆಗೆದು ಸಾಗಿಸುವ ದಂದೆ ರಾಜಾರೋಷವಾಗಿ ನಡೆಯುತ್ತಿದೆ. ಇದರಿಂದ ಕೆರೆಯ ಮೂಲ ಸ್ವರೂಪವನ್ನೇ ಹಾಳು ಮಾಡುತ್ತಿದ್ದಾರೆ. ಕೆರೆಗಳನ್ನು ಸಂರಕ್ಷಣೆ ಮಾಡಬೇಕಾದ ಅಧಿಕಾರಿಗಳು ಜಾಣ ಮೌನ ವಹಿಸಿದ್ದಾರೆ. ನಗರದ ಹೊರವಲಯದ ಮದನಪಲ್ಲಿ ರಸ್ತೆ ಸಮೀಪವಿರುವ ಮುನಗನಹಳ್ಳಿ ಗ್ರಾಮದ ಕೆರೆ ಹಾಗೂ ಅಂಗಳದ ಅಕ್ಕಪಕ್ಕ ಹಾಡಹಗಲೇ ದಂದೆಕೋರರು ರಾಜಾರೋಷವಾಗಿ ಮಣ್ಣನ್ನು ಟಿಪ್ಪರ್ ಮೂಲಕ ಸಾಗಿಸುತ್ತಿದ್ದಾರೆ.

ಕೆರೆಯಿಂದ ಮಣ್ಣು ತೆಗೆಯಬೇಕಾದರೆ ಗಣಿ ಮತ್ತು ಕಂದಾಯ ಇಲಾಖೆಯ ಅನುಮತಿ ಪಡೆಯಬೇಕಿದೆ. ನಿಗದಿತ ರಾಜಧನ ಪಾವತಿ ಮಾಡಿ ಪರವಾನಗಿ ಪಡೆಯಬೇಕಾಗುತ್ತದೆ. ಸರ್ಕಾರಿ ನಿಯಮಗಳನ್ನು ಗಾಳಿಗೆ ತೂರಿ, ಯಾವುದೇ ಶುಲ್ಕವನ್ನು ಪಾವತಿಸದೆ ನಿತ್ಯ ಹತ್ತಾರು ಲೋಡ್‌ಗಳಷ್ಟು ಮಣ್ಣು ಖಾಲಿಯಾಗುತ್ತಿದೆ. ಬಹಿರಂಗವಾಗಿ ಎಲ್ಲರ ಕಣ್ಣು ಮುಂದೆ ಇದು ನಡೆಯುತ್ತಿದ್ದರೂ ಅಧಿಕಾರಿಗಳು ಮಾತ್ರ ತಮಗೂ ಇದಕ್ಕೂ ಯಾವುದೇ ಸಂಬಂಧವಿಲ್ಲ ಎನ್ನುವಂತೆ ಜಾಣ ಕುರುಡುತನ ತೋರಿಸುತ್ತಿದ್ದಾರೆ ಎಂದು ಗ್ರಾಮಸ್ಥರು ಆರೋಪಿಸುತ್ತಾರೆ.

ಸರ್ಕಾರಿ ನಿಯಮಗಳನ್ನು ಪಾಲಿಸದೆ ಯಥೇಚ್ಛವಾಗಿ ಮನಬಂದಂತೆ ಮಣ್ಣನ್ನು ಅಕ್ರಮವಾಗಿ ಸಾಗಾಟ ಮಾಡುತ್ತಿರುವುದರಿಂದ ಕೆರೆ ಸ್ವರೂಪ ಬದಲಾಗಿ ತನ್ನ ಅಸ್ತಿತ್ವವನ್ನೆ ಕಳೆದುಕೊಳ್ಳುವಂತಾಗಿದೆ. ಕೆರೆ, ಕುಂಟೆ ಸರಿಯಾಗಿ ಇದ್ದರೆ ಮಾತ್ರ ಮಳೆ ನೀರು ಶೇಖರಣೆಯಾಗುತ್ತದೆ. ಇದರಿಂದಾಗಿ ಅಂತರ್ಜಲ ಮಟ್ಟ ವೃದ್ಧಿಯಾಗುತ್ತದೆ. ಆದರೆ ಕೆಲವು ಜನರು ಹಣದಾಸೆಗೆ ಕೆರೆಗಳಲ್ಲಿ ಅಕ್ರಮವಾಗಿ ಮಣ್ಣುಗಣಿಗಾರಿಕೆ ಮಾಡುವ ಮೂಲಕ ಕೆರೆಗಳ ನಾಶಕ್ಕೆ ಮುಂದಾಗಿದ್ದಾರೆ. ರೈತರು ತಮ್ಮ ಹೊಲ, ತೋಟಗಳಿಗೆ ಹೂಳನ್ನು ಟ್ರ್ಯಾಕ್ಟರ್ ಮೂಲಕ ಸಾಗಿಸಿಕೊಂಡರೆ ಅಧಿಕಾರಿಗಳು ಹಿಡಿದು ದಂಡ ಹಾಕುತ್ತಾರೆ ಎಂದು ದೂರಿದರು.ಬೇಸಿಗೆಯಲ್ಲಿ ಕೆರೆಗಳಲ್ಲಿ ನೀರಿನ ಪ್ರಮಾಣ ಕಡಿಮೆಯಾಗುತ್ತಿದ್ದಂತೆ ನಿತ್ಯ ಯಂತ್ರದೊಂದಿಗೆ ಮಣ್ಣು ತೆಗೆಯುವ ಕಾಯಕ ಹೆಚ್ಚಾಗುತ್ತಿದೆ. ಒಂದೆಡೆ ಸರ್ಕಾರೇತರ ಸ್ವಯಂ ಸೇವಾ ಸಂಸ್ಥೆಗಳು ಕೆರೆಯಲ್ಲಿನ ಹೂಳು ತೆಗೆಯುತ್ತಿದೆ. ಮತ್ತೊಂದು ಕಡೆ ಕೆಲವರು ಅಕ್ರಮ ಮಣ್ಣುಗಣಿಗಾರಿಕೆಯಿಂದ ಹಣ ಸಂಪಾದಿಸಲು ಕೆರೆಗಳನ್ನು ಹಾಳು ಮಾಡಲು ಹೊರಟಿದ್ದಾರೆ. ಮಣ್ಣು ತೆಗೆಯುವವರು ವಾರದ ರಜೆ ದಿನಗಳನ್ನು ಆಯ್ಕೆ ಮಾಡಿಕೊಳ್ಳುತ್ತಾರೆ. ಕಂದಾಯ ಮತ್ತು ಗಣಿ ಮತ್ತು ಭೂವಿಜ್ಞಾನ ಇಲಾಖೆ, ಸಣ್ಣ ನೀರಾವರಿ ಇಲಾಖೆ ಅಧಿಕಾರಿಗಳು ರಜೆ ಇದ್ದರೆ ಸ್ಥಳಕ್ಕೆ ಬರುವುದಿಲ್ಲ ಎಂಬ ಮುಂದಾಲೋಚನೆಯಿಂದ ಮಣ್ಣು ಎತ್ತುವುದು ಎಗ್ಗಿಲ್ಲದೆ ನಡೆಯುತ್ತಿದೆ ಎಂದು ಸಾರ್ವಜನಿಕರು ಆರೋಪಿಸುತ್ತಾರೆ. ಮಾಧ್ಯಮದವರು ತಾಲ್ಲೂಕು ದಂಡಾಧಿಕಾರಿಗಳ ಗಮನಕ್ಕೆ ತಂದ ತಕ್ಷಣ ಕಂದಾಯ ಇಲಾಖೆ ಅಧಿಕಾರಿಗಳನ್ನು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸುವಂತೆ ಸೂಚಿಸಿದರು. ಆದರೆ ಅಧಿಕಾರಿಗಳು ಯಂತ್ರ ಮತ್ತು ಟಿಪ್ಪರ್ ಹೋದ ಮೇಲೆ ಭೇಟಿ ನೀಡಿದ್ದಾರೆ. ಪರಿಶೀಲಿಸಿಕೊಂಡು ಬರಿಗೈಲಿ ವಾಪಸ್ ಬಂದಿದ್ದಾರೆ. ಅಕ್ರಮ ಮಣ್ಣು ಸಾಕಾಣಿಕೆಗೆ ಅಧಿಕಾರಿಗಳು ಶಾಮೀಲಾಗಿ ಬೆಂಬಲ ನೀಡುತ್ತಿದ್ದಾರೆ. ಅವರ ಬೆಂಬಲವಿಲ್ಲದಿದ್ದರೆ ಹಾಡುಹಗಲಲ್ಲೇ ಯಂತ್ರ ಮತ್ತು ಟಿಪ್ಪರ್ ಬಳಸಿ ಮಣ್ಣು ಸಾಗಿಸಲು ಹೇಗೆ ಸಾಧ್ಯ? ಅಧಿಕಾರಿಗಳು ಮತ್ತು ಮಣ್ಣು ದಂದೆಕೋರರ ನಡುವಿನ ಅನೈತಿಕ ಸಂಬಂಧದಿಂದಲೇ ರಾಜಾರೋಷವಾಗಿ ಮಣ್ಣು ಸಾಗಾಣಿಕೆ ನಡೆಯುತ್ತಿದೆ ಎಂದು ಸ್ಥಳೀಯರು ಆರೋಪಿಸುತ್ತಾರೆ.



ಉದಯವಾಹಿನಿ ಚಿತ್ರ

**ಮಣ್ಣನ್ನು ಅಕ್ರಮವಾಗಿ ಸಾಗಾಟ**

**ಕೆರೆಯಲ್ಲಿ ಮಣ್ಣು ತೆಗೆಯಲು ಪಂಚಾಯಿತಿಯಿಂದ ಯಾವುದೇ ಅನುಮತಿ ಕೊಟ್ಟಿಲ್ಲ. ಅವರಿಗೆ ನೋಟಿಸ್ ನೀಡಿ ಕಾನೂನಿನಂತೆ ಕ್ರಮಕ್ಕೈಗೊಳ್ಳಲಾಗುವುದು**

**ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮುನುಗನಹಳ್ಳಿ**

**ಕೆರೆಯಲ್ಲಿ ಮಣ್ಣು ತೆಗೆಯುತ್ತಿರುವವರ ವಿರುದ್ಧ ಕ್ರಮ ಜರುಗಿಸಲು ಸ್ಥಳೀಯ ಪಂಚಾಯಿತಿಗೆ ನೋಟಿಸ್ ನೀಡಲಾಗುವುದು. ಮಣ್ಣು ತೆಗೆಯುವವರಿಂದ ದಂಡ ವಸೂಲಿ ಮಾಡಲಾಗುವುದು**

**ಸುದರ್ಶನ ಯಾದವ್ ಚಿಂತಾಮಣಿ ತಹಶೀಲ್ದಾರ್**

**ಅಕ್ರಮ ಮಣ್ಣುಗಣಿಗಾರಿಕೆಯಲ್ಲಿ ತೊಡಗಿರುವವರನ್ನು ಸಾರ್ವಜನಿಕರು ತಡೆದು ಮಣ್ಣು ತೆಗೆಯುವವರನ್ನು ಪ್ರಶ್ನಿಸಿದರೆ 'ನಾವು ಪರವಾನಗಿ ಪಡೆದಿದ್ದೇವೆ' ಎಂದು ಸಬೂಬು ಹೇಳುವ ಮೂಲಕ ಸಾರ್ವಜನಿಕರಿಗೆ ತಪ್ಪು ಮಾಹಿತಿ ನೀಡುತ್ತಾರೆ. ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ಅಕ್ರಮದಲ್ಲಿ ಶಾಮೀಲಾಗಿರಬೇಕು. ಇಲ್ಲದಿದ್ದರೆ ಹಾಡುಹಗಲಲ್ಲೇ ಮಣ್ಣು ಸಾಗಿಸಲು ಹೇಗೆ ಸಾಧ್ಯ? ಕೆರೆಗಳಲ್ಲಿ ಅಕ್ರಮವಾಗಿ ಮಣ್ಣು ತೆಗೆಯುವವರ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳುವುದರ ಮೂಲಕ ಕೆರೆಗಳನ್ನು ಸಂರಕ್ಷಣೆ ಮಾಡಬೇಕು ಎಂದು ಸಾರ್ವಜನಿಕರ ಒತ್ತಾಯಿಸುತ್ತಾರೆ.**

# ಕರಗ: ಸಾಂಸ್ಕೃತಿ ಕಾರ್ಯಕ್ರಮಕ್ಕೆ ಚಾಲನೆ



ಉದಯವಾಹಿನಿ ಚಿತ್ರ

• **ಉದಯವಾಹಿನಿ, ರಾಮನಗರ**

ನಗರದ ಮಂಡಿಪೇಟೆಯಲ್ಲಿರುವ ಬನ್ನಿ ಮಹಾಂಕಾಳಿ ಕರಗ ಮಹೋತ್ಸವ ಪ್ರಯುಕ್ತ ಮಂಡಿಪೇಟೆ ಗೆಳೆಯರ ಬಳಗ ಹಮ್ಮಿಕೊಂಡಿದ್ದ ಸಾಂಸ್ಕತಿಕ ಕಾರ್ಯಕ್ರಮ ಹಾಗೂ ಭಜನೆ ಕಾರ್ಯಕ್ರಮಕ್ಕೆ ನಗರಸಭೆ ಅಧ್ಯಕ್ಷ ಕೆ. ಶೇಷಾದ್ರಿ ಶಶಿ ಚಾಲನೆ ನೀಡಿದರು. ಬಳಿಕ ಮಾತನಾಡಿದ ಅವರು, ಸಾಂಸ್ಕೃತಿಕ ಕಾರ್ಯಕ್ರಮಗಳು ನಮ್ಮ ಸಂಸ್ಕೃತಿಯನ್ನು ಮುಂದಿನ ಪೀಳಿಗೆಗೆ ತಲುಪಿಸುವ ಜೊತೆಗೆ, ಸಾಂಸ್ಕೃತಿಕವಾಗಿ ಸಮಾಜವನ್ನು ಒಗ್ಗೂಡಿಸುತ್ತವೆ. ದೇವತಾ ಕಾರ್ಯಗಳು ಮನುಷ್ಯನ ಮೇಲೆ ಸಾಕಷ್ಟು ಪರಿಣಾಮ ಉಂಟುಮಾಡುತ್ತವೆ. ಇದರಿಂದ ಯುವಕರಲ್ಲಿ ಜಾಗೃತಿ ಹಾಗೂ ಒಗ್ಗಟ್ಟು ಮೂಡಿಸಲಿದೆ' ಎಂದರು.

'ರಾಮನಗರದಲ್ಲಿ ನಡೆಯುವ ಶಕ್ತಿ ದೇವತೆಗಳ ಕರಗ ಮಹೋತ್ಸವವ ನಗರದ ಅಸ್ಮಿತೆಯಾಗಿದೆ. ಕರಗ ಮಹೋತ್ಸವದ ಹಿನ್ನೆಲೆಯಲ್ಲಿ ನಗರಸಭೆ ವತಿಯಿಂದ ಈಗಾಗಲೇ ನಗರದ ರಸ್ತೆಗಳನ್ನು ದುರಸ್ತಿ ಜೊತೆಗೆ ಸ್ವಚ್ಛತಾ ಕಾರ್ಯವನ್ನು ಕೈಗೊಳ್ಳಲಾಗಿದೆ. ಲಕ್ಷಾಂತರ ಜನ ಸೇರುವ ಕರಗಕ್ಕೆ ಅಡಚಣೆಯಾಗದಂತೆ ಎಲ್ಲಾ ರೀತಿಯ ಕ್ರಮ ವಹಿಸಲಾಗಿದೆ' ಎಂದು ತಿಳಿಸಿದರು.

ನಗರಸಭೆಯ 14ನೇ ವಾರ್ಡ್ ನಗರಸಭೆ ಸದಸ್ಯ ನಿಜಾಮುದ್ದೀನ್ ಷರೀಫ್, 'ರಾಮನಗರದಲ್ಲಿ ನಡೆಯುವ ಕರಗವು ಸೌಹಾರ್ದಕ್ಕೆ ಸಾಕ್ಷಿಯಾಗಿದೆ. ಅದೇ ಕಾರಣಕ್ಕೆ ಇಲ್ಲಿ ಜಾತಿ ಮತ್ತು ಧರ್ಮಗಳನ್ನು ಮೀರಿ ಎಲ್ಲರೂ ಒಟ್ಟಾಗಿ ಕರಗ ಆಚರಿಸುತ್ತಾರೆ' ಎಂದರು. ನಗರದ ಶ್ರೀ ಲಕ್ಷ್ಮೀ ಭಜನಾ ಮಂಡಳಿ ಸದಸ್ಯರು ದೇವಾಲಯದಲ್ಲಿ ಭಜನೆ ನಡೆಸಿಕೊಟ್ಟರು. ರೇಣುಕಾಪ್ರಸಾದ್ ನೇತೃತ್ವದ ಎಬಿಸಿಡಿ ನೃತ್ಯ ತಂಡ ಸಾಂಸ್ಕತಿಕ ಕಾರ್ಯಕ್ರಮ ನಡೆಸಿಕೊಟ್ಟಿತು. ಶ್ರೀನಿವಾಸ ಕಲ್ಯಾಣ ಕಥಾ ಪ್ರಸಂಗದ ನೃತ್ಯ ನಾಟಕ ಗಮನ ಸಳೆಯಿತು.

ಕರಗಧಾರಕ ಯೋಗೇಶ್ ಹಾಗೂ ದೇವಿಪ್ರಸಾದ್ ಸಿಂಗ್ ಅವರನ್ನು ಸನ್ಮಾನಿಸಲಾಯಿತು. ಮಂಡಿಪೇಟೆ ಗೆಳೆಯರ ಬಳಗದ ಪದಾಧಿಕಾರಿಗಳಾದ ರವಿಕಿರಣ್, ದೀಪಕ್, ಮಧುಸೂಧನ್, ಮಣಿಕಂಠ, ರಾಗಿ ಮಿಷಿನ್ ದೀಪು, ಮಂಜುನಾಥ್, ತರುಣ್ ಹಾಗೂ ಇತರರು ಇದ್ದರು.

ಅಂತರಾಳದಿಂದ.. EDITORIAL

# ಮಹಿಳೆಯರ ಅವಹೇಳನದ ಚಾಳಿ: ರಾಜಕಾರಣದ ನೈತಿಕತೆಗೆ ಗರ

ಜನಸಾಮಾನ್ಯರಿಗೆ ನೈತಿಕ ಮಾದರಿಗಳನ್ನು ಹಾಕಿಕೊಡಬೇಕಾದ ಜನಪ್ರತಿನಿಧಿಗಳು, ತಮ್ಮ ಬಾಯ್ತುರಿಕೆಯ ಮಾತುಗಳಿಂದ ಲಿಂಗಸಂವೇದನೆಯನ್ನು ನಿರಂತರವಾಗಿ ಗಾಸಿಗೊಳಿಸುತ್ತಿದ್ದಾರೆ. ಇದಕ್ಕೆ ಹೊಸ ಸೇರ್ಪಡೆ, ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರ ಕುರಿತು ವಿಧಾನ ಪರಿಷತ್‌ನ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್. ರವಿಕುಮಾರ್ ಅವರು ಆಡಿದ್ದಾರೆ ಎನ್ನಲಾದ ಅವಹೇಳನಕಾರಿ ಮಾತುಗಳು.ವಿವಾದದ ಪ್ರಕರಣಕ್ಕೆ ಸಂಬಂಧಿಸಿದಂತೆ ಎಫ್‌ಐಆರ್ ದಾಖಲಾಗಿದೆ; ರವಿಕುಮಾರ್ ಅವರಿಗೆ ಜನಪ್ರತಿನಿಧಿಗಳ ನ್ಯಾಯಾಲಯ ಷರತ್ತುಬದ್ಧ ಜಾಮೀನು ನೀಡಿದೆ. ಈ ಹಿಂದೆ ಕಲಬುರಗಿ ಜಿಲ್ಲಾಧಿಕಾರಿ ಬಗ್ಗೆಯೂ ರವಿಕುಮಾರ್ ಅವಹೇಳನಕಾರಿ ಪದ ಬಳಸಿದ್ದು, ಅವರಿಗೆ 'ಅಪರಾಧಿಕ ಚಾಳಿ' ಇದೆ ಎಂದು ಜಾಮೀನು ಅರ್ಜಿ ವಿಚಾರಣೆ ಸಂದರ್ಭದಲ್ಲಿ ರಾಜ್ಯ ಪ್ರಾಸಿಕ್ಯೂಟರ್ ಹೇಳಿರುವುದು ವ್ಯಕ್ತಿಸಂಬಂಧ ಹೇಳಿಕೆ ಮಾತ್ರವಾಗಿರದೆ, ಸಮಕಾಲೀನ ರಾಜಕಾರಣದ ನೈತಿಕ ಅಧಃಪತನವನ್ನೂ ಸೂಚಿಸುವಂತಿದೆ. ಜವಾಬ್ದಾರಿಯುತ ಸ್ಥಾನದಲ್ಲಿರುವ ಅನೇಕ ರಾಜಕಾರಣಿಗಳು ಒಡಕುಬಾಯಿ ಹೊಂದಿರುವುದಕ್ಕೆ ಸಾಕಷ್ಟು ಉದಾಹರಣೆಗಳಿವೆ. ಕಳೆದ ಡಿಸೆಂಬರ್‌ನಲ್ಲಿ, ಬೆಳಗಾವಿಯಲ್ಲಿ ನಡೆದ ವಿಧಾನಮಂಡಲ ಅಧಿವೇಶನದ ಸಮಯದಲ್ಲಿ ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ ಅವರು ಸಚಿವೆ ಲಕ್ಷ್ಮೀ ಹೆಬ್ಬಾಳಕರ ಕುರಿತು ಬಳಸಿದ ಪದವೊಂದು ಸದನದ ಒಳಹೊರಗೆ ಅಲ್ಲೋಲ ಕಲ್ಲೋಲ ಸೃಷ್ಟಿಸಿತ್ತು.



ನಾಲಿಗೆಯ ಮೇಲೆ ನಿಯಂತ್ರಣ ಕಳೆದುಕೊಳ್ಳುವ ರಾಜಕಾರಣಿಗಳು ಪರಸ್ಪರ ದೂಷಿಸಿಕೊಳ್ಳುವ ಸಂದರ್ಭದಲ್ಲಿ ಮಹಿಳೆಯರ ಸೀರೆ, ಹೂವು, ಕುಂಕುಮ ಬಳೆಗಳ ಬಗ್ಗೆ ನಿಕೃಷ್ಟವಾಗಿ ಮಾತನಾಡುವುದು ಎಷ್ಟು ಸಹಜವಾಗಿದೆ ಎಂದರೆ, ಆ ಮಾತುಗಳನ್ನು ಮಹಿಳಾ ಜನಪ್ರತಿನಿಧಿಗಳೂ ಆಕ್ಷೇಪಿಸದೆ ಮೌನವಾಗಿಯೇ ಒಪ್ಪಿಕೊಳ್ಳುತ್ತಿರುವಂತಿದೆ. ಅಸೂಕ್ಷ್ಮವಾಗಿ ಮಾತನಾಡುವ ರಾಜಕಾರಣಿಗಳ ಕಣ್ಣಿಗೆ, ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳಿಂದ ಹಳ್ಳಿಗಳ ತಾಯಂದಿರು ದಾರಿ ತಪ್ಪಿರುವಂತೆ ಕಾಣಿಸಿದ್ದಾರೆ.ಮಹಿಳೆಯರು ಅಡುಗೆ ಮನೆಗೆ ಸೀಮಿತ ವಾಗಿರಬೇಕು ಎಂದೊಬ್ಬರು ಅಪ್ಪಣೆ ಕೊಡಿಸಿದರೆ, ಮಹಿಳೆಯೊಬ್ಬರು ಹಣೆಗೆ ಬೊಟ್ಟಿಡದಿರುವುದು ಮತ್ತೊಬ್ಬರಿಗೆ ಅಪರಾಧವಾಗಿ ಕಾಣಿಸಿರುವುದಿದೆ. ಹೀಗೆ, ಲಿಂಗಸಂವೇದನೆಯ ಸೂಕ್ಷ್ಮಗಳನ್ನು ಮರೆತು ನಿರ್ಲಜ್ಜೆಯಿಂದ ಮಾತನಾಡುವ ಜನಪ್ರತಿನಿಧಿಗಳು ಜನರ ಮೂಲಕ ತಮಗೆ ದೊರೆತ ಅಧಿಕಾರದಿಂದ ಏನನ್ನು ಬೇಕಾದರೂ ಮಾತನಾಡಿ ದಕ್ಕಿಸಿಕೊಳ್ಳಬಲ್ಲೆವು ಎನ್ನುವ ಭಂಡತನ ಹೊಂದಿರುವಂತಿದೆ. ಜನಪ್ರತಿನಿಧಿಗಳ ನಿರ್ಲಜ್ಜ ಮಾತುಗಳ ಹಿಂದೆ ಪುರುಷ ಅಹಂಕಾರ ಹಾಗೂ ಹೆಣ್ಣನ್ನು ಭೋಗದ ದೃಷ್ಟಿಕೋನದಿಂದಷ್ಟೇ ನೋಡುವ ಕೊಳಕು ಮನಃಸ್ಥಿತಿಯ ಜೊತೆಗೆ ಅಧಿಕಾರದ ಮದವೂ ಇರುತ್ತದೆ. ಮೊದಲ ಸಲದ ದುಡುಕಿನ ಮಾತನ್ನು ಬಾಯ್ತಪ್ಪಿನ ಅಪ್ರಜ್ಞಾಪೂರ್ವಕ ಹೇಳಿಕೆಯೆಂದು ಭಾವಿಸಲಿಕ್ಕೆ ಸಾಧ್ಯವಿದೆ. ಆದರೆ, ತಪ್ಪನ್ನು ತಿದ್ದಿಕೊಳ್ಳದೆ, ಅವಹೇಳನಕಾರಿ ಮಾತುಗಳನ್ನು ಮತ್ತೆ ಮತ್ತೆ ಆಡುವುದನ್ನು ಚಾಳಿ ಎಂದೇ ಪರಿಗಣಿಸಬೇಕಾಗುತ್ತದೆ. ಅಂಥ ಚಾಳಿಗೆ ಕಾನೂನು ಕ್ರಮದ ಜೊತೆಗೆ ಮಾನಸಿಕ ತಜ್ಞರಿಂದ ಚಿಕಿತ್ಸೆಯ ಅಗತ್ಯವೂ ಇದೆ. ಹೀಗೆ ಪ್ರಶ್ನಿಸುವ ಅವರು, ಇನ್ನೊಬ್ಬರು ಮಾಡಿರಬಹುದಾದ ತಪ್ಪು ನಮ್ಮ ತಪ್ಪಿಗೆ ಸಮರ್ಥನೆಯಾಗುವುದಿಲ್ಲ ಎನ್ನುವುದನ್ನು ಮರೆತಿರುವಂತಿದೆ. ಸಮಾಜಕ್ಕೆ ಮೇಲ್ಪಂಕ್ತಿ ಹಾಕಿಕೊಡಬೇಕಾದ ಜನಪ್ರತಿನಿಧಿಗಳು ಸಾರ್ವಜನಿಕ ಸಭ್ಯತೆಯನ್ನು ರೂಢಿಸಿಕೊಳ್ಳುವುದು ಅಗತ್ಯ. ಆಡುವ ಮಾತಿನ ಅರ್ಥ ಮತ್ತು ಪರಿಣಾಮದ ಅರಿವು ಅವರಿಗೆ ಇರಲೇಬೇಕಾಗುತ್ತದೆ. ಜನಪ್ರತಿನಿಧಿಗಳ ಮಾತುಗಳು ಅವರು ಪ್ರತಿನಿಧಿಸುವ ಶಾಸನಸಭೆ ಹಾಗೂ ಪಕ್ಷದ ಘನತೆಗೂ ಸಂಬಂಧಿಸಿದ್ದಾಗಿರುತ್ತವೆ. ಆಡಿದ ಮಾತಿಗೆ ಕ್ಷಮೆ ಕೇಳುವ ಸೌಜನ್ಯವೂ ಇಲ್ಲದೆ ಹೋದರೆ, ಅಂಥ ರಾಜಕಾರಣಿಗಳ ಸಾಮಾಜಿಕ ಬದ್ಧತೆ ಪ್ರಶ್ನಾರ್ಹವಾಗುತ್ತದೆ. ರವಿಕುಮಾರ್ ಅವರ ವಿವಾದ, ಲಿಂಗಸಂವೇದನೆಗೆ ಸಂಬಂಧಿಸಿದಂತೆ ಎಲ್ಲಾ ರಾಜಕಾರಣಿಗಳಿಗೆ ಪಾಠವಾಗಬೇಕು.

**ತುಟಿ ಮೀರಿ ಮಾತನಾಡುವವರನ್ನು ಸರಿಪಡಿಸುವ ಪ್ರಾಥಮಿಕ ಹೊಣೆಗಾರಿಕೆ ಆಯಾ ಪಕ್ಷದ ಹಿರಿಯರದಾಗಿರುತ್ತದೆ. ಆದರೆ, ರವಿಕುಮಾರ್ ಅವರು ಮಾತನಾಡಿದ್ದು ಸರಿಯಲ್ಲವೆಂದು ಹೇಳುವ ನೈತಿಕತೆಯನ್ನು ಬಿಜೆಪಿಯ ಹಿರಿಯ ನಾಯಕರು ಪ್ರದರ್ಶಿಸದಿರುವುದು ದುರದೃಷ್ಟಕರ. ತಪ್ಪು ಮಾಡಿದವರ ಕಿವಿಹಿಂಡುವ ಬದಲು, ಅಧಿಕಾರಿಗಳ ಬಗ್ಗೆ ಹಲವು ಬಾರಿ ಅವಹೇಳನಕಾರಿಯಾಗಿ ಮಾತನಾಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿರುದ್ಧ ಏಕೆ ಕ್ರಮ ಕೈಗೊಳ್ಳಲಾಗಿಲ್ಲ ಎಂದು ವಿರೋಧ ಪಕ್ಷದ ನಾಯಕ ಆರ್. ಅಶೋಕ ಪ್ರಶ್ನಿಸಿದ್ದಾರೆ.**

## ರಾಮಾಯಣ



ಭರದ್ವಾಜ ಮುನಿಯಿಂದ ಭರತಾದಿಗಳಿಗೆ ಔತಣ


• ಹಿಂದಿನ ಸಂಚಿಕೆಯಿಂದ 91 ನೆಯ ಅಧ್ಯಾಯ

ಅಂತರಿಕ್ಷಮಾರ್ಗದಲ್ಲಿ ವಾಯುವೇಗದಿಂದ ಹೋಗುತ್ತಿರುವ ಮೇಘಸಮೂಹದಂತೆ ಚಿತ್ರಕೂಟ ಪರ್ವತದಲ್ಲಿ ಅತಿವೇಗದಿಂದ ಓಡುವ ಮೃಗಸಮೂಹವನ್ನು ನೋಡು ತೆಂಕಣದಿಕ್ಕಿನ ಸೊಗಸುಗಾರರಾದ ಜನರು ಹೂವಿನ ಸರಗಳನ್ನು ಮುಡಿದುಕೊಂಡಿರು ವಂತೆ, ಈ ಪರ್ವತದ ತಪ್ಪಲುಗಳಲ್ಲಿಯ ವೃಕ್ಷಗಳು ಒಪ್ಪುತ್ತಿವೆ. ಪಕ್ಷಿಗಳ ಸದ್ದಿಲ್ಲದೆ ಭಯಂಕರವಾಗಿರುವ ಈ ವನವು ಈಗ ಅಯೋಧ್ಯಾ ಪಟ್ಟಣದಂತೆ ಒಪ್ಪುತ್ತಿದೆ. ದೇವತೆಗಳಿಂದ ವಿನೋದ ಕ್ರೀಡಾರ್ಥವಾಗಿ ಮೇಲಕ್ಕೆ ಸೆಳೆಯಲ್ಪಟ್ಟಿತೋ ಎಂಬಂತೆ ಈ ಪರ್ವತವು ಅತ್ಯಂತ ಉನ್ನತವಾಗಿದೆ. ತಂಗಾಳಿಯು ನಮಗೆ ಪ್ರಿಯವನ್ನು ಮಾಡಲಿಚ್ಛೆಯುಳ್ಳದ್ದೋ ಎಂಬಂತೆ ಈ ಪರ್ವತದ ಸಮೀಪದಲ್ಲಿ ಬೀಸುತ್ತಿದೆ! ಶತ್ರುಘ್ನ, ಸಾರಥಿಗಳಿಂದ ಶೀಘ್ರವಾಗಿ ನಡೆಸಲ್ಪಟ್ಟ ರಥಗಳನ್ನೂ ವೇಗದಿಂದ ನಡೆಯುವ ಆನೆ ಕುದುರೆಗಳನ್ನೂ ನೋಡಿ ಬೆದರಿ ಓಡುತ್ತಿರುವ ನವಿಲುಗಳು ಈ ಪರ್ವತದಲ್ಲಿರುವ ತಮ್ಮ ಸ್ಥಾನಗಳಿಗೆ ಹೋಗುತ್ತಿವೆ. ಈ ಸ್ಥಳವು ಸಾಕ್ಷಾತ್ ಸ್ವರ್ಗಲೋಕದಂತೆ ಮನೋಹರವಾಗಿದೆ. ಇದು ತಪಸ್ವಿಗಳಾದ ಪುಣ್ಯಾತ್ಮರಿರುವುದಕ್ಕೆ ತಕ್ಕದ್ದಾಗಿದೆ. ಎಲ್ಲಿ ನೋಡಿದರೂ ಗುಂಪುಕೂಡಿಕೊಂಡು ಮನೋಹರವಾಗಿ ಕಾಣಿಸುತ್ತಿರುವ ಮೃಗಗಳು ನಾನಾ ವರ್ಣದ ಪುಷ್ಪಗಳಿಂದ ಅಲಂಕರಿಸಲ್ಪಟ್ಟಿರುವಂತೆ ಒಪ್ಪುತ್ತಿವೆ. ನಮ್ಮ ಸೇನೆಯು ಇಲ್ಲಿಯೇ ನಿಲ್ಲಲಿ. ಕೆಲವರು ಆಯುಧಗಳನ್ನು ಹಿಡಿದುಕೊಂಡು ಈ ವನದಲ್ಲಿ ಲಕ್ಷ್ಮಣ ಸಮೇತನಾಗಿ ಶ್ರೀರಾಮ ನಿರುವ ಸ್ಥಳವನ್ನು ಕಂಡು ಬರಲಿ ಎಂದು ಆಜ್ಞಾಪಿಸಿದನು. ಆ ಮಾತನ್ನು ಕೇಳಿ ಶಸ್ತ್ರಪಾಣಿಗಳಾದ ಕೆಲವು ಭಟರು ವನದಲ್ಲಿ ಸಂಚರಿಸಿ ಒಂದು ಸ್ಥಳದಲ್ಲಿ ಹೊಗೆಯನ್ನು ಕಂಡು ಭರತನ ಸಮೀಪಕ್ಕೆ ಬಂದು ರಾಜಪುತ್ರ, ಒಂದು ಸ್ಥಳದಲ್ಲಿ ಹೊಗೆಯೇಳುತ್ತಿದೆ. ಆ ಹೊಗೆಯು ಮನುಷ್ಯರಿರುವ ಸ್ಥಳದಲ್ಲಿರುವಂಥದಲ್ಲದೆ ಕಾಡುಗಿಚ್ಚಿನಹಾಗೆ ಕಾಣಿಸುವುದಿಲ್ಲ. ರಾಮಲಕ್ಷ್ಮಣರು ಅಲ್ಲಿಯೇ ಇರಬೇಕು. ಅಲ್ಲದ ಪಕ್ಷದಲ್ಲಿ ಅವರಿಗೆ ಸಮಾನರಾದ ಇತರ ತಪಸ್ವಿಗಳಿರಬೇಕು ಎಂದು ಹೇಳಿದರು. ಆ ಮಾತನ್ನು ಕೇಳಿ ಭರತನು ಸೇನಾಪತಿಗಳನ್ನು ಕುರಿತು ಎಲೈ ಸೇನಾಪತಿಗಳಿರಾ ಈ ಸೇನೆಯನ್ನು ಇಲ್ಲಿಯೇ ನಿಲ್ಲಿಸಿಕೊಂಡಿರಿ. ನಾನೂ ಶತ್ರುಘ್ನನೂ ವಸಿಷ್ಠಮುನೀಶ್ವರರೂ ಸುಮಂತ್ರನ ಹೋಗಿ ವಿಚಾರಿಸಿ ಬರುತ್ತೇವೆ ಎಂದು ನುಡಿದು ಅವರನ್ನು ಕೂಡಿಕೊಂಡು ಹೋಗಿ ಆ ಹೊಗೆಯನ್ನು ದೃಷ್ಟಿಸಿ ನೋಡಲಾರಂಭಿಸಿದನು. ಆ ಸೇನೆಯೂ ಆ ಹೊಗೆಯನ್ನು ಕಂಡು ಸೀತಾಲಕ್ಷ್ಮಣಸಮೇತನಾದ ಶ್ರೀರಾಮನನ್ನು ಶೀಘ್ರದಲ್ಲಿ ಕಾಣಬಹುದೆಂದು ಅತ್ಯಂತ ಸಂತೋಷ ಪಡಲಾರಂಭಿಸಿತು.

### ಚಿತ್ರ ಕೂಟ ಪರ್ವತದ ವರ್ಣನೆ

ಇತ್ತ ಭರತನ ಜೇಷ್ಠ ಭ್ರಾತೃವಾದ ಶ್ರೀರಾಮನು ಚಿತ್ರಕೂಟಪರ್ವತದಲ್ಲಿದ್ದು ಕೊಂಡು ಒಂದು ಸಮಯದಲ್ಲಿ ಸೀತಾದೇವಿಯ ಮನಸ್ಸಿಗೆ ಸಂತೋಷವುಂಟು ಮಾಡಬೇಕೆಂಬ ಬುದ್ಧಿಯಿಂದ ಆ ಪರ್ವತದಲ್ಲಿ ದೃಷ್ಟಿಯನ್ನಿರಿಸಿ ದೇವೇಂದ್ರನು ಶಚೀದೇವಿಯೊಡನೆ ಇಷ್ಟಾಲಾಪಗಳನ್ನು ಮಾಡುವಂತೆ

ಮುಂದುವರಿಯುವುದು...



ಸಾಮಾಜಿಕ ಕಳಕಳಿ




ಹೆಚ್.ಎಸ್. ಪ್ರತಿಮಾ
ಲೇಖಕರು
ಸಾಮಾಜಿಕ ಚಿಂತಕಿ ಹಾಗೂ ಶಿಕ್ಷಕಿ, ಹಾಸನ

## ನಾಳೆಯನು ಬಲ್ಲವರಾರಿಲ್ಲಿ?

ವಿಧಿಯಾಟವಿದು ವಿಧಿಯಾಟವಿದು ತಿಳಿ ಮನುಜ
ಜನಸಾಮಾನ್ಯರಲಿ ಎದೆ ನಡಗುತಿಹುದು ಸಹಜ
ಅಂತಹ ಘಟನೆ ನಡೆಯುತಿಹುದು ಭೂಲೋಕದಿ ನಿಜ
ನಾಳೆಯನು ಬಲ್ಲವರಾರಿಲ್ಲಿ? ಈ ಜಗದಿ ಅರಿಯುವಿರಿ
ಕ್ಷಣದಿ.....
ದೊಡ್ಡ ದೊಡ್ಡ ಕನಸ ಕಂಡಿಹರು ಹಲವರು
ಸಹಜವಾಗಿಯೇ ಎಲ್ಲಾ ಬಾಳಿ ಬದುಕಬೇಕೆಂದಿಹರು
ವಿಧಿ ಬರಹದ ಮುಂದೆ ಯಾರಿಲ್ಲಿ ತಿಳಿಯುತ
ನಾಳೆಯ ಕಂಡು ಹಿಡಿಯುವವರಾರಿಲ್ಲಿ? ಎನ್ನುತ....
ಈ ಕ್ಷಣದಲಿ ಇದ್ದವ ಮುಂದೆ ಏನಾಗುವರು
ತಿಳಿಯನು?
ಯಾರ ಪ್ರಾಣಪಕ್ಷಿ ಹಾರಿ ಹೋಗುವುದು
ಎಂಬ ಭಯದಿ
ಅರಿಯದ ಮನುಜ ಭ್ರಮೆಯಲಿ
ಸಾಗುತಿಹನು ಸ್ವಾರ್ಥದಿ ಕೆಲವರು



ಮುಖವಾಡವ ಧರಿಸಿ ನಡೆಯುತಿಹರು.....
ಸಾವಿಗೆ ನೆಪಗಳ ಹೆಸರು ಉಂಟು ಕೇಳಿ?
ಹೃದಯಾಘಾತವೋ? ವ್ಯಾಕ್ಸೀನ್ ಮಹಿಮೆಯೋ?
ಪ್ರಾಣ ಪಕ್ಷಿ ಉಳಿಸುವ ದಾತುವೋ? ವಿಧಿಯಾಟವೋ?
ಜವರಾಯ ಕರೆಯುವ ನಮ್ಮನ್ನು ನೆಪದಲ್ಲಷ್ಟೇ......
ಕೇಳಿರಿ ಅಣ್ಣ, ತಮ್ಮಂದಿರೇ ಕೇಳಿರಿ ಅಕ್ಕ ತಂಗಿಯರೇ
ನಾಳೆಯ ಬಲ್ಲವರಾರಿಲ್ಲ ಇಲ್ಲಿ ತಿಳಿಯುತ ಜಗದಲಿ
ಕೈಲಾದ ಸೇವೆಯ ಮಾಡುತ ಸಾಗಿರಿ ಬದುಕಿನಲಿ
ಸತ್ತರೂ ನಮ್ಮ ಹೆಸರು ಉಳಿಯುವಯಾಗಿರಲಿ......



## ಅರಳಿಮರವೇಕೆ ಬಾಡುವುದಿಲ್ಲ ಗೊತ್ತಾ..?



ವಿಶ್ವಾಸ್.ಡಿ.ಗೌಡ
• ಉದಯವಾಹಿನಿ, ವಿಶೇಷ

ರಾಮಲಕ್ಷ್ಮಣರು ವನವಾಸದಲ್ಲಿದ್ದಾಗ ಗಯಾ ಕ್ಷೇತ್ರಕ್ಕೆ ಬರುತ್ತಾರೆ. ಸೀತಾದೇವಿಯನ್ನು ಫಲ್ಗುಣಿ ನದಿಯ ದಂಡೆಯಲ್ಲಿ ಕೂಡಿಸಿ ಅವರಿಬ್ಬರೂ ಕಾಡಿಗೆ ಹೋಗುತ್ತಾರೆ. ಇದಾದ ಸ್ವಲ್ಪ ಹೊತ್ತಿನಲ್ಲೇ ನದಿಯ ಒಳಗಿನಿಂದ ಕೈಯೊಂದು ಹೊರಗೆ ಬರುತ್ತದೆ.

ಸೀತಾದೇವಿ ನನಗೆ ಹಸಿವೆಯಾಗುತ್ತಿದೆ ಎಂದಂತಾಗುತ್ತದೆ. ಪದೇ ಪದೇ ಆ ಧ್ವನಿ ಮರುಕಳಿಸುತ್ತದೆ. ಆ ಧ್ವನಿ ಮಹಾರಾಜರಂತೆ ಇರುತ್ತದೆ. ಸೀತೆಗೆ ಏನು ಮಾಡುವುದೆಂದೇ ತೋಚುವುದಿಲ್ಲ. ಬೇರೆ ದಾರಿ ಇಲ್ಲದೆ ಮರಳಿನ ಉಂಡೆಯನ್ನು ಮಾಡಿ ಅದರಲ್ಲಿ ಅನ್ನವನ್ನು ಆವಾಹನೆ ಮಾಡಿ ನದಿಯಿಂದ ಮೇಲೆ ಬಂದ ಕೈಯೊಳಗೆ ಇಡುತ್ತಾಳೆ. ನಂತರ ತನ್ನ ಕರ್ತವ್ಯಕ್ಕೆ ಐದು ಸಾಕ್ಷಿಗಳನ್ನು ಆಧಾರವಾಗಿ ಇಟ್ಟುಕೊಳ್ಳುತ್ತಾಳೆ.

ಸೀತೆ ನೀಡಿದ ಆಹಾರದಿಂದ ದಶರಥ ಸಂತುಷ್ಟನಾಗುತ್ತಾನೆ. ಹರಸಿ ಮರೆಯಾಗುತ್ತಾನೆ. ಇತ್ತ ರಾಮ ಲಕ್ಷ್ಮಣರು ಮರಳಿದಾಗ ಸೀತೆ ಅವರಿಗೆ ನಡೆದ ಸಂಗತಿಯೆಲ್ಲವನ್ನೂ ವಿವರಿಸುತ್ತಾಳೆ. ರಾಮ ಲಕ್ಷ್ಮಣರಿಗೆ ಮೊದಲಿಗೆ ಸೀತೆಯ ಮಾತಿನ ಮೇಲೆ ನಂಬಿಕೆ ಬರುವುದಿಲ್ಲ. ಆಗ ಸೀತೆ ತನ್ನ ಕೃತ್ಯಕ್ಕೆ ಫಲ್ಗುಣಿ ನದಿ, ತುಳಸಿ ಗಿಡ, ಹಸು ಬ್ರಾಹ್ಮಣ ಮತ್ತು ಅರಳಿಮರವೇ ಸಾಕ್ಷಿ ಎನ್ನುತ್ತಾಳೆ. ಆದರೆ, ಸೀತೆಯ ಸಹಾಯಕ್ಕೆ ಅರಳಿ ಮರದ ಹೊರತಾಗಿ ಮತ್ಯಾರು ಬರುವುದಿಲ್ಲ. ಅರಳಿ ಮರ ಸಾಕ್ಷ್ಯ ನುಡಿಯುತ್ತದೆ.

ರಾಮ, ಲಕ್ಷ್ಮಣರು ಸೀತೆಯ ಕರ್ತವ್ಯ ಪ್ರಜ್ಞೆಯನ್ನು ಶ್ಲಾಘಿಸುತ್ತಾರೆ. ಆದರೆ, ಸೀತೆ ತನ್ನ ಮಾತಿಗೆ ವಿರುದ್ಧವಾಗಿ ನಡೆದುಕೊಂಡ ಫಾಲುಣಿ ನದಿ, ಹಸು, ಬ್ರಾಹ್ಮಣ ಮತ್ತು ತುಳಸಿ ಗಿಡಕ್ಕೆ ಶಾಪ ಕೊಡುತ್ತಾಳೆ. ಫಾಲುಣಿ ನದಿಗೆ ಮಳೆಗಾಲದಲ್ಲೂ ಸಹ ನಿನ್ನ ಪಾತ್ರಕ್ಕೆ ಎಷ್ಟೇ ನೀರು ಬಂದರೂ ಬರಿದಾಗಲಿ. ನೀರು ನೆಲದ ಒಳಗೇ ಉಳಿದುಕೊಳ್ಳಲಿ. ಹೇ ವಿಪ್ರೋತ್ತಮ ನೀನು ಸತ್ಯ ಹೇಳದೇ ನನಗೆ ಮೋಸ ಮಾಡಿದೆ. ಹೀಗಾಗಿ ನೀನು ಈ ಕ್ಷೇತ್ರದಲ್ಲೇ ಇದ್ದು ಕ್ಷೇತ್ರಕ್ಕೆ ಬರುವ ಯಾತ್ರಿಕರನ್ನು ಪೀಡಿಸಿ ಅದರಿಂದ ಬಂದ ಲಾಭದಿಂದ ಜೀವನ ನಡೆಸು. ಗೋಮಾತೆ ನೀನು ಜಗವ ಬೆಳಗಬೇಕಾದವಳು. ಆದರೆ, ನೀನು ನನ್ನ ಮಾತು ಮೀರಿ ಲೊಭತನ ಮೆರೆದೆ. ಹಾಗಾಗಿ ಗಯಾ ಕ್ಷೇತ್ರದಲ್ಲೇ ಇದ್ದುಕೊಂಡು ಅವರಿವರು ಪಿಂಡವನ್ನು ತಿನ್ನುತ್ತಾ ಜೀವನ ಸಾಗಿಸು. ಎಷ್ಟು ತಿಂದರೂ ನಿನ್ನ ಹೊಟ್ಟೆ ತುಂಬದಿರಲಿ. ತುಳಸಿ ಮಾತೆ ನೀನು ಪವಿತ್ರಳಾದವಳು. ನೀನು ಸಹ ನನ್ನ ಮಾತು ಮೀರುವಿ ಎಂದುಕೊಂಡಿರಲಿಲ್ಲ. ಹಾಗಾಗಿ ನೀನು ಎಲ್ಲೆಂದರಲ್ಲಿ ಬೆಳೆಯುವಂತಾಗಲಿ. ಸೀತೆಯ ಶಾಪದಂತೆ ಫಲ್ಗುಣಿ ನದಿ ಬತ್ತಿಹೋಗಿದೆ. ನದಿಯೊಳಗಿನ ಮರಳನ್ನು ಅಗೆದಾಗಳಷ್ಟೆ ಇಂದಿಗೂ ನೀರು ಬರುತ್ತದೆ. ಫಾಲುಣಿ ನದಿ ತೀರದಲ್ಲಿರುವ ಹಸುಗಳಿಗೆ ಪಿಂಡಗಳೇ ಆಹಾರ. ಅವು ಎಷ್ಟು ಹಸಿದಿರುತ್ತವೆ ಎಂದರೆ ಕೆಲವೊಮ್ಮೆ ಪಿಂಡ ವಿಸರ್ಜನೆಗೂ ಅವಕಾಶ ಕೊಡದೆ ಬಾಯಿ ಹಾಕುತ್ತದೆ. ನಂತರ ಸೀತೆಯ ದೃಷ್ಟಿ ಅರಳೀ ಮರದತ್ತ ಬೀಳುತ್ತದೆ. ಆಕೆ ಪರಮ ಸಂತೋಷದಿಂದ ಆಶೀರ್ವಾದಿಸುತ್ತಾಳೆ. ಅಂದಿನಿಂದ ಅರಳಿಮರ ಬಾಡದೆ ಕಂಗೊಳಿಸುತ್ತದೆ.


## ಸಹಸ್ರಾರು ಶಿಷ್ಯ ಭಕ್ತರಿಗೆ ತಪ್ತಮುದ್ರಾಧಾರಣೆ ಶ್ರೀ ಸುಬುಧೇಂದ್ರ ಶ್ರೀಗಳಿಂದ



• ಉದಯವಾಹಿನಿ, ಬೆಂಗಳೂರು

ಜಯನಗರ 5ನೇ ಬಡಾವಣೆಯ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪ್ರಥಮ ಏಕಾದಶಿ ಪ್ರಯುಕ್ತ ಪರಮಪೂಜ್ಯ ಶ್ರೀ ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರು ಬೆಳಗ್ಗೆ 6:30ಕ್ಕೆ ಶ್ರೀರಾಮದೇವರ ಸಂಸ್ಥಾನ ಪೂಜೆಯನ್ನು ನೆರವೇರಿಸಿ ನಂತರ ಸುವರ್ಣದ ತೊಟ್ಟಿಲಿನಲ್ಲಿ ಶ್ರೀಮನ್ ಮೂಲ ರಾಮದೇವರಿಗೆ ಮಂಗಳಾರತಿಯನ್ನು ನೆರವೇರಿಸಿ ಸುದರ್ಶನ ಹೋಮದೊಂದಿಗೆ ತಪ್ತಮುದ್ರಾಧಾರಣೆಯನ್ನು ತಾವು ಸ್ವೀಕರಿಸಿ, 35,000ಕ್ಕೂ ಮಿಗಿಲಾಗಿ ಸಹಸ್ರಾರು ಶಿಷ್ಯರಿಗೆ ಭಕ್ತರಿಗೆ ಬೆಳಗ್ಗೆ 7:30 ರಿಂದ ರಾತ್ರಿ 10:30ರವರೆಗೂ ಮುದ್ರಾಧಾರಣೆಯನ್ನು ನೆರವೇರಿಸಿದರು. ಬೆಳಗ್ಗೆಯಿಂದ ರಾತ್ರಿಯವರೆಗೆ ನಾಡಿನ ಪ್ರಖ್ಯಾತ ವಿದ್ವಾಂಸರುಗಳಿಂದ ಅಖಂಡ ಭಾಗವತ ಪ್ರವಚನ ಆಯೋಜಿಸಿತ್ತು. ಈ ಎಲ್ಲಾ ಕಾರ್ಯಕ್ರಮಗಳು ಶ್ರೀಮಠದ ಹಿರಿಯ ವ್ಯವಸ್ಥಾಪಕರಾದ ಶ್ರೀ ಆರ್ ಕೆ ವಾದೀಂದ್ರಾಚಾರ್ಯರ ನೇತೃತ್ವದಲ್ಲಿ ಜರುಗಿದವು ಎಂದು ಶ್ರೀ ನಂದಕಿಶೋರ್ ಆಚಾರ್ಯರು ತಿಳಿಸಿದರು. ಈ ಸಂದರ್ಭದಲ್ಲಿ ಮುದ್ರಾಧಾರಣೆ ಸ್ವೀಕರಿಸಲು ಆಗಮಿಸಿದ ಶಿಷ್ಯರಿಗಾಗಿ ಅಚ್ಚುಕಟ್ಟಾದ ವ್ಯವಸ್ಥೆಯನ್ನು ಮಾಡಲಾಗಿತ್ತು. ವಯೋವೃದ್ಧರಿಗೂ, ವಿಕಲಚೇತನರಿಗೂ ಪ್ರತ್ಯೇಕ ವ್ಯವಸ್ಥೆಯೂ ಮಾಡಲಾಗಿತ್ತು. ಈ ವ್ಯವಸ್ಥೆಯನ್ನು ಕಂಡ ಶಿಷ್ಯರು ಭಕ್ತರು ಸಂತೋಷವನ್ನು ವ್ಯಕ್ತಪಡಿಸುತ್ತಾ ಮುದ್ರಾಧಾರಣವನ್ನು ಸ್ವೀಕರಿಸಿ, ಶ್ರೀ ಹರಿವಾಯುಗುರುಗಳ ಅನುಗ್ರಹಕ್ಕೆ ಪಾತ್ರರಾದರು. ಈ ಸಂದರ್ಭದಲ್ಲಿ ಚಿತ್ರನಟಿ ತಾರಾ ಅನುರಾಧ ಮತ್ತು ಚಿತ್ರನಟಿ ಪ್ರೇಮಾರವರು ಚಿತ್ರನಟಿ ಸುಜಾತ ಅಕ್ಷಯ್ ರವರು ಕೂಡ ಮುದ್ರಾಧಾರಣವನ್ನು ಸ್ವೀಕರಿಸಿ ಗುರುಗಳ ಅನುಗ್ರಹಕ್ಕೆ ಪಾತ್ರರಾದರು.

## ಒಳಮೀಸಲಾತಿ ವರದಿ ಶೀಘ್ರಸಲ್ಲಿಸಲು ಆಗ್ರಹ




• ಉದಯವಾಹಿನಿ, ಬೆಂಗಳೂರು

ಒಳಮೀಸಲಾತಿ ಕಲ್ಪಿಸಲು ದತ್ತಾಂಶ ಸಂಗ್ರಹಕ್ಕಾಗಿ ನಡೆದಿರುವ ಸಮೀಕ್ಷೆಯ ವರದಿಯನ್ನು ಶೀಘ್ರದಲ್ಲಿಯೇ ರಾಜ್ಯ ಸರ್ಕಾರಕ್ಕೆ ಸಲ್ಲಿಸಬೇಕು ಎಂದು ಏಕಸದಸ್ಯ ವಿಚಾರಣಾ ಆಯೋಗದ ಅಧ್ಯಕ್ಷ ನ್ಯಾಯಮೂರ್ತಿ ಎಚ್.ಎನ್.

ನಾಗಮೋಹನದಾಸ್ ಅವರಿಗೆ ಮಾದಿಗ ಸಮುದಾಯದ ಮುಖಂಡರು ಮನವಿ ಮಾಡಿದರು.ಮಾಜಿ ಸಚಿವ ಎಚ್. ಆಂಜನೇಯ ನೇತೃತ್ವದ ಮುಖಂಡರ ನಿಯೋಗ ಸೋಮವಾರ ಭೇಟಿ ಮಾಡಿ ಮನವಿ ಸಲ್ಲಿಸಿತು. ರಾಜ್ಯದಲ್ಲಿ ಮಾದಿಗ, ಛಲವಾದಿ ಸಮುದಾಯಗಳ ಜನರು ಆದಿ ಕರ್ನಾಟಕ ಆದಿ ದ್ರಾವಿಡ (ಎ.ಡಿ.), ಆದಿ ಆಂಧ್ರ (ಎ.ಎ) ಎಂದು ಗುರುತಿಸಿಕೊಂಡಿರುವುದರಿಂದ ಯಾರು ಯಾವ ಸಮುದಾಯ ಎಂಬುದನ್ನು ಗುರುತಿಸಲು ಗೊಂದಲ ಉಂಟಾಗಿತ್ತು. ಅದಕ್ಕಾಗಿ ಸಮೀಕ್ಷೆಯ ಮೂಲಕ ಮೂಲ ಜಾತಿಯನ್ನು ನಮೂದಿಸುವಂತೆ ಮಾಡಲಾಗಿದೆ. ಜೊತೆಗೆ ಆರ್ಥಿಕ, ಶೈಕ್ಷಣಿಕ, ಸಾಮಾಜಿಕ ಹಿಂದುಳಿಯುವಿಕೆ ಗುರುತಿಸಲು ಗಣತಿ ಮಾಡಲಾಗಿದೆ. ಈ ಸಮೀಕ್ಷೆ ಪೂರ್ಣಗೊಂಡಿದ್ದು, ದೇಶಕ್ಕೇ ಮಾದರಿಯಾಗಿದೆ. ಆಯೋಗವು ದತ್ತಾಂಶದ ಸಮಗ್ರ ವರದಿಯನ್ನು ಶೀಘ್ರ ರಾಜ್ಯ ಸರ್ಕಾರಕ್ಕೆ ಸಲ್ಲಿಸುವ ಮೂಲಕ ಪರಿಶಿಷ್ಟ ಜಾತಿಯಲ್ಲಿನ ಎಲ್ಲಾ ವರ್ಗಗಳಿಗೆ ಮೀಸಲಾತಿ ಸೌಲಭ್ಯ ಹಂಚಿಕೆ ಮಾಡಲು ಸಹಕರಿಸಬೇಕು ಎಂದು ಕೋರಿದರು.

## ಗುರುಪೂರ್ಣಿಮಾ ಮಹೋತ್ಸವ!



• ಉದಯವಾಹಿನಿ, ಬೆಂಗಳೂರು

**ಗುರು ಶಿಷ್ಯ ಪರಂಪರೆಯ ಮೂಲಕ ಧರ್ಮ ರಕ್ಷಣೆಯ ಕಾರ್ಯ**

ಹಿಂದೂ ಧರ್ಮದ ಅದ್ವಿತೀಯ ಶ್ರೇಷ್ಠ ಪರಂಪರೆಯೆಂದರೆ ಗುರು-ಶಿಷ್ಯ ಪರಂಪರೆಯಾಗಿದೆ ರಾಷ್ಟ್ರ ಮತ್ತು ಧರ್ಮವು ಸಂಕಷ್ಟದಲ್ಲಿರುವಾಗ ಧರ್ಮ ಸಂಸ್ಥಾಪನೆಯ ಮಹಾನ್ ಕಾರ್ಯವನ್ನು ಗುರು-ಶಿಷ್ಯ ಪರಂಪರೆಯು ಮಾಡಿದೆ.

ಹಿಂದೆ ಇತಿಹಾಸದಲ್ಲಿ ಜಗದ್ಗುರು ಭಗವಾನ ಶ್ರೀಕೃಷ್ಣನು ಅರ್ಜುನನ ಮೂಲಕ, ಆರ್ಯ ಚಾಣಕ್ಯನು ಚಂದ್ರಗುಪ್ತ ಮೌರ್ಯನ ಮೂಲಕ, ಕರ್ನಾಟಕದಲ್ಲಿ ವಿದ್ಯಾರಣ್ಯರು ಹಕ್ಕ ಬುಕ್ಕರ ಮೂಲಕ ಮತ್ತು ಸಮರ್ಥ ರಾಮದಾಸರು ಛತ್ರಪತಿ ಶಿವಾಜಿ ಮಹಾರಾಜರ ಮೂಲಕ ಧರ್ಮ ರಕ್ಷಣೆಯ ಕಾರ್ಯವನ್ನು ಮಾಡಿದರು. ಇಂದು ರಾಷ್ಟ್ರ ಮತ್ತು ಧರ್ಮದ ಮೇಲೆ ಆಘಾತಗಳು ನಡೆಯುತ್ತಿದೆ. ಪುನಃ ಗುರು ಶಿಷ್ಯ ಪರಂಪರೆಯ ಮೂಲಕ ಧರ್ಮಾದಿಷ್ಟಿತ ಸನಾತನ ರಾಷ್ಟ್ರದ ನಿರ್ಮಾಣವನ್ನು ಮಾಡಬೇಕಾಗಿದೆ. ಅದಕ್ಕಾಗಿ ಹಿಂದೂ ಜನಜಾಗೃತಿ ಸಮಿತಿಯ ವತಿಯಿಂದ ಈ ಕೆಳಗಿನ ಸ್ಥಳದಲ್ಲಿ ವಿಶೇಷವಾದ ಗುರುಪೂರ್ಣಿಮಾ ಮಹೋತ್ಸವವನ್ನು ಆಯೋಜನೆ ಮಾಡಲಾಗಿದೆ.

**ಕಾರ್ಯಕ್ರಮದ ವಿವರ:** ದಿನಾಂಕ : ಗುರುವಾರ 10 ಜುಲೈ 2025 ಸಂಜೆ : 5.00ಕ್ಕೆ . ಸ್ಥಳ : ಗಂಗಮ್ಮ ತಿಮ್ಮಯ್ಯ ಕನ್ವೆನ್ಷನ್ ಸೆಂಟರ್, ಬಸವೇಶ್ವರ ನಗರ, ಬೆಂಗಳೂರು.


**ವಕ್ತಾರರು:** 1. ಶ್ರೀ. ಪ್ರಮೋದ್ ಮುತಾಲಿಕ್, ಅಧ್ಯಕ್ಷರು, ಶ್ರೀರಾಮ ಸೇನೆ, 2. ಶ್ರೀ. ಗುರುಪ್ರಸಾದ್ ಗೌಡ, ರಾಜ್ಯ ಸಂಯೋಜಕರು, ಹಿಂದೂ ಜನಜಾಗೃತಿ ಸಮಿತಿ, ಕರ್ನಾಟಕ. ಈ ಗುರುಪೌರ್ಣಿಮಾ ಮಹೋತ್ಸವದಲ್ಲಿ ಶ್ರೀ ವ್ಯಾಸಪೂಜೆ, ಹಿಂದೂ ಧರ್ಮದ ರಕ್ಷಣೆ ಕಾರ್ಯ ಮಾಡುವವರಿಗೆ ಸತ್ಕಾರ, ಸ್ವಸಂರಕ್ಷಣೆ ಪ್ರಾತ್ಯಕ್ಷತೆ, ಹಿಂದೂ ಸಮಾಜದ ಸದ್ಯದ ಸ್ಥಿತಿ ಮತ್ತು ಹಿಂದೂ ರಾಷ್ಟ್ರದ ಸ್ಥಾಪನೆಯ ಅವಶ್ಯಕತೆ ವಿಷಯದ ಮೇಲೆ ವಕ್ತಾರರ ಮಾರ್ಗದರ್ಶನ ಇರಲಿದೆ. ಈ ಗುರುಪೂರ್ಣಿಮೆ ಮಹೋತ್ಸವದಲ್ಲಿ ಹಿಂದೂ ಧರ್ಮ, ಹಿಂದೂ ಸಂಸ್ಕೃತಿ, ಅಧ್ಯಾತ್ಮ, ಬಾಲಸಂಸ್ಕಾರ, ಆಚಾರಧರ್ಮ, ಆಯುರ್ವೇದ, ಪ್ರಥಮ ಚಿಕಿತ್ಸೆ ಮುಂತಾದ ವಿಷಯಗಳ ವಿಶೇಷ ಪ್ರದರ್ಶನ, ಗ್ರಂಥ ಪ್ರದರ್ಶನ ಹಾಗೂ ರಾಷ್ಟ್ರ-ಧರ್ಮಕ್ಕೆ ಸಂಬಂಧಿಸಿದ ಫಲಕಗಳನ್ನು ಪ್ರದರ್ಶಿಸಲಾಗುವುದು.

## ಅನ್ನದಾತನಿಗೆ ಆಸರೆಯಾಗುವ ಹವಾಮಾನ ಮುನ್ಸೂಚಕ ಅಪ್ಲಿಕೇಶನ್‌ಗಳು

ಇತ್ತೀಚಿನ ವರ್ಷಗಳಲ್ಲಿ, ಹವಾಮಾನ ಬದಲಾವಣೆಯು ಸುಸ್ಥಿರ ಕೃಷಿಗೆ ದೊಡ್ಡ ಸವಾಲಾಗಿ ಪರಿಣಮಿಸಿದೆ. ಹವಾಮಾನ ಮಾದರಿಗಳು ಹೆಚ್ಚು ಅನಿರೀಕ್ಷಿತವಾಗಿ ಬಿತ್ತನೆ. ನೀರಾವರಿ, ಕೀಟ ನಿಯಂತ್ರಣ ಮತ್ತು ಕೊಯ್ಲು ಕೊಲ್ಲೋತ್ತರ ಚಟುವಟಿಕೆಗಳ ಮೇಲೆ ನೇರವಾಗಿ ಪರಿಣಾಮ ಬೀರುತ್ತಿವೆ. ಹೀಗೆ ಕೃಷಿಯು ಹವಾಮಾನ ಪರಿಸ್ಥಿತಿಗಳ ಮೇಲೆ ಹೆಚ್ಚು ಅವಲಂಬಿತವಾಗಿರುವುದರಿಂದ, ರೈತರು ಮಾಹಿತಿಯುಕ್ತ ನಿರ್ಧಾರಗಳನ್ನು ತೆಗೆದುಕೊಂಡು ಈ ಮೂಲಕ ಕೃಷಿಯ ಅನಿಶ್ಚಿತತೆ ಕಡಿಮೆ ಮಾಡಲು ಸಕಾಲಿಕ ಮತ್ತು ನಿಖರವಾದ ಹವಾಮಾನ ಮಾಹಿತಿಯ ಅಗತ್ಯವಿದೆ.

ಗ್ರಾಮೀಣ ಪ್ರದೇಶಗಳಲ್ಲಿ ಮೊಬೈಲ್ ಮತ್ತು ಇಂಟರ್ನೆಟ್‌ಗಳ ತ್ವರಿತ ವಿಸ್ತರಣೆಯೊಂದಿಗೆ, ರೈತರಿಗೆ ನೈಜ-ಸಮಯದ ಹವಾಮಾನ ಮಾಹಿತಿಗಳನ್ನು ಒದಗಿಸಲು ಹಲವಾರು ಕೃಷಿ ಹವಾಮಾನ ಅಪ್ಲಿಕೇಶನ್‌ಗಳನ್ನು ಅಭಿವೃದ್ಧಿಪಡಿಸಲಾಗಿದೆ.

ಈ ಅಪ್ಲಿಕೇಶನ್‌ಗಳು ಮಳೆ ಮುನ್ಸೂಚನೆ, ತಾಪಮಾನ ಏರಿಳಿತಗಳು, ಗಾಳಿಯ ವೇಗ, ಆದ್ರತೆ, ಗುಡುಗು ಸಹಿತ ಮಳೆ ಮತ್ತು ಶಾಖದ ಅಲೆಗಳಂತಹ ತೀವ್ರ ಹವಾಮಾನ ಘಟನೆಗಳ ಬಗ್ಗೆ ಎಚ್ಚರಿಕೆಯ ಮಾಹಿತಿಯನ್ನು ಒದಗಿಸುತ್ತವೆ. ಇವು ಪ್ರಾದೇಶಿಕ ಭಾಷೆಗಳಲ್ಲಿಯೂ ರೈತರ ಗ್ರಾಮ ಅಥವಾ ಜಿಲ್ಲೆಗೆ ನಿರ್ದಿಷ್ಟವಾದ ಹವಾಮಾನ ಡೇಟಾವನ್ನು ನೀಡುತ್ತವೆ. ಹವಾಮಾನ ಮುನ್ಸೂಚಕ ಅಪ್ಲಿಕೇಶನ್ಗಳು ಕೇವಲ ಮುನ್ಸೂಚನೆಗಾಗಿ ಬಳಸುವ



ಸಾಧನಗಳಾಗಿರದೆ ರೈತರ ನಿರ್ಧಾರಗಳ ಬೆಂಬಲಿಸುವ ವ್ಯವಸ್ಥೆಗಳಾಗಿ ವಿಕಸನಗೊಂಡಿವೆ. ರೈತರು ಕೃಷಿ ಕೆಲಸಗಳನ್ನು ಪರಿಣಾಮಕಾರಿಯಾಗಿ ಯೋಜಿಸಲು. ನಷ್ಟಗಳನ್ನು ಕಡಿಮೆ ಮಾಡಲು ಮತ್ತು ಉತ್ಪಾದಕತೆಯನ್ನು ಸುಧಾರಿಸಲು ಸಹಾಯ ಮಾಡುತ್ತವೆ. ಕೆಲವು ಅಪ್ಲಿಕೇಶನ್‌ಗಳು ತಜ್ಞರ ಸಲಹೆ, ಬೆಳೆ-ನಿರ್ದಿಷ್ಟ ಶಿಫಾರಸುಗಳು ಮತ್ತು ಮಾರುಕಟ್ಟೆ ಸಂಪರ್ಕಗಳನ್ನು ಸಹ ಒದಗಿಸುತ್ತವೆ. ಇದರಲ್ಲಿ ಹೆಚ್ಚು ಉಪಯುಕ್ತವಾದ ಅಪ್ಲಿಕೇಶನ್‌ಗಳ ವಿವರ ಇಲ್ಲಿದೆ.


**ಮೌಸಮ್:** ಐಎಂಡಿ(ಭಾರತ ಹವಾಮಾನ ಇಲಾಖೆ) ಅಭಿವೃದ್ಧಿಪಡಿಸಿರುವ ಇದು, ಐದು ದಿನಗಳ ಮಳೆ, ತಾಪಮಾನ, ಆದ್ರತೆ ಮತ್ತು ಗಾಳಿಯ ವೇಗಗಳ ಕುರಿತು ಜಿಲ್ಲಾವಾರು ಮುನ್ಸೂಚನೆಗಳನ್ನು ನೀಡುತ್ತದೆ. ಇತರೆ ಹವಾಮಾನ ವೈಪರೀತ್ಯಗಳ ಬಗ್ಗೆ ಎಚ್ಚರಿಕೆಗಳನ್ನು ಸಹ ನೀಡುತ್ತದೆ.

ದಾಮಿನಿ: ಈ ಅಪ್ಲಿಕೇಶನ್ ಜಿಪಿಎಸ್ ಮೂಲಕ 20-40 ಕಿ.ಮೀ. ವ್ಯಾಪ್ತಿಯೊಳಗೆ 40 ನಿಮಿಷಗಳ ಮುಂಚಿತವಾಗಿ ಮಿಂಚು ಉಂಟಾಗುವ ಕುರಿತು ಬಳಕೆದಾರರಿಗೆ ಎಚ್ಚರಿಕೆ ನೀಡುತ್ತದೆ.

**ಕಿಸಾನ್ ಸುವಿಧಾ:** ಹವಾಮಾನ. ಮಾರುಕಟ್ಟೆ ಬೆಲೆಗಳು, ತಜ್ಞರ ಸಲಹೆಗಳ ಕುರಿತು ಸಮಗ್ರ ಮಾಹಿತಿಯನ್ನು ನೀಡುತ್ತದೆ. ಇದು ಸರಳ ಇಂಟರ್ಫೇಸ್, ಬಹು ಭಾಷಾ ಆಯ್ಕೆಗಳನ್ನು ಹೊಂದಿದ್ದು, ತಕ್ಕ ಮಟ್ಟಿನ ಸ್ಮಾರ್ಟ್ ಫೋನ್ ಜ್ಞಾನ ಹೊಂದಿರುವ ರೈತರೂ ಉಪಯೋಗಿಸುವಂತಿದೆ.

**ಸ್ಕೈಮೆಟ್ ವೆದರ್**

**ಇದು ವಿವರವಾದ ಹವಾಮಾನ ಮುನ್ಸೂಚನೆಗಳನ್ನು ಒದಗಿಸುತ್ತದೆ. ವಿಶೇಷವಾಗಿ ಮುಂಗಾರು ಮುನ್ಸೂಚನೆ. ಬಿಸಿಗಾಳಿಯ ಕುರಿತು ಮಾಹಿತಿ ಒದಗಿಸುವ ಈ ಅಪ್ಲಿಕೇಶನ್ ಮುಂಬರುವ ಹವಾಮಾನ ಮಾದರಿಗಳ ಆಧಾರದ ಮೇಲೆ ಬೆಳೆ-ನಿರ್ದಿಷ್ಟ ಸಲಹೆಯನ್ನು ನೀಡುತ್ತದೆ. ಈ ಎಲ್ಲಾ ಅಪ್ಲಿಕೇಶನ್‌ಗಳು ಪ್ಲೇ ಸ್ಟೋರ್‌ನಲ್ಲಿ ಲಭ್ಯವಿದ್ದು, ಇದರಲ್ಲಿ ಬಹು ಭಾಷಾ ಆಯ್ಕೆಯನ್ನು ಹೊಂದಿರುವ ಸ್ಕೈಮೆಟ್ ವೆದರ್ ಕನ್ನಡದಲ್ಲೂ ಕೂಡ ಲಭ್ಯವಿದೆ. ಸೀಮಿತ ಡಿಜಿಟಲ್ ಸಾಕ್ಷರತೆ ಇವುಗಳ ಉಪಯೋಗಿಸುವಿಕೆಗೆ ಸವಾಲಾಗಿರುವುದರಿಂದ ರೈತ ಉತ್ಪಾದಕ ಸಂಸ್ಥೆಗಳು (FPO). ಸರ್ಕಾರೇತರ ಸಂಸ್ಥೆಗಳು, ಕೃಷಿ ವಿಜ್ಞಾನ ಕೇಂದ್ರದಗಳು ಇವುಗಳ ಕುರಿತು ಹೆಚ್ಚಿನ ಅರಿವು, ಮಾಹಿತಿ ಮೂಡಿಸುವ ಅವಶ್ಯಕತೆಯಿದೆ. ಜೊತೆಗೆ ಕನ್ನಡದಲ್ಲಿಯೂ ಇವುಗಳ ಲಭ್ಯತೆ ಹೆಚ್ಚಿಸಬೇಕಿದೆ.**



■ ಲಿಖಿತ್ ಬಿ ಹೆಚ್ ಎಂ.ಎಸ್ಸಿ.
■ (ಕೃಷಿ ವಿಸ್ತರಣಾ ಶಿಕ್ಷಣ ಶಾಸ್ತ್ರ)



# ಬಸವಕಲ್ಯಾಣ: ಗುಂಡಿಗಳಿಂದ ಸಂಚಾರಕ್ಕೆ ಹೈರಾಣ

## ಚಾಲಕರಿಗೆ ತಗ್ಗು ಕಾಣಲೆಂದು ಪ್ಲಾಸ್ಟಿಕ್, ಪೇಪರ್ ಇಡುತ್ತಿರುವ ಜನರು

• ಉದಯವಾಹಿನಿ, ಬಸವಕಲ್ಯಾಣ

ನಗರದ ಪ್ರಮುಖ ರಸ್ತೆಗಳಲ್ಲಿ ಹಲವಾರು ಕಡೆ ಆಳವಾದ ತಗ್ಗು ಗುಂಡಿಗಳು ಬಿದ್ದಿದ್ದು ಅಪಾಯಕ್ಕೆ ಆಹ್ವಾನ ನೀಡುತ್ತಿವೆ. ವಾಹನ ಚಾಲಕರಿಗೆ ತಗ್ಗು ಕಾಣಲೆಂದು ಜನರು ಅದರಲ್ಲಿ ಪ್ಲಾಸ್ಟಿಕ್, ಪೇಪರ್ ಇತ್ಯಾದಿ ಇಟ್ಟಿರುವುದು ಕಂಡು ಬಂದಿದೆ. ಮುಖ್ಯವೆಂದರೆ, ಇಲ್ಲಿ ಸಾವಿರಾರು ಲಾರಿಗಳಿದ್ದು 400ಕ್ಕೂ ಅಧಿಕ ಗ್ಯಾರೇಜ್‌ಗಳಿವೆ. ಹೀಗಾಗಿ ಯಾವಾಗಲೂ ಎಲ್ಲೆಡೆ ಭಾರಿ ವಾಹನಗಳು ಸಂಚರಿಸುತ್ತವೆ. ಇದಲ್ಲದೆ ಬಸವಾದಿ ಶರಣರ ನಾಡು ಆಗಿರುವ ಕಾರಣ ನಿತ್ಯ ದೂರದೂರದ ಪ್ರವಾಸಿಗರು ಬರುತ್ತಾರೆ. ಆದರೆ, ಇಷ್ಟೊಂದು ವಾಹನ ಸಂಚಾರಕ್ಕೆ ತಕ್ಕಂತೆ ಇಲ್ಲಿನ ರಸ್ತೆಗಳಿಲ್ಲ. ಸಾಕಷ್ಟು ಅನುದಾನವೂ ಬರುತ್ತಿದ್ದರೂ ಕೆಲ ತಿಂಗಳಲ್ಲಿಯೇ ರಸ್ತೆಗಳು ಹದಗೆಡುವುದು ತೀರ ಸಾಮಾನ್ಯವಾಗಿದೆ.

ರಾಷ್ಟ್ರೀಯ ಹೆದ್ದಾರಿಯಿಂದ ನಗರ ಪ್ರವೇಶಿಸುವ ಸಸ್ತಾಪುರ ಬಂಗ್ಲಾ ಹತ್ತಿರದ ಪ್ರವೇಶ ದ್ವಾರದ ಸಮೀಪದಲ್ಲಿ ಎಲ್ಲಾ ಕಾಲಕ್ಕೂ ನೀರು ಸಂಗ್ರಹಗೊಂಡಿರುವುದು ಕಾಣುತ್ತದೆ. ಇಲ್ಲಿನ ಆಟೋ ನಗರದಲ್ಲಿ ನೂರಾರು ಗ್ಯಾರೇಜ್ ಗಳಿವೆ. ಲಾರಿಗಳ ಓಡಾಟದಿಂದ ರಸ್ತೆ ಹಾಳಾಗುತ್ತದೆ. ಇಲ್ಲಿನ ರಸ್ತೆಯೂ ತೀರ ಇಕ್ಕಟ್ಟಾಗಿದೆ. ಆದರೂ, ರಸ್ತೆ ಪಕ್ಕದಲ್ಲಿಯೇ ವಾಹನಗಳು ನಿಂತಿರುತ್ತವೆ. ಇದರಿಂದಲೂ ಸಂಚಾರಕ್ಕೆ ತೊಂದರೆ ಆಗುತ್ತಿದೆ. ಮಿನಿ ವಿಧಾನಸೌಧದ ಸಮೀಪ, ಡಾ.ಅಂಬೇಡ್ಕರ್ ವೃತ್ತ, ಹರಳಯ್ಯ ವೃತ್ತ, ನಾರಾಯಣಪುರ ಕ್ರಾಸ್, ಮುಖ್ಯ ಬಸ್ ನಿಲ್ದಾಣದ ಮಧ್ಯದಲ್ಲಿರುವ ರಸ್ತೆಯಲ್ಲಿ ತಗ್ಗುಗುಂಡಿಗಳಿವೆ. ನಾರಾಯಣಪುರ ಕ್ರಾಸ್ ದಿಂದ ಶಿವಪುರಕ್ಕೆ ಹೋಗುವರಸ್ತೆಯಲ್ಲಿನ


ಉದಯವಾಹಿನಿ ಚಿತ್ರ

ನಾಗಣ್ಣ ಕಟ್ಟೆವರೆಗಿನ ರಸ್ತೆ ಹದಗೆಟ್ಟು ಅನೇಕ ತಿಂಗಳಾದರೂ ಸಂಬಂಧಿತರು ಕಣ್ಣುಮುಚ್ಚಿ ಕುಳಿತಿದ್ದಾರೆ.

ಮುಖ್ಯವೆಂದರೆ, ನಾರಾಯಣಪುರ ಕ್ರಾಸ್ ದಿಂದ ನಾಗಣ್ಣ ಕಟ್ಟೆವರೆಗೆ ಹೋಗುವ ರಸ್ತೆಯ ಆಚೆಈಚೆ 40ಕ್ಕೂ ಅಧಿಕ ಶಾಲೆಗಳಿವೆ. ಹೀಗಾಗಿ ಬೆಳಿಗ್ಗೆ ಮತ್ತು ಸಂಜೆ ಇಲ್ಲಿ ಜನಜಂಗುಳಿ ಇರುತ್ತದೆ. ಶಾಲಾ ಮಕ್ಕಳ ವಾಹನಗಳು ಇರುವುದರಿಂದ ವಾಹನ ದಟ್ಟಣೆ ಇರುತ್ತದೆ. ಈ ರಸ್ತೆ ಅಗಲಗೊಳಿಸಲು ನಗರಸಭೆಯಿಂದ ಕೆಲ ವರ್ಷಗಳ ಹಿಂದೆಯೇ ಕ್ರಿಯಾ ಯೋಜನೆ ಸಿದ್ಧಪಡಿಸಲಾಗಿತ್ತು.

ಆ ಕೆಲಸ ಇನ್ನುವರೆಗೆ ಆಗಿಲ್ಲ. ಮಳೆ ಬಂದಾಗ ರಸ್ತೆಗಳಲ್ಲಿನ ತಗ್ಗುಗುಂಡಿಗಳಲ್ಲಿ ನೀರು ಸಂಗ್ರಹಗೊಳ್ಳುವ ಕಾರಣ ಹೆಚ್ಚು ತೊಂದರೆ ಆಗುತ್ತಿದೆ. ದ್ವಿಚಕ್ರ ವಾಹನಗಳು ಪಲ್ಟಿ ಆಗುತ್ತಿವೆ. ಕೆಲವೆಡೆಯ ತಗ್ಗುಗಳಲ್ಲಿ ಕೆಂಪು ಮಣ್ಣು ಹರಡಿ ತೆಪೆ ಹಚ್ಚುವ ಕಾರ್ಯವೂ ನಡೆದಿದೆ. ಇದರಿಂದ ಕೆಸರು ಆಗುತ್ತಿರುವುದರಿಂದ ಸಂಚಾರಕ್ಕೆ ಇನ್ನಷ್ಟು ತೊಂದರೆಯಾಗಿದೆ. ತಗ್ಗುಗಳಲ್ಲಿ ಖಡಕ್ ಮಣ್ಣು, ಮರಳು, ಜಲ್ಲಿಕಲ್ಲು ಹಾಕಬಹುದಾಗಿದೆ. ತಾತ್ಕಾಲಿಕವಾಗಿ ಡಾಂಬರು ಸುರಿಯಬಹುದು. ಆದರೆ ಕೆಂಪು ಮಣ್ಣು ಹಾಕಿ ರಸ್ತೆಯೆಲ್ಲ ಕೆಸರು ಆಗುವಂತೆ ಮಾಡುತ್ತಿರುವುದು ಸರಿಯೇ ಎಂಬುದು ಜನರ ಪ್ರಶ್ನೆಯಾಗಿದೆ.

### ನಗರಸಭೆಯಿಂದ ಶೀಘ್ರ ದುರಸ್ತಿ

ನಾರಾಯಣಪುರ ಕ್ರಾಸ್ ದಿಂದ ಶಿವಪುರಕ್ಕೆ ಹೋಗುವ ನಾಗಣ್ಣ ಕಟ್ಟೆವರೆಗಿರುವ ರಸ್ತೆ ಮತ್ತು ತ್ರಿಪುರಾಂತದಿಂದ ಡಾ.ಅಂಬೇಡ್ಕರ್ ವೃತ್ತ ಅಲ್ಲಿಂದ ಉತ್ತರಕ್ಕೆ ಕೋಟೆವರೆಗೆ ಮತ್ತು ಪೂರ್ವಕ್ಕೆ ಮುಖ್ಯ ಬಸ್ ನಿಲ್ದಾಣದವರೆಗೆ ಇರುವ ರಸ್ತೆ ನಗರಸಭೆ ವ್ಯಾಪ್ತಿಗಿದೆ. ಈ ರಸ್ತೆಗಳಲ್ಲಿನ ತಗ್ಗುಗುಂಡಿಗಳನ್ನು ಮುಚ್ಚುವುದಕ್ಕೆ ಶೀಘ್ರ ಕ್ರಮ ಕೈಗೊಳ್ಳಲಾಗುವುದು

-ರಾಜೀವ ಬಣಕಾರ, ನಗರಸಭೆ ಆಯುಕ್ತ

ಇದು ಜಿಲ್ಲೆಯ ಉಪ ವಿಭಾಗದ ಕೇಂದ್ರವಿದ್ದರೂ ಅನಾಥ ಇದ್ದಂತಿದೆ. ಕೆಲವೆಡೆ ಡಾಂಬರು ರಸ್ತೆಯಲ್ಲಿ ಮಣ್ಣು ಹರಡಿ ಅವೈಜ್ಞಾನಿಕವಾಗಿ ಕೆಲಸ ಕೈಗೊಳ್ಳಲಾಗಿದೆ

-ಲಕ್ಷ್ಮೀಪುತ್ರ ನಿಂಬಾಳಕರ್, ವ್ಯಾಪಾರಿ

ನಗರದ ಪ್ರಮುಖ ರಸ್ತೆಗಳಲ್ಲಿ ಹಲವಾರು ಕಡೆ ಅಪಾಯಕಾರಿ ತಗ್ಗುಗುಂಡಿಗಳು ಬಿದ್ದಿದ್ದು ಅವುಗಳ ದುರಸ್ತಿಗೆ ಅನೇಕ ಸಲ ಮನವಿ ಸಲ್ಲಿಸಿದ್ದರೂ ಪ್ರಯೋಜನ ಆಗಿಲ್ಲ

-ಧನರಾಜ ರಾಜೋಳೆ, ಸಾಮಾಜಿಕ ಕಾರ್ಯಕರ್ತ

ಶರಣ ಸ್ಥಳಗಳಿಗೆ ಬರುವ ಪ್ರವಾಸಿಗರಿಗೆ ನಗರ ಪ್ರವೇಶಿಸುವ ಸ್ಥಳದಲ್ಲಿ ಕೆಸರಿನ ಸ್ವಾಗತ ದೊರಕುತ್ತದೆ. ಇಲ್ಲಿನ ಮುಖ್ಯ ದ್ವಾರದಲ್ಲಿ ಯಾವಾಗಲೂ ನೀರು ನಿಂತಿರುತ್ತದೆ

-ಶಾಮ ಹತ್ತೆ, ಸಾಮಾಜಿಕ ಕಾರ್ಯಕರ್ತ


# ಸಾಲಮುಕ್ತ ಸಮಾಜಕ್ಕಾಗಿ ಹೋರಾಟ

• ಉದಯವಾಹಿನಿ, ಆಳಂದ

ಬ್ಯಾಂಕ್, ಮೈಕ್ರೋ ಫೈನಾನ್ಸ್ ಗಳ ಸಾಲದ ಹೊರೆಯಿಂದ ರೈತರೂ, ಕಾರ್ಮಿಕರು, ಸ್ವಯಂ ಉದ್ಯೋಗಿಗಳನ್ನು ಬಿಡುಗಡೆಗೊಳಿಸಲ ಸಿಪಿಐ ಕಾರ್ಮಿಕ ಸಂಘಟನೆಗಳ ನೇತೃತ್ವದಲ್ಲಿ ಹೋರಾಟ ರೂಪಿಸಲಾಗುವುದು ಎಂದು ಸಿಪಿಐ ರಾಜ್ಯ ಸಮಿತಿ ಸದಸ್ಯ ಮೌಲಾ ಮುಲ್ಲಾ ತಿಳಿಸಿದರು. ಪಟ್ಟಣದ ಸಿಪಿಐ ಪಕ್ಷದ ಕಚೇರಿಯಲ್ಲಿ ಭಾನುವಾರ ಮಾತನಾಡಿದ ಅವರು, ದೇಶದಲ್ಲಿ ಶೇ 80 ರಷ್ಟು ಜನರು ಸಾಲದ ಸುಳಿಗೆ ಸಿಲುಕಿದ್ದಾರೆ.

ಮೈಕ್ರೋ ಫೈನಾನ್ಸ್ ಗಳು, ಬ್ಯಾಂಕ್‌ಗಳು ಕಡಿಮೆ ಬಡ್ಡದರದಲ್ಲಿ ನೀಡುವ ಸಾಲವು ಯಾವದೇ ನೆರವಿಗೆ ಬರುತ್ತಿಲ್ಲ. ಸಣ್ಣ ಪ್ರಮಾಣದ ಸಾಲದ ಮೊತ್ತವು ಹೆಚ್ಚಿಸ ಬೇಕು, ಬಡ್ಡಿರಹಿತ ಆರ್ಥಿಕ ನೆರವು ಒದಗಿಸಲು ಆಗ್ರಹಿಸಿ ದೇಶವ್ಯಾಪಿ ಹೋರಾಟ ಕೈಗೊಳ್ಳಲಾಗುವುದು' ಎಂದರು. ಕಿಸಾನ ಸಭಾ ಜಿಲ್ಲಾ ಕಾರ್ಯದರ್ಶಿ ಭೀಮಾಶಂಕರ ಮಾಡಿಯಾಳ ಮಾತನಾಡಿ, ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ರೈತರೂ, ಕಾರ್ಮಿಕರ ಹಿತ ಕಾಪಾಡುವಲ್ಲಿ ವಿಫಲವಾಗಿವೆ. ನೌಕರರು, ಕಾರ್ಮಿಕರಿಗೆ ಕನಿಷ್ಠವೇತನ ಇಲ್ಲ. ಆದರೆ ಕೆಲಸದ ಅವಧಿ ಹೆಚ್ಚಳಕ್ಕೆ ಮುಂದಾಗಿದೆ. ರೈತರು, ಕಾರ್ಮಿಕರ ವಿವಿಧ ಬೇಡಿಕೆಗೆ ಹೋರಾಟ ರೂಪಿಸಲು ಸಮಾವೇಶ ದಿಕ್ಸೂಚಿಯಾಗಲಿದೆ ಎಂದರು.

ತಾಲ್ಲೂಕು ಸಮಾವೇಶ ಸಿದ್ಧತೆ ನಿಮಿತ್ತ ನಿಂಬರ್ಗಾ, ಖಜೂರಿ, ಮಾದನ ಹಿಪ್ಪರಗಿ ವಲಯದ ವಿವಿಧ


ಉದಯವಾಹಿನಿ ಚಿತ್ರ

ಗ್ರಾಮಗಳಲ್ಲಿ ಸಿಪಿಐ ಹಾಗೂ ಕಿಸಾನ ಸಭಾ ಶಾಖೆಗಳ ಪದಾಧಿಕಾರಿಗಳ ನೇಮಕ, ಸಭೆ ನಡೆಸಲಾಯಿತು. ಹೋರಾಟಗಾರ ಕಲ್ಯಾಣಿ ತುಕಾಣೆ, ಪಂಡಿತ ಸಲಗರೆ, ಅಸ್ಪಾಕ್ ಮುಲ್ಲಾ, ದತ್ತಾತ್ರೇಯ ಕಬಾಡೆ, ಶಿರಾಜ್ ಖಾಜಿ, ರಾಜಶೇಖರ ಬಸ್ಮ, ಚಂದ್ರಕಾಂತ ಕೋಬರೆ ಉಪಸ್ಥಿತರಿದ್ದರು.


ಪಿಐ ತಾಲ್ಲೂಕು ಸಮಾವೇಶವು ಜುಲೈ 16ರಂದು ಆಳಂದ ಪಟ್ಟಣದಲ್ಲಿ ಹಮ್ಮಿಕೊಳ್ಳಲಾಗಿದೆ. ಅಂದು ಪಟ್ಟಣದ ಗುರುಭವನದಿಂದ ಶಾಹೀನ್ ಪಂಕ್ಷನ್ ಹಾಲ್ ವರೆಗೆ ಕಾರ್ಯಕರ್ತರ ನೇತೃತ್ವದಲ್ಲಿ ಸಂಘಟನಾ ಜಾಥಾ ಜರುಗಲಿದೆ ಎಂದು ಸಿಪಿಐ ಜಿಲ್ಲಾ ಕಾರ್ಯದರ್ಶಿ ಪ್ರಭುದೇವ ಯಳಸಂಗಿ ತಿಳಿಸಿದರು. ಸಮಾವೇಶವನ್ನು ರಾಜ್ಯ ಕಾರ್ಯದರ್ಶಿ ಬಿ.ಅಮ್ಜದ್ ಉದ್ಘಾಟಿಸಲಿದ್ದು ತಾಲ್ಲೂಕು ಕಾರ್ಯದರ್ಶಿ ಮೈಲಾರಿ ಜೋಗೆ ಅಧ್ಯಕ್ಷತೆ ವಹಿಸಲಿದ್ದಾರೆ. ಜಿಲ್ಲಾ ಕಾರ್ಯದರ್ಶಿ ಮಹೇಶಕುಮಾರ ರಾಠೋಡ ಮೌಲಾ ಮುಲ್ಲಾ ಪ್ರಭುದೇವ ಯಳಸಂಗಿ ಭೀಮಾಶಂಕರ ಮಾಡಿಯಾಳ ಪದ್ಮಾವತಿ ಮಾಲಿಪಾಟೀಲ ಭಾಗವಹಿಸಲಿದ್ದಾರೆ ಎಂದರು.

# ಐವರು ಪತ್ರಕರ್ತರಿಗೆ ತಾಲ್ಲೂಕು ಪ್ರಶಸ್ತಿ

• ಉದಯವಾಹಿನಿ, ಮುದ್ದೇಬಿಹಾಳ

ಕಾರ್ಯನಿರತ ಪತ್ರಕರ್ತರ ಸಂಘ (ಕೆಯುಡಬ್ಲುಜೆ) ಮುದ್ದೇಬಿಹಾಳ ತಾಲ್ಲೂಕು ಘಟಕದಿಂದ ಜುಲೈ 26ರಂದು ಪತ್ರಿಕಾ ದಿನಾಚರಣೆ ಹಾಗೂ ವಾರ್ಷಿಕ ತಾಲ್ಲೂಕು ಮಟ್ಟದ ಉತ್ತಮ ಪತ್ರಕರ್ತ ಪ್ರಶಸ್ತಿ ಪ್ರದಾನ ಸಮಾರಂಭವನ್ನು ವಿಜೃಂಭಣೆಯಿಂದ ಹಮ್ಮಿಕೊಳ್ಳಲಾಗುತ್ತಿದೆ. ಈ ಬಗ್ಗೆ ಸಂಘದ ಅಧ್ಯಕ್ಷ ಮುತ್ತು ವಡವಡಗಿ ಅವರ ಅಧ್ಯಕ್ಷತೆಯಲ್ಲಿ ಸೋಮವಾರ ನಡೆದ ಸರ್ವ ಸದಸ್ಯರ ಸಭೆಯಲ್ಲಿ ನಿರ್ಣಯ ಕೈಗೊಳ್ಳಲಾಯಿತು. ರಾಜಕೀಯ, ಗುತ್ತಿಗೆದಾರರು, ಸಂಘ ಸಂಸ್ಥೆಗಳವರಿಂದ ಯಾವುದೇ ರೀತಿಯ ಚಂದಾ ಸ್ವೀಕರಿಸದೇ, ಸಂಘದ ಪದಾಧಿಕಾರಿಗಳು, ಸದಸ್ಯರು ಸ್ವಯಂಪ್ರೇರಿತವಾಗಿ ಸಮಾರಂಭದ ವಿವಿಧ ಜವಾಬ್ದಾರಿಗಳನ್ನು ಹೊಣೆ ಹೊತ್ತಿದ್ದಾರೆ. ಈ ವಿಶೇಷ ಹಮ್ಮಿಕೆಯಿಂದ ಈ ಬಾರಿಯ ಪತ್ರಿಕಾ ದಿನಾಚರಣೆ ಮಾದರಿಯಾಗಲಿದೆ ಎಂದು ಸಭೆಯಲ್ಲಿ ಅಭಿಪ್ರಾಯ ವ್ಯಕ್ತವಾಯಿತು.

ಜು.26ರಂದು ಬೆಳಿಗ್ಗೆ 9 ಗಂಟೆಗೆ ಆಲಮಟ್ಟಿ ರಸ್ತೆಯ ಅರಿಹಂತ ಚಾರಿಟೇಬಲ್ ಟ್ರಸ್ಟ್ ಕಾಲೇಜು ಆವರಣದಲ್ಲಿ ಕಾರ್ಯಕ್ರಮ ನಡೆಯಲಿದೆ. ಜಿಲ್ಲಾ ಮಟ್ಟದ ಪ್ರಶಸ್ತಿಗೆ ನೂರೇನಬಿ ನದಾಫ ಅವರನ್ನು ಸಂಘವು ಆಯ್ಕೆ ಮಾಡಿದ್ದು, ವಿಜಯಪುರದಲ್ಲಿ


ಉದಯವಾಹಿನಿ ಚಿತ್ರ

ಜು.19ರಂದು ನಡೆಯಲಿರುವ ಜಿಲ್ಲಾ ಮಟ್ಟದ ಪತ್ರಿಕಾ ದಿನಾಚರಣೆ ಸಮಾರಂಭದಲ್ಲಿ ಅವರಿಗೆ ಪ್ರಶಸ್ತಿ ಪ್ರದಾನ ಮಾಡಲಾಗುತ್ತದೆ.

ಸಮಾರಂಭದಲ್ಲಿ ಕೆಯುಡಬ್ಲುಜೆ ವಿಜಯಪುರ ಜಿಲ್ಲಾ ಘಟಕದ ನೂತನ ಅಧ್ಯಕ್ಷ ಪ್ರಕಾಶ ಬೆಣ್ಣೂರ ಅವರಿಗೆ ಸನ್ಮಾನ ನೀಡಲಾಗಿದ್ದು, ಜಿಲ್ಲಾ ಮಟ್ಟದ ಎಲ್ಲಾ ಪದಾಧಿಕಾರಿಗಳನ್ನು ಆಹ್ವಾನಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ಸಭೆಯಲ್ಲಿ ಡಿ.ಬಿ.ವಡವಡಗಿ, ಸಿದ್ದು ಚಲವಾದಿ, ರವೀಂದ್ರ ನಂದೆಪ್ಪನವರ್, ಎಚ್.ಆರ್. ಬಾಗವಾನ್, ಅಮೀನಸಾಬ ಮುಲ್ಲಾ, ನೂರೇನಬಿ ನದಾಫ, ಬಂದೇನವಾಜ್ ಕುಮಸಿ, ಬಸವರಾಜ ಕುಂಬಾರ, ಸಾಗರ ಉಕ್ಕಲಿ, ಪುಂಡಲೀಕ ಮುರಾಳ, ಮಕ್ಬುಲ್ ಬನ್ನೆಟ್ಟಿ, ಮುತ್ತು ಬೀರಗೊಂಡ, ಗುರುರಾಜ ಪತ್ತಾರ, ಕೃಷ್ಣಾ ಕುಂಬಾರ, ಸೂರಜ್ ರಿಸಾಲ್ದಾರ್, ಈಶ್ವರ ಈಳಗೇರ, ಇತರ ಸದಸ್ಯರು ಪಾಲ್ಗೊಂಡು ಸಲಹೆ ಸೂಚನೆ ನೀಡಿದರು.

**ತಾಲ್ಲೂಕು ಪ್ರಶಸ್ತಿಗೆ ಐವರ ಆಯ್ಕೆ:** ಸಭೆಯಲ್ಲಿ ಚರ್ಚೆ ನಡೆದು ತಾಲ್ಲೂಕು ಮಟ್ಟದ ಉತ್ತಮ ಪತ್ರಕರ್ತ ವಾರ್ಷಿಕ ಪ್ರಶಸ್ತಿಗೆ ಯುವ ಪತ್ರಕರ್ತರಾದ ಹಣಮಂತ ಬೀರಗೊಂಡ(ಢವಳಗಿ), ರಿಯಾಜ್ ಮುಲ್ಲಾ, ಮುತ್ತು ಟಕ್ಕಳಕಿ, ಈಶ್ವರ ಈಳಗೇರ(ರೂಢಗಿ) ಮತ್ತು ಕೃಷ್ಣಾ ಕುಂಬಾರ ಅವರನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು.

### ಸರ್ವಾನುಮತದಿಂದ ಆಯ್ಕೆ

ಪತ್ರಿಕೋದ್ಯಮದ ಮೌಲ್ಯ, ಪತ್ರಕರ್ತರ ಕರ್ತವ್ಯಗಳ ಕುರಿತು ಪಿಯುಸಿ, ಪದವಿ, ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ವಿಶೇಷ ಉಪನ್ಯಾಸವನ್ನು ಏರ್ಪಡಿಸಲಾಗುವುದು. ಇದಕ್ಕೂ ಮುಂದೆ, ತಾಲ್ಲೂಕು ಮಟ್ಟದ ಉತ್ತಮ ಪತ್ರಕರ್ತ ಪ್ರಶಸ್ತಿಗೆ ಹಣಮಂತ ಬೀರಗೊಂಡ, ರಿಯಾಜ್ ಮುಲ್ಲಾ, ಮುತ್ತು ಟಕ್ಕಳಕಿ, ಈಶ್ವರ ಈಳಗೇರ, ಕೃಷ್ಣಾ ಕುಂಬಾರ ಅವರನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಗಿದೆ. ಈ ಐವರಿಗೆ ಕಾರ್ಯಕ್ರಮದಲ್ಲಿ ಗೌರವ ನೀಡಲಾಗುವುದು.

# ಮನೆಬಾಗಿಲಿಗೆ ಇ-ಪೌತಿ ಆಂದೋಲನ ಅಭಿಯಾನ: ಡಿಸಿ

• ಉದಯವಾಹಿನಿ, ಬಳ್ಳಾರಿ



### ಸರಕಾರಿ ಸೌಲಭ್ಯ ಸಿಗಲ್ಲ

ಮೃತಪಟ್ಟ ರೈತರ ಹೆಸರಿನಲ್ಲಿರುವ ಜಮೀನು ಇ-ಪೌತಿ ಮಾಡಿಸಿಕೊಳ್ಳದೇ ಹಾಗೆಯೇ ಬಿಟ್ಟರೇ ಆ ಕುಟುಂಬ ಸರಕಾರದ ಸೌಲಭ್ಯಗಳಿಂದ ವಂಚಿತವಾಗಲಿದೆ. ಪಿಎಂ ಕಿಸಾನ್ ಸಮ್ಮಾನ, ಫಸಲ್ ವಿಮಾ ಯೋಜನೆ ಸೇರಿ ಹಲವು ಸರಕಾರಿ ಸೌಲಭ್ಯಗಳು ಕಳೆದುಕೊಳ್ಳಬೇಕಾಗುತ್ತದೆ. ಹೀಗಾಗಿ ಸಂಬಂಧಪಟ್ಟ ಕುಟುಂಬದ ವಾರಸುದಾರರು ಇ-ಪೌತಿ ಆಂದೋಲನದಲ್ಲಿ ಭಾಗವಹಿಸಿ ತಮ್ಮ ಜಮೀನನ್ನು ವರ್ಗಾಯಿಸಿಕೊಳ್ಳಲು ಅವಕಾಶವಿದೆ. ಹೀಗಾಗಿ ರೈತರು ಯಾವುದೇ ಕಾರಣಕ್ಕೂ ಇದನ್ನು ತಪ್ಪಿಸಿಕೊಳ್ಳಬೇಡಿ ಎಂದು ಜಿಲ್ಲಾಧಿಕಾರಿಗಳು ಮನವಿ ಮಾಡಿದ್ದಾರೆ.

ರೈತರು ತಮ್ಮ ಜಮೀನುಗಳನ್ನು ಪೌತಿ ಮಾಡಿಸಿಕೊಳ್ಳಲು ಇನ್ಮುಂದೆ ಕಂದಾಯ ಇಲಾಖೆ ಕಚೇರಿವರೆಗೂ ಅಲೆಯಬೇಕಿಲ್ಲ. ಸರಕಾರವೇ ಇ-ಪೌತಿ ಆಂದೋಲನದ ಮೂಲಕ ನಿಮ್ಮ ಮನೆ ಬಾಗಿಲಿಗೆ ಬರಲಿದೆ ಇದರ ಸದುಪಯೋಗಪಡೆಸಿಕೊಳ್ಳುವಂತೆ ಜಿಲ್ಲಾಧಿಕಾರಿ ಪ್ರಶಾಂತ್‌ಕುಮಾರ್ ಮಿಶ್ರಾ ಅವರು ಮನವಿ ಮಾಡಿದ್ದಾರೆ.

ಜಿಲ್ಲೆಯಲ್ಲಿ ಮೃತಪಟ್ಟ ಜಮೀನು ಮಾಲೀಕರ ಹೆಸರಿನಲ್ಲಿರುವ ಪಹಣಿಗಳನ್ನು ವಾರಸುದಾರರ ಹೆಸರಿಗೆ ನೋಂದಣಿ ಮಾಡಿಕೊಡಲು ಈ ಹಿಂದಿನಿಂದಲೂ ಅಭಿಯಾನಗಳು ನಡೆದಿವೆ. ಹೋಬಳಿ, ಗ್ರಾಮ ಮಟ್ಟದಲ್ಲಿ ಅಭಿಯಾನ ನಡೆದಿವೆ. ಆದರೂ ಇನ್ನು ಕೆಲವು ಪ್ರಕರಣ ಬಾಕಿ ಇದ್ದು, ಕಂದಾಯ ಇಲಾಖೆ ಸಚಿವರ ನಿರ್ದೇಶನದ ಮೇರೆಗೆ ಮನೆ ಬಾಗಿಲಿಗೆ ಕಂದಾಯ ಸೇವೆಗಳ 'ಇ-ಪೌತಿ' ಆಂದೋಲನ ಆರಂಭಿಸಲಾಗಿದೆ. ಈ ಯೋಜನೆಯಡಿ ಕಂದಾಯ ನಿರೀಕ್ಷಕರು, ಗ್ರಾಮ ಅಭಿವೃದ್ಧಿ ಅಧಿಕಾರಿಗಳು ರೈತರ ಮನೆ ಬಾಗಿಲಿಗೆ ತೆರಳಿ, ವಾರಸುದಾರರಿಗೆ ಮೊಬೈಲ್ ಮೂಲಕ ಪೌತಿ ಖಾತೆಯನ್ನು ನೋಂದಾಯಿಸಲಿದ್ದಾರೆ. ಈ ಪ್ರಕ್ರಿಯೆಯಲ್ಲಿ ಆಧಾರ್ ಸೀಡಿಂಗ್‌ನ ಮೂಲಕ ಭೂಮಿ ಹಿಡುವಳಿಯ ನಿಖರ ಮಾಹಿತಿಯನ್ನು ಸಂಗ್ರಹಿಸಲಾಗುತ್ತದೆ ಎಂದು ಹೇಳಿದ್ದಾರೆ.

ಜಿಲ್ಲೆಯಲ್ಲಿ ಮೃತಪಟ್ಟ 75,000 ಜಮೀನುಗಳ ಮಾಲೀಕರ ಪಹಣಿಗಳನ್ನು ವಾರಸುದಾರರ ಹೆಸರಿಗೆ ನೋಂದಣಿ ಮಾಡಿಕೊಡಲು ಇ-ಪೌತಿ ಆಂದೋಲನವನ್ನು ಆರಂಭಿಸಿದೆ. ಆಧಾರ್ ಜೋಡಣೆಯಿಂದ ಕೃಷಿ ಭೂಮಿಯ ಪ್ರಮಾಣ, ರೈತರ ಭೂ ಹಿಡುವಳಿ, ಮತ್ತು ಸಣ್ಣ ಹಾಗೂ ಅತಿ ಸಣ್ಣ ರೈತರ ಸಂಖ್ಯೆಯ ಬಗ್ಗೆ ನಿಖರ ಅಂಕಿ-ಅಂಶಗಳು ಲಭ್ಯವಾಗಲಿವೆ ಎಂದಿದ್ದಾರೆ.

# ಪತ್ನಿ ಕೊಂದವನಿಗೆ ಜೀವಾವಧಿ ಶಿಕ್ಷೆ

• ಉದಯವಾಹಿನಿ, ಕಲಬುರಗಿ

ಕುಡಿಯಲು ಹಣ ಕೊಡದ ಪತ್ನಿಯ ಮೇಲೆ ಹಲ್ಲೆ ಮಾಡಿ ಕೊಲೆ ಮಾಡಿದ್ದ ಆರೋಪ ಸಾಬೀತಾಗಿದ್ದರಿಂದ ಜೇವರ್ಗಿ ತಾಲ್ಲೂಕಿನ ಕುರನಳ್ಳಿ ಗ್ರಾಮದ ಮಹಾಂತಪ್ಪ ನಿಂಗಪ್ಪ ದೊಡ್ಡಮನಿ ಎಂಬಾತನಿಗೆ ನಗರದ 5ನೇ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯ ಜೀವಾವಧಿ ಶಿಕ್ಷೆ, 50 ಸಾವಿರ ದಂಡ ವಿಧಿಸಿ ಆದೇಶ ಹೊರಡಿಸಿದೆ.

ಕುರನಳ್ಳಿ ಗ್ರಾಮದ ಮಲ್ಲಪ್ಪ ಕಟ್ಟಿಮನಿ ಎಂಬುವವರ ಮಗಳು ಸಂಗೀತಾ ಎಂಬುವವರನ್ನು 10 ವರ್ಷಗಳ ಹಿಂದೆ ಮಹಾಂತಪ್ಪ ಮದುವೆ ಆಗಿದ್ದ, ದಂಪತಿಗೆ ಇಬ್ಬರು ಮಕ್ಕಳಿದ್ದಾರೆ. ಅಪರಾಧಿ ಮಹಾಂತಪ್ಪ ಮದ್ಯ ವ್ಯಸನಿಯಾಗಿದ್ದ. ಅಲ್ಲದೇ, ದುಡಿಯಲು ಹೋಗುತ್ತಿರಲಿಲ್ಲ. ಮದ್ಯಕ್ಕೆ ಹಣ ಕೊಡುವಂತೆ ಹೆಂಡತಿಗೆ ಸದಾ ಪೀಡಿಸುತ್ತಿದ್ದ. 2023ರ ಡಿಸೆಂಬರ್ 26ರಂದು ಸಂಜೆ ಮದ್ಯ ಕುಡಿಯಲು ಹಣ ನೀಡುವಂತೆ ಕೇಳಿದ್ದಾನೆ. ಆಕೆ ಹಣ ಕೊಡದಿದ್ದಾಗ ಸಿಟ್ಟಿಗೆದ್ದು ಕೊಡಲಿಯಿಂದ ತಲೆಯ ಹಿಂಭಾಗಕ್ಕೆ ಹೊಡೆದಿದ್ದಾನೆ. ತೀವ್ರ ಗಾಯಗೊಂಡಿದ್ದ ಸಂಗೀತಾ ಕೊನೆಯುಸಿರೆಳೆದರು. ಜಗಳ ಬಿಡಿಸಲು ಬಂದ ಮಗನಿಗೂ ಮಹಾಂತಪ್ಪ ಕಾಲಿನಿಂದ ಒದ್ದು ಓಡಿಸಿದ್ದ. ಸಂಗೀತಾ ತಂದೆ ಮಲ್ಲಪ್ಪ ಅವರು ನೀಡಿದ ದೂರಿನ ಮೇರೆಗೆ ನೆಲೋಗಿ ಠಾಣೆಯ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದರು.

ತನಿಖಾಧಿಕಾರಿಗಳಾದ ಪಿಎಸ್‌ಐ ಜ್ಯೋತಿ ಹಾಗೂ ಸಿಪಿಐ ರಾಜೇಸಾಬ್ ನದಾಫ ಅವರು ತನಿಖೆ ನಡೆಸಿ ನ್ಯಾಯಾಲಯಕ್ಕೆ ದೋಷಾರೋಪ ಪಟ್ಟಿ ಸಲ್ಲಿಸಿದ್ದರು. ಪ್ರಕರಣದ ವಾದ, ಪ್ರತಿವಾದ ಆಲಿಸಿದ ನ್ಯಾಯಾಧೀಶ ಮಹ್ಮದ್ ಮುಜೀರ್ ಉಲ್ಲಾ ಅವರು ಅಪರಾಧಿಗೆ ಜೀವಾವಧಿ ಶಿಕ್ಷೆ, 50 ಸಾವಿರ ದಂಡ ವಿಧಿಸಿದರು. ಸರ್ಕಾರಿ ಅಭಿಯೋಜಕ ಹಯ್ಯಾಳಪ್ಪ ಎನ್. ಬಳಬಟ್ಟಿ ವಾದ ಮಂಡಿಸಿದ್ದರು.

# ಮದುವೆಗಳಲ್ಲಿ ದುಂದುವೆಚ್ಚಕ್ಕೆ ಕಡಿವಾಣ ಹಾಕಿ

• ಉದಯವಾಹಿನಿ, ಚಿತ್ರದುರ್ಗ

ಮದುವೆಗಳಲ್ಲಿ ಅನೇಕರು ದುಂದುವೆಚ್ಚ ಮಾಡುತ್ತಾರೆ. ಇಂತಹ ವೆಚ್ಚಗಳಿಗೆ ಕಡಿವಾಣ ಹಾಕಬೇಕಿದೆ' ಎಂದು ಎಸ್‌ಜೆಎಂ ವಿದ್ಯಾಪೀಠದ ಆಡಳಿತ ಮಂಡಳಿ ಸದಸ್ಯ ಬಸವಕುಮಾರ ಸ್ವಾಮೀಜಿ ತಿಳಿಸಿದರು. ನಗರದ ಮುರುಘಾ ಮಠದಲ್ಲಿ ಆಯೋಜಿಸಿದ್ದ 35ನೇ ವರ್ಷದ ಏಳನೇ ತಿಂಗಳ ಸಾಮೂಹಿಕ ಕಲ್ಯಾಣ ಮಹೋತ್ಸವದಲ್ಲಿ ಮಾತನಾಡಿದ ಅವರು, ನವಜೋಡಿಗಳು ಒಬ್ಬರನ್ನೊಬ್ಬರು ಅರ್ಥ ಮಾಡಿಕೊಂಡು ಜೀವನ ಸಾಗಿಸಬೇಕು. ಬಸವಾದಿ ಶರಣರ ಆಶೀರ್ವಾದ ನಿಮ್ಮ ಮೇಲೆ ಯಾವಾಗಲೂ ಇರುತ್ತದೆ ಎಂದು ಹೇಳಿದರು. ಆರಂಭದಲ್ಲಿ ಶ್ರೀಮಠದಲ್ಲಿರುವ ಸೇವಕರ ಮದುವೆಗಳು ಪ್ರಾರಂಭವಾದವು. ಅಮಾವಾಸ್ಯೆ, ಆಷಾಢ, ಶೂನ್ಯಮಾಸಗಳಲ್ಲಿ ಮದುವೆ ಆದವರ ಮೊಮ್ಮಕ್ಕಳೂ ಇಲ್ಲಿ ಮದುವೆಯಾಗಿ ಸುಖವಾಗಿದ್ದಾರೆ. ಸರಳ ವಿವಾಹವೇ ಆದರ್ಶ ಎಂದರು.

ನಮ್ಮಲ್ಲಿ ಶುಭ ಅಶುಭ ಎಂಬುದು ಬರುವುದಿಲ್ಲ.



ನಮ್ಮ ಮನಸ್ಥಿತಿಗಳು ಶುದ್ಧವಾಗಿದ್ದಾಗ ಮಾತ್ರ ಯಾವ ಅಡೆತಡೆಗಳು ಇರುವುದಿಲ್ಲ. ಅದ್ದೂರಿ ಮದುವೆಗಳಿಗೆ ಕಡಿವಾಣ ಹಾಕಬೇಕು. ನಮ್ಮ ದುಡಿಮೆಯ ಹಣವನ್ನು ನಮ್ಮ ಜೀವನಕ್ಕೆ ಇಟ್ಟುಕೊಳ್ಳಬೇಕು. ಅನವಶ್ಯಕವಾಗಿ ಖರ್ಚು ಮಾಡಬೇಡಿ ಎಂದು ಎಸ್‌ಜೆಎಂ ವಿದ್ಯಾಪೀಠದ ಆಡಳಿತ ಮಂಡಳಿ ಸದಸ್ಯ ಎಸ್.ಎನ್. ಚಂದ್ರಶೇಖರ್ ತಿಳಿಸಿದರು. ತುಂಬಿದುದು ತುಳುಕದು ನೋಡಾ ಎನ್ನುವ ಹಾಗೆ ಸಂಸಾರ ತುಂಬಿದ ಕೊಡವಾಗಬೇಕು. ಇಂದಿನ ನವ ವಧು-ವರರು ಸಂಸಾರ ಎನ್ನುವ ಕೊಡದಲ್ಲಿ ಇಳಿಯಬೇಕು. ಅದು ಪ್ರೀತಿ, ನಂಬಿಕೆ, ವಿಶ್ವಾಸ, ಹೊಂದಾಣಿಕೆಗಳಿಂದ ತುಂಬಿರಬೇಕು ಎಂದು ದಾವಣಗೆರೆ ವಿರಕ್ತಮಠದ ಬಸವಪ್ರಭು ಸ್ವಾಮೀಜಿ ಹೇಳಿದರು.

# ಗಣೇಶ ಮೂರ್ತಿಗೆ ಕಾಲಿನಿಂದ ಒದ್ದ ಕಿಡಿಗೇಡಿಗಳಿಬ್ಬರ ಬಂಧನ

• ಉದಯವಾಹಿನಿ, ಶಿವಮೊಗ್ಗ

ನಗರದ ಬಂಗಾರಪ್ಪ ಬಡಾವಣೆಯಲ್ಲಿ ಗಣೇಶನ ಮೂರ್ತಿಗೆ ಕಾಲಿನಿಂದ ಒದ್ದು, ಅಲ್ಲಿದ್ದ ನಾಗನ ವಿಗ್ರಹ ಚರಂಡಿಗೆ ಎಸೆದು ಅಪಮಾನ ಮಾಡಿದ ಪ್ರಕರಣಕ್ಕೆ ಸಂಬಂಧಪಟ್ಟಂತೆ ಇಬಬರು ಕಿಡಿಗೇಡಿಗಳನ್ನು ಪೊಲೀಸರು ಬಂಧಿಸಿದ್ದಾರೆ. ರೆಹಮತ್‌ವುಲ್ಲಾ, ಸದ್ದಾಂನನ್ನು ಬಂಧಿಸಿ ಆರೋಪಿಗಳಾಗಿದ್ದು, ಇಬ್ಬರನ್ನೂ ತೀವ್ರ ವಿಚಾರಣೆಗೊಳಪಡಿಸಿದೆ. ಮುನ್ನೆಚ್ಚರಿಕೆಯಿಂದ ಘಟನಾ ಸ್ಥಳದಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಕೈಗೊಳ್ಳಲಾಗಿದೆ. ಕಿಡಿಗೇಡಿ ಮಾಡಿದ ಉದ್ಧಟತನದಿಂದಾಗಿ ಕೆಲಕಾಲ ಗೊಂದಲದ ಪರಿಸ್ಥಿತಿ ನಿರ್ಮಾಣವಾಗಿತ್ತು. ಸಕಾಲಕ್ಕೆ ಬಂದ ಪೊಲೀಸರು ಪರಿಸ್ಥಿತಿ ತಿಳಿಗೊಳಿಸಿದಾರೆ. ಬಂಗಾರಪ್ಪ ಬಡಾವಣೆಯ ಮುಖ್ಯ ರಸ್ತೆಯ ಬಳಿಯ ಪಾರ್ಕ್ ನಲ್ಲಿ ಗಣೇಶನ ಮೂರ್ತಿ ಹಾಗೂ ನಾಗನ ಮೂರ್ತಿಯನ್ನು ಪ್ರತಿಷ್ಠಾಪಿಸಲಾಗಿತ್ತು. ಆದರೆ ನಿನ್ನೆ ಸಂಜೆ ಇಬ್ಬರು ಅನ್ಯಕೋಮಿನ ಯುವಕರು


ಉದಯವಾಹಿನಿ ಚಿತ್ರ

ಗಣೇಶನ ಮೂರ್ತಿಗೆ ಕಾಲಿನಿಂದ ಒದ್ದು ಹಾಗೂ ಅಲ್ಲೇ ಇದ್ದ ನಾಗನ ವಿಗ್ರಹ ಚರಂಡಿಗೆ ಎಸೆದು ಪರಾರಿಯಾಗಿದ್ದರು.

ಈ ಸಂಬಂಧ ಶಿವಮೊಗ್ಗ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿತ್ತು, ಅದರಂತೆ ಇದೀಗ ಇಬ್ಬರು ಯುವಕರನ್ನು ಪೊಲೀಸರು ಬಂಧಿಸಿ ವಿಚಾರಣೆ ನಡೆಸುತ್ತಿದ್ದಾರೆ. ಈ ಘಟನೆ ಸಂಬಂಧ ಪ್ರದೇಶದ ಜನ ಆಕ್ರೋಶ ಹೊರ ಹಾಕಿದ್ದರು. ಪಕ್ಕದಲ್ಲೇ ನಿರ್ಮಾಣ ಹಂತದ ಕಟ್ಟಡಕ್ಕೆ ಬಂದಿದ್ದ ವ್ಯಕ್ತಿಯೊಬ್ಬ ವಿಗ್ರಹಗಳಿಗೆ ಅಪಮಾನ ಮಾಡಿದ್ದನು, ಆಗ ಸ್ಥಳೀಯರ ಜತೆ ಮಾತಿನ ಚಕಮಕಿ ಮಾಡಿರೋದು ಸ್ಥಳೀಯರು ತಮ್ಮ ಮೊಬೈಲ್‌ನಲ್ಲಿ ಸೆರೆ ಹಿಡಿದಿದ್ದಾರೆ. ಸ್ಥಳದಲ್ಲಿ ಬಿಗುವಿನ ವಾತಾವರಣ ನಿರ್ಮಾಣವಾಗ್ತಿದ್ದಂತೆಯೇ ಸ್ಥಳಕ್ಕೆ ಎಸ್‌ಪಿ ಮಿಥುನ್‌ಕುಮಾರ್ ಧಾವಿಸಿ ಆರೋಪಿಗಳ ವಿರುದ್ಧ ಕಠಿಣ ಕ್ರಮದ ಭರವಸೆ ನೀಡಿದ್ದರು.

ಯಾವಾಗ ಸ್ಥಳೀಯರು ಆರೋಪಿಯನ್ನು ತರಾಟೆಗೆ ತೆಗೆದುಕೊಂಡಿದ್ದಾರೆ. ಆಗ ವಿಗ್ರಹಗಳನ್ನು ಮೊದಲಿದ್ದ ಸ್ಥಳದಲ್ಲೇ ಇರಿಸಿದ್ದಾನೆ, ಈ ಪ್ರದೇಶದಲ್ಲಿ ಎಲ್ಲಾ ವರ್ಗದವರು, ಜಾತಿ-ಧರ್ಮದವರು ಒಟ್ಟಾಗಿ ಬದುಕುತ್ತಿದ್ದಾರೆ. ಹೊರಗಿನಿಂದ ಬಂದ ವ್ಯಕ್ತಿಯೇ ಈ ಕೃತ್ಯ ಎಸಗಿದ್ದಾನೆ ಎಂದು ಸ್ಥಳೀಯರು ಆರೋಪಿಸಿದ್ದಾರೆ. ಇನ್ನು, ಈ ಬಗ್ಗೆ ಮಾಹಿತಿ ತಿಳಿಯುತ್ತಿದ್ದಂತೆಯೇ ಸ್ಥಳಕ್ಕೆ ಶಿವಮೊಗ್ಗ ನಗರ ಬಿಜೆಪಿ ಶಾಸಕ ಚನ್ನಬಸಪ್ಪ ಭೇಟಿ ನೀಡಿ ಆರೋಪಿ ವಿರುದ್ಧ ಕ್ರಮಕೈಗೊಳ್ಳಬೇಕು ಇಲ್ಲಿ ಕಾನೂನುಬಾಹಿರವಾಗಿ ಕಟ್ಟಡ ಕಟ್ಟುತ್ತಿರುವ ವ್ಯಕ್ತಿ ಮೇಲೂ ಪಾಲಿಕೆ ಕ್ರಮ ಜರುಗಿಸಬೇಕು ಎಂದು ಆಗ್ರಹಿಸಿದ್ದರು. ಪೊಲೀಸರು ಇಬ್ಬರು ಆರೋಪಿಗಳನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದ್ದಾರೆ.


## ರೈತರ ಕುಷಿ ಮಣ್ಣು ಮಾಡಿದ 'ಮಳೆರಾಯ' ಕೊಳೆರೋಗದ ಹೊಡೆತ –ಇಳುವರಿ ಕಡಿತ

# ಮಳೆರಾಯನ ಅಬ್ಬರ ಜುಲೈ ಆದಿಯಲ್ಲೂ ಕಡಿಮೆಯಾಗಿಲ್ಲ

• ಉದಯವಾಹಿನಿ, ಪುತ್ತೂರು

ಅಡಿಕೆ ತೋಟಗಳಿಗೆ ಹೋಗಲು ಮನಸ್ಸಿಲ್ಲ. ಅಲ್ಲಿ ರಾಶಿ ರಾಶಿ ಬಿದ್ದಿರುವ ಎಳೆಯ ಅಡಿಕೆಗಳನ್ನು ನೋಡುವ ಮನಸ್ಥಿತಿ ಇಲ್ಲ. ಕೊಳೆರೋಗ ಬಾಧಿಸುತ್ತಿದ್ದರೂ ಔಷಧ ಸಿಂಪಡಣೆ ಮಾಡುವಂತಿಲ್ಲ. ರೈತವರ್ಗದ ಕಣ್ಣೀರಿಗೆ ಬೇರೆ ಏನೂ ಬೇಕಾಗಿಲ್ಲ. ಬದುಕು ಕಟ್ಟಿಕೊಳ್ಳಲು ಹೋರಾಟ ನಡೆಸುತ್ತಿರುವ ರೈತವರ್ಗಕ್ಕೆ ಈ ಬಾರಿ ವರುಣ ದೊಡ್ಡ ಹೊಡೆತ ನೀಡುತ್ತಿದ್ದಾನೆ. ಜಿಲ್ಲೆಯ ಆರ್ಥಿಕ ಶಕ್ತಿಯ ಮೂಲವಾಗಿರುವ ಅಡಿಕೆ ಬೆಳೆಗೆ ನಿರಂತರವಾಗಿ ಸುರಿಯುತ್ತಿರುವ ಮಳೆ ದೊಡ್ಡ ಅಪಾಯವನ್ನು ತಂದೊಡ್ಡಿದೆ.

ಮೇ ತಿಂಗಳ ಮಧ್ಯದಲ್ಲಿಯೇ ಆರಂಭವಾದ ಈ ಬಾರಿಯ ಮಳೆರಾಯನ ಅಬ್ಬರ ಜುಲೈ ಆದಿಯಲ್ಲೂ ಕಡಿಮೆಯಾಗಿಲ್ಲ. ಸಾಮಾನ್ಯವಾಗಿ ಅಡಿಕೆ ಬೆಳೆಗೆ ಮೇ ತಿಂಗಳು ಮತ್ತು ಜೂನ್ ತಿಂಗಳ ಮೊದಲ ದಿನಗಳಲ್ಲಿ ಮೊದಲ ಹಂತದ ಬೋರ್ಡೋದ್ರಾವಣ ಸಿಂಪಡಣೆ ನಡೆಯುತ್ತಿತ್ತು. ಆದರೆ ಈ ಬಾರಿ ಅದಕ್ಕೆ ಅವಕಾಶವೇ ಸಿಕ್ಕಿಲ್ಲ. ಮಳೆರಾಯನ ಮೊದಲ ಅಬ್ಬರವೇ 10 ದಿನಗಳ ನಡೆದಿತ್ತು. ಬಳಿಕ ಮೂರ್‍ನಾಲ್ಕು ದಿನಗಳ ಅಲ್ಪ ಅಂತರ ಕೊಟ್ಟ ವರುಣ ಮತ್ತೆ ನಿರಂತರವಾಗಿ ಸುರಿಯಲಾರಂಭಿಸಿದ್ದಾನೆ. ಈ ಹಂತದಲ್ಲಿ ಮೊದಲ ಬಾರಿಯ ಔಷಧ ಸಿಂಪಡಣೆ ಮಾಡಲು ಸಾಧ್ಯವಾಗಲೇ ಇಲ್ಲ.


ಉದಯವಾಹಿನಿ ಚಿತ್ರ

**ವರುಣ ಮತ್ತೆ ನಿರಂತರ**

ಕೊಳೆರೋಗ ಈಗಾಗಲೇ ಆವರಿಸಿಕೊಂಡು ರೈತನ ಬದುಕನ್ನು ಮೂರಾಬಟ್ಟೆ ಮಾಡುವ ಸ್ಥಿತಿ ನಿರ್ಮಾಣವಾಗಿದೆ. ಕಳೆದ ವರ್ಷ ಹವಾಮಾನದ ವೈಪರೀತ್ಯ ಪರಿಸ್ಥಿತಿಯಲ್ಲಿ ಹೆಚ್ಚಿದ ಶಾಖದ ಪರಿಣಾಮ ಅಡಿಕೆ ಪಿಂಗಾರಗಳ ಸಹಿತ ಅಡಿಕೆ ಮರಗಳೇ ನಾಶವಾಗಿದ್ದವು. ದಾಖಲೆಯ ನೆಲೆಯಲ್ಲಿ ಇಳುವರಿ ಪಾತಾಳ ಕಂಡಿತ್ತು. ಈ ಬಾರಿ ಫಸಲು ಚೆನ್ನಾಗಿತ್ತು ಎಂದು ರೈತ ಕುಷಿ ಪಡುವ ಹಂತದಲ್ಲಿ ಮಳೆರಾಯ ನೀಡುತ್ತಿರುವ ಆಘಾತ ರೈತನ ಕುಷಿಯನ್ನು ಮಣ್ಣು ಮಾಡಿದೆ. ಅಡಿಕೆ ಕೃಷಿಕನ ಪಾಲಿಗೆ ಇದೀಗ ಎರಡನೇ ವರ್ಷದ ಪೆಟ್ಟು ಬೀಳುತ್ತಿದೆ. ಕಳೆದ ವರ್ಷ ಜಿಲ್ಲೆಯ ರೈತನ ಪಾಲಿಗೆ ಶೇ20ರಷ್ಟು ಮಾತ್ರ ಅಡಿಕೆ ಲಭಿಸಿತ್ತು. ಉಳಿದ ಶೇ.80ರಷ್ಟು ಅಡಿಕೆ ನಾಶವಾಗಿತ್ತು. ಆದರೂ ಹೇಗೋ ಬದುಕು ಸಾಗಿಸಿದ ರೈತವರ್ಗಕ್ಕೆ ಈ ಬಾರಿ ಮತ್ತೆ ಅದೇ ಸ್ಥಿತಿ ನಿರ್ಮಾಣವಾಗುತ್ತಿದೆ ಎಂಬುವುದನ್ನು ಸಹಿಸಲಾಗುತ್ತಿಲ್ಲ. ತಲೆ ಮೇಲೆ ಕೈಹೊತ್ತು ಅಳುವುದನ್ನು ಬಿಟ್ಟರೆ ಬೇರೆ ದಾರಿಯೂ ಇಲ್ಲ.

ಮಳೆರಾಯ ಅತ್ಯಲ್ಪ ಕಾಲದ ಅಂತರ ಕೊಟ್ಟ ಸಂದರ್ಭದಲ್ಲಿ ಶೇ.10 ರೈತರು ತಮ್ಮ ಮೊದಲ ಹಂತದ ಔಷಧಿ ಸಿಂಪಡಣೆ ಮಾಡಿದ್ದರು. ಉಳಿದ ಯಾವ ರೈತನಿಗೂ ಔಷಧಿ ಸಿಂಪಡಣೆ ಮಾಡಲು ಸಾಧ್ಯವಾಗಲೇ ಇಲ್ಲ. ಮೊದಲ ಹಂತದ ಔಷಧಿ ಸಿಂಪಡಣೆ ಮಾಡಿದ ರೈತರು ಸಮಾಧಾನದ ನಿಟ್ಟುಸಿರು ಬಿಟ್ಟಿದ್ದರು. ಔಷಧಿ ಸಿಂಪಡಣೆ ಮಾಡದ ರೈತರು ಕಂಗಾಲಾಗಿದ್ದರು. ಆದರೆ ಈಗ ಎಲ್ಲರ ಲೆಕ್ಕವನ್ನೂ ವರುಣ ತಲೆಕೆಳಗು ಮಾಡಿದ್ದಾನೆ. ಔಷಧಿ ಸಿಂಪಡಣೆ ಮಾಡಿದವರು ಹಾಗೂ ಮಾಡದವರು ಎಲ್ಲರ ತೋಟಗಳಲ್ಲೂ ಕೊಳೆರೋಗ ಆವರಿಸಿಕೊಂಡಿದೆ. ಒಂದು ಹಂತದಲ್ಲಿ ಔಷಧಿ ಸಿಂಪಡಣೆ ಮಾಡಿದರೆ ಕನಿಷ್ಟ 35 ದಿನಗಳ ಕಾಲಾವಕಾಶದ ಬಳಿಕ ಮತ್ತೆ ಔಷಧಿ ಸಿಂಪಡಣೆ ಮಾಡಲೇ ಬೇಕು. ಎರಡನೇ ಬಾರಿಗೆ ಔಷಧಿ ಸಿಂಪಡಣೆ ಮಾಡುವುದು ಬಿಡಿ. ಮದ್ದು ತಯಾರಿಸಲೂ ಮಳೆ ಬಿಡುತ್ತಿಲ್ಲ. ಇವತ್ತು ಬಿಡುತ್ತದೆ. ನಾಳೆ ಬಿಡುತ್ತದೆ ಎಂದು ಕಾಯುವ ರೈತವರ್ಗಕ್ಕೆ ಮಳೆ ಕಡಿಮೆಯಾಗುವ ಲಕ್ಷಣವೇ ಕಾಣುತ್ತಿಲ್ಲ. ಈ ಕಾಯುವಿಕೆ ಕೊಳೆರೋಗದ ಅಬ್ಬರಕ್ಕೆ ಕಾರಣವಾಗುತ್ತಿದೆ.

### ಆರ್ಥಿಕತೆ ಮೇಲೆ ಸಾಕಷ್ಟು ಪರಿಣಾಮ

ದಕ ಜಿಲ್ಲೆಯಲ್ಲಿ ಅಡಿಕೆ ಫಸಲು ಬಂದಾಗ ಮಾತ್ರ ಆರ್ಥಿಕ ಶಕ್ತಿ ಉದ್ದೀಪನಗೊಳ್ಳುತ್ತದೆ. ಕಳೆದ ಬಾರಿಯ ಹೊಡೆತ ಈಗಾಗಲೇ ಜಿಲ್ಲೆಯ ಆರ್ಥಿಕತೆ ಮೇಲೆ ಸಾಕಷ್ಟು ಪರಿಣಾಮ ಬೀರಿದೆ. ಅಂಗಡಿ ವ್ಯಾಪಾರಿಗಳ ಪ್ರಕಾರ ಈ ಬಾರಿಯ ವ್ಯಾಪಾರವೇ ಇಲ್ಲ. ಶೇ.5೦ರಷ್ಟು ವ್ಯವಹಾರಕ್ಕೆ ಪೆಟ್ಟು ಬಿದ್ದಿದೆ ಎನ್ನುತ್ತಾರೆ. ಕಳೆದ ಬಾರಿಯ ಹಾಗೇ ಅಡಿಕೆ ಇಳುವರಿ ಶೇ20ಕ್ಕೆ ಇಳಿದರೆ ಜಿಲ್ಲೆಯ ಆರ್ಥಿಕತೆ ಪಾತಾಳಕ್ಕೆ ಇಳಿಯಲಿದೆ. ಈ ಬಾರಿ ಅಡಿಕೆಯ ಧಾರಣೆ ಚೆನ್ನಾಗಿದೆ. ಆದರೆ ಕೊಡಲು ರೈತನಲ್ಲಿ ಅಡಿಕೆಯೇ ಇಲ್ಲ.

### ಹೊಸ ಸಂಶೋಧನೆಗಳು ಯಾಕಿಲ್ಲ

ಅಡಿಕೆಯನ್ನು ಪ್ರತೀ ವರ್ಷ ಕಾಡುವ ಕೊಳೆರೋಗಕ್ಕೆ ಬೋರ್ಡೋದ್ರಾವಣ ಮಾತ್ರ ರಾಮಬಾಣ. ಎಷ್ಟೋ ದಶಕಗಳಿಂದ ಬೋರ್ಡೋದ್ರಾವಣ ಬಿಟ್ಟರೆ ಮತ್ತೊಂದು ಔಷಧಿ ಇದಕ್ಕೆ ಸೇರ್ಪಡೆಯಾಗಿಲ್ಲ. ಈ ನಡುವೆ ಖಾಸಗಿ ಕಂಪೆನಿಗಳ ಹೆಸರಲ್ಲಿ ಬಂದ ಒಂದಷ್ಟು ಔಷಧಿಗಳ ಹೇಳ ಹೆಸರಿಲ್ಲದೆ ಮರೆಯಾದವು. ಲಕ್ಷಾಂತರ ಕುಟುಂಬಗಳ ಬದುಕಿನ ಬೆಳೆಯಾದ ಅಡಿಕೆಯ ಸಮಸ್ಯೆಗಳಿಗೆ ಹೊಸ ಔಷಧಿ ಹುಡುಕಲು ವಿಜ್ಞಾನಿಗಳಿಗಿನ್ನೂ ಸಾಧ್ಯವಾಗಿಲ್ಲ ಎಂಬುವುದೇ ಅಚ್ಚರಿಯ ವಿಚಾರವಾಗಿದೆ. ಇನ್ನಾದರೂ ಸರ್ಕಾರ ಮತ್ತು ಇಲಾಖೆಗಳ ಈ ಬಗ್ಗೆ ಗಂಭೀರವಾಗಿ ಚಿಂತಿಸಬೇಕಾಗಿದೆ.

## ಮಿನಿ ನ್ಯೂಸ್

### ಯಾದಗಿರಿಯಲ್ಲಿ ಕಲುಷಿತ ನೀರು ಸೇವಿಸಿ ಮೂವರು ಸಾವು

• ಉದಯವಾಹಿನಿ, ಯಾದಗಿರಿ

ಈ ಭಾಗದಲ್ಲಿ ಕಲುಷಿತ ಕುಡಿಯುವ ನೀರಿನ ಸಮಸ್ಯೆ ಅತೀವವಾಗಿದೆ. ಇಲ್ಲಿನ ಸುರಪುರ ತಾಲ್ಲೂಕಿನ ತಿಪ್ಪನಟಗಿ ಗ್ರಾಮದಲ್ಲಿ ಕಲುಷಿತ ನೀರು ಸೇವಿಸಿ, ಮೂವರು ಮೃತಪಟ್ಟಿದ್ದಾರೆ. ದೇವಿಕೆಮ್ಮ ಹೊಟ್ಟಿ (48), ವೆಂಕಮ್ಮ (60), ರಾಮಣ್ಣ ಪೂಜಾರಿ (50) ಮೃತಪಟ್ಟವರು. 10 ದಿನಗಳ ಹಿಂದೆ ಕಲುಷಿತ ನೀರು ಸೇವಿಸಿ ತಿಪ್ಪನಟಗಿ ಗ್ರಾಮಸ್ಥರು ವಾಂತಿ ಭೇದಿಯಿಂದ ಬಳಲಿ ಖಾಸಗಿ, ಸರ್ಕಾರಿ ಆಸ್ಪತ್ರೆಗೆ ದಾಖಲಾಗಿದ್ದರು. ಚಿಕಿತ್ಸೆ ಫಲಕಾರಿಯಾಗದೇ ಸೋಮವಾರ ಮೂವರು ಮೃತಪಟ್ಟಿದ್ದಾರೆ. ಆರು ಜನರ ಸ್ಥಿತಿ ಗಂಭೀರವಾಗಿದೆ. ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಹಲವರ ಆರೋಗ್ಯದಲ್ಲಿ ಚೇತರಿಕೆ ಕಂಡಿದ್ದು, ಇನ್ನೂ 20 ಜನ ಅಸ್ವಸ್ಥ ಸ್ಥಿತಿಯಲ್ಲಿದ್ದಾರೆ. ತಿಪ್ಪನಟಗಿ ಗ್ರಾಮಕ್ಕೆ ಸುರಪುರ ತಾಲ್ಲೂಕು ಆರೋಗ್ಯ ಅಧಿಕಾರಿ ರಾಜಾ ವೆಂಕಟಪ್ಪ ನಾಯಕ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ವಾಂತಿ ಭೇದಿ ಪ್ರಕರಣಕ್ಕೆ ಸಂಬಂಧಿಸಿದಂತೆ ವರದಿ ನೀಡುವಂತೆ ಜಿಲ್ಲಾ ಆರೋಗ್ಯ ಅಧಿಕಾರಿ ಮಹೇಶ ಬಿರಾದಾರ ಸೂಚನೆ ಆದೇಶಿಸಿದ್ದಾರೆ. ಕೆಂಭಾವಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

### ಮಂದಕೃಷ್ಣ ಮಾದಿಗ ಜನ್ಮದಿನ ನಿಮಿತ್ತ ಅನ್ನ ಸಂತರ್ಪಣೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಚಿಂಚೋಳಿ

ಪಟ್ಟಣದ ಬಸ್ ನಿಲ್ದಾಣದ ಎದುರು ಮಾದಿಗ ದಂಡೋರ ಹೋರಾಟ ಸಮಿತಿ ವತಿಯಿಂದ ಮಾದಿಗ ದಂಡೋರ ಸ್ಥಾಪನೆ ದಿನ, ಒಳಮೀಸಲಾತಿ ಜನಕ ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ ರಾಷ್ಟ್ರೀಯ ನಾಯಕರಾದ ಮಂದಕೃಷ ಮಾದಿಗ ಅವರ ಹುಟ್ಟುಹಬ್ಬದ ಅಂಗವಾಗಿ ಹಮ್ಮಿಕೊಂಡ ಅನ್ನ ಸಂತರ್ಪಣಾ ಕಾರ್ಯಕ್ರಮಕ್ಕೆ ಮಾದಿಗ ಸಮಾಜದ ಹಿರಿಯ ಮುಖಂಡ ಗೋಪಾಲರಾವ ಕಟ್ಟಿಮನಿ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಜಗನಾಥ ಕಟ್ಟಿ, ಗಿರಿರಾಜ ನಾಟಿಕರ, ರೇವಣಸಿದ ಮೋಘಾ, ಕೆ.ಎಂ.ಬಾರಿ, ಶ್ರೀಮಂತ ಕಟ್ಟಿಮನಿ, ಚಂದ್ರಶೆಟ್ಟಿ ಜಾಧವ, ಶಾಮರಾವ, ನರಸಪ್ಪಾ ಕಿವಣೋರಕರ್, ಬಸವರಾಜ ಮೇತ್ರಿ, ಮಹೇಶ ಕಿವಣೋರಕರ್, ಮಾದಿಗ ದಂಡೋರ ಹೋರಾಟ ಸಮಿತಿ ಅಧ್ಯಕ್ಷ ಮಲ್ಲು ಕೋಡಂಬಲ್, ಕಾಶಿನಾಥ ಮಾಸ್ಟರ್, ಮೋಹನ ದಂಡಿನ್, ವಿಜಯರಾಜ್ ಕೊಡಂಪಳ್ಳಿ, ಧನಂಜಯ ಬೀರನಳ್ಳಿ, ನಾಗು ಕಿವಣೋರಕರ್, ಮಚೇಂದ್ರ ಸೇರಿಕಾರ, ಶಶಿ ಕಲಭಾವಿ, ಅಶ್ವತ್ ಕಟ್ಟಿಮನಿ, ಸುಭಾಷ ಸುಲೇಪೇಟ, ಪ್ರಭು ಬಸಂತಪೂರ, ಅಮರೇಶ ಗೋಣಿ, ಚಿಂಟಿ ಶಿವಾರೆಡ್ಡಿ ಪಳ್ಳಿ, ಹಣಮಂತ ಅನೇಕರಿದ್ದರು.

### ಗೂಡಂಗಡಿ ಹೋಟೆಲ್ ಕಳ್ಳತನ

• ಉದಯವಾಹಿನಿ, ಸಿರಿಗೇರಿ

ಸಿರುಗುಪ್ಪ ತಾಲ್ಲೂಕು ಸಿರಿಗೇರಿ ಗ್ರಾಮದಲ್ಲಿ ಜು.4ರಂದು ರಾತ್ರಿಯ ವೇಳೆ, ಗ್ರಾಮದ ಜನತಾಕಾಲೋನಿಯ ಬಸ್ ನಿಲ್ದಾಣದ ಹತ್ತಿರ ಇದ್ದ ಗೂಡಂಗಡಿ ಹೋಟೆಲ್ ಒಂದರಲ್ಲಿ, ದುಷ್ಕರ್ಮಿಗಳು ಹೋಟೆಲ್ ಶೆಡ್ ಬಾಗಿಲು ಹೊಡೆದು ಬಡ ಮಾಲೀಕ ಹೊನ್ನುರಸ್ವಾಮಿ ಡಬ್ಬಿಯಲ್ಲಿ ಇಟ್ಟಿದ್ದ ನಗದು 9000 ಚಿಲ್ಲರೆ ಹಣ, ಹೋಟೆಲ್ ಗೆ ಬಳಸುವ ಸಾಮಗ್ರಿ, ತಿಂಡಿಯ ವಸ್ತುಗಳನ್ನು ಕದ್ದೊಯ್ದಿದ್ದಾರೆ.

ಕಳ್ಳತನವಾಗಿರುವ ಮಾಹಿತಿಯನ್ನು ಸ್ಥಳೀಯ ಪೊಲೀಸ್ ಠಾಣೆಯಲ್ಲಿ ನೀಡಿದ್ದು, ಪೊಲೀಸರು ಸ್ಥಳ ಮಹಾಜರ್ ನಡೆಸಿ, ತನಿಖೆ ಮಾಡುವುದಾಗಿ ತಿಳಿಸಿದ್ದಾರೆ ಎಂದು ಮಾಹಿತಿ ಇದೆ. ಇದೇ ತೆರನಾಗಿ ಗ್ರಾಮದ ಅಲ್ಲಲ್ಲಿ ಬಡಜನರ ಸಣ್ಣ ಸಣ್ಣ ಅಂಗಡಿಗಳಲ್ಲಿ ಕಳ್ಳತನ ಪ್ರಕರಣಗಳು ಆಗಾಗ ಆಗುತ್ತಿವೆ. ಕಳ್ಳತನ ಆದಾಗ ಕೆಲವರು ದೂರು ನೀಡಿಲ್ಲ. ಆದರೆ ಪೊಲೀಸ್ ಇಲಾಖೆಯಿಂದ ಗ್ರಾಮದಲ್ಲಿ ರಾತ್ರಿಯ ಬೀಟ್ ಸಿಬ್ಬಂದಿ ತಿರುಗುವುದು ಕಡಿಮೆಯಾಗಿದೆ. ಇದರಿಂದ ದುಷ್ಕರ್ಮಿಗಳಿಂದ ಸಣ್ಣಪುಟ್ಟ ಕಳ್ಳತನ ನಡೆಯುತ್ತಿವೆ. ಗ್ರಾಮ ಆಡಳಿತ ಈ ನಿಟ್ಟಿನಲ್ಲಿ ಪೊಲೀಸ್ ಇಲಾಖೆಯ ಗಮನಕ್ಕೆ ತರಬೇಕಿದೆ ಎಂದು ಗ್ರಾಮದ ಸಾರ್ವಜನಿಕರು, ಸಂಘಟನೆ ಮುಖಂಡರು, ಬುದ್ದಿಜೀವಿಗಳು ಅಭಿಪ್ರಾಯ ವ್ಯಕ್ತಪಡಿಸುತ್ತಿದ್ದಾರೆ.

### ಮನೆ ಮನೆಗೆ ತೆರಳಿ ಗ್ಯಾರಂಟಿ ಲಾಭ ತಲುಪಿಸಿ: ಸೌಮ್ಯ ರೆಡ್ಡಿ ಕರೆ



ಉದಯವಾಹಿನಿ ಚಿತ್ರ


• ಉದಯವಾಹಿನಿ, ಉಡುಪಿ

ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಯ ಬಗ್ಗೆ ಮಹಿಳಾ ಕಾಂಗ್ರೆಸ್ ಪ್ರತಿ ಮನೆಮನೆಗೆ ತೆರಳಿ ಮಾಹಿತಿ ನೀಡಿ, ಪ್ರತಿಯೊಂದು ಕುಟುಂಬಕ್ಕೂ ಈ ಯೋಜನೆಯ ಲಾಭ ತಲುಪಿಸ ಬೇಕು ಎಂದು ಕರ್ನಾಟಕ ಪ್ರದೇಶ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಸೌಮ್ಯ ರೆಡ್ಡಿ ಸೂಚಿಸಿದ್ದಾರೆ. ಅವರು ಬನ್ನಂಜೆ ನಾರಾಯಣ ಗುರು ಸಭಾಂಗಣದಲ್ಲಿ ಉಡುಪಿ ಜಿಲ್ಲಾ ಮಹಿಳಾ ಕಾಂಗ್ರೆಸ್ ನೂತನ ಅಧ್ಯಕ್ಷೆ ಜ್ಯೋತಿ ಹೆಬ್ಬಾರ್, ಪದಾಧಿಕಾರಿಗಳಿಗೆ ಪದಪ್ರದಾನ ಮಾಡಿ ಮಾತನಾಡಿದರು. ಸರ್ಕಾರದ ಗ್ಯಾರಂಟಿ ಯೋಜನೆಗಳ ಬಗ್ಗೆ ಬಿಜೆಪಿ ನಿರಂತರ ಅಪಪ್ರಚಾರ ಮಾಡುತ್ತಿದೆ, ಹಲವು ವರ್ಷಗಳಿಂದ ಬಿಜೆಪಿ ರಾಜ್ಯದಲ್ಲಿ ಆಡಳಿತ ನಡೆಸಿದ್ದರೂ ಇಂತಹ ಭಾಗ್ಯಗಳನ್ನು ಜನರಿಗೆ ನೀಡಿಲ್ಲ, ಬದಲಾಗಿ ಜನರ ನಡುವೆ ಕೇವಲ ಜಾತಿ ಧರ್ಮದ ವಿಷ ಬೀಜ ಬಿತ್ತಿದ್ದರು. ಆದ್ದರಿಂದ ಉಡುಪಿ ಕಾಂಗ್ರೆಸ್ ಮಹಿಳಾ ಕಾರ್ಯಕರ್ತೆಯರು ಸಂಕಲ್ಪ, ಸಮರ್ಪಣೆ, ಸಂಘರ್ಷದ ಮೂಲಕ, ಕರಾವಳಿಯನ್ನು ದೇಶಕ್ಕೆ ಮಾದರಿಯಾಗುವ ರೀತಿಯಲ್ಲಿ ಪಕ್ಷದ ಸಂಘಟನೆಗೊಳಿಸಬೇಕು ಎಂದರು.

# ಟ್ರಂಪ್‌ರಿಂದ ಬಂತು ಮತ್ತೊಂದು ಸುಂಕ ಬೆದರಿಕೆ

## ಬ್ರಿಕ್ಸ್ ಒಕ್ಕೂಟದ ಮೇಲೆ ಟ್ರಂಪ್ ಅವರಿಗೇಕೆ ಕೋಪ? ಒಕ್ಕೂಟದ ಸದಸ್ಯ ರಾಷ್ಟ್ರಗಳು ಯಾವುವು?

**ವಾಷಿಂಗ್ಟನ್ ಡಿಸಿ:** ಜಗತ್ತಿನ ಯಾವುದೇ ಮೂಲೆಯಲ್ಲಿ ಏನೇ ನಡೆದರೂ, ಅದರ ಬಗ್ಗೆ ತಮ್ಮ ಅಭಿಪ್ರಾಯ ವ್ಯಕ್ತಪಡಿಸುವ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ , ಬ್ರೆಜಿಲ್‌ನ ರಿಯೊ ಡಿ ಜನೈರೊದಲ್ಲಿ ನಡೆಯುತ್ತಿರುವ ಬ್ರಿಕ್ಸ್ 2025 ಶೃಂಗಸಭೆ ಬಗ್ಗೆಯೂ ಮೊಂಡುವಾದವನ್ನು ಮುಂದಿಟ್ಟಿದ್ದಾರೆ. ಬ್ರಿಕ್ಸ್ ಒಕ್ಕೂಟ ಅಮೆರಿಕನ್ ವಿರೋಧಿ ನೀತಿಯನ್ನು ಅನುಸರಿಸುತ್ತದೆ ಎಂದು ಆರೋಪಿಸಿರುವ ಡೊನಾಲ್ಡ್ ಟ್ರಂಪ್, ಬ್ರಿಕ್ಸ್‌ನ ಅಮೆರಿಕನ್ ವಿರೋಧಿ ನೀತಿಗಳೊಂದಿಗೆ ಹೊಂದಿಕೆಯಾಗುವ ಯಾವುದೇ ದೇಶದ ಮೇಲೆ ಹೆಚ್ಚುವರಿಯಾಗಿ ಶೇ.10ರಷ್ಟು ಸುಂಕವನ್ನು ವಿಧಿಸುವುದಾಗಿ ಎಚ್ಚರಿಸಿದ್ದಾರೆ. ಈ ಮೂಲಕ ಜಾಗತಿಕ ವ್ಯಾಪಾರದಲ್ಲಿ ಮತ್ತಷ್ಟು ಅನಿಶ್ಚಿತತೆ ಮೂಡಲು ಅಮೆರಿಕ ಅಧ್ಯಕ್ಷರು ಕಾರಣರಾಗಿದ್ದಾರೆ. ಬ್ರಿಕ್ಸ್‌ನ ಅಮೆರಿಕನ್ ವಿರೋಧಿ ನೀತಿಗಳೊಂದಿಗೆ ತಮ್ಮನ್ನು ಹೊಂದಿಸಿಕೊಳ್ಳುವ ಯಾವುದೇ ದೇಶಕ್ಕೆ ಹೆಚ್ಚುವರಿಯಾಗಿ ಶೇ.10ರಷ್ಟು ಸುಂಕವನ್ನು ವಿಧಿಸಲಾಗುತ್ತದೆ. ಅಮೆರಿಕನ್ ವಿರೋಧಿ ನೀತಿಗೆ ಯಾವುದೇ ವಿನಾಯಿತಿ ನೀಡುವುದು ಸಾಧ್ಯವಿಲ್ಲ ಎಂದು ಡೊನಾಲ್ಡ್ ಟ್ರಂಪ್ ತಮ್ಮ ಟ್ರೂತ್ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿದ್ದಾರೆ. ಭಾರತ-ಅಮೆರಿಕ ವ್ಯಾಪಾರ ಒಪ್ಪಂದದ ಬಗ್ಗೆ ಉತ್ಸುಕರಾಗಿರುವ ಟ್ರಂಪ್, ಬ್ರಿಕ್ಸ್ ಒಕ್ಕೂಟದತ್ತ ವಕ್ರದೃಷ್ಟಿ ಬೀರಿರುವುದು ವಿಚಿತ್ರವಾಗಿದೆ. ಟ್ರಂಪ್ ಆಡಳಿತದ ಹೆಚ್ಚಿನ ಸುಂಕಗಳ ಮೇಲಿನ 90 ದಿನಗಳ ವಿರಾಮ ಇದೇ ಬುಧವಾರ ಮುಕ್ತಾಯಗೊಳ್ಳಲಿದ್ದು, ಮುಂಬರುವ ದಿನಗಳಲ್ಲಿ ಡಜನ್‌ಗಟ್ಟಲೆ ದೇಶಗಳಿಗೆ ಸುಂಕ ಪತ್ರಗಳನ್ನು ಕಳುಹಿಸಲು ಅಮೆರಿಕ ಸಿದ್ಧತೆ ನಡೆಸುತ್ತಿದೆ. ಈ ಸಂದರ್ಭದಲ್ಲಿ ಡೊನಾಲ್ಡ್ ಟ್ರಂಪ್ ಅವರ ಹೊಸ ಹೇಳಿಕೆ ಜಾಗತಿಕ ಮಾರುಕಟ್ಟೆಯನ್ನು ಆತಂಕಕ್ಕೆ ದೂಡಿದೆ. ಶ್ವೇತಭವನ ಸೋಮವಾರ ಮಧ್ಯಾಹ್ನದಿಂದಲೇ, ಅಮೆರಿಕದೊಂದಿಗೆ ವ್ಯವಹರಿಸುವ ದೇಶಗಳಿಗೆ ಸುಂಕ ಪತ್ರಗಳನ್ನು ರವಾನಿಸುವ ಪ್ರಕ್ರಿಯೆ ಆರಂಭಿಸಲಿದೆ. ಈ ಮಧ್ಯೆ ಬ್ರಿಕ್ಸ್ ಒಕ್ಕೂಟದ ನೀತಿ ಅನುಸರಿಸುವ ದೇಶಗಳಿಗೆ ಡೊನಾಲ್ಡ್ ಟ್ರಂಪ್ ಎಚ್ಚರಿಕೆಯ ಸಂದೇಶ ರವಾನಿಸಿರುವುದು ಜಾಗತಿಕ ಮಟ್ಟದಲ್ಲಿ ಗಮನ ಸೆಳೆದಿದೆ.



### ಬ್ರಿಕ್ಸ್ ನೀತಿಗಳು ಅಮೆರಿಕ ವಿರೋಧಿ

**ಶೃಂಗಸಭೆಯಲ್ಲಿ ಭಾಗವಹಿಸಿದವರಲ್ಲಿ ಚೀನಾದ ಪ್ರಧಾನಿ ಲಿ ಕ್ವಿಯಾಂಗ್, ಭಾರತದ ಪ್ರಧಾನಿ ನರೇಂದ್ರ ಮೋದಿ ಕೂಡ ಸೇರಿದ್ದಾರೆ. ಇನ್ನು ಬ್ರಿಕ್ಸ್ ನೀತಿಗಳು ಅಮೆರಿಕ ವಿರೋಧಿಯಾಗಿವೆ ಎಂಬ ಡೊನಾಲ್ಡ್ ಟ್ರಂಪ್ ಅವರ ಪೋಸ್ಟ್, ಯಾವ ನೀತಿಗಳನ್ನು ಅಮೆರಿಕನ್ ವಿರೋಧಿ ಎಂದು ಪರಿಗಣಿಸುತ್ತದೆ ಎಂಬುದು ಸ್ಪಷ್ಟವಾಗಿಲ್ಲ. ಅಲ್ಲದೇ ಶೇ.10ರಷ್ಟು ಸುಂಕಗಳನ್ನು ಯಾವಾಗ ವಿಧಿಸಲಾಗುತ್ತದೆ ಎಂಬುದರ ವಿವರಗಳನ್ನೂ ಒದಗಿಸಿಲ್ಲ.**

### ಒಂದು ದಶಕದಿಂದ ಚರ್ಚೆ

**ದ್ವಿಪಕ್ಷೀಯ ವ್ಯಾಪಾರದಲ್ಲಿ ಬ್ರಿಕ್ಸ್ ಯುಎಸ್ ಡಾಲರ್‌ನ್ನು ಕೈಬಿಡುವ ಪ್ರಸ್ತಾವನೆ ವಿರೋಧಿಸಿರುವ ಡೊನಾಲ್ಡ್ ಟ್ರಂಪ್, ಅಂತಹ ಕ್ರಮಕ್ಕೆ ಮುಂದಾದರೆ ಶೇ. 100ರಷ್ಟು ಸುಂಕ ವಿಧಿಸುವುದಾಗಿ ಡೊನಾಲ್ಡ್ ಟ್ರಂಪ್ ಈ ಹಿಂದೆ ಬೆದರಿಕೆ ಹಾಕಿದ್ದರು. ಆದರೆ ಈ ಬೆದರಿಕೆ ಸ್ಥಳೀಯ ಪಾವತಿ ವ್ಯವಸ್ಥೆಗಳು, ರಾಷ್ಟ್ರಗಳ ನಡುವೆ ವಾಣಿಜ್ಯ, ಹೂಡಿಕೆಯನ್ನು ಸುಗಮಗೊಳಿಸುವ ಇತರ ಸಾಧನಗಳನ್ನು ಅಭಿವೃದ್ಧಿಪಡಿಸುವಲ್ಲಿ ಆಸಕ್ತಿಯನ್ನು ಹುಟ್ಟುಹಾಕಿದೆ. ಬ್ರಿಕ್ಸ್ ನಾಯಕರು ವ್ಯಾಪಾರ, ಹೂಡಿಕೆಗಾಗಿ ಗಡಿಯಾಚೆಗಿನ ಪಾವತಿ ವ್ಯವಸ್ಥೆಯ ಕುರಿತು ಮಾತುಕತೆಗಳನ್ನು ಮುಂದುವರಿಸಲು ಒಪ್ಪಿಕೊಂಡಿದ್ದಾರೆ. ಈ ನಿಟ್ಟಿನಲ್ಲಿ ಅವರು ಸಾಧಿಸಿರುವ ಪ್ರಗತಿ ನಿಧಾನವಾಗಿದ್ದರೂ, ಈ ಕುರಿತು ಒಂದು ದಶಕದಿಂದ ಚರ್ಚೆ ನಡೆಯುತ್ತಿದೆ.**

**ಅಮೆರಿಕ ಅಧ್ಯಕ್ಷರು ಕಾರಣ**

**ಬ್ರಿಕ್ಸ್ ಸಮ್ಮೇಳನ 2025:** ಬ್ರೆಜಿಲ್, ರಷ್ಯಾ, ಭಾರತ, ಚೀನಾ, ದಕ್ಷಿಣ ಆಫ್ರಿಕಾವನ್ನು ಒಳಗೊಂಡಿರುವ ರಾಷ್ಟ್ರಗಳ ಗುಂಪಾದ ಬ್ರಿಕ್ಸ್ ಒಕ್ಕೂಟ, ಬ್ರೆಜಿಲ್‌ನ ರಿಯೊ ಡಿ ಜನೈರೊದಲ್ಲಿ ಬ್ರಿಕ್ಸ್ 2025 ಶೃಂಗಸಭೆಯನ್ನು ಆಯೋಜಿಸಿದೆ. ಭಾರತದ ಪ್ರಧಾನಮಂತ್ರಿ ನರೇಂದ್ರ ಮೋದಿ ಬ್ರಿಕ್ಸ್ ಸಮ್ಮೇಳನದಲ್ಲಿಭಾಗಿಯಾಗಿದ್ದಾರೆ. ಬ್ರಿಕ್ಸ್ ನಾಯಕರು ಇರಾನ್ ಮೇಲಿನ ಅಮೆರಿಕ, ಇಸ್ರೇಲ್ ದಾಳಿಗಳನ್ನು ಖಂಡಿಸಿದ್ದು, ಗಾಜಾ ಪಟ್ಟಿಯಿಂದ ಸೈನ್ಯವನ್ನು ಹಿಂತೆಗೆದುಕೊಳ್ಳುವಂತೆ, ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರ ಸರ್ಕಾರಕ್ಕೆ ಕರೆ ನೀಡಿದ್ದಾರೆ. ಮಧ್ಯಪ್ರಾಚ್ಯದಾದ್ಯಂತದ ಸಂಘರ್ಷಗಳಿಗೆ ನ್ಯಾಯಯುತ ಮತ್ತು ಶಾಶ್ವತ ಪರಿಹಾರವನ್ನು ಬ್ರಿಕ್ಸ್ ನಾಯಕರು ಒತ್ತಾಯಿಸಿದ್ದಾರೆ. ಜಾಗತಿಕ ಆಡಳಿತದಲ್ಲಿ ಸುಧಾರಣೆಗಳನ್ನು ಮುಂದಿಡುವಲ್ಲಿ, ಅಂತಾರಾಷ್ಟ್ರೀಯ ವಿವಾದಗಳ ಶಾಂತಿಯುತ ಪರಿಹಾರವನ್ನು ಬೆಂಬಲಿಸುವಲ್ಲಿ, ಬ್ರಿಕ್ಸ್ ದೇಶಗಳು ಮುಂದಾಳತ್ವ ವಹಿಸಬೇಕು ಎಂದು ಚೀನಾದ ಪ್ರಧಾನಿ ಲಿಕ್ವಿಯಾಂಗ್ ಕರೆ ನೀಡಿರುವುದನ್ನು ಇಲ್ಲಿ ಗಮನಿಸಬಹುದು.

ಇಂದಿನ ಜಗತ್ತು ಹೆಚ್ಚು ಪ್ರಕ್ಷುಬ್ಧವಾಗಿದೆ, ಏಕಪಕ್ಷೀಯತೆ ಮತ್ತು ರಕ್ಷಣಾವಾದ ಹೆಚ್ಚುತ್ತಿದೆ. ಜಾಗತಿಕ ಆಡಳಿತವನ್ನು ಹೆಚ್ಚು ನ್ಯಾಯಯುತ, ಸಮಂಜಸ, ಪರಿಣಾಮಕಾರಿ ಮತ್ತು ಕ್ರಮಬದ್ಧ ದಿಕ್ಕಿನಲ್ಲಿ ಉತ್ತೇಜಿಸಲು, ಚೀನಾ ಬ್ರಿಕ್ಸ್ ದೇಶಗಳೊಂದಿಗೆ ಕೆಲಸ ಮಾಡಲು ಸಿದ್ಧವಾಗಿದೆ ಎಂದು ಚೀನಾ ಪ್ರಧಾನಿ ಲಿ ಕ್ವಿಯಾಂಗ್ ಸ್ಪಷ್ಟಪಡಿಸಿದ್ದಾರೆ.

## ಟೆಕ್ಸಾಸ್ ಮಹಾಪ್ರವಾಹ: ಸಾವಿನ ಸಂಖ್ಯೆ 79ಕ್ಕೆ ಏರಿಕೆ, ಪತ್ತೆಯಾಗದ 10 ಬಾಲಕಿಯರು

**ಕೆರ್ವಿಲ್ಲೆ:** ಭಾರಿ ಮಳೆಯಿಂದಾಗಿ ಉಂಟಾದ ಹಠಾತ್ ಪ್ರವಾಹಕ್ಕೆ ಟೆಕ್ಸಾಸ್ ನಗರದಲ್ಲಿ ಅಪಾರ ಪ್ರಮಾಣ ಹಾನಿಯುಂಟಾಗಿದ್ದು, ಸಾವಿನ ಸಂಖ್ಯೆ 79ಕ್ಕೆ ಏರಿಕೆಯಾಗಿದೆ ಎಂದು ಅಲ್ಲಿನ ಸ್ಥಳೀಯ ಅಧಿಕಾರಿಗಳು ತಿಳಿಸಿದ್ದಾರೆ. ನದಿ ತೀರದ ಬೇಸಿಗೆ ಶಿಬಿರದಲ್ಲಿದ್ದ 10 ಬಾಲಕಿಯರು ಸೇರಿದಂತೆ ನಾಪತ್ತೆಯಾದ ಹಲವರಿಗಾಗಿ ಶೋಧ ಕಾರ್ಯಾಚರಣೆ ನಡೆಯುತ್ತಿದೆ ಎಂದು ಅವರು ತಿಳಿಸಿದ್ದಾರೆ. ಕೆರ್ರಿ ಕೌಂಟಿಯಲ್ಲಿ 28 ಮಕ್ಕಳು ಸೇರಿದಂತೆ 68 ಜನರ ಶವಗಳು ಪತ್ತೆಯಾದರೆ, ಟ್ರಾವಿಸ್, ಬರ್ನೆಟ್, ಕೆಂಡಾಲ್, ಟಾಮ್ ಗ್ರೀನ್, ವಿಲಿಯಮ್ಸನ್ ಕೌಂಟಿಗಳಲ್ಲಿ 10 ಶವಗಳು ಪತ್ತೆಯಾಗಿರುವುದು ವರದಿಯಾಗಿವೆ. ಮಳೆ ಮುಂದುವರಿಯುವ ಸಾಧ್ಯತೆ ಹೆಚ್ಚಿದ್ದರಿಂದ ಜನರ ಸ್ಥಳಾಂತರಕ್ಕೆ ಸ್ಥಳೀಯ ಆಡಳಿತ ಮುಂದಾಗಿದೆ. ಈಗಾಗಲೇ ಜಲಾವೃತಗೊಂಡಿರುವ ಪ್ರದೇಶಗಳಲ್ಲಿ ಪ್ರವಾಹ ಪರಿಸ್ಥಿತಿ ಇನ್ನಷ್ಟು ಹೆಚ್ಚುವ ಸಾಧ್ಯತೆಯಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ಸಂವಿಧಾನ ಪೀಠಿಕೆ ತಂದೆ-ತಾಯಿ ಇದ್ದಂತೆ ಬದಲಾಯಿಸಲು ಸಾಧ್ಯವಿಲ್ಲ

**ಕೊಚ್ಚಿ:** ಭಾರತೀಯ ಸಂವಿಧಾನದ ಪೀಠಿಕೆಯು ತಂದೆ-ತಾಯಿ ಇದ್ದಂತೆ. ಎಷ್ಟೇ ಪ್ರಯತ್ನಿಸಿದರೂ ಅದನ್ನು ಬದಲಿಸಲು ಸಾಧ್ಯವಿಲ್ಲ ಎಂದು ಉಪರಾಷ್ಟ್ರಪತಿ ಜಗದೀಪ್ ಧನಕರ್ ಹೇಳಿದ್ದಾರೆ. ಕೊಚ್ಚಿಯ ರಾಷ್ಟ್ರೀಯ ಕಾನೂನು ಅಧ್ಯಯನ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳು ಮತ್ತು ಉಪನ್ಯಾಸಕರೊಂದಿಗೆ ನಡೆದ ಸಂವಾದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದ್ದಾರೆ. ಐತಿಹಾಸಿಕವಾಗಿ ಯಾವುದೇ ದೇಶದ ಸಂವಿಧಾನದ ಪೀಠಿಕೆಯನ್ನು ಇದುವರೆಗೆ ಬದಲಾಯಿಸಲಾಗಿಲ್ಲ. ಆದರೆ, ನಮ್ಮ ದೇಶದಲ್ಲಿ ತುರ್ತು ಪರಿಸ್ಥಿತಿಯ ಸಂದರ್ಭದಲ್ಲಿ ಸಂವಿಧಾನದ ಪೀಠಿಕೆಯನ್ನು ಬದಲಾಯಿಸಲಾಗಿದೆ ಎಂದು ಬೇಸರ ಹೊರಹಾಕಿದ್ದಾರೆ. ನಮ್ಮ ಸಂವಿಧಾನದ ಪೀಠಿಕೆಯನ್ನು ಸಾವಿರಾರು ಜನರು ಜೈಲಿನಲ್ಲಿದ್ದ ಸಂದರ್ಭದಲ್ಲಿ ಬದಲಾಯಿಸಲಾಗಿದೆ.



ಇದು ನಮ್ಮ ಪ್ರಜಾಪ್ರಭುತ್ವದ ಕರಾಳ ಅವಧಿ ಎಂದು ಅವರು ಹೇಳಿದ್ದಾರೆ. ಸಮಾಜವಾದಿ ಮತ್ತು ಜಾತ್ಯತೀತ ಎಂಬ ಪದಗಳು ಬಿ.ಆರ್ ಅಂಬೇಡ್ಕರ್ ರಚಿಸಿದ ಸಂವಿಧಾನದಲ್ಲಿ ಇರಲಿಲ್ಲ, ತುರ್ತು ಪರಿಸ್ಥಿತಿಯ ಸಂದರ್ಭದಲ್ಲಿ ಅವುಗಳನ್ನು ಸೇರಿಸಲಾಗಿದೆ ಎಂದು ಆರ್ ಎಸ್‌ಎಸ್ ನೀಡಿರುವ ಹೇಳಿಕೆಗೆ ಪೂರಕವಾಗಿ ಧನಕರ್ ಈ ಹೇಳಿಕೆಯನ್ನು ನೀಡಿದ್ದಾರೆ.

### ಆಪರೇಷನ್ ಸಿಂಧೂರ ವೇಳೆ ರಫೇಲ್ ಯುದ್ಧ ವಿಮಾನಗಳ ಬಗ್ಗೆ ಅಪಪ್ರಚಾರ ಮಾಡಿದ ಚೀನಾ

## ಯುದ್ಧ ವಿಮಾನಗಳ ಕಾರ್ಯಕ್ಷಮತೆ ಬಗ್ಗೆ ಚೀನಾ ಅಪಪ್ರಚಾರ

**ಪ್ಯಾರಿಸ್:** ಜಮ್ಮು ಮತ್ತು ಕಾಶೀರದ ಪೆಹಲ್ಗಾಮ್‌ನಲ್ಲಿ ನಡೆದ ಭೀಕರ ನರಮೇಧಕ್ಕೆ ಪ್ರತೀಕಾರವಾಗಿ ಭಾರತ-ಪಾಕಿಸ್ತಾನ ನಡುವಿನ ಸೇನಾ ಸಂಘರ್ಷದ ವೇಳೆ ರಫೇಲ್ ಯುದ್ಧ ವಿಮಾನಗಳ ಕಾರ್ಯಕ್ಷಮತೆ ಬಗ್ಗೆ ಚೀನಾ ಅಪಪ್ರಚಾರ ನಡೆಸಿತ್ತು ಎಂದು ಫ್ರಾನ್ಸ್ ಆರೋಪಿಸಿದೆ. ತನ್ನ ರಾಯಭಾರ ಕಚೇರಿಗಳ ಮೂಲಕ, ಫ್ರಾನ್ಸ್‌ನ ರಫೇಲ್ ಜೆಟ್‌ಗಳ ಜಾಗತಿಕ ಖ್ಯಾತಿಗೆ ಹಾನಿ ಮಾಡಲು ಚೀನಾ ಪ್ರಯತ್ನಿಸಿತು. ಫ್ರೆಂಚ್ ಗುಪ್ತಚರ ವರದಿಯ ಪ್ರಕಾರ, ಆಪರೇಷನ್ ಸಿಂಧೂರ್ ನಂತರ, ಚೀನಾ ರಫೇಲ್ ಜೆಟ್‌ಗಳ ಮಾರಾಟದ ಮೇಲೆ ಪ್ರಭಾವ ಬೀರಲು ಪ್ರಚಾರ ಅಭಿಯಾನವನ್ನು ಪ್ರಾರಂಭಿಸಿತು. ತನ್ನ ರಾಯಭಾರ ಕಚೇರಿಗಳ ಮೂಲಕ, ಫ್ರಾನ್ಸ್‌ನಿಂದ ಈ ಜೆಟ್‌ಗಳನ್ನು ಆರ್ಡರ್ ಮಾಡಿದ ದೇಶಗಳು ರಫೇಲ್ ಖರೀದಿಸುವುದನ್ನು ತಡೆಯಲು ಚೀನಾ ಪ್ರಯತ್ನಿಸಿತ್ತು ಮತ್ತು ಬದಲಿಗೆ ಚೀನಾ ನಿರ್ಮಿತ ಜೆಟ್‌ಗಳನ್ನು ಖರೀದಿಸುವಂತೆ ಒತ್ತಾಯಿಸಿತ್ತು. ಫ್ರೆಂಚ್ ಗುಪ್ತಚರ ವರದಿಯ ಪ್ರಕಾರ, ಭಾರತೀಯ ಸೇನೆಯು ಬಳಸುತ್ತಿರುವ ರಫೇಲ್ ವಿಮಾನಗಳು ಪರಿಣಾಮಕಾರಿಯಾಗಿಲ್ಲ ಎಂದು ಚೀನಾ ರಾಯಭಾರ ಕಚೇರಿಯ ರಕ್ಷಣಾ ಅಟ್ಯಾಚ್ ವಾದಿಸಿದ್ದರು. ಅವರು ಇತರ ದೇಶಗಳ ರಕ್ಷಣಾ ಅಧಿಕಾರಿಗಳೊಂದಿಗಿನ ಸಭೆಯಲ್ಲಿ ಚೀನಾ ನಿರ್ಮಿತ ಶಸ್ತ್ರಾಸ್ತ್ರಗಳ ಬಳಕೆಯನ್ನು ಉತ್ತೇಜಿಸಿದ್ದರು. ಚೀನಾದ ನಿತ್ಯಹರಿದ್ವರ್ಣ ಸ್ನೇಹಿತ ಪಾಕಿಸ್ತಾನವು ಆಪರೇಷನ್ ಸಿಂಧೂರ್ ಸಮಯದಲ್ಲಿ ಭಾರತದ ಮೂರು ರಫೇಲ್ ಯುದ್ಧ ವಿಮಾನಗಳನ್ನು ಹೊಡೆದುರುಳಿಸಿರುವುದಾಗಿ ಹೇಳಿಕೊಂಡಿತ್ತು. ರಫೇಲ್ ತಯಾರಿಸುವ ಫ್ರೆಂಚ್ ಕಂಪನಿ ಡಸಾಲ್ಟ್ ಏವಿಯೇಷನ್‌ನ ಸಿಇಒ ಎರಿಕ್ ಟ್ರ್ಯಾಪಿಯರ್ ಪಾಕಿಸ್ತಾನದ ಈ ಹೇಳಿಕೆಗಳನ್ನು ಸುಳ್ಳು ಎಂದು ಕರೆದಿದ್ದರು.

ರಫೇಲ್ ಯುದ್ಧ ವಿಮಾನ ಹೊಡೆದುರುಳಿಸಿದ್ದಾಗಿ ಹೇಳಿಕೊಂಡಿದ್ದ ಪಾಕಿಸ್ತಾನ ಹರಡಿದ್ದ ಸುಳ್ಳು ಮಾಹಿತಿಯನ್ನೇ ಚೀನಾ ತನ್ನ ಅಪಪ್ರಚಾರಕ್ಕೆ ವಿಷಯವಾಗಿ ಬಳಸಿಕೊಂಡಿದೆ. ರಫೇಲ್ ಯುದ್ಧ ವಿಮಾನದ ನಕಲಿ ಅವಶೇಷಗಳನ್ನು ಉಪಯೋಗಿಸಿಕೊಂಡು ಅಪಪ್ರಚಾರ ನಡೆಸಿದೆ ಎಂದು ಫ್ರಾನ್ಸ್ ಆರೋಪಿಸಿದೆ. ರಫೇಲ್ ಖ್ಯಾತಿಗೆ ಹಾನಿ ಉಂಟು ಮಾಡುವ ಉದ್ದೇಶದೊಂದಿಗೆ ನಕಲಿ ಫೋಟೋಗಳು, ಕೃತಕ ಬುದ್ಧಿಮತ್ತೆ ತಂತ್ರಜ್ಞಾನ ಆಧಾರಿತ ತಪ್ಪು ನಿರೂಪಣೆ, ಸೋಶಿಯಲ್ ಮೀಡಿಯಾದಲ್ಲಿ ನಕಲಿ ಖಾತೆಗಳ ಮೂಲಕ ಸುಳ್ಳು ಮಾಹಿತಿ ಹಬ್ಬಿಸಲು ಚೀನಾ ಪ್ರಯತ್ನ ನಡೆಸಿದೆ. ರಫೇಲ್‌ಗಿಂತ ಚೀನಿ ಯುದ್ಧ ವಿಮಾನಗಳು ಶ್ರೇಷ್ಠ ಎಂಬಂತೆ ಬಿಂಬಿಸಲು ಪ್ರಯತ್ನಿಸಿದೆ ಎಂದು ಫ್ರೆಂಚ್ ಅಧಿಕಾರಿಗಳು ಗಂಭೀರ ಆರೋಪ ಮಾಡಿದ್ದಾರೆ. ಸದ್ಯ ಭಾರತೀಯ ವಾಯುಪಡೆಯಲ್ಲಿ 36 ರಫೇಲ್ ಯುದ್ಧವಿಮಾನಗಳಿವೆ. ಹೆಚ್ಚುವರಿಯಾಗಿ 26 ರಫೇಲ್‌ಗಳ ಖರೀದಿಗೆ ಹೊಸ ಒಪ್ಪಂದವಾಗಿದೆ.ಮೇ ತಿಂಗಳಲ್ಲಿ ಭಾರತ ಮತ್ತು ಪಾಕಿಸ್ತಾನ ನಡುವಿನ ನಾಲ್ಕು ದಿನಗಳ ಸಂಘರ್ಷದ ಸಮಯದಲ್ಲಿ ಭಾರತವು ಫ್ರೆಂಚ್ ನಿರ್ಮಿತ ರಫೇಲ್ ಜೆಟ್‌ಗಳನ್ನು ಬಳಸಿದೆ ಎಂದು ನಾವು ನಿಮಗೆ ಹೇಳೋಣ. ಪಾಕಿಸ್ತಾನ ಮತ್ತು ಅದರ ಮಿತ್ರ ರಾಷ್ಟ್ರ ಚೀನಾ ರಫೇಲ್‌ನ ಖ್ಯಾತಿಗೆ ಕಳಂಕ ತರುವ ಅಭಿಯಾನವನ್ನು ಪ್ರಾರಂಭಿಸಿವೆ ಎಂದು ಫ್ರಾನ್ಸ್ ಹೇಳಿಕೊಂಡಿದೆ.



### 533 ರಫೇಲ್ ಮಾರಾಟ

**ಭಾರತ, ಇಂಡೋನೇಷ್ಯಾ, ಯುಎಇ, ಕತಾರ್, ಕ್ರೊಯೇಷ್ಯಾ, ಗ್ರೀಸ್, ಈಜಿಪ್ಟ್ ಸೇರಿ ಹಲವು ದೇಶಗಳಿಗೆ 533 ರಫೇಲ್ ಯುದ್ಧ ವಿಮಾನ ಮಾರಾಟ ಮಾಡಲಾಗಿದೆ. ಜಾಗತಿಕ ಮಟ್ಟದಲ್ಲಿ ಹೆಚ್ಚುತ್ತಿರುವ ಬೇಡಿಕೆ, ಮುಖ್ಯವಾಗಿ ಏಷ್ಯಾ ಪೆಸಿಫಿಕ್ ವಲಯದಲ್ಲಿ ಹೆಚ್ಚಿರುವ ರಫೇಲ್ ಯುದ್ಧ ವಿಮಾನಗಳ ಪ್ರಾಬಲ್ಯ ತಗ್ಗಿಸಲು ಚೀನಾ ರಕ್ಷಣಾ ಸಂಶೋಧನಾ ಸಂಸ್ಥೆಯ ಪರವಾಗಿ ಡಸಾಲ್ಟ್ ಏವಿಯೇಷನ್‌ನ ರಫೇಲ್ ಯುದ್ಧ ವಿಮಾನಗಳ ವಿರುದ್ಧ ಅಪಪ್ರಚಾರ ನಡೆಸಲಾಗಿದೆ ಎಂದು ವರದಿಯಾಗಿದೆ.**

### ಆರೋಪ ನಿರಾಕರಿಸಿದ ಚೀನಾ

**ರಫೇಲ್ ಯುದ್ಧ ವಿಮಾನಗಳ ಕುರಿತ ಫ್ರಾನ್ಸ್ ಆರೋಪವನ್ನು ಚೀನಾ ನಿರಾಕರಿಸಿದೆ. ಡಸಾಲ್ಟ್ ಏವಿಯೇಷನ್ ಆರೋಪ ಆಧಾರ ರಹಿತ ಎಂದು ಕರೆದಿದೆ. ಮಿಲಿಟರಿ ಉತ್ಪನ್ನಗಳ ಮಾರಾಟ ಹಾಗೂ ರಫ್ತಿನ ವಿಚಾರದಲ್ಲಿ ಚೀನಾ ಜವಾಬ್ದಾರಿಯುತ ದೇಶವಾಗಿ ನಡೆದುಕೊಳ್ಳುತ್ತದೆ. ಮತ್ತೊಂದು ದೇಶದ ರಕ್ಷಣಾ ಉತ್ಪನ್ನಗಳ ಬಗ್ಗೆ ಅಪಪ್ರಚಾರ ಮಾಡುವ ಅಗತ್ಯ ನಮಗಿಲ್ಲ ಎಂದು ತಿಳಿಸಿದೆ.**


## ದಲೈಲಾಮಾ ಅವರಿಗೆ ಭಾರತರತ್ನ ನೀಡುವಂತೆ ಮನವಿ

**ನವದೆಹಲಿ:** ಟಿಬೆಟಿಯನ್ ಹೋರಾಟಕ್ಕೆ ಬೆಂಬಲ ವ್ಯಕ್ತಪಡಿಸುವ ಸಲುವಾಗಿ, ಸರ್ವಪಕ್ಷ ವೇದಿಕೆಯು ಕೇಂದ್ರ ಸರ್ಕಾರಕ್ಕೆ ಪತ್ರ ಬರೆದಿದ್ದು, ಟಿಬೆಟಿಯನ್ ಆಧ್ಯಾತ್ಮಿಕ ನಾಯಕ ದಲೈ ಲಾಮಾ ಅವರಿಗೆ ಭಾರತದ ಅತ್ಯುನ್ನತ ನಾಗರಿಕ ಗೌರವವಾದ ಭಾರತ ರತ್ನವನ್ನು ನೀಡಬೇಕೆಂದು ಮನವಿ ಮಾಡಿದೆ. ದಲೈ ಲಾಮಾ ಅವರು ಸಂಸತ್ತಿನ ಜಂಟಿ ಅಧಿವೇಶನವನ್ನುದ್ದೇಶಿಸಿ ಮಾತನಾಡಲು ಅವಕಾಶ ನೀಡುವಂತೆಯೂ ವೇದಿಕೆ ಸರ್ಕಾರಕ್ಕೆ ಮನವಿ ಮಾಡಿದೆ.

ಇದು ಚೀನಾದ ಆಕ್ರೋಶಕ್ಕೆ ಕಾರಣವಾಗಬಹುದು ಎಂದು ಅನುಮಾನಿಸಲಾಗಿದೆ. ಬಿಜೆಪಿ, ಬಿಜೆಡಿ ಮತ್ತು ಜೆಡಿಯೂ ಸಂಸದರನ್ನು ಒಳಗೊಂಡ ಟಿಬೆಟ್‌ಗಾಗಿನ ಸರ್ವಪಕ್ಷ ಭಾರತೀಯ ಸಂಸದೀಯ ವೇದಿಕೆಯು ಈ ಪತ್ರವನ್ನು ಕಳುಹಿಸಿದೆ. ಈ ತಿಂಗಳ ಎರಡನೇ ಸಭೆಯಲ್ಲಿ ಪ್ರಸ್ತಾವನೆಯನ್ನು ಬೆಂಬಲಿಸುವ ನಿರ್ಣಯವನ್ನು ಸರ್ವಾನುಮತದಿಂದ ಅಂಗೀಕರಿಸಿದ ನಂತರ ವೇದಿಕೆಯು ಸರ್ಕಾರಕ್ಕೆ ವಿನಂತಿಯನ್ನು ಸಲ್ಲಿಸಿದೆ. 10 ಸದಸ್ಯರ ಸಮಿತಿಯು ದಲೈ ಲಾಮಾ ಅವರ ಭಾರತ ರತ್ನ ನಾಮನಿರ್ದೇಶನವನ್ನು ಬೆಂಬಲಿಸುವ ಸಹಿ ಅಭಿಯಾನವನ್ನು ಪ್ರಾರಂಭಿಸಿದೆ. ಸುಮಾರು 80 ಸಂಸದರಿಂದ ಸಹಿಗಳನ್ನು ಸಂಗ್ರಹಿಸಿದೆ. ಇದನ್ನು ಮುಂದಿನ ದಿನಗಳಲ್ಲಿ ಪ್ರಧಾನಿ, ರಾಷ್ಟ್ರಪತಿಗಳಿಗೆ ಸಲ್ಲಿಸಲು ಯೋಜಿಸಿದೆ. ದಲೈ ಲಾಮಾ ಅವರಿಗೆ ಭಾರತ ರತ್ನ ನೀಡಬೇಕೆಂದು ಒತ್ತಾಯಿಸುತ್ತಿರುವ ಗುಂಪು 80ಕ್ಕೂ ಹೆಚ್ಚು ಸಂಸದರ ಸಹಿಯನ್ನು ಪಡೆದುಕೊಂಡಿದೆ ಮತ್ತು ವೇದಿಕೆಯು 100 ಸಂಸದರ ಸಹಿಗಳನ್ನು ಸಂಗ್ರಹಿಸಲು ಸಾಧ್ಯವಾದ ನಂತರ ಸಲ್ಲಿಸುವ ಮನವಿಗೆ ಸಹಿ ಹಾಕಿದವರಲ್ಲಿ ವಿರೋಧ ಪಕ್ಷಗಳ ಸಂಸದರೂ ಸೇರಿದ್ದಾರೆ ಎಂದು ರಾಜ್ಯಸಭಾ ಸದಸ್ಯ ಸುಜೀತ್ ಕುಮಾರ್ ಹೇಳಿದರು.

ದಲೈ ಲಾಮಾ ಅವರಿಗೆ ಭಾರತರತ್ನ ನೀಡಲು ನಾವು ಸಹಿ ಅಭಿಯಾನವನ್ನು ಪ್ರಾರಂಭಿಸಿದ್ದೇವೆ. ಅನೇಕ ಸಂಸದರು ಮುಂದೆ ಬಂದಿದ್ದಾರೆ ಮತ್ತು ಅವರಲ್ಲಿ ಕೆಲವರು ಅಭಿಯಾನವನ್ನು ಬೆಂಬಲಿಸಿ ವಿಡಿಯೋ ಸಂದೇಶಗಳನ್ನು ಕಳುಹಿಸಿದ್ದಾರೆ.

ಜಂಟಿ ಅಧಿವೇಶನವನ್ನು ಕರೆಯುವಂತೆ ನಾವು ಲೋಕಸಭೆ, ರಾಜ್ಯಸಭೆಯ ಸ್ಪೀಕರ್‌ಗಳಿಗೆ ಪತ್ರ ಬರೆಯುತ್ತೇವೆ, ಅದನ್ನು ಪರಮಪೂಜ್ಯರು ಉದ್ದೇಶಿಸಿ ಮಾತನಾಡಲಿದ್ದಾರೆ ಎಂದು ಕುಮಾರ್ ಹೇಳಿದರು.



### ಹುಟ್ಟುಹಬ್ಬದ ಸಂಭ್ರಮ

**ಏತನಧ್ಯೆ, ದಲೈ ಲಾಮಾ ತಮ 90 ನೇ ಹುಟ್ಟುಹಬ್ಬವನ್ನು ಆಚರಿಸಿಕೊಂಡರು, ಈ ಸಂದರ್ಭದಲ್ಲಿ ಟಿಬೆಟ್‌ನ 14 ನೇ ಆಧ್ಯಾತ್ಮಿಕ ನಾಯಕನನ್ನು ಗೌರವಿಸಲು ಸಾವಿರಾರು ಭಕ್ತರು ದಲೈ ಲಾಮಾ ದೇವಾಲಯವಾದ ಸುಗ್ಲಾಗ್‌ಖಾಂಗ್‌ನ ಮುಖ್ಯ ಅಂಗಳದಲ್ಲಿ ಜಮಾಯಿಸಿದರು. ಭಾರತ, ವಿದೇಶಗಳ ರಾಜಕೀಯ ನಾಯಕರು ಸಹ ದಲೈ ಲಾಮಾ ಅವರೊಂದಿಗೆ ವೇದಿಕೆಯನ್ನು ಹಂಚಿಕೊಂಡರು, ಭಾರತದಲ್ಲಿ ದೇಶಭ್ರಷ್ಟರಾಗಿ ವಾಸಿಸುತ್ತಿರುವ, 1960ರ ದಶಕದಲ್ಲಿ ಈ ಪ್ರದೇಶವು ಚೀನಾದ ಆಕ್ರಮಣಕ್ಕೆ ಒಳಗಾದ ನಂತರ ಟಿಬೆಟಿಯನ್ ಜನರ ಹಕ್ಕುಗಳಿಗಾಗಿ ಹೋರಾಡುತ್ತಿರುವ ಬೌದ್ಧ ನಾಯಕನಿಗೆ ತಮ ಬೆಂಬಲವನ್ನು ನೀಡಿದರು.**

## ರಾಯಗಢ ಕರಾವಳಿಯಲ್ಲಿ ಶಂಕಾಸ್ಪದ ದೋಣಿ ಪತ್ತೆ ಕಟ್ಟೆಚ್ಚರ

**ಮುಂಬೈ:** ಮಹಾರಾಷ್ಟ್ರದ ರಾಯಗಢ ಕರಾವಳಿಯಲ್ಲಿ ಅನುಮಾನಾಸ್ಪದವಾಗಿ ದೋಣಿಯೊಂದು ರೇವ್ಡಾಂಡ ಬಳಿ ಪತ್ತೆಯಾದ ನಂತರ ಭದ್ರತೆಯನ್ನು ಹೆಚ್ಚಿಸಲಾಗಿದೆ.

ಈ ಬಗ್ಗೆ ಎಚ್ಚರ ವಹಿಸುವಂತೆ ಭದ್ರತಾ ಪಡೆಗೆ ಸೂಚನೆ ನೀಡಲಾಗಿದೆ. ಈ ಅನುಮಾನಾಸ್ಪದ ದೋಣಿ ಪಾಕಿಸ್ತಾನ ದ್ದಾಗಿರಬಹುದು ಎಂದು ಶಂಕಿಸಲಾಗಿದೆ. 26/11ರಂದು ಮುಂಬೈ ಮೇಲೆ ದಾಳಿ ಮಾಡಿದ ಪಾಕಿಸ್ತಾನಿ ಭಯೋತ್ಪಾದಕರು ಸಮುದ್ರ ಮಾರ್ಗವಾಗಿ ದೋಣಿ ಮೂಲಕ ಬಂದಿದ್ದರು. ಶಂಕಿತರನ್ನು ಬಂಧನಕ್ಕೆ ಬಲೆ ಬೀಸಿದ ಪೊಲೀಸರು ಎಲ್ಲೆಡೆ ಕಟ್ಟೆಚ್ಚರ ವಹಿಸಿದ್ದಾರೆ. ಕೊರ್ಲೈ ಸಮುದ್ರದಲ್ಲಿ ಶಂಕಾಸ್ಪದ ದೋಣಿಗಳಲ್ಲಿ ಪತ್ತೆಯಾಗುತ್ತಿರುವ ಹಿನ್ನೆಲೆಯಲ್ಲಿ ಭದ್ರತಾ ಪಡೆಗಳು ಕಟ್ಟೆಚ್ಚರದಲ್ಲಿವೆ. ಶಂಕಿತರನ್ನು ಬಂಧಿಸಲು ಪೊಲೀಸರು ರಾತ್ರಿಯಿಡೀ ವಿವಿಧ ಸ್ಥಳಗಳಲ್ಲಿ ಕಟ್ಟೆಚ್ಚರ ವಹಿಸುವಂತೆ ಸೂಚಿಸಲಾಗಿದೆ. ಅನುಮಾನಾಸ್ಪದ ದೋಣಿಯಿಂದ ಕೆಲವರು ಇಳಿದಿದ್ದಾರೆ ಎಂದು ಪೊಲೀಸರು ಶಂಕಿಸಿದ್ದು, ಅವರ ಹುಡುಕಾಟಕ್ಕೆ ಕಾರ್ಯಾಚರಣೆ ಕೈಗೊಳ್ಳಲು ಅಣಿಯಾಗಿದ್ದಾರೆ. ರಾಯಗಢ ಪೊಲೀಸರು, ಕರಾವಳಿ ಕಾವಲು ಪಡೆ, ಕಸ್ಟಮ್ಸ್ ಇಲಾಖೆ, ಕ್ಷಿಪ್ರ ಪ್ರತಿಕ್ರಿಯೆ ತಂಡ, ಸ್ಥಳೀಯ ಅಪರಾಧ ಶಾಖೆ, ನೌಕಾಪಡೆ, ಬಾಂಬ್ ಪತ್ತೆ, ವಿಲೇವಾರಿ ದಳ ಸೇರಿದಂತೆ ಎಲ್ಲರೂ ಕಾರ್ಯಾಚರಣೆಗೆ ಮುಂದಾಗಿದ್ದಾರೆ. ಈ ಬಗ್ಗೆ ಎಚ್ಚರವಹಿಸುವಂತೆ ಭದ್ರತಾ ಪಡೆಗೆ ಸೂಚನೆ ನೀಡಲಾಗಿದೆ. ರಾಯಗಡ್ ಪೊಲೀಸರು, ತ್ವರಿತ ಪ್ರತಿಕ್ರಿಯೆ ತಂಡ , ಬಾಂಬ್ ಪತ್ತೆ, ವಿಲೇವಾರಿ ದಳ, ನೌಕಾಪಡೆ ಮತ್ತು ಕರಾವಳಿ ರಕ್ಷಣಾ ಪಡೆಗಳ ಸಿಬ್ಬಂದಿ ರಾತ್ರಿ ವೇಳೆ ಸ್ಥಳಕ್ಕೆ ತಲುಪಿದ್ದಾರೆ. ಕೊರ್ಲೈ ಗ್ರಾಮದ ಮಾಜಿ ಸರಪಂಚ ಪ್ರಶಾಂತ್ ಮಿಸಾಲ್ ಮಾತನಾಡಿ,



ರಾತ್ರಿ 8:30 ರ ಸುಮಾರಿಗೆ ಪೊಲೀಸ್ ಅಧಿಕಾರಿಗಳಿಂದ ಕರೆ ಬಂದಿದ್ದು, ಪಾಕಿಸ್ತಾನಿ ದೋಣಿ ಸಮುದ್ರದಲ್ಲಿ ಕಂಡು ಬಂದಿರುವುದಾಗಿ ತಿಳಿಸಿದರು. ಕಡಲ ಕಿನಾರೆ ಬಳಿ ಗ್ರಾಮಸ್ಥರು ಹೋಗುವ ಮೊದಲೇ ಪೊಲೀಸರು ಅಲ್ಲಿಗೆ ತಲುಪಿದ್ದರು. ನಾವು ಬೆಳಗಿನ ಜಾವದವರೆಗೆ ಅಲ್ಲೇ ಇದ್ದೆವು. ಆದರೆ, ಬೆಳಗಿನ ಜಾವ 4ಗಂಟೆಯ ನಂತರ ದೋಣಿ ಕಣರೆಯಾಯಿತು. ಆದ್ದರಿಂದ, ಇದು ಅನುಮಾನಾಸ್ಪದವಾಗಿ ಕಾಣುತ್ತಿದೆ. ಆದ್ದರಿಂದ, ಕೊರ್ಲೈ ಜನರು ಜಾಗರೂಕರಾಗಿರಲು ಎಚ್ಚರಿಕೆ ನೀಡಲಾಗಿದೆ ಎಂದು ಅವರು ತಿಳಿಸಿದ್ದಾರೆ.

### ಉಗ್ರರಾದ ಹಫೀಜ್ ಸಯೀದ್, ಮಸೂದ್ ಅಜರ್‌ನನ್ನು ಭಾರತಕ್ಕೆ ಹಸ್ತಾಂತರಿಸಲು ಸಿದ್ಧ ಎಂದ ಬಿಲಾವಲ್ ಭುಟ್ಟೋ

## ಭಾರತ ಸರ್ಕಾರವು ಪಾಕಿಸ್ತಾನದ ಹೇಳಿಕೆಗೆ ಎಚ್ಚರಿಕೆಯ ಸ್ವಾಗತ

**ಇಸ್ಲಾಮಾಬಾದ್:** ಪಾಕಿಸ್ತಾನದಲ್ಲಿ ಭಯೋತ್ಪಾದನೆ ಕುರಿತಂತೆ ಪಾಕಿಸ್ತಾನದ ಮಾಜಿ ವಿದೇಶಾಂಗ ಸಚಿವ ಬಿಲಾವಲ್ ಭುಟ್ಟೋ ಜರ್ದಾರಿ ಮಹತ್ವದ ಹೇಳಿಕೆ ನೀಡಿದ್ದಾರೆ. ಭಾರತದ ಮೋಸ್ಟ್ ವಾಂಟೆಡ್ ಭಯೋತ್ಪಾದಕರಾದ ಮುಂಬೈ ದಾಳಿಯ ಮಾಸ್ಟರ್ ಮೈಂಡ್ ಹಫೀಜ್ ಸಯೀದ್ ಮತ್ತು ಜೈಶ್-ಎ-ಮೊಹಮ್ಮದ್‌ನ ಮಸೂದ್ ಅಜರ್ ಅವರನ್ನು ಭಾರತಕ್ಕೆ ಹಸ್ತಾಂತರಿಸಲು ಪಾಕಿಸ್ತಾನ ಸಿದ್ಧವಿದೆ ಎಂದು ಹೇಳಿದ್ದಾರೆ. ಈ ಹೇಳಿಕೆಯು ದಕ್ಷಿಣ ಏಷ್ಯಾದ ರಾಜಕೀಯ ವಲಯದಲ್ಲಿ ತೀವ್ರ ಸಂಚಲನ ಮೂಡಿಸಿದೆ.

ಇಸ್ಲಾಮಾಬಾದ್‌ನಲ್ಲಿ ಖಾಸಗಿ ಮಾಧ್ಯಮಕ್ಕೆ ಮಾತನಾಡಿದ ಬಿಲಾವಲ್ ಭುಟ್ಟೋ, ಭಯೋತ್ಪಾದನೆ ನಿಗ್ರಹ ನಮ್ಮ ರಾಷ್ಟ್ರೀಯ ಆದ್ಯತೆಯಾಗಿದ್ದು, ನಮ್ಮ ನೆಲವನ್ನು ಯಾವುದೇ ದೇಶದ ವಿರುದ್ಧ ಭಯೋತ್ಪಾದಕ ಚಟುವಟಿಕೆಗಳಿಗೆ ಬಳಸಲು ನಾವು ಅನುಮತಿಸುವುದಿಲ್ಲ. ಈ ನಿಟ್ಟಿನಲ್ಲಿ ನಾವು ಕಠಿಣ ಕ್ರಮಗಳನ್ನು ತೆಗೆದುಕೊಳ್ಳುತ್ತಿದ್ದೇವೆ, ಎಂದು ಹೇಳಿದ್ದಾರೆ. ಆದರೆ, ಬಿಲಾವಲ್ ಅವರ ಈ ಹೇಳಿಕೆಗೆ ಹಫೀಜ್ ಸಯೀದ್ ಅವರ ಪುತ್ರ, ತಲ್ಹಾ ಸಯೀದ್ ವಿರೋಧ ವ್ಯಕ್ತಪಡಿಸಿದ್ದಾರೆ. ಬಿಲಾವಲ್ ಅವರ ಹೇಳಿಕೆ ಪಾಕಿಸ್ತಾನಕ್ಕೆ ಜಾಗತಿಕವಾಗಿ ಅವಮಾನ ತಂದಿದೆ ಎಂದು ತಲ್ಹಾ ಹೇಳಿದ್ದಾರೆ. ಭಯೋತ್ಪಾದಕರನ್ನು ಹಸ್ತಾಂತರಿಸುವ ಬಗ್ಗೆ ಬಿಲಾವಲ್ ನೀಡಿದ ಹೇಳಿಕೆಗಳು ವಿವಾದಕ್ಕೆ ಕಾರಣವಾಗಿವೆ.

**ಭಯೋತ್ಪಾದಕರ ಹಸ್ತಾಂತರಕ್ಕೆ ಒಪ್ಪಿಗೆ:** 26/11 ಮುಂಬೈ ದಾಳಿಯ ಸೂತ್ರಧಾರಿ, ಲಷ್ಕರ್-ಎ-ತೊಯ್ಬಾ ಸಂಸ್ಥಾಪಕ ಹಫೀಜ್ ಸಯೀದ್, ಜೈಶ್-ಎ-ಮೊಹಮ್ಮದ್ ಮುಖ್ಯಸ್ಥ ಮಸೂದ್ ಅಜರ್ ಹಾಗೂ ಹಫೀಜ್ ಸಯೀದ್‌ನ ಮಗ ತಲ್ಹಾ ಸಯೀದ್ ಸೇರಿದಂತೆ ಭಾರತಕ್ಕೆ ಬೇಕಾಗಿರುವ ಉಗ್ರರನ್ನು ಕಾನೂನು ಪ್ರಕ್ರಿಯೆಗಳ ಮೂಲಕ ಹಸ್ತಾಂತರಿಸಲು ಪಾಕಿಸ್ತಾನ ಸಿದ್ಧವಿದೆ ಎಂದು ಬಿಲಾವಲ್ ಭುಟ್ಟೋ ತಿಳಿಸಿದ್ದಾರೆ. ಪಾಕಿಸ್ತಾನದ ಈ ಹೇಳಿಕೆಗೆ ಭಾರತ ಸರ್ಕಾರವು ಎಚ್ಚರಿಕೆಯಿಂದ ಸ್ವಾಗತ ನೀಡಿದೆ. ಪಾಕಿಸ್ತಾನದ ಹೇಳಿಕೆ ಸ್ವಾಗತಾರ್ಹ, ಆದರೆ ಇದು ಕೇವಲ ಮಾತುಗಳಲ್ಲಿ ಉಳಿಯಬಾರದು. ಈ ಹಿಂದೆ ನೀಡಿದ ಭರವಸೆಗಳು ಹುಸಿಯಾಗಿವೆ. ಈ ಬಾರಿ ನುಡಿದಂತೆ ನಡೆದು, ತಮ್ಮ ಬದ್ಧತೆಯನ್ನು ಸಾಬೀತುಪಡಿಸಬೇಕು ಎಂದು ಭಾರತದ ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಮೂಲಗಳು ತಿಳಿಸಿವೆ. ಭಾರತವು ಈ ಭಯೋತ್ಪಾದಕರ ಹಸ್ತಾಂತರಕ್ಕೆ ದಶಕಗಳಿಂದಲೂ ಒತ್ತಾಯಿಸುತ್ತಿದೆ. ಮಸೂದ್ ಅಜರ್ ಭಾರತದ ಮೋಸ್ಟ್ ವಾಂಟೆಡ್ ಭಯೋತ್ಪಾದಕರಲ್ಲಿ ಒಬ್ಬ. 2001ರ ಸಂಸತ್ ದಾಳಿ, 26/11 ಮುಂಬೈ ದಾಳಿ, 2016 ರ ಪಠಾಣ್ ಕೋಟ್ ವಾಯುನೆಲೆ ದಾಳಿ ಮತ್ತು 2019 ರ ಪುಲ್ವಾಮಾ ಆತ್ಮಹತ್ಯಾ ಬಾಂಬ್ ದಾಳಿಯಂತಹ ಹಲವಾರು ಪ್ರಮುಖ ದಾಳಿಗಳಲ್ಲಿ ಆತನ ಕೈವಾಡವಿದೆ. 1999 ರಲ್ಲಿ ಇಂಡಿಯನ್ ಏರ್‌ಲೈನ್ಸ್ ಫ್ಲೈಟ್ 814 ಅನ್ನು ಅಪಹರಿಸಿದಾಗ ಒತ್ತೆಯಾಳುಗಳನ್ನು ಬಿಡುಗಡೆ ಮಾಡುವ ಸಲುವಾಗಿ ಮಸೂದ್ ಅಜರ್‌ನನ್ನು ಭಾರತೀಯ ಜೈಲಿನಿಂದ ಬಿಡುಗಡೆ ಮಾಡಲಾಗಿತ್ತು. ಭಾರತದ ಬಗ್ಗೆ ಮಾತನಾಡುತ್ತಾ, ಭಯೋತ್ಪಾದಕರನ್ನು ಬೆನ್ನಟ್ಟುವ ಭಾರತದ ಕ್ರಮವು ಹೊಸ ಅಸಹಜತೆ ಎಂದು ಬಿಲಾವಲ್ ಹೇಳಿದ್ದಾರೆ. ಇದು ಪಾಕಿಸ್ತಾನದ ಹಿತಾಸಕ್ತಿಗಳಿಗೆ ಮತ್ತು ಭಾರತದ ಹಿತಾಸಕ್ತಿಗಳಿಗೆ ಒಳ್ಳೆಯದಲ್ಲ ಎಂದಿದ್ದಾರೆ. ಇನ್ನು ಹಫೀಜ್ ಸಯೀದ್ ಮತ್ತು ಮಸೂದ್ ಅಜರ್ ಎಲ್ಲಿದ್ದಾರೆ ಎಂಬ ಪ್ರಶ್ನೆಗೆ ಉತ್ತರಿಸಿದ ಬಿಲಾವಲ್, ಹಫೀಜ್ ಸಯೀದ್ ಜೈಲಿನಲ್ಲಿದ್ದಾನೆ. ಮಸೂದ್ ಅಜರ್ ಅಫ್ಘಾನಿಸ್ತಾನದಲ್ಲಿದ್ದಾನೆ ಎಂದು ಪಾಕಿಸ್ತಾನ ಅಂದುಕೊಂಡಿದೆ ಎಂದಿದ್ದಾರೆ. ಮಸೂದ್ ಅಜರ್‌ನನ್ನು ಬಂಧಿಸಲು ಸಾಧ್ಯವಾಗಿಲ್ಲ ಎಂದು ಅವರು ಒಪ್ಪಿಕೊಂಡಿದ್ದಾರೆ.



**ಪಾಕಿಸ್ತಾನದಿಂದ ಮಹತ್ವದ ಘೋಷಣೆ**

### ಅಂತರರಾಷ್ಟ್ರೀಯ ಒತ್ತಡದ ಫಲ

**ಪಾಕಿಸ್ತಾನದ ಈ ದಿಢೀರ್ ನಿರ್ಧಾರದ ಹಿಂದೆ ಅಂತರರಾಷ್ಟ್ರೀಯ ಸಮುದಾಯದ, ವಿಶೇಷವಾಗಿ ಹಣಕಾಸು ಕಾರ್ಯಪಡೆಯ ತೀವ್ರ ಒತ್ತಡವಿದೆ ಎನ್ನಲಾಗಿದೆ. ಭಯೋತ್ಪಾದನೆಗೆ ಹಣಕಾಸು ನೆರವು ನೀಡುವುದನ್ನು ತಡೆಯುವಲ್ಲಿ ವಿಫಲವಾದ ಕಾರಣ ಪಾಕಿಸ್ತಾನವು ಹಲವು ವರ್ಷಗಳಿಂದ ಬೂದು ಪಟ್ಟಿಯಲ್ಲಿದ್ದು, ಆರ್ಥಿಕ ಸಂಕಷ್ಟಕ್ಕೆ ಸಿಲುಕಿದೆ. ಈ ಒತ್ತಡದಿಂದ ಪಾರಾಗಲು ಪಾಕಿಸ್ತಾನ ಈ ಕ್ರಮಕ್ಕೆ ಮುಂದಾಗಿರಬಹುದು ಎಂದು ರಾಜಕೀಯ ಪಂಡಿತರು ಅಭಿಪ್ರಾಯಪಟ್ಟಿದ್ದಾರೆ.**

> **ಲಷ್ಕರ್ ಎ ತೊಯ್ಬಾ, ಜೈಶ್-ಎ-ಮೊಹಮ್ಮದ್ ಎರಡನ್ನೂ ಪಾಕಿಸ್ತಾನವು ನಿಷೇಧಿಸಿದೆ. ನ್ಯಾಷನಲ್ ಕೌಂಟರ್ ಟೆರರಿಸಂ ಅಥಾರಿಟಿ ಪ್ರಕಾರ ಈ ಸಂಘಟನೆಗಳನ್ನು ನಿಷೇಧಿಸಲಾಗಿದೆ. 26/11 ಮುಂಬೈ ದಾಳಿಯ ಮಾಸ್ಟರ್‌ಮೈಂಡ್ ಹಫೀಜ್ ಸಯೀದ್ ಪ್ರಸ್ತುತ ಭಯೋತ್ಪಾದಕರಿಗೆ ಹಣಕಾಸು ನೆರವು ನೀಡಿದ ಆರೋಪದ ಮೇಲೆ 33 ವರ್ಷಗಳ ಶಿಕ್ಷೆಯನ್ನು ಅನುಭವಿಸುತ್ತಿದ್ದಾನೆ. ಮಸೂದ್ ಅಜರ್‌ನನ್ನು ವಿಶ್ವಸಂಸ್ಥೆಯು ಜಾಗತಿಕ ಭಯೋತ್ಪಾದಕ ಎಂದು ಘೋಷಿಸಿದೆ Nacta ಕೂಡ ಆತನನ್ನು ನಿಷೇಧಿಸಿದೆ**
>
> **- ಬಿಲಾವಲ್ ಭುಟ್ಟೋ ಜರ್ದಾರಿ**
> **ಮಾಜಿ ವಿದೇಶಾಂಗ ಸಚಿವ**

## ಮಿನಿ ನ್ಯೂಸ್

### 73.72 ಲಕ್ಷರೂ. ವಂಚಿಸಿದ ಡೇಟಿಂಗ್ ಆ್ಯಪ್‌ನಲ್ಲಿ ಪರಿಚಯವಾಗಿದ್ದ ಮಹಿಳೆ

**ಥಾಣೆ:** ಡೇಟಿಂಗ್ ಆ್ಯಪ್ ಮೂಲಕ ಭೇಟಿಯಾದ ಮಹಿಳೆಯೊಬ್ಬರು ಹೆಚ್ಚಿನ ಆದಾಯದ ಆಮಿಷವೊಡ್ಡಿ ಚಿನ್ನದ ವ್ಯಾಪಾರಕ್ಕೆ ಆಮಿಷವೊಡ್ಡಿ ವ್ಯಕ್ತಿಗೆ 73.72 ಲಕ್ಷ ರೂ ವಂಚಿಸಿರುವ ಘಟನೆ ಇಲ್ಲಿ ವರದಿಯಾಗಿದೆ. ಕಳೆದ 2024 ಮಾರ್ಚ್ ಮತ್ತು ಮೇ ನಡುವೆ ಈ ಘಟನೆ ನಡೆದಿದೆ. ಡೇಟಿಂಗ್ ಆ್ಯಪ್ ಮೂಲಕ ನ್ಯೂ ಪನ್ವೇಲ್ ಪ್ರದೇಶದಲ್ಲಿ ವಾಸಿಸುವ 62 ವರ್ಷದ ವ್ಯಕ್ತಿಯೊಂದಿಗೆ ಮಹಿಳೆ ಸಂಪರ್ಕ ಸಾಧಿಸಿದಳು. ಆರಂಭಿಕ ಸಂವಹನಗಳ ನಂತರ, ಇಬ್ಬರೂ ವಾಟ್ಸಾಪ್‌ನಲ್ಲಿ ಚಾಟ್ ಮಾಡುವುದನ್ನು ಮುಂದುವರೆಸಿದರು ಎಂದು ಪೊಲೀಸರು ತಿಳಿಸಿದ್ದಾರೆ. ಈ ಸಮಯದಲ್ಲಿ ತನ್ನನ್ನು ಜಿಯಾ ಎಂದು ಗುರುತಿಸಿಕೊಂಡ ಮಹಿಳೆ ಚಿನ್ನದ ವ್ಯಾಪಾರ ಯೋಜನೆಯಲ್ಲಿ ಹೂಡಿಕೆ ಮಾಡುವಂತೆ ಆಮಿಷವೊಡ್ಡಿದಳು ಎಂದು ಖಂಡೇಶ್ವರ ಪೊಲೀಸ್ ಠಾಣೆಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಮಹಿಳೆ ಹೆಚ್ಚಿನ ಆದಾಯದ ಭರವಸೆ ನೀಡಿ ನಿರ್ದಿಷ್ಟ ವ್ಯಾಪಾರ ಅರ್ಜಿಯನ್ನು ಕಳುಹಿಸಿ ಬರ್ತಿ ಮಾಡಲು ಮನವೊಲಿಸಿದರು. ನಂತರ ವ್ಯಕ್ತಿಯಿಂದ ಮೂರು ತಿಂಗಳ ಅವಧಿಯಲ್ಲಿ 73.72 ಲಕ್ಷ ರೂ.ಗಳನ್ನು ಹೂಡಿಕೆ ಮಾಡಿದಳು ಎಂದು ಅಧಿಕಾರಿ ಹೇಳಿದರು.ಆದಾಗ್ಯೂ, ನಂತರ ಯಾವುದೇ ರಿಟರ್ನ್ಸ್ ಜಮಾ ಆಗದಿದ್ದಾಗ, ದುರುದಾರರು ಅನುಮಾನಗೊಂಡಿದ್ದಾರೆ. ಹೂಡಿಕೆ ಮಾಡಿದ ಹಣದ ಬಗ್ಗೆ ವಿಚಾರಿಸಲು ಪ್ರಯತ್ನಿಸಿದಾಗ, ಮಹಿಳೆ ಪ್ರತಿಕ್ರಿಯಿ ನಿಲ್ಲಿಸಿದರು ಮತ್ತು ಅಂತಿಮವಾಗಿ ಸಂಪರ್ಕ ಕಡಿತಗೊಂಡಿತ್ತು ಎಂದು ಅಧಿಕಾರಿ ಹೇಳಿದರು. ಪ್ರಕರಣ ದಾಖಲಿಸಿ ವಹಿವಾಟು, ಆರೋಪಿ ಪತ್ತೆಹಚ್ಚಲು ಮುಂದಾಗಿದ್ದಾರೆ.

### ಉಗ್ರರಿಗೆ ಆಶ್ರಯ ನೀಡಿದ್ದ ಆರೋಪಿಗಳ ಕಸ್ಟಡಿ ಅವಧಿ ವಿಸ್ತರಣೆ

**ಜಮ್ಮು:** ಪಹಲ್ಗಾಮ್ ಉಗ್ರರ ದಾಳಿಗೆ ಸಂಬಂಧಿಸಿದಂತೆ ಪಾಕಿಸ್ತಾನದ ಭಯೋತ್ಪಾದಕರಿಗೆ ಆಶ್ರಯ ನೀಡಿದ ಆರೋಪದಡಿ ಬಂಧಿಸಲಾಗಿರುವ ಇಬ್ಬರು ಆರೋಪಿಗಳನ್ನು ಜಮ್ಮುವಿನ ವಿಶೇಷ ನ್ಯಾಯಾಲಯ 10 ದಿನಗಳ ಹೆಚ್ಚುವರಿ ಕಸ್ಟಡಿಗೆ ನೀಡಿದೆ. ರಾಷ್ಟ್ರೀಯ ತನಿಖಾ ಸಂಸ್ಥೆ. ಕಸ್ಟಡಿಯಲ್ಲಿದ್ದ ಆರೋಪಿಗಳಾದ ಪರ್ವೈಜ್ ಅಹ್ಮದ್ ಜೋಥರ್ ಬಶೀರ್ ಅಹ್ಮದ್ ಜೋಥರ್ ಅವರನ್ನು ಅವಧಿ ಮುಗಿದ ಹಿನ್ನೆಲೆ ವಿಶೇಷ ನ್ಯಾಯಾಲಯದ ಮುಂದೆ ಹಾಜರುಪಡಿಸಲಾಯಿತು. ಈ ಸಂದರ್ಭದಲ್ಲಿ ಎನ್‌ಐಎ ಅಧಿಕಾರಿಗಳು ಕಸ್ಟಡಿ ಅವಧಿಯನ್ನು ವಿಸ್ತರಿಸಿ, ಹೆಚ್ಚಿನ ತನಿಖೆಗೆ ಅನುವು ಮಾಡಿಕೊಡಬೇಕೆಂದು ನ್ಯಾಯಾಲಯಕ್ಕೆ ತಿಳಿಸಿದ್ದಾರೆ. ಬಂಧಿತ ಆರೋಪಿಗಳು ದಾಳಿ ನಡೆಸಿದ ಭಯೋತ್ಪಾದಕರ ಗುರುತುಗಳನ್ನು ಬಹಿರಂಗಪಡಿಸಿದ್ದು, ಅವರು ಪಾಕ್ ಮೂಲದ ನಿಷೇಧಿತ ಲಷ್ಕರ್-ಎ-ತಯಬಾಗೆ ಸೇರಿದವರು ಎಂಬುದನ್ನು ದೃಢಪಡಿಸಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದರು. ಭಾರಿ ಶಸ್ತ್ರಾಸ್ತ್ರಗಳನ್ನು ಹೊಂದಿದ್ದ ಭಯೋತ್ಪಾದಕರಿಗೆ ಈ ಆರೋಪಿಗಳು ಆಶ್ರಯ, ಆಹಾರ ಎಲ್ಲಾ ರೀತಿಯ ನೆರವು ಒದಗಿಸಿದ್ದರು.

### ಸಮುದ್ರದಲ್ಲಿ ಸಿಲುಕಿದ್ದ ಭಾರತೀಯ ಮೀನುಗಾರರನ್ನು ರಕ್ಷಿಸಿದ ನೌಕಾಪಡೆ

• ಉದಯವಾಹಿನಿ, ಕೊಲಂಬೊ

ಪ. ಕರಾವಳಿಯ ಸಮುದ್ರದಲ್ಲಿ ಮೀನುಗಾರಿಕಾ ದೋಣಿ ತೊಂದರೆಗೀಡಾಗಿ ಕಾಣೆಯಾಗಿದ್ದ ನಾಲ್ವರು ಭಾರತೀಯ ಮೀನುಗಾರರನ್ನು ಶ್ರೀಲಂಕಾ ನೌಕಾಪಡೆ ರಕ್ಷಿಸಿದೆ ಎಂದು ಸೋಮವಾರ ಅಧಿಕೃತ ಹೇಳಿಕೆ ತಿಳಿಸಿದೆ. ಮುಂಬೈನ ಸಾಗರ ರಕ್ಷಣಾ ಸಮನ್ವಯ ಕೇಂದ್ರ (ಎಂಆರ್‌ಸಿಸಿ) ಸೂಚನೆ ನೀಡಿದ ನಂತರ ಶ್ರೀಲಂಕಾ ನೌಕಾಪಡೆಯು ನಡೆಸಿದ ಸಂಘಟಿತ ಶೋಧ ಮತ್ತು ರಕ್ಷಣಾ ಕಾರ್ಯಾಚರಣೆಯಲ್ಲಿ (ಎಸ್‌ಎಆರ್) ಮೀನುಗಾರರನ್ನು ರಕ್ಷಿಸಲಾಗಿದೆ ಎಂದು ಶ್ರೀಲಂಕಾ ನೌಕಾಪಡೆ ಬಿಡುಗಡೆ ಮಾಡಿದ ಅಧಿಕೃತ ಹೇಳಿಕೆ ತಿಳಿಸಿದೆ.

ಪ್ರತಿಕೂಲ ಹವಾಮಾನದಿಂದಾಗಿ ಜೂನ್ 29ರಂದು ಕಾಣೆಯಾಗಿದ್ದ ಭಾರತೀಯ ಮೀನುಗಾರಿಕಾ ದೋಣಿಯ ಬಗ್ಗೆ ಎಂಆರ್‌ಸಿಸಿ, ಶ್ರೀಲಂಕಾ ನೌಕಾಪಡೆಗೆ ಎಚ್ಚರಿಕೆ ನೀಡಿತ್ತು. ಎಲ್ಲಾ ಸಂವಹನ ಸಂಪರ್ಕಗಳನ್ನು ಬೋಟ್ ಕಳೆದುಕೊಂಡಿತ್ತು. ಮೀನುಗಾರಿಕಾ ದೋಣಿ ಸಮುದ್ರದಲ್ಲಿ ತೊಂದರೆಗೆ ಒಳಗಾಗಿ ಚಿಲಾವ್‌ನಲ್ಲಿ ಸಿಲುಕಿದ್ದ ನಾಲ್ವರು ಭಾರತೀಯ ಮೀನುಗಾರರನ್ನು ಕಾರ್ಯಾಚರಣೆ ನಡೆಸಿ ರಕ್ಷಿಸಲಾಗಿದೆ.

ಭಾರತದ ಮಿನಿಕೋಯ್ ದ್ವೀಪದ ಮೀನುಗಾರರನ್ನು ಡಿಕೋವಿಟಾ ಬಂದರಿಗೆ ಸುರಕ್ಷಿತವಾಗಿ ಕರೆತರಲಾಯಿತು. ಅಲ್ಲಿ ಶ್ರೀಲಂಕಾ ನೌಕಾಪಡೆ ಮತ್ತು ಕರಾವಳಿ ಕಾವಲು ಪಡೆ ಅಗತ್ಯ ನೆರವನ್ನು ನೀಡಿದೆ. ಕಳೆದ ಎರಡು ವಾರಗಳಲ್ಲಿ ಶ್ರೀಲಂಕಾ ನೌಕಾಪಡೆಯಿಂದ ಭಾರತೀಯ ಮೀನುಗಾರರನ್ನು ರಕ್ಷಿಸಿದ ಎರಡನೇ ಪ್ರಕರಣ ಇದಾಗಿದೆ.

### ಕೋಳಿಫಾರಂ ಗೋಡೆ ಕುಸಿದು ಇಬ್ಬರ ಸಾವು, 16 ಜಿಲ್ಲೆಗಳಿಗೆ ಯೆಲ್ಲೊ ಅಲರ್ಟ್

**ಭುವನೇಶ್ವರ:** ಒಡಿಶಾದ ನುವಾಪಾ ಜಿಲ್ಲೆಯಲ್ಲಿ ಭಾರಿ ಮಳೆಯಿಂದಾಗಿ ನಿರ್ಮಾಣ ಹಂತದ ಕೋಳಿಫಾರಂ ಗೋಡೆ ಕುಸಿದು ಇಬ್ಬರು ಮಹಿಳೆಯರು ಸ್ಥಳದಲ್ಲೇ ಮೃತಪಟ್ಟಿದ್ದು, ಎಂಟು ವರ್ಷದ ಬಾಲಕಿ ಗಾಯಗೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಲಖಾನಾ ಪ್ರದೇಶದಲ್ಲಿ ಈ ಘಟನೆ ನಡೆದಿದ್ದು, ಮೃತರನ್ನು ಬಲ್ಮತಿ ಸಬರ್ (35), ರೂಪೆ ಸಬರ್ (61) ಎಂದು ಗುರುತಿಸಲಾಗಿದೆ. ಗಾಯಗೊಂಡ ಬಾಲಕಿ ರಿಧಿಯನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಒಡಿಶಾದ 30 ಜಿಲ್ಲೆಗಳ ಪೈಕಿ 16 ಜಿಲ್ಲೆಗಳಲ್ಲಿ ಸೋಮವಾರ ಭಾರಿ ಮಳೆಯಾಗುವ ಸಾಧ್ಯತೆ ಹಿನ್ನೆಲೆಯಲ್ಲಿ ಹವಾಮಾನ ಇಲಾಖೆ 'ಯೆಲ್ಲೊ ಅಲರ್ಟ್' ಘೋಷಿಸಿದೆ. ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ. ಈ ಹಿನ್ನೆಲೆಯಲ್ಲಿ ಸಮುದ್ರಕ್ಕೆ ಇಳಿಯದಂತೆ ಮೀನುಗಾರರಿಗೆ ಹವಾಮಾನ ಇಲಾಖೆ ಎಚ್ಚರಿಕೆ ನೀಡಿದೆ. ಮಹಾನದಿ ಸೇರಿದಂತೆ ಪ್ರಮುಖ ನದಿಗಳ ನೀರಿನ ಮಟ್ಟ ಹೆಚ್ಚಾಗಿದ್ದು, ಅಪಾಯದ ಮಟ್ಟ ಮೀರಿ ಹರಿಯುತ್ತಿವೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

### ಹಿಮಾಚಲ: ಪ್ರವಾಹ ಪರಿಹಾರಕ್ಕೆ ನನ್ನ ಬಳಿ ದುಡ್ಡಿಲ್ಲ: ಕಂಗನಾ

**ಮಂಡಿ:** ಹಿಮಾಚಲ ಪ್ರದೇಶದ ಮಂಡಿ ಜಿಲ್ಲೆಯ ಪ್ರವಾಹ ಪೀಡಿತ ಪ್ರದೇಶಗಳಿಗೆ ಭೇಟಿ ನೀಡಿದ ಸಂದರ್ಭದಲ್ಲಿ ನಟಿ ಹಾಗೂ ಸಂಸದೆ ಕಂಗನಾ ರನೌತ್ ನೀಡಿದ ಹೇಳಿಕೆ ಭಾರಿ ಟೀಕೆಗೆ ಗುರಿಯಾಗಿದೆ. ಭೇಟಿ ವೇಳೆ ಸುದ್ದಿ ಸಂಸ್ಥೆ ಎಎನ್‌ಐ ಜೊತೆ ಮಾತನಾಡಿದ ಕಂಗನಾ, ಪರಿಹಾರ ನೀಡಲು ತಮ್ಮ ಬಳಿ ಹಣವಿಲ್ಲ ಎಂದಿದ್ದರು. ಪರಿಹಾರ ನೀಡಲು ನನ್ನ ಬಳಿ ಯಾವುದೇ ಹಣವಿಲ್ಲ. ಯಾವುದೇ ಕ್ಯಾಬಿನೆಟ್ ಹುದ್ದೆಯನ್ನು ನಾನು ಹೊಂದಿಲ್ಲ. ಸಂಸದರು ರಾಜ್ಯ, ಕೇಂದ್ರ ಸರ್ಕಾರಗಳ ನಡುವೆ ಕೊಂಡಿಯಾಗಿ ಕಾರ್ಯನಿರ್ವಹಿಸುತ್ತಾರೆ. ಕೇಂದ್ರ ಯೋಜನೆಗಳನ್ನು ತರಲು, ಸ್ಥಳೀಯ ಸಮಸ್ಯೆಗಳ ಬಗ್ಗೆ ಸಂಸತ್ತಿನ ಗಮನಕ್ಕೆ ತರುವುದಕ್ಕಷ್ಟೇ ಅವರು ಸೀಮಿತವಾಗಿದ್ದಾರೆ ಎಂದು ಹೇಳಿದ್ದರು.

# ಕಿಚ್ಚ ಸುದೀಪ್ ಹೊಸ ಚಿತ್ರಕ್ಕೆ ಚೆನ್ನೈನಲ್ಲಿ ಮುಹೂರ್ತ

ಕಿಚ್ಚ ಸುದೀಪ್ ಅಭಿಮಾನಿಗಳಿಗೆ ಗುಡ್ ನ್ಯೂಸ್ ಕೊಟ್ಟಿದ್ದಾರೆ. ಬಿಲ್ಲ ರಂಗ ಭಾಷಾ ಸಿನಿಮಾದಲ್ಲಿ ಬ್ಯುಸಿಯಾಗಿರುವ ಅಭಿನಯ ಚಕ್ರವರ್ತಿ ಇದೀಗ ಮತ್ತೊಮ್ಮೆ ಮ್ಯಾಕ್ಸ್ ಚಿತ್ರ ಮಾಂತ್ರಿಕ ವಿಜಯ್ ಕಾರ್ತಿಕೇಯ ಜೊತೆ ಕೈ ಜೋಡಿಸಿದ್ದಾರೆ.

ಮ್ಯಾಕ್ಸ್ ಸೂಪರ್ ಹಿಟ್ ಬಳಿಕ ಮತ್ತೊಮ್ಮೆ ಈ ಜೋಡಿ ಮ್ಯಾಕ್ಸ್ 2ಗಾಗಿ ಒಂದಾಗಲಿದ್ದಾರೆ ಎಂಬ ಸುದ್ದಿ ಇತ್ತು. ಆದ್ರೆ ಸುದೀಪ್ ಹಾಗೂ ವಿಜಯ್ ಮ್ಯಾಕ್ಸ್ 2 ಪಕ್ಕಕ್ಕಿಟ್ಟು ಹೊಸ ಸಿನಿಮಾ ಘೋಷಣೆ ಮಾಡಿದ್ದಾರೆ. ಇಂದು ಆ ಚಿತ್ರಕ್ಕೆ ಚೆನ್ನೈನಲ್ಲಿ ಮುಹೂರ್ತವಾಗಿದೆ. ಸಿನಿಮಾದ ಮೊದಲ ಸನ್ನಿವೇಶಕ್ಕೆ ಸುದೀಪ್ ಅವರ ಪತ್ನಿ ಪ್ರಿಯಾ ಕ್ಲ್ಯಾಪ್ ಮಾಡುವ ಮೂಲಕ ಶುಭ ಹಾರೈಸಿದ್ದಾರೆ.

ಇಂದಿನಿಂದ ಚೆನ್ನೈನಲ್ಲಿ ಚಿತ್ರದ ಮುಹೂರ್ತ ಮುಗಿಸಿಕೊಂಡು ಶೂಟಿಂಗ್ ಕೂಡ ಶುರುವಾಗಿದೆ. ಕನ್ನಡ ಮತ್ತು ತಮಿಳು ತಂತ್ರಜ್ಞರು ಈ ಚಿತ್ರಕ್ಕಾಗಿ ಕೆಲಸ ಮಾಡಲಿದ್ದಾರೆ.

ಮೊನ್ನೆಯಷ್ಟೇ ಸುದೀಪ್ ಅವರ 47ನೇ ಸಿನಿಮಾ ಇಂದು ಅನೌನ್ಸ್ ಆಗಿತ್ತು. ಬೆಂಗಳೂರಿನ ಖಾಸಗಿ ಹೋಟೆಲ್ ನಲ್ಲಿ ಸುದ್ದಿಗೋಷ್ಠಿ ಹಮ್ಮಿಕೊಳ್ಳಲಾಗಿತ್ತು.

ಟೀಸರ್ ರಿಲೀಸ್ ಮಾಡುವ ಮೂಲಕ ಕಿಚ್ಚನ 47 ನೇ ಸಿನಿಮಾ ರಿವೀಲ್ ಮಾಡಲಾಗಿತ್ತು. ಜುಲೈ 7 ರಿಂದ ಸಿನಿಮಾ ಶೂಟಿಂಗ್ ಪ್ಲಾನ್ ಮಾಡಿರುವ ಚಿತ್ರತಂಡ ಎಲ್ಲಾ ಸಿದ್ಧತೆ ಮಾಡಿಕೊಂಡಿತ್ತು. ಸುದೀಪ್ 47ನೇ ಚಿತ್ರವನ್ನು ತಮಿಳಿನ ಬಿಗ್ ಪ್ರೊಡಕ್ಷನ್ ಹೌಸ್ ಸತ್ಯಜ್ಯೋತಿ ಫಿಲ್ಮ್ಸ್ ನಿರ್ಮಾಣ ಮಾಡುತ್ತಿದೆ. ಈ ಹಿಂದೆ ವಿಷ್ಣುವರ್ಧನ್ ಜೊತೆ ಸತ್ಯಜ್ಯೋತಿ ಚಿತ್ರ ನಿರ್ಮಾಣ ಮಾಡಿದ್ದ ಸತ್ಯಜ್ಯೋತಿ ಫಿಲ್ಮ್ಸ್ ಈಗ 39 ವರ್ಷಗಳ ನಂತರ ಮತ್ತೆ ಕನ್ನಡ ಚಿತ್ರನಿರ್ಮಾಣಕ್ಕೆ ಕೈ ಹಾಕಿದೆ.



ಸುದೀಪ್ 47ನೇ ಚಿತ್ರ

ಚಿತ್ರದ ಕುರಿತು ಮಾತನಾಡಿದ ಸುದೀಪ್, ಮ್ಯಾಕ್ಸ್ ನಂತರ ನಾವು ಮತ್ತೆ ಒಂದಾಗಿದ್ದೇವೆ. ಸದ್ಯಕ್ಕೆ ಮ್ಯಾಕ್ಸ್ 2 ಸಿನಿಮಾ ಕೈ ಬಿಟ್ಟಿದ್ದೀವಿ. ಈ ವರ್ಷ ಎರಡು ಸಿನಿಮಾ ಮಾಡುತ್ತೇವೆ. ಬಿಲ್ಲರಂಗ ಬಾಷ ಸಿನಿಮಾ ಈ ವರ್ಷ ರಿಲೀಸ್ ಆಗಲ್ಲ. ಆದರೆ ಈ ಸಿನಿಮಾ ಇದೇ ವರ್ಷ ಡಿಸೆಂಬರ್ 25 ಕ್ಕೆ ರಿಲೀಸ್ ಮಾಡುತ್ತೇವೆ.

ಸೆಪ್ಟೆಂಬರ್ ಕೊನೆಯಲ್ಲಿ ಬಿಗ್ ಬಾಸ್ ಶುರು ಆಗುತ್ತೆ ಎಂದು ಕಿಚ್ಚ ಸುದೀಪ್ ಹೇಳಿದ್ದರು.

# ಚಾಪ್ಟರ್ 1 ಹೊಸ ಪೋಸ್ಟರ್ ರಿಲೀಸ್

## ಫ್ಯಾನ್ಸ್‌ಗೆ ಬಂಪರ್ ಗಿಫ್ಟ್ ಕೊಟ್ಟ ರಿಷಬ್

ರಕ್ತ ಸಿಕ್ತ ಅವತಾರದಲ್ಲಿ ಡಿವೈನ್ ಸ್ಟಾರ್ ಘರ್ಜನೆ, ನಿಗದಿತ ದಿನಾಂಕದಂದೇ ಸಿನಿಮಾ ರಿಲೀಸ್ ರಾಷ್ಟ್ರಪ್ರಶಸ್ತಿ ವಿಜೇತ ರಿಷಬ್ ಶೆಟ್ಟಿ ನಿರ್ದೇಶಿಸಿ ನಟಿಸುತ್ತಿರುವ ಬಹುನಿರೀಕ್ಷಿತ ಚಿತ್ರ 'ಕಾಂತಾರ ಚಾಪ್ಟರ್ 1' ಅಕ್ಟೋಬರ್ 2ರಂದು ತೆರೆಗೆ ಬರಲು ಸಜ್ಜಾಗುತ್ತಿದೆ. ವಿಶ್ವದಾದ್ಯಂತ ಸಾವಿರಾರು ಚಿತ್ರಮಂದಿರಗಳಲ್ಲಿ, ಏಕಕಾಲಕ್ಕೆ 7 ಭಾಷೆಗಳಲ್ಲಿ ಚಿತ್ರ ತೆರೆ ಕಾಣಲಿದೆ ಎಂದು ಹೊಂಬಾಳೆ ಫಿಲಂಸ್ ಮಾಹಿತಿ ಹಂಚಿಕೊಂಡಿದೆ. ರಿಷಬ್ ಶೆಟ್ಟಿ ಅವರಿಗೆ ಜುಲೈ 7 ಜನ್ಮದಿನ. ಅವರಿಗೆ ಅಭಿಮಾನಿಗಳ ಕಡೆಯಿಂದ ಶುಭಾಶಯಗಳ ಮಹಾಪೂರವೇ ಹರಿದುಬರುತ್ತಿದೆ. ಈ ಹೊತ್ತಿನಲ್ಲೇ 'ಕಾಂತಾರ: ಚಾಪ್ಟರ್ 1' ಚಿತ್ರತಂಡದಿಂದ ಬಿಗ್ ಅಪ್‌ಡೇಟ್ ಸಿಕ್ಕಿದೆ.



ಸಿನಿಮಾದ ಹೊಸ ಪೋಸ್ಟರ್ ರಿಲೀಸ್ ಮಾಡಿರೋ ತಂಡ ವಿಶೇಷ ಮಾಹಿತಿ ಒಂದನ್ನು ನೀಡಿದೆ. ಇದು ಡಿವೈನ್ ಸ್ಟಾರ್ ಫ್ಯಾನ್ಸ್‌ಗೆ ಸಿಕ್ಕಾಪಟ್ಟೆ ಖುಷಿ ಕೊಟ್ಟಿದೆ. ಈ ಬಾರಿ ಅ.2ರ ಗಾಂಧಿ ಜಯಂತಿ ಗುರುವಾರ ಬಿದ್ದಿದೆ. ಹೀಗಾಗಿ ಶುಕ್ರವಾರ, ಶನಿವಾರ ಹಾಗೂ ಭಾನುವಾರ ಸಿನಿಮಾ ಸಹಜವಾಗಿಯೇ ಒಳ್ಳೆಯ ಕಲೆಕ್ಷನ್ ಮಾಡಲಿದೆ. ಆ ಬಳಿಕ ಅಕ್ಟೋಬರ್ ಮಧ್ಯದಲ್ಲಿ ದೀಪಾವಳಿ ಬರಲಿದೆ. ಇದು ಕೂಡ ಸಿನಿಮಾಗೆ ಸಹಕಾರಿ ಆಗಲಿದೆ. ಇಂಥ ಚಾನ್ಸ್‌ನ ತಂಡ ಬಿಡಲು ರೆಡಿ ಇಲ್ಲ. ಹೀಗಾಗಿ, ಅದಕ್ಕೆ ತಕ್ಕಂತೆ ಕೆಲಸ ನಡೆಯುತ್ತಿದ್ದು, ಅ.2ರಂದೇ ಸಿನಿಮಾ ರಿಲೀಸ್ ತೆರೆಗೆ ಬರುವುದಾಗಿ ಚಿತ್ರತಂಡ ಮಾಹಿತಿ ಹಂಚಿಕೊಂಡಿದೆ.



# ರಶ್ಮಿಕಾ ಹೇಳಿದ್ರೆ ಅದು ನಿಜ ಆಗೋಲ್ಲ

## ನಿಧಿ ಸುಬ್ಬಯ್ಯ ಮಂದಣ್ಣಗೆ ಕೌಂಟರ್

ಎರಡ್ಮೂರು ದಿನಗಳಿಂದ ನಟಿ ರಶ್ಮಿಕಾ ಮಂದಣ್ಣ ಹೇಳಿರುವ ಹೇಳಿಕೆ ಭಾರೀ ಚರ್ಚೆಗೆ ಗ್ರಾಸವಾಗಿದೆ. ಕೊಡವ ಕಮ್ಯೂನಿಟಿಯಿಂದ ಸಿನಿಮಾ ಇಂಡಸ್ಟ್ರಿಗೆ ನಾನೇ ಫಸ್ಟ್ ಬಂದಿದ್ದು ಎಂದು ಹೇಳಿಕೊಟ್ಟಿರುವ ರಶ್ಮಿಕಾ ವಿರುದ್ದ ಸಾಕಷ್ಟು ಜನ ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ಕೊಡಗಿನ ಜನರಷ್ಟೇ ಅಲ್ಲ ಕರುನಾಡಿನ ಜನರೆಲ್ಲ ರಶ್ಮಿಕಾ ಮಂದಣ್ಣ ಹೇಳಿಕೆ ಖಂಡಿಸಿ ಜಾಲತಾಣದಲ್ಲಿ ಪೋಸ್ಟ್ ಹಾಕುತ್ತಿದ್ದಾರೆ. ಇದೇ ವೇಳೆ ನಟಿ ನಿಧಿ ಸುಬ್ಬಯ್ಯ ಕೂಡಾ ಈ ಬಗ್ಗೆ ಪ್ರತಿಕ್ರಿಯೆ ನೀಡಿದ್ದಾರೆ.

ರಶ್ಮಿಕಾ ಮಾತಾಡಿರುವ ವಿಚಾರವನ್ನ ಒಂದು ಕಿವಿಯಿಂದ ತೆಗೆದುಕೊಂಡು ಮತ್ತೊಂದು ಕಿವಿಯಿಂದ ಬಿಡೋಣ. ಇದು ದೊಡ್ಡ ವಿಷಯವೇ ಅಲ್ಲ, ರಶ್ಮಿಕಾ ಅವರು ದೊಡ್ಡ ಮಟ್ಟದಲ್ಲಿ ಬೆಳೆದಿದ್ದಾರೆ ಅದು ಖುಷಿ ಇದೆ. ಅವರಿಗೆ ಒಳ್ಳೆಯದಾಗಲಿ. ಆಲ್ ದಿ ಬೆಸ್ಟ್ ರಶ್ಮಿಕಾ ಎಂದು ಹೇಳುವ ಮೂಲಕ ಬಟ್ಟೆ ಸುತ್ತಿ ಹೊಡೆದಿದ್ದಾರೆ. ಈಗಾಗಲೇ ಈ ವಿಚಾರಕ್ಕೆ ಸಂಬಂಧಿಸಿದಂತೆ ಸ್ಯಾಂಡಲ್‌ವುಡ್‌ನ ಹಿರಿಯ ನಟಿಯರಾದ ಪ್ರೇಮ ಮಾತನಾಡಿದ್ದಾರೆ. ಅಲ್ಲದೇ ನಟಿ ತನಿಷಾ ಕುಪ್ಪಂಡ, ಹರ್ಷಿಕಾ ಪೂಣಚ್ಚ ತಮ್ಮ ಪ್ರತಿಕ್ರಿಯೆ ನೀಡಿದ್ದಾರೆ. ನಟಿ ಹರ್ಷಿಕಾ ಪೂಣಚ್ಚ ರಶ್ಮಿಕಾ ಪರವಾಗಿ ಬ್ಯಾಟಿಂಗ್ ಬೀಸಿದ್ದಾರೆ.

# ಕ್ವೀನ್ಸ್ ಪ್ರೀಮಿಯರ್ ಲೀಗ್‌ಗೆ ರಮ್ಯಾ ಅಂಬಾಸಿಡರ್



ಕ್ವೀನ್ಸ್ ಪ್ರೀಮಿಯರ್ ಲೀಗ್ ಇದರ ಬಹುನಿರೀಕ್ಷಿತ ದ್ವಿತೀಯ ಆವೃತ್ತಿಯ 'ಕ್ರೀಡೋತ್ಸವ' ಲೋಗೋವನ್ನು ಬೆಂಗಳೂರಿನಲ್ಲಿ ಅಧಿಕೃತವಾಗಿ ಬಿಡುಗಡೆ ಮಾಡಲಾಯಿತು.

ಕಳೆದ ವರ್ಷ ಯಶಸ್ವಿಯಾಗಿ ನಡೆದ ಮೊದಲ ಆವೃತ್ತಿಗೆ ಸಿಕ್ಕ ಭರ್ಜರಿ ಪ್ರತಿಕ್ರಿಯೆ ನಂತರ, ಈ ಸಲದ ಆವೃತ್ತಿಯಲ್ಲಿ 12 ಹೊಸ ಕ್ರೀಡೆಗಳನ್ನು ಸೇರಿಸಿಕೊಳ್ಳಲಾಗಿದ್ದು, ಇದು ಕೇವಲ ಕ್ರೀಡೆ ಮಾತ್ರವಲ್ಲ, ಒಂದು ಮನರಂಜನೆಯ ಹಬ್ಬವಾಗುತ್ತಿದೆ.

25 ಮಿಲಿಯನ್ ಡಿಜಿಟಲ್ ವೀಕ್ಷಣೆಗಳು ಮತ್ತು 5000+ ಪ್ರೇಕ್ಷಕರು ಎಂಬ ಮೊದಲ ಆವೃತ್ತಿಯ ಭರ್ಜರಿ ಯಶಸ್ಸಿನ ಬಳಿಕ, ಭಾರತವ್ಯಾಪಿ ಚಳುವಳಿಯಾಗಿ ರೂಪುಗೊಳ್ಳಲು ಸಜ್ಜಾಗಿದೆ.

ಕಾರ್ಯಕ್ರಮದಲ್ಲಿ ಸ್ಥಾಪಕ ಮಹೇಶ್ ಗೌಡ, ಜನಪ್ರಿಯ ನಟಿ ಹಾಗೂ ಸ್ಯಾಂಡಲ್ವುಡ್ ಕ್ವೀನ್ ರಮ್ಯಾ, ಹಾಗೂ ಪ್ರಸಿದ್ಧ ನಟ ಮತ್ತು ಕೆಕಿಐ ಸಮಿತಿಯ ಸದಸ್ಯ ಪ್ರಮೋದ್ ಶೆಟ್ಟಿ ಉಪಸ್ಥಿತರಿದ್ದರು.

ಜೊತೆಗೆ ಬಾಲಿವುಡ್ ನಟಿ ಎಲಿ ಎವ್ರಾಮ್ ಕೂಡ ತಮ್ಮ ಬೆಂಬಲವನ್ನು ಸೂಚಿಸಲು ಆಗಮಿಸಿದ್ದರು. ಬೆಂಗಳೂರಿನ ಕ್ರೀಡೆ, ಫ್ಯಾಷನ್ ಮತ್ತು ಚಲನಚಿತ್ರ ಲೋಕದ ಗಣ್ಯರು ಈ ವೇಳೆ ಹಾಜರಿದ್ದರು. ಮೂಲಕ ನಾವು ಕೇವಲ ಮುಂದಿನ ಹಂತಕ್ಕೆ ಹೋಗುತ್ತಿಲ್ಲ. ನಾವು ಮಹಿಳೆಯರಿಗಾಗಿ ಕ್ರೀಡೆ ಮತ್ತು ಮನರಂಜನೆ ಕ್ಷೇತ್ರವನ್ನು ಪೂರ್ತಿಯಾಗಿ ಬದಲಾಯಿಸುತ್ತಿದ್ದೇವೆ ಎಂದು ಮಹೇಶ್ ಗೌಡ ಹೇಳಿದರು. ಈ ಸೀಸನ್ನಲ್ಲಿ ನಾವು 50 ಮಿಲಿಯನ್ ಡಿಜಿಟಲ್ ವೀಕ್ಷಣೆಗಳ ಗುರಿ ಹೊಂದಿದ್ದೇವೆ ಎಂದರು.

# ಕಿಲ್ಲರ್‌ಗೆ ರೆಹಮಾನ್ ಮ್ಯೂಸಿಕ್



20 ವರ್ಷಗಳ ಬಳಿಕ ಮತ್ತೆ ಒಂದಾದ ನಿರ್ದೇಶಕ ಸೂರ್ಯ, ರೆಹಮಾನ್ ತಮಿಳು ಮತ್ತು ತೆಲುಗು ಚಿತ್ರರಂಗದ ಖ್ಯಾತ ಖಳ ನಾಯಕ ಸೂರ್ಯ ಮತ್ತೆ ಚಿತ್ರ ನಿರ್ದೇಶನಕ್ಕೆ ಇಳಿದಿದ್ದಾರೆ. ಅವರ ಚಿತ್ರಕ್ಕೆ ಕಿಲ್ಲರ್ ಎಂದು ಹೆಸರಿಡಲಾಗಿದ್ದು, ಇತ್ತೀಚೆಗೆ ಚಿತ್ರದ ಆರಂಭಕ್ಕೆ ಪೂಜೆ ಸಹ ನೆರವೇರಿಸಲಾಗಿದೆ. ಕಿಲ್ಲರ್ ಚಿತ್ರಕ್ಕೆ ಎ.ಆರ್ ರೆಹಮಾನ್ ಸಂಗೀತ ಇರಲಿದೆ. ಈ ಮೂಲಕ 20 ವರ್ಷಗಳ ಬಳಿಕ ರೆಹಮಾನ್, ಸೂರ್ಯ ಅವರ ಚಿತ್ರಕ್ಕೆ ಸಂಗೀತ ಸಂಯೋಜನೆ ಮಾಡಲಿದ್ದಾರೆ.

ಚಿತ್ರತಂಡ ಬಿಡುಗಡೆ ಮಾಡಿದ ಪೋಸ್ಟರ್‌ನಲ್ಲಿ ನಾವು ಒಟ್ಟಿಗೆ ಸೇರಿದಾಗ, ಹಿಮಾಲಯವು ನಮ್ಮ ಕೈಗೆ ಬರುತ್ತದೆ. ಇದು ಪ್ರೀತಿಯಿಂದ ಒಂದಾದ ಹೃದಯ ಎಂಬ ಸಾಲಿದ್ದು, ಅದರಲ್ಲಿ ರೆಹಮಾನ್ ಗನ್ ಮಾದರಿಯ ಗಿಟಾರ್ ಹಿಡಿದು ಪೋಸ್ ಕೊಟ್ಟಿದ್ದಾರೆ. ಶ್ರೀ ಗೋಕುಲಂ ಮೂವೀಸ್ ನಿರ್ಮಾಣದ ಚಿತ್ರದಲ್ಲಿ ಪ್ರೀತಿ ಅಸ್ರಾನಿ ಚಿತ್ರದ ನಾಯಕಿಯಾಗಿ ನಟಿಸಲಿದ್ದಾರೆ.

ಇತರ ಪಾತ್ರವರ್ಗದ ಸದಸ್ಯರ ವಿವರಗಳನ್ನು ಶೀಘ್ರದಲ್ಲೇ ಪ್ರಕಟಿಸುವ ನಿರೀಕ್ಷೆಯಿದೆ. ಈ ಚಿತ್ರದ ಚಿತ್ರೀಕರಣ ಭಾರತ ಮತ್ತು ಮೆಕ್ಸಿಕೋದಲ್ಲಿ ನಡೆಯಲಿದೆ. ಸೂರ್ಯ ಅವರು ವಿಶೇಷವಾಗಿ ಅನೇಕ ಸ್ಟಾರ್ ಹೀರೋಗಳಿಗೆ ಖಳನಾಯಕನಾಗಿ ನಟಿಸಿದ್ದಾರೆ.

# ಸೆನಾ ದೇಶಗಳಲ್ಲಿ ಅತ್ಯಧಿಕ ಗೆಲುವು



ಟೀಂ ಇಂಡಿಯಾ ಇಂಗ್ಲೆಂಡ್ ವಿರುದ್ಧದ ಎಡ್ಜ್‌ಬಾಸ್ಟನ್ ಟೆಸ್ಟ್ ಪಂದ್ಯವನ್ನು 336 ರನ್‌ಗಳಿಂದ ಗೆದ್ದು ದಾಖಲೆ ಬರೆದಿದೆ. ಇದರಲ್ಲಿ ಏಷ್ಯಾದ ತಂಡವೊಂದು ಸೆನಾ ದೇಶಗಳಲ್ಲಿ ಅತಿ ಹೆಚ್ಚು ಟೆಸ್ಟ್ ಪಂದ್ಯಗಳನ್ನು ಗೆದ್ದ ದಾಖಲೆಯೂ ಸೇರಿದೆ. ಶುಭ್ಮನ್ ಗಿಲ್ ನಾಯಕತ್ವದಲ್ಲಿ ಟೀಂ ಇಂಡಿಯಾ ಈ ಐತಿಹಾಸಿಕ ಗೆಲುವಿಗೆ ಸಾಕ್ಷಿಯಾಗಿದೆ. ಇಂಗ್ಲೆಂಡ್ ವಿರುದ್ಧ ನಡೆದ ಬರ್ಮಿಂಗ್ಹ್ಯಾಮ್ ಟೆಸ್ಟ್ ಪಂದ್ಯವನ್ನು 336 ರನ್‌ಗಳಿಂದ ಗೆದ್ದುಕೊಂಡಿರುವ ಟೀಂ ಇಂಡಿಯಾಕ್ಕೆ ಪ್ರಶಂಸೆಯ ಮಳೆಗರೆಯಲಾಗುತ್ತಿದೆ. ಶುಭ್‌ಮನ್ ಗಿಲ್ ನಾಯಕತ್ವದಲ್ಲಿ ಇಂಗ್ಲೆಂಡ್ ಪ್ರವಾಸ ಮಾಡಿರುವ ಯಂಗ್ ಇಂಡಿಯಾಕ್ಕೆ, ಅನುಭವಿ ಆಂಗ್ಲರ ವಿರುದ್ಧ ಒಂದು ಪಂದ್ಯವನ್ನು ಗೆಲ್ಲುವುದು ಕಷ್ಟ ಎನ್ನುತ್ತಿದ್ದವರಿಗೆ ಭಾರತ ಯುವ ಪಡೆ ಸರಿಯಾದ ತಿರುಗೇಟು ನೀಡಿದೆ. ಅದರಲ್ಲೂ ಹಿಂದೆಂದೂ ಗೆಲುವು ಸಾಧಿಸಲು ಸಾಧ್ಯವಾಗದ ಎಡ್ಜ್‌ಬಾಸ್ಟನ್ ಮೈದಾನದಲ್ಲಿ ಟೀಂ ಇಂಡಿಯಾ ವಿಜಯ ಪತಾಕೆ ಹಾರಿಸಿರುವುದು ತಂಡದ ಸಾಂಘಿಕ ಪ್ರದರ್ಶನಕ್ಕೊಂದು ಉದಾಹರಣೆಯಾಗಿದೆ. ಈ ಗೆಲುವಿನೊಂದಿಗೆ ಟೀಂ ಇಂಡಿಯಾ ಹಲವಾರು ದಾಖಲೆಗಳನ್ನು ಬರೆದಿದೆ. ಅದರಲ್ಲಿ ಪ್ರಮುಖವಾದದ್ದೆಂದರೆ, ಸೆನಾ ದೇಶಗಳಲ್ಲಿ ಅತ್ಯಧಿಕ ಟೆಸ್ಟ್ ಪಂದ್ಯಗಳನ್ನು ಗೆದ್ದ ಏಷ್ಯದ ಮೊದಲ ತಂಡವೆಂಬುದು. ಸೆನಾ ದೇಶಗಳಲ್ಲಿ ಅಂದರೆ ದಕ್ಷಿಣ ಆಫ್ರಿಕಾ, ಇಂಗ್ಲೆಂಡ್, ನ್ಯೂಜಿಲೆಂಡ್ ಹಾಗೂ ಆಸ್ಟ್ರೇಲಿಯಾದಲ್ಲಿ ಟೆಸ್ಟ್ ಪಂದ್ಯವನ್ನು ಗೆಲ್ಲುವುದು ಅಷ್ಟು ಸುಲಭದ ಮಾತಲ್ಲ. ಅದರಲ್ಲೂ ಈ ನಾಲ್ಕು ಬಲಿಷ್ಠ ತಂಡಗಳನ್ನು ಅವರ ನೆಲದಲ್ಲೇ ಮಣಿಸುವುದು ಕಬ್ಬಿಣದ ಕಡಲೆ ಇದ್ದಂತೆ. ಆದಾಗ್ಯೂ ಟೀಂ ಇಂಡಿಯಾ ಈ ನಾಲ್ಕು ದೇಶಗಳಲ್ಲಿ ವರ್ಷದಿಂದ ವರ್ಷಕ್ಕೆ ಗಮನಾರ್ಹ ಪ್ರದರ್ಶನ ನೀಡುತ್ತಿದ್ದು, ಹಲವು ಐತಿಹಾಸಿಕ ಗೆಲುವುಗಳಿಗೆ ಸಾಕ್ಷಿಯಾಗಿದೆ. ಅದರಲ್ಲೂ ಇತ್ತೀಚಿನ ದಿನಗಳಲ್ಲಿ ಏಷ್ಯಾ ಖಂಡದಲ್ಲಿ ಟೆಸ್ಟ್ ಕ್ರಿಕೆಟ್‌ನ ರಂಗು ಮಾಯಾವಾಗುತ್ತಿರುವ ಸಮಯದಲ್ಲಿ ಭಾರತ ಮಾತ್ರ ಏಕದಿನ, ಟಿ20 ಜೊತೆಗೆ ಬಲಿಷ್ಠ ಟೆಸ್ಟ್ ತಂಡವನ್ನು ಕಟ್ಟುವುದರಲ್ಲು ಯಶಸ್ವಿಯಾಗಿದೆ.

ಟೆಸ್ಟ್ ಪಂದ್ಯಗಳನ್ನು ಗೆದ್ದ ಏಷ್ಯದ ಮೊದಲ ತಂಡ

ಕೆಲವೇ ವರ್ಷಗಳ ಹಿಂದೆ ಟೆಸ್ಟ್ ಕ್ರಿಕೆಟ್‌ನಲ್ಲಿ ಸಾಕಷ್ಟು ಹೆಸರು ಮಾಡಿದ್ದ ಪಾಕಿಸ್ತಾನ ಮತ್ತು ಶ್ರೀಲಂಕಾದಂತಹ ತಂಡಗಳು ಇದೀಗ ಈ ಮಾದರಿಯಲ್ಲಿ ಹೆಸರಿಲ್ಲದಂತಾಗಿವೆ. ಆದರೆ ಭಾರತ ಮಾತ್ರ ಟೆಸ್ಟ್ ಕ್ರಿಕೆಟ್‌ನಲ್ಲಿ ತನ್ನ ಭಿಗಿ ಹಿಡಿತವನ್ನು ವರ್ಷದಿಂದ ವರ್ಷಕ್ಕೆ ಹೆಚ್ಚಿಸುತ್ತಲೇ ಇದೆ. ಇದೀಗ ಅದಕ್ಕೆ ಪೂರಕವೆಂಬಂತೆ ಎಡ್ಜ್‌ಬಾಸ್ಟನ್ ಟೆಸ್ಟ್ ಗೆದ್ದಿರುವ ಟೀಂ ಇಂಡಿಯಾ ಸೆನಾ ದೇಶಗಳಲ್ಲಿ ಅತ್ಯಧಿಕ ಟೆಸ್ಟ್ ಪಂದ್ಯಗಳನ್ನು ಗೆದ್ದ ಮೊದಲ ತಂಡವೆನಿಸಿಕೊಂಡಿದೆ. ಎಡ್ಜ್‌ಬಾಸ್ಟನ್ ಟೆಸ್ಟ್ ಗೆದ್ದಿರುವ ಟೀಂ ಇಂಡಿಯಾ, ಈ ಗೆಲುವಿನೊಂದಿಗೆ ಸೆನಾ ದೇಶಗಳಲ್ಲಿ 30 ಟೆಸ್ಟ್ ಪಂದ್ಯಗಳನ್ನು ಗೆದ್ದ ಮೊದಲ ಏಷ್ಯನ್ ತಂಡ ಎಂಬ ವಿಶ್ವ ದಾಖಲೆ ನಿರ್ಮಿಸಿದೆ. ಪಾಕಿಸ್ತಾನ ಮತ್ತು ಶ್ರೀಲಂಕಾ ತಂಡಗಳು ಇಲ್ಲಿಯವರೆಗೆ ಈ ನಾಲ್ಕು ದೇಶಗಳಲ್ಲಿ ಇಷ್ಟೊಂದು ಪಂದ್ಯಗಳನ್ನು ಗೆದ್ದಿಲ್ಲ. ಟೀಂ ಇಂಡಿಯಾ ಇಲ್ಲಿಯವರೆಗೆ ಸೆನಾ ದೇಶಗಳಲ್ಲಿ ಆಡಿರುವ 178 ಪಂದ್ಯಗಳಲ್ಲಿ 30 ಪಂದ್ಯಗಳನ್ನು ಗೆದ್ದಿದ್ದರೆ, ಎರಡನೇ ಸ್ಥಾನದಲ್ಲಿರುವ ಪಾಕಿಸ್ತಾನ 148 ಟೆಸ್ಟ್ ಪಂದ್ಯಗಳಲ್ಲಿ 29 ಪಂದ್ಯಗಳನ್ನು ಗೆಲ್ಲುವಲ್ಲಿ ಯಶಸ್ವಿಯಾಗಿದೆ.

# ಟೀಮ್ ಇಂಡಿಯಾ 2 ಬದಲಾವಣೆ ಖಚಿತ



ಭಾರತ ಮತ್ತು ಇಂಗ್ಲೆಂಡ್ ನಡುವಣ ಮೊದಲ ಮ್ಯಾಚ್‌ನಲ್ಲಿ ಆಂಗ್ಲ ಪಡೆ ಭರ್ಜರಿ ಜಯ ಸಾಧಿಸಿತ್ತು. ಇದೀಗ ಎರಡನೇ ಟೆಸ್ಟ್ ಪಂದ್ಯದಲ್ಲಿ ಇಂಗ್ಲೆಂಡ್ ತಂಡಕ್ಕೆ ಸೋಲುಣಿಸಿ ಟೀಮ್ ಇಂಡಿಯಾ ಸರಣಿಯನ್ನು ಸಮಬಲಗೊಳಿಸಿದೆ. ಇನ್ನು ಉಭಯ ತಂಡಗಳ ಮೂರನೇ ಪಂದ್ಯವು ಗುರುವಾರದಿಂದ ಶುರುವಾಗಲಿದೆ.

ಇಂಗ್ಲೆಂಡ್ ವಿರುದ್ಧದ ಮೊದಲ ಪಂದ್ಯದಲ್ಲಿ ಸೋತಿದ್ದ ಟೀಮ್ ಇಂಡಿಯಾ ದ್ವಿತೀಯ ಟೆಸ್ಟ್ ಪಂದ್ಯದ ಮೂಲಕ ಕಂಬ್ಯಾಕ್ ಮಾಡಿದೆ. ಎಡ್ಜ್‌ಬಾಸ್ಟ್ ಮೈದಾನದಲ್ಲಿ ನಡೆದ ಈ ಪಂದ್ಯದಲ್ಲಿ ಭಾರತ ತಂಡವು ಬರೋಬ್ಬರಿ 336 ರನ್‌ಗಳಿಂದ ಆತಿಥೇಯ ಇಂಗ್ಲೆಂಡ್ ತಂಡವನ್ನು ಬಗ್ಗು ಬಡಿದಿದೆ. ಈ ಮೂಲಕ 5 ಪಂದ್ಯಗಳ ಸರಣಿಯನ್ನು 1-1 ಅಂತರದಿಂದ ಸಮಬಲಗೊಳಿಸಿದೆ. ಇದೀಗ ಸರಣಿಯಲ್ಲಿ ಸಮಬಲ ಸಾಧಿಸಿರುವ ಟೀಮ್ ಇಂಡಿಯಾ ಮೂರನೇ ಪಂದ್ಯಕ್ಕಾಗಿ ಸಜ್ಜಾಗಬೇಕಿದೆ. ಜುಲೈ 10 ರಿಂದ ಲಂಡನ್‌ನ ಲಾರ್ಡ್ಸ್ ಮೈದಾನದಲ್ಲಿ ನಡೆಯಲಿರುವ ಈ ಪಂದ್ಯಕ್ಕಾಗಿ ಭಾರತ ತಂಡವು ತನ್ನ ಆಡುವ ಬಳಗದಲ್ಲಿ ಬದಲಾವಣೆ ಮಾಡುವುದು ಬಹುತೇಕ ಖಚಿತ. ಅದರಲ್ಲೂ ಟೀಮ್ ಇಂಡಿಯಾ ಪ್ಲೇಯಿಂಗ್ ಇಲೆವೆನ್‌ನಲ್ಲಿ ಎರಡು ಬದಲಾವಣೆ ಕಂಡು ಬರುವ ಸಾಧ್ಯತೆಯಿದೆ. ಏಕೆಂದರೆ ಲಾರ್ಡ್ಸ್ ಟೆಸ್ಟ್‌ನಲ್ಲಿ ಟೀಮ್ ಇಂಡಿಯಾ ವೇಗಿ ಜಸ್‌ಪ್ರೀತ್ ಬುಮ್ರಾ ಕಣಕ್ಕಿಳಿಯುವುದು ಖಚಿತವಾಗಿದೆ. ಹೀಗಾಗಿ ಎಡ್ಜ್‌ಬಾಸ್ಟನ್‌ನಲ್ಲಿ ಕಣಕ್ಕಿಳಿದ ವೇಗಿಯೊಬ್ಬರು ಆಡುವ ಬಳಗದಿಂದ ಹೊರಬೀಳಲಿದ್ದಾರೆ.

# ಸಿರಾಜ್‌ನ ಬಿಟ್ಟು ಉಳಿದವರನ್ನು ಹೊಗಳಿದ ಶಾ

ಇಂಗ್ಲೆಂಡ್ ವಿರುದ್ಧ ದ್ವಿತೀಯ ಟೆಸ್ಟ್ ಪಂದ್ಯದಲ್ಲಿ ಟೀಮ್ ಇಂಡಿಯಾ ಪರ ಮೊಹಮ್ಮದ್ ಸಿರಾಜ್ 7 ವಿಕೆಟ್ ಕಬಳಿಸಿ ಮಿಂಚಿದ್ದರು. ಅದರಲ್ಲೂ ಮೊದಲ ಇನಿಂಗ್ಸ್‌ನಲ್ಲಿ 6 ವಿಕೆಟ್ ಪಡೆಯುವ ಮೂಲಕ ಭಾರತ ತಂಡಕ್ಕೆ 180 ರನ್‌ಗಳ ಮುನ್ನಡೆ ತಂದು ಕೊಡುವಲ್ಲಿ ಪ್ರಮುಖ ಪಾತ್ರವಹಿಸಿದ್ದರು. ಎಡ್ಜ್‌ಬಾಸ್ಟನ್‌ನಲ್ಲಿ ನಡೆದ ಇಂಗ್ಲೆಂಡ್ ವಿರುದ್ಧದ ದ್ವಿತೀಯ ಟೆಸ್ಟ್ ಪಂದ್ಯದಲ್ಲಿ ಟೀಮ್ ಇಂಡಿಯಾ ಐತಿಹಾಸಿಕ ಗೆಲುವು ದಾಖಲಿಸಿದೆ. ಈ ಐತಿಹಾಸಿಕ ಗೆಲುವಿನ ರೂವಾರಿಗಳೆಂದರೆ ಶುಭ್‌ಮನ್ ಗಿಲ್, ಆಕಾಶ್ ದೀಪ್ ಹಾಗೂ ಮೊಹಮ್ಮದ್ ಸಿರಾಜ್. ಗಿಲ್ ಬ್ಯಾಟಿಂಗ್ ಮೂಲಕ ಭರ್ಜರಿ ಪ್ರದರ್ಶನ ನೀಡಿದರೆ, ಆಕಾಶ್ ದೀಪ್ ಹಾಗೂ ಸಿರಾಜ್ ಬೌಲಿಂಗ್‌ನಲ್ಲಿ ಪರಾಕ್ರಮ ಮರೆದಿದ್ದರು. ಈ ಮೂಲಕ ಟೀಮ್ ಇಂಡಿಯಾಗೆ 336 ರನ್‌ಗಳ ಅಮೋಘ ಗೆಲುವು ತಂದು ಕೊಟ್ಟರು. ಈ ಐತಿಹಾಸಿಕ ವಿಜಯದ ಬೆನ್ನಲ್ಲೇ ಐಸಿಸಿ ಅಧ್ಯಕ್ಷ ಜಯ್ ಶಾ ಟೀಮ್ ಇಂಡಿಯಾಗೆ ಅಭಿನಂದನೆ ಸಲ್ಲಿಸಿದ್ದಾರೆ. ಆದರೆ ಈ ವೇಳೆ ಅವರು ಮೊಹಮ್ಮದ್ ಸಿರಾಜ್ ಅವರ ಹೆಸರನ್ನು ಪ್ರಸ್ತಾಪಿಸದೇ ಅಚ್ಚರಿ ಮೂಡಿಸಿದ್ದಾರೆ. ತಮ್ಮ ಅಧಿಕೃತ ಎಕ್ಸ್ ಖಾತೆಯ ಮೂಲಕ ಅಭಿನಂದನೆ ಸಲ್ಲಿಸಿದ ಜಯ್ ಶಾ ಅವರು, ಶುಭ್‌ಮನ್ ಗಿಲ್, ರಿಷಭ್ ಪಂತ್, ಆಕಾಶ್ ದೀಪ್ ಹಾಗೂ ರವೀಂದ್ರ ಜಡೇಜಾ ಅವರ ಪ್ರದರ್ಶನವನ್ನು ಮಾತ್ರ ಹಾಡಿಹೊಗಳಿದ್ದಾರೆ. ಅತ್ಯುತ್ತಮ ಟೆಸ್ಟ್ ಪಂದ್ಯ. ಈ ಪಂದ್ಯದ ಮೂಲಕ ನೀವು ಭಾರತೀಯ ಕ್ರಿಕೆಟ್‌ನ ಆಳ ಮತ್ತು ಸ್ಥಿರತೆಯನ್ನು ಪ್ರದರ್ಶಿಸಿದ್ದೀರಿ. ಶುಭ್‌ಮನ್ ಗಿಲ್ ಅವರಿಂದ 269 ಮತ್ತು 161 ರನ್‌ಗಳ ಗುಣಮಟ್ಟದ ಇನ್ನಿಂಗ್ಸ್ ಮೂಡಿಬಂದರೆ, ಆಕಾಶ್‌ದೀಪ್ ಅವರ 10 ವಿಕೆಟ್‌ಗಳ ಗೊಂಚಲು ಅದ್ಭುತ ಪ್ರದರ್ಶನವನ್ನು ಎತ್ತಿ ತೋರಿಸಿತು.



# ಆಕಾಶ್ ದೀಪ್... ಇಂಗ್ಲೆಂಡ್ ಔಟ್...



ಇಂಗ್ಲೆಂಡ್ ವಿರುದ್ಧದ ಎಡ್ಜ್‌ಬಾಸ್ಟನ್ ಟೆಸ್ಟ್ ಪಂದ್ಯವನ್ನು ಭಾರತ ತಂಡ 336 ರನ್‌ಗಳಿಂದ ಭರ್ಜರಿಯಾಗಿ ಗೆದ್ದುಕೊಂಡಿತು. ಟೀಮ್ ಇಂಡಿಯಾದ ಈ ಗೆಲುವಿನಲ್ಲಿ ವೇಗದ ಬೌಲರ್ ಆಕಾಶ್ ದೀಪ್ ಪ್ರಮುಖ ಪಾತ್ರವಹಿಸಿದರು. ಆಕಾಶ್ ದೀಪ್ ಎರಡೂ ಇನ್ನಿಂಗ್ಸ್‌ಗಳಲ್ಲಿ ಒಟ್ಟು 10 ವಿಕೆಟ್‌ಗಳನ್ನು ಕಬಳಿಸಿ ಮಿಂಚಿದರು. ಇಂಗ್ಲಿಷ್ ನೆಲದಲ್ಲಿ ಟೆಸ್ಟ್ ಪಂದ್ಯವೊಂದರಲ್ಲಿ 10 ವಿಕೆಟ್‌ಗಳನ್ನು ಪಡೆದ ಎರಡನೇ ಭಾರತೀಯ ವೇಗದ ಬೌಲರ್ ಎಂಬ ಹೆಗ್ಗಳಿಕೆಗೆ ಪಾತ್ರರಾದರು. ಇಂತಹ ಪರಿಸ್ಥಿತಿಯಲ್ಲಿ, ಎಡ್ಜ್‌ಬಾಸ್ಟನ್‌ನಲ್ಲಿ ಆಕಾಶ್ ದೀಪ್ ಸಿಂಗ್ ಇಂಗ್ಲೆಂಡ್‌ಗೆ ನೀಡಿದ ಗಾಯವು ದೀರ್ಘಕಾಲ ನೆನಪಿನಲ್ಲಿ ಉಳಿಯುತ್ತದೆ ಎಂಬುದು ಸ್ಪಷ್ಟ. ಆಕಾಶ್ ದೀಪ್ ಸಿಂಗ್ ಅವರ ಮಾರಕ ಬೌಲಿಂಗ್ ನಿಂದಾಗಿ ಇಂಗ್ಲೆಂಡ್ ಅಭಿಮಾನಿಯೊಬ್ಬರು ಬರ್ಮಿಂಗ್ಹ್ಯಾಮ್‌ನ ಬೀದಿಗಳಲ್ಲಿ ಗಿಟಾರ್ ಹಿಡಿದುಕೊಂಡು ಅವರಿಗಾಗಿ ಹಾಡನ್ನು ರಚಿಸಿದ್ದಾರೆ, ಅದರ ವಿಡಿಯೋ ಈಗ ಸಾಮಾಜಿಕ ಮಾಧ್ಯಮದಲ್ಲಿ ಹೆಚ್ಚು ವೈರಲ್ ಆಗುತ್ತಿದೆ. ವಿಡಿಯೋದಲ್ಲಿ, ಒಬ್ಬ ವ್ಯಕ್ತಿ ಗಿಟಾರ್ ನುಡಿಸುತ್ತಾ 'ಓ ಆಕಾಶ್ ದೀಪ್, ನೀವು ಇಂಗ್ಲೆಂಡ್ ಅನ್ನು ಔಟ್ ಮಾಡಿದ್ದೀರಿ' ಎಂದು ಹೇಳುತ್ತಿದ್ದಾರೆ. ಇದಲ್ಲದೆ, ಹಾದುಹೋಗುವ ಜನರು ಈ ಹಾಡನ್ನು ಕೇಳಿ ನಗುತ್ತಿದ್ದಾರೆ.

ಬರ್ಮಿಂಗ್ಹ್ಯಾಮ್ ಬೀದಿಗಳಲ್ಲಿ ಬೌಲರ್ ಕುರಿತು ಹಾಡು

ಎಡ್ಜ್‌ಬಾಸ್ಟನ್ ಟೆಸ್ಟ್ ಪಂದ್ಯದಲ್ಲಿ ಇಂಗ್ಲೆಂಡ್ ತಂಡವು ಆಕಾಶ್ ದೀಪ್ ಅವರ ಮಾರಕ ಬೌಲಿಂಗ್‌ಗೆ ತತ್ತರಿಸಿ ಹೋಯಿತು. ಟೀಮ್ ಇಂಡಿಯಾ ಎಲ್ಲಾ ವಿಭಾಗದಲ್ಲೂ ಇಂಗ್ಲೆಂಡ್ ವಿರುದ್ಧ ಕಠಿಣ ಹೋರಾಟ ನೀಡಿತು. ಮೊದಲು ಬ್ಯಾಟಿಂಗ್ ಮಾಡಿದ ಟೀಮ್ ಇಂಡಿಯಾ 587 ರನ್‌ಗಳ ಬೃಹತ್ ಸ್ಕೋರ್ ಗಳಿಸಿತು. ನಂತರ ಬೌಲಿಂಗ್‌ನಲ್ಲಿ ಟೀಮ್ ಇಂಡಿಯಾ ಇಂಗ್ಲೆಂಡ್ ಅನ್ನು 407 ರನ್‌ಗಳಿಗೆ ಸೀಮಿತಗೊಳಿಸಿ 180 ರನ್‌ಗಳ ಮುನ್ನಡೆ ಸಾಧಿಸಿತು. ಈ ಇನ್ನಿಂಗ್ಸ್‌ನಲ್ಲಿ ಮೊಹಮ್ಮದ್ ಸಿರಾಜ್ 6 ವಿಕೆಟ್‌ಗಳನ್ನು ಮತ್ತು ಆಕಾಶ್ ದೀಪ್ ಸಿಂಗ್ 4 ವಿಕೆಟ್‌ಗಳನ್ನು ಪಡೆದರು. ಇದಾದ ನಂತರ ಎರಡನೇ ಇನ್ನಿಂಗ್ಸ್ ನಲ್ಲಿಯೂ ಟೀಮ್ ಇಂಡಿಯಾ 427 ರನ್ ಗಳನ್ನು ಗಳಿಸಿ ಇಂಗ್ಲೆಂಡ್ ಗೆ 608 ರನ್ ಗಳ ಬೃಹತ್ ಗುರಿ ನೀಡಿತು. ಮೊದಲ ಇನ್ನಿಂಗ್ಸ್ ನಲ್ಲಿ ಅದ್ಭುತ ಬೌಲಿಂಗ್ ಮಾಡಿದ್ದ ಆಕಾಶ್ ದೀಪ್ ಎರಡನೇ ಇನ್ನಿಂಗ್ಸ್ ನಲ್ಲಿ 6 ವಿಕೆಟ್ ಗಳನ್ನು ಕಬಳಿಸಿದರು. ಆಕಾಶ್ ದೀಪ್ ಅವರ ಈ ಅದ್ಭುತ ಬೌಲಿಂಗ್ ನಿಂದಾಗಿ ಟೀಮ್ ಇಂಡಿಯಾ ಇಂಗ್ಲೆಂಡ್ ತಂಡವನ್ನು 271 ರನ್ ಗಳಿಗೆ ಆಲೌಟ್ ಮಾಡಿ 336 ರನ್ ಗಳಿಂದ ಪಂದ್ಯವನ್ನು ಗೆದ್ದುಕೊಂಡಿತು. ಟೀಮ್ ಇಂಡಿಯಾ ಗೆಲುವಿನಲ್ಲಿ ಆಕಾಶ್ ದೀಪ್ ಅವರ ದೊಡ್ಡ ಕೊಡುಗೆ ಇದೆ. ಇದು ಅವರ ವೃತ್ತಿಜೀವನದ ಅತ್ಯುತ್ತಮ ಪ್ರದರ್ಶನವಾಗಿದೆ. ಪಂದ್ಯ ಮುಗಿದ ಬಳಿಕ ಮಾತನಾಡಿದ ಆಕಾಶ್, ಕಳೆದ ಎರಡು ತಿಂಗಳಿನಿಂದ ಕ್ಯಾನ್ಸರ್ ವಿರುದ್ಧ ಹೋರಾಡುತ್ತಿರುವ ನನ್ನ ಸಹೋದರಿಗೆ ಈ ಪ್ರದರ್ಶನವನ್ನು ಅರ್ಪಿಸುತ್ತಿದ್ದೇನೆ ಎಂದು ಹೇಳಿದ್ದಾರೆ. ಎರಡು ತಿಂಗಳ ಹಿಂದೆ ನನ್ನ ಸಹೋದರಿಗೆ ಕ್ಯಾನ್ಸರ್ ಇರುವುದು ಪತ್ತೆಯಾಯಿತು. ಅವರು ನನ್ನ ಪ್ರದರ್ಶನದಿಂದ ತುಂಬಾ ಸಂತೋಷಪಡುತ್ತಾರೆ ಮತ್ತು ಇದು ಅವರ ಮುಖದಲ್ಲಿ ಮತ್ತೆ ನಗು ತರಿಸುತ್ತದೆ ಎಂದು ಹೇಳಿದರು.


Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news


ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966